ಸಂಪುಟ: 04 ಸಂಚಿಕೆ: 179 ಪುಟಗಳು: 08 ಬುಧವಾರ 11 ಸೆಪ್ಟೆಂಬರ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ಕಾದ ಹಂಚಿನ ಮೇಲೆ ಹನಿ ನೀರು ಬಿದ್ದರೆ ಆರಿ ಹೋಗುತ್ತದೆ. ಎಲೆಯ ಮೇಲೆ ಬಿದ್ದರೆ ಮುತ್ತಾಗುತ್ತದೆ. ನಾವು ಯಾರ ಸಂಗ ಮಾಡುತ್ತೇವೋ ಅದರಂತೆ ನಾವಾಗುತ್ತೇವೆ.


# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ




# ವಾಲ್ಮೀಕಿ ಹಗರಣದ ತನಿಖೆ ಭರ್ಜರಿ
# ನಾಗೇಂದ್ರ ಪ್ರಮುಖ ರೂವಾರಿ

**ಇಡಿ ಚಾರ್ಜ್ ಶೀಟ್ ನಲ್ಲಿ ಮಾಜಿ ಸಚಿವ ಬಿ.ನಾಗೇಂದ್ರ ಕಿಂಗ್‌ಪಿನ್**

**ಬಿ.ನಾಗೇಂದ್ರ ಸೇರಿ ಐವರು ಆರೋಪಿಗಳ ವಿರುದ್ಧ ಚಾರ್ಜ್ ಶೀಟ್ ಸಲ್ಲಿಕೆ**

### ಏನಿದು ಹಗರಣ:?

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಎಂ.ಜಿ.ರಸ್ತೆಯ ಯೂನಿಯನ್ ಬ್ಯಾಂಕ್ ಇಂಡಿಯಾ ಖಾತೆಯಿಂದ 18 ಖಾತೆಗಳಿಗೆ ಬರೋಬ್ಬರಿ 94.73 ಕೋಟಿ ರೂ. ಅಕ್ರಮವಾಗಿ ವರ್ಗಾವಣೆಯಾಗಿತ್ತು. ನಿಗಮದ ಲೆಕ್ಕಾಧಿಕಾರಿಯಾಗಿದ್ದ ಚಂದ್ರಶೇಖರ್ ಡೆತ್‌ನೋಟ್ ಬರೆದು ಈ ಅಕ್ರಮ ಹಣ ವರ್ಗಾವಣೆಗೆ ಸಂಬಂಧಿಸಿದಂತೆ ತಮ್ಮ ಮೇಲೆ ಒತ್ತಡ ಇದೆ ಎಂದು ಆತ್ಮಹತ್ಯೆ ಮಾಡಿಕೊಂಡಿದ್ದರು. ಇವರ ಆತ್ಮಹತ್ಯೆ ಬಳಿಕ ನಿಗಮದ ಹಗರಣ ಹೊರ ಬಂದಿತ್ತು. ಈ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಎಸ್‌ಐಟಿ ರಚಿಸಿ ತನಿಖೆಗೆ ಆದೇಶಿಸಿತ್ತು. ಆದರೆ ಇ.ಡಿ. ಸಹ ಈ ಬಗ್ಗೆ ತನಿಖೆಗೆ ಮುಂದಾಗಿ ನಾಗೇಂದ್ರ, ಅವರ ನಿವಾಸ, ಕಚೇರಿ, ಅವರ ಆಪ್ತರ ಮನೆಗಳ ಮೇಲೆ ದಾಳಿ ನಡೆಸಿ ಹಲವು ಮಾಹಿತಿಗಳನ್ನು ಕಲೆ ಹಾಕಿತ್ತು. ಯಾವ ಯಾವ ಖಾತೆಗಳಿಗೆ ಹಣ ವರ್ಗಾವಣೆಯಾಗಿದೆ ಎಂಬುದನ್ನು ಪತ್ತೆಹಚ್ಚಿತ್ತು.ಈಗ ಇ.ಡಿ. ಎಲ್ಲಾವನ್ನು ಉಲ್ಲೇಖಿಸಿ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಿದೆ.

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಸರ್ಕಾರದ ಅಸ್ತಿತ್ವವನ್ನೇ ಅಲುಗಾಡಿಸಿದ ಕರ್ನಾಟಕ ಮಹರ್ಷಿ ವಾಲೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣದ ಪ್ರಮುಖ ಕಿಂಗ್‌ಪಿನ್ ಮಾಜಿ ಸಚಿವ ಬಿ.ನಾಗೇಂದ್ರ ಎಂಬುದು ದೋಷಾರೋಪ ಪಟ್ಟಿ ಉಲ್ಲೇಖವಾಗಿದೆ. ಪ್ರಕರಣದ ತನಿಖೆ ನಡೆಸಿರು ಜಾರಿ ನಿರ್ದೇಶನಾಲಯ(ಇ.ಡಿ) ಅಧಿಕಾರಿಗಳು ಬೆಂಗಳೂರಿನ 82ನೇ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಚಾರ್ಜ್ಶೀಟ್ ಸಲ್ಲಿಸಿದೆ. ವಿಶೇಷವೆಂದರೆ ಈ ಹಿಂದೆ ಪ್ರಕರಣದ ತನಿಖೆ ನಡೆಸಿದ್ದ ಎಸ್‌ಐಟಿ ಶಿವಮೊಗ್ಗ ನ್ಯಾಯಾಲಯಕ್ಕೆ ಸಲ್ಲಿಸಿದ್ದ ಚಾರ್ಜ್‌ಶೀಟ್‌ನಲ್ಲಿ ಮಾಜಿ ಸಚಿವ ಬಿ.ನಾಗೇಂದ್ರ ಹೆಸರನ್ನು ಉಲ್ಲೇಖ ಮಾಡದೆ ಕೇವಲ ಅಧಿಕಾರಿಗಳ ಪಾತ್ರ ಕುರಿತು ಉಲ್ಲೇಖ ಮಾಡಿತ್ತು. ಇದಕ್ಕೆ ತದ್ವಿರುದ್ಧವಾಗಿ ಇ.ಡಿ ಮಾಜಿ ಸಚಿವ ಬಿ.ನಾಗೇಂದ್ರ, ಸತ್ಯನಾರಾಯಣ ವರ್ಮ ಅವರುಗಳೇ ಈ ಪ್ರಕರಣದ ಪ್ರಮುಖ ರೂವಾರಿಗಳೆಂಬುದನ್ನು ಪತ್ತೆ ಮಾಡಿದೆ. ಹೈದರಾಬಾದ್‌ನಲ್ಲಿದ್ದ ಮಧ್ಯವರ್ತಿ ಸತ್ಯನಾರಾಯಣ ವರ್ಮಾ ಜೊತೆ ನಾಗೇಂದ್ರಗೆ ನಿಕಟ ಸಂಪರ್ಕ ಇತ್ತು. ನಾಗೇಂದ್ರನ ಅಣತಿಯಂತೆಯೇ 187 ಕೋಟಿ ರೂ. ಹಗರಣ ನಡೆದಿದೆ.

**ನಾಗೇಂದ್ರ ಆಣತಿಯಂತೆ ಹಣದ ವಹಿವಾಟು**

21 ಕೋಟಿ ರೂ.ಗಳನ್ನು ಲೋಕಸಭಾ ಚುನಾವಣೆಗೆ ಬಳಸಿದ್ದಾರೆ. ಬೆಂಗಳೂರು ಮತ್ತು ಬಳ್ಳಾರಿಯಲ್ಲಿ ಹಣ ವರ್ಗಾವಣೆ ನಡೆದಿದೆ ಎಂದು ಚಾರ್ಜ್ ಶೀಟ್ ನಲ್ಲಿ ಜಾರಿನಿರ್ದೇಶನಾಲಯ ಉಲ್ಲೇಖಿಸಿದೆ. ನಾಗೇಂದ್ರ ಅವರ ಸೂಚನೆಯಂತೆಯೇ ಅಕೌಂಟ್ ಓಪನ್ ಮಾಡಲಾಗಿದೆ ಎಂದು ನಿಗಮದ ಮಾಜಿ ವ್ಯವಸ್ಥಾಪಕ ನಿರ್ದೇಶಕ ಪದನಾಭ್ ಹೇಳಿಕೆ ಕೊಟ್ಟಿದ್ದಾರೆ.ಶಾಂಗ್ರಿಲಾ ಹೋಟೆಲ್ನಲ್ಲಿನ ನಡೆದ ಸಭೆಯಲ್ಲಿ ನಾಗೇಂದ್ರ ಬಂದು–ಹೋಗಿರುವ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿದ್ದವು. ಇದಿಷ್ಟೇ ಅಲ್ಲ, ಶಾಂಗ್ರಿಲಾ ಹೋಟೆಲ್ನಲ್ಲಿ ಮಹಜರು ಪ್ರಕ್ರಿಯೆ ವೇಳೆ ಅನೇಕ ಸಾಕ್ಷಿಗಳು ದೊರೆತಿವೆ. ನಾಗೇಂದ್ರ, ಪಿಎ ದೇವೇಂದ್ರಪ್ಪ, ನೆಕ್ಕಂಟಿ ನಾಗರಾಜ್, ನಾಗೇಶ್ವರ್



ರಾವ್ ಸಭೆಯಲ್ಲಿ ಭಾಗಿಯಾಗಿರುವುದು ಗೊತ್ತಾಗಿದೆ. ನಾಗೇಂದ್ರ ಸೂಚನೆಯಂತೆಯೇ ಹಗರಣದಲ್ಲಿ ಭಾಗಿ ಎಂದು ಆರೋಪಿಗಳು ಹೇಳಿಕೆಕೊಟ್ಟಿದ್ದಾರೆ. ಹಾಗೇ ಮೃತ ಅಧಿಕಾರಿ ಚಂದ್ರಶೇಖರ್ ಡೆತ್ ನೋಟ್ನಲ್ಲಿ ಸಚಿವ ಎಂಬುದು ಉಲ್ಲೇಖವಾಗಿದೆ .ನಾಗೇಂದ್ರ ಆಪ್ತ ಹರೀಶ್ಗೆ ಪದನಾಭ್ 25 ಲಕ್ಷ ರೂ. ನೀಡಿರುವುದು ಕೂಡ ಬಯಲಾಗಿದೆ. ಹರೀಶ್ ವಿಚಾರಣೆಯಲ್ಲಿ ನಾಗೇಂದ್ರ ಸೂಚನೆಯಂತೆ ಹಣ ಪಡೆದಿರೋ ಬಗ್ಗೆ ಹೇಳಿಕೆ ಕೊಟ್ಟಿದ್ದಾರೆ. ಇಡಿ ದಾಳಿಯಲ್ಲಿ ಅಕ್ರಮ ಹಣ ವರ್ಗಾವಣೆ ಸಂಬಂಧ ಅನೇಕ ದಾಖಲೆಗಳು ಸಿಕ್ಕಿವೆ.

1. ತನಿಖೆಯ ವೇಳೆ ನಾಗೇಂದ್ರ ಮತ್ತು ದದ್ದಾಲ್‌ಗೆ ಸಮನ್ಸ್ ಜಾರಿ ಬಗ್ಗೆಯೂ ಎಸ್‌ಐಟಿ ತೀವ್ರ ಟೀಕೆಗೆ ಗುರಿ
2. ಲೋಕಸಭೆ ಚುನಾವಣೆಯಲ್ಲಿ 21 ಕೋಟಿ ರೂ. ದುರುಪಯೋಗ
3. ಬೆಂಗಳೂರು ಹಾಗೂ ಬಳ್ಳಾರಿ ನಗರಗಳಿಂದ ವಿವಿಧೆಡೆಗೆ ಹಣ ರವಾನೆಯಾಗಿದೆ ಎಂಬ ಆಘಾತಕಾರಿ ಅಂಶವನ್ನು ಚಾರ್ಜ್ ಶೀಟ್ ಬಹಿರಂಗಪಡಿಸಿದೆ.



### ಸಿಎಂ ಭೇಟಿಯಾದ ದದ್ದಲ್

ಜಾರಿ ನಿರ್ದೇಶನಾಲಯ ದೋಷಾರೋಪ ಪಟ್ಟಿ ಸಲ್ಲಿಸುತ್ತಿದ್ದಂತೆ, ಇತ್ತ ಮಹರ್ಷಿ ವಾಲ್ಮೀಕಿ ಎಸ್‌ಟಿ ಅಭಿವೃದ್ಧಿ ನಿಗಮದ ಅಧ್ಯಕ್ಷ, ರಾಯಚೂರು ಗ್ರಾಮಾಂತರ ಕ್ಷೇತ್ರದ ಕಾಂಗ್ರೆಸ್ ಶಾಸಕ ಬಸನಗೌಡ ದದ್ದಲ್ ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿದ್ದಾರೆ. ಶಾಸಕ ಬಸನಗೌಡ ದದ್ದಲ್ ವಾಲ್ಮೀಕಿ ನಿಗಮದ ಹಗರಣದಲ್ಲಿ ವಿಚಾರಣೆ ಎದುರಿಸಿದ್ದರು.

### ನಾಗೇಂದ್ರ-ದದ್ದಲ್ ಹೆಸರು ಇರಲಿಲ್ಲ

ವಾಲೀಕಿ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ನೇಮಿಸಿದ್ದ ವಿಶೇಷ ತನಿಖಾ ತಂಡ (ಎಸ್‌ಐಟಿ) ಪೊಲೀಸರು 12 ಆರೋಪಿಗಳ ವಿರುದ್ಧ 3ನೇ ಎಸಿಎಂಎಂ ನ್ಯಾಯಾಲಯದಲ್ಲಿ ಆಗಸ್ಟ್ ನಲ್ಲಿ ಚಾರ್ಜ್ಶೀಟ್ ಸಲ್ಲಿಕೆ ಮಾಡಿದ್ದರು. ಈ ದೋಷಾರೋಪಪಟ್ಟಿಯಲ್ಲಿ ಮಾಜಿ ಸಚಿವ ನಾಗೇಂದ್ರ , ಬಸನಗೌಡ ದದ್ದಲ್ ಅವರ ಹೆಸರನ್ನು ಉಲ್ಲೇಖಿಸಿರಲಿಲ್ಲ. ಸತ್ಯಾರಾಯಣ ವರ್ಮಾ, ಸತ್ಯನಾರಾಯಣ ಇಟ್ಕಾರಿ, ವಾಲೀಕಿ ನಿಗಮ ಎಂಡಿ ಪದನಾಭ, ಲೆಕ್ಕಾಧಿಕಾರಿ ಪರಶುರಾಮ, ನೆಕ್ಕುಂಟಿ ನಾಗರಾಜ್, ನಾಗೇಶ್ವರ್, ಸಾಯಿ ತೇಜ ಸೇರಿ 12 ಜನರ ಮೇಲೆ ಚಾರ್ಜ್ ಶೀಟ್ ಸಲ್ಲಿಕೆ ಮಾಡಲಾಗಿತ್ತು.

## ಶೀಘ್ರದಲ್ಲಿ 600 ಹೊಸ ಪಿಎಸ್‌ಐ ನೇಮಕಾತಿಗೆ ಸಿದ್ಧತೆ: ಗೃಹ ಸಚಿವ

• **ಉದಯವಾಹಿನಿ, ಬೆಂಗಳೂರು**

ಇದೆ ತಿಂಗಳು 22 ರಂದು ನಡೆಯಲಿರುವ ಪಿಎಸ್‌ಐ ಹುದ್ದೆಗೆ ನೇಮಕಾತಿ ಪರೀಕ್ಷೆಯನ್ನು ಮುಂದುವಡುವಂತೆ ಬಿಜೆಪಿ ಮನವಿ ಮಾಡಿದೆ. ಈ ಕುರಿತು ಕೆಇಎ ಜೊತೆಗೆ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುತ್ತದೆ. ಅಲ್ಲದೆ 600 ಹೊಸ ಪಿಎಸ್‌ಐ ಹುದ್ದೆ ನೇಮಕಾತಿಗೂ ಸಿದ್ಧತೆ ಮಾಡಲಾಗುತ್ತಿದೆ ಎಂದು ಗೃಹ ಸಚಿವ ಪರಮೇಶ್ವರ ತಿಳಿಸಿದರು.

ಈ ಕುರಿತು ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ಸೆ.22ರಂದು ಪರೀಕ್ಷೆ ನಡೆಸಲು ನಿಗದಿ ಮಾಡಿದ್ದಾರೆ. ಪಿಎಸ್‌ಐ ಪರೀಕ್ಷೆ ಬರೆಯಬೇಕಾದ ನೂರಕ್ಕು ಹೆಚ್ಚು ಆಕಾಂಕ್ಷಿಗಳು, ಯುಪಿಎಸ್‌ಸಿ ಮುಖ್ಯಪರೀಕ್ಷೆಯನ್ನು ಬರೆಯುತ್ತಿದ್ದಾರೆ. ಹೀಗಾಗಿ ಪರೀಕ್ಷಾ ದಿನ ಮುಂದೂಡುವಂತೆ ಮನವಿ ಸಲ್ಲಿಸಿದ್ದಾರೆ. ಪರೀಕ್ಷೆ ಮುಂದೂಡುವ ಕುರಿತ ಸಾಧಕ–ಬಾಧಕಗಳನ್ನು ಇಲಾಖೆಯ ಅಧಿಕಾರಿಗಳು ಹಾಗೂ ಕೆಇಎ ಅವರೊಂದಿಗೆ ಮತ್ತೊಮ್ಮೆ ಚರ್ಚಿಸಿ, ಕ್ರಮ ಕೈಗೊಳ್ಳಲಾಗುವುದು ಎಂದರು. ಕಳೆದ ನಾಲ್ಕು ವರ್ಷಗಳಿಂದ ಪಿಎಸ್‌ಐ ನೇಮಕಾತಿ ನಡೆದಿಲ್ಲ. ಸಿಂಧುತ್ವ, ದಾಖಲಾತಿ ಪರಿಶೀಲನೆ, ತರಬೇತಿ ಪಡೆದು ಇಲಾಖೆಗೆ ಸೇರಲು ಒಂದು ವರ್ಷ ಬೇಕಾಗುತ್ತದೆ. ಎರಡು ವರ್ಷ ಪ್ರೊಬೆಷನರಿ ಅವಧಿಯಲ್ಲಿ ಕಾರ್ಯನಿರ್ವಹಿಸುತ್ತಾರೆ.

## ಬಿಜೆಪಿ ಅವಧಿಯಲ್ಲಿನ ಹಗರಣಗಳ ತನಿಖೆಗೆ ಸಂಪುಟ ಉಪಸಮಿತಿ ರಚನೆ

• **ಉದಯವಾಹಿನಿ, ಬೆಂಗಳೂರು**

ಬಿಜೆಪಿ ಅಧಿಕಾರ ಅವಧಿಯಲ್ಲಿ ನಡೆದಂತಹ ಹಗರಣಗಳು ಸೇರಿದಂತೆ ಒಟ್ಟು 26 ಹಗರಣಗಳ ಕುರಿತಂತೆ ತನಿಖೆ ನಡೆಸಿ ಶೀಘ್ರದಲ್ಲಿ ವರದಿ ಸಲ್ಲಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ. ಹಾಗಾಗಿ ಮೊನ್ನೆ ನಡೆದ ಕ್ಯಾಬಿನೆಟ್ ಸಭೆಯಲ್ಲಿ ಸಂಪುಟ ಉಪ ಸಮಿತಿ ರಚನೆ ಮಾಡಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿ ಸರ್ಕಾರದ ಅವಧಿಯಲ್ಲಿನ ಹಗರಣಗಳ ತನಿಖೆಯ ವಿಚಾರವಾಗಿ ನನ್ನ ನೇತೃತ್ವದಲ್ಲಿ ಸಂಪುಟ ಉಪ ಸಮಿತಿ ರಚನೆ ಮಾಡಲಾಗಿದೆ.

ಸಮಿತಿಯಿಂದ 26 ಹಗರಣಗಳ ಮಾಹಿತಿಗಳನ್ನು ಸಂಗ್ರಹಿಸಲಾಗುತ್ತಿದ್ದು, ಆದಷ್ಟು ಬೇಗ ತನಿಖಾ ವರದಿ ಸಲ್ಲಿಸಲು ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಸೂಚನೆ ಹಿನ್ನೆಲೆಯಲ್ಲಿ ಇದೀಗ ಸಂಪುಟ ಉಪಸಮಿತಿ ರಚನೆ ಮಾಡಲಾಗಿದೆ ಎಂದು ತಿಳಿಸಿದರು. ಬಿಜೆಪಿ ಅಧಿಕಾರದ ಅವಧಿಯಲ್ಲಿ ಯಾವೆಲ್ಲ ಹಗರಣ ನಡದಿವೆಯೋ ಅವೆಲ್ಲ ಹಗರಣಗಳು ಹೊರಬರಲಿವೆ. ಎರಡು ತಿಂಗಳಿನ ಒಳಗಾಗಿ ವರದಿ ಕೊಡಬೇಕೆಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಸುಮಾರು 20 ರಿಂದ 25 ಹಗರಣಗಳ ಪಟ್ಟಿ ಮಾಡಿದ್ದೇವೆ. ದ್ವೇಷದ ರಾಜಕಾರಣ ಮಾಡುವುದು ಬೇಡ ಅಂತ ನಮ್ಮ ಉದ್ದೇಶವಾಗಿದೆ. ಆದರೆ ಬಿಜೆಪಿಯವರು ದ್ವೇಷದ ರಾಜಕಾರಣ ಮಾಡಿದರೆ ನಾವು ಮಾಡುತ್ತೇವೆ ಎಂದು ತಿಳಿಸಿದರು.

## ಶಾಸಕರನ್ನು ಖರೀದಿಸಲು ಒಂದು ವರ್ಷದಿಂದ ಪ್ರಯತ್ನ

• **ಉದಯವಾಹಿನಿ, ಯಾದಗಿರಿ**

ಕಳೆದ ಕೆಲವು ದಿನಗಳ ಹಿಂದೆ ಮಂಡ್ಯ ಜಿಲ್ಲೆಯ ಶಾಸಕ ಗಣಿಗ ರವಿ ಕುಮಾರ್ ಬಿಜೆಪಿಯವರು ಆಪರೇಷನ್ ಕಮಲ ಮಾಡುತ್ತಿದ್ದು, ಕಾಂಗ್ರೆಸ್ ಶಾಸಕರಿಗೆ 100 ಕೋಟಿ ರೂಪಾಯಿ ಆಮಿಷ ಒಡ್ಡಿ ಖರೀದಿಸುತ್ತಿದ್ದಾರೆ ಎಂಬ ಆರೋಪ ಮಾಡಿದ್ದರು.

ಇದಾದ ಬಳಿಕ ಇದೀಗ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಪುರ, ಕಳೆದ ಒಂದು ವರ್ಷದಿಂದ ಶಾಸಕರನ್ನು ಖರೀದಿಸುವ ಪ್ರಯತ್ನ ಬಿಜೆಪಿ ಮಾಡುತ್ತಿದೆ ಎಂದು ಸ್ಫೋಟವಾದಂತಹ ಹೇಳಿಕೆ ನೀಡಿದರು.

ಯಾದಗಿರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದೀಪಾವಳಿ ಒಳಗೆ ಸರ್ಕಾರ ಪತನ ಎಂದು ಸಿಟಿ ರವಿ ಹೇಳಿಕೆ ವಿಚಾರವಾಗಿ ದೀಪಾವಳಿ ಇನ್ನು ಎರಡು ತಿಂಗಳಿದೆ ನೋಡೋಣ. ಒಂದು ವರ್ಷದ ಅವಧಿಯಲ್ಲಿ ಸರ್ಕಾರ ಎಷ್ಟು ಬಾರಿ ಬಿದ್ದಿದೆ ಹೇಳಿ. ಶಾಸಕರನ್ನು ಖರೀದಿ ಮಾಡುವ ಪ್ರಯತ್ನ ಬಿಜೆಪಿಯಿಂದ ನಡೆದಿದೆ. ಆದರೆ ಯಾರೂ ಸಹ ಬಿಜೆಪಿಯವರ ಬಲೆಗೆ ಬೀಳುವುದಿಲ್ಲ ಎಂದರು.

## ಮದ್ಯಪ್ರಿಯರಿಗೆ ಬಿಗ್ ಶಾಕ್ : ಶೀಘ್ರವೇ ಬಿಯರ್ ಬೆಲೆ 10-20 ಹೆಚ್ಚಳ

• **ಉದಯವಾಹಿನಿ, ಬೆಂಗಳೂರು**

ಮದ್ಯ ಪ್ರಿಯರಿಗೆ ಬಿಗ್ ಶಾಕ್ ಎದುರಾಗಿದ್ದು, ಬಿಯರ್ ದರ ಹೆಚ್ಚಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಹೌದು. ಕರ್ನಾಟಕದಲ್ಲಿ ಬಿಯರ್ ಬೆಲೆ ಶೀಘ್ರದಲ್ಲೇ ಪ್ರತಿ ಬಾಟಲಿಗೆ ಸುಮಾರು 10–20 ಹೆಚ್ಚಳವಾಗುವ ಸಾಧ್ಯತೆಯಿದೆ.. ರಾಜ್ಯ ಸರ್ಕಾರದಿಂದ ಬಿಯರ್ ದರ ಏರಿಕೆ ಮಾಡಲು ಸರ್ಕಾರ ತಯಾರಿ ಮಾಡಿಕೊಂಡಿದೆ.


ಬಿಯರ್ ದರ ಹೆಚ್ಚಳಕ್ಕೆ ಸರ್ಕಾರದಿಂದ ಕರಡು ಹೊರಡಿಸಲಾಗಿದೆ.. ಪ್ರತಿ ಬಾಟಲ್ ಬಿಯರ್ ಮೇಲೆ ಬರೋಬ್ಬರಿ 10 ರೂ.ಗಳಿಂದ 12 ರೂ.ಗಳವರೆಗೆ ದರ ಹೆಚ್ಚಳ ಮಾಡಲು ತೀರ್ಮಾನಿಸಲಾಗಿದೆ. ಪ್ರತಿ ಬಿಯರ್ ಸ್ಲ್ಯಾಬ್ ಗಳ ಮೇಲೆ ದರ ಏರಿಕೆ ಮಾಡಲು ಸಿದ್ಧತೆ ನಡೆಸಿದೆ ಎನ್ನಲಾಗಿದೆ.

## 373 ಪ್ರಾಥಮಿಕ ಶಾಲೆಗಳಲ್ಲಿ ಇಂಗ್ಲೀಷ್ ಮೀಡಿಯಂ ತರಗತಿ ಪ್ರಾರಂಭಿಸಲು ಅನುಮೋದನೆ

• **ಉದಯವಾಹಿನಿ, ಬೆಂಗಳೂರು**

ಮಕ್ಕಳ ಪೋಷಕರಿಗೆ ಗುಡ್ ನ್ಯೂಸ್ ಎನ್ನುವಂತೆ, 373 ಪ್ರಾಥಮಿಕ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ (ದ್ವಿಭಾಷಾ) ವಿಭಾಗಗಳನ್ನು ಪ್ರಾರಂಭಿಸಲು ರಾಜ್ಯ ಸರ್ಕಾರ ಅನುಮೋದನೆ ನೀಡಿದೆ.

2024–25ನೇ ಶೈಕ್ಷಣಿಕ ವರ್ಷದ ಆರಂಭದಲ್ಲಿ 1,419 ಸರ್ಕಾರಿ ಪ್ರಾಥಮಿಕ



ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ಆರಂಭಿಸಿ ಅನುಮತಿ ನೀಡಲಾಗಿತ್ತು.

ಬೇಡಿಕೆ ಪರಿಗಣಿಸಿ ಕನಿಷ್ಠ 100 ವಿದ್ಯಾರ್ಥಿಗಳಿರುವ 373 ಶಾಲೆಗಳಿಗೆ ಅನುಮತಿ ನೀಡಲಾಗಿದೆ. ಬೆಂಗಳೂರು ದಕ್ಷಿಣ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ತುಮಕೂರು, ಬಾಗಲಕೋಟೆ, ಗದಗ, ಹಾವೇರಿ, ಉತ್ತರ ಕನ್ನಡ, ಶಿರಸಿ, ಮೈಸೂರು, ಹಾಸನ, ವಿಜಯಪುರ ಮತ್ತು ಚಿಕ್ಕಮಗಳೂರಿನ ಶಾಲೆಗಳಿಗೆ ಅನುಮತಿ ನೀಡಲಾಗಿದೆ.


ಒಟ್ಟಾರೆಯಾಗಿ ರಾಜ್ಯ ಸರ್ಕಾರದಿಂದ ಮಕ್ಕಳ ಪೋಷಕರಿಗೆ ಗುಡ್ ನ್ಯೂಸ್ ಎನ್ನುವಂತೆ ಖಾಸಗಿ ಶಾಲೆಗಳಿಗೆ ಸೆಡ್ಡು ಹೊಡೆದಂತೆ 373 ಪ್ರಾಥಮಿಕ ಶಾಲೆಗಳಲ್ಲಿ ಇಂಗ್ಲೀಷ್ ಮೀಡಿಯಂ ಶಾಲೆಗಳನ್ನು ಆರಂಭಿಸುವುದಕ್ಕೆ ಗ್ರೀನ್ ಸಿಗ್ನಲ್ ನೀಡಿದೆ.

## ಕೈಗಾರಿಕೆ ಕ್ಷೇತ್ರದಲ್ಲಿ ಕರ್ನಾಟಕಕ್ಕೆ ಪೂರ್ಣ ಸಹಕಾರ

• **ಉದಯವಾಹಿನಿ, ನವದೆಹಲಿ**

ಕರ್ನಾಟಕದ ಕೈಗಾರಿಕಾಭಿವೃದ್ಧಿ ವಿಚಾರಕ್ಕೆ ಸಂಬಂಧಿಸಿದಂತೆ ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಇಂದಿಲ್ಲಿ ಭೇಟಿಯಾದ ಕರ್ನಾಟಕದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ವಿವಿಧ ಅಂಶಗಳ ಬಗ್ಗೆ ಚರ್ಚೆ ನಡೆಸಿದರು.

ನವದೆಹಲಿಯ ಉದ್ಯೋಗ ಭವನದಲ್ಲಿರುವ ಭಾರೀ ಕೈಗಾರಿಕೆ ಸಚಿವಾಲಯದ ಕಚೇರಿಯಲ್ಲಿ ಕುಮಾರಸ್ವಾಮಿ ಅವರನ್ನು ಭೇಟಿಯಾದ ಎಂ.ಬಿ.ಪಾಟೀಲ್ ಅವರು; ಕೈಗಾರಿಕೆ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಕೇಂದ್ರದಿಂದ ಅಗತ್ಯ ಸಹಕಾರ ಬೇಕೆಂದು ಮನವಿ ಮಾಡಿದರು. ಸಚಿವರ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಕೇಂದ್ರ ಸಚಿವರು; ಸಂಪೂರ್ಣ ಸಹಕಾರದ ಭರವಸೆ ಕೊಟ್ಟರು. ಪ್ರಮುಖವಾಗಿ ಕರ್ನಾಟಕದಲ್ಲಿ ಕೈಗಾರಿಕಾ ಕ್ಷೇತ್ರದ



ಸ್ಥಿತಿಗತಿಗಳ ಬಗ್ಗೆ ಕೇಂದ್ರ ಸಚಿವರು, ಪಾಟೀಲ್ ಅವರಿಂದ ಮಾಹಿತಿ ಪಡೆದುಕೊಂಡರು. ಈ ಸಂದರ್ಭದಲ್ಲಿ ಕೆಲ ಕೈಗಾರಿಕೆಗಳ ಬಗ್ಗೆ ಮನವಿ ಸಲ್ಲಿಸಿದ ಅವರು; ಕೇಂದ್ರ ಸರ್ಕಾರದಿಂದ ಸಿಗಬೇಕಿರುವ ಒಪ್ಪಿಗೆಯ ಬಗ್ಗೆ ಪ್ರಸ್ತಾವನೆಗಳನ್ನು ನೀಡಿದರು.


### ಮಾಹಿತಿ ತೆಗೆದುಕೊಂಡ ಸಚಿವರು

ಎಂ.ಬಿ.ಪಾಟೀಲ್ ಅವರು ಸಲ್ಲಿಸಿದ ವಿವಿಧ ಪ್ರಸ್ತಾವನೆಗಳ ಬಗ್ಗೆ ವಿಶೇಷ ಮುತುವರ್ಜಿ ವಹಿಸಿ ಕೆಲಸ ಮಾಡುವುದಾಗಿ ಭರವಸೆ ನೀಡಿದರು. ರಾಜ್ಯದಲ್ಲಿ ಹೆಚ್ಚು ಹೆಚ್ಚು ಕೈಗಾರಿಕೆಗಳು ಸ್ಥಾಪನೆಯಾಗಬೇಕು ಹಾಗೂ ವಿದೇಶಿ ನೇರ ಬಂಡವಾಳ ಹೂಡಿಕೆ ಹೆಚ್ಚಿನ ಪ್ರಮಾಣದಲ್ಲಿ ಆಗಬೇಕು. ಈ ನಿಟ್ಟಿನಲ್ಲಿ ರಾಜ್ಯಕ್ಕೆ ಪೂರ್ಣ ಸಹಕಾರ ನೀಡುವುದಾಗಿ ಕೇಂದ್ರ ಸಚಿವರು ಭರವಸೆ ನೀಡಿದರು.

## ದಸರಾ ಹಿನ್ನೆಲೆ ಎಕ್ಸ್‌ಪ್ರೆಸ್‌ವೇ ಪರಿಶೀಲಿಸಿದ ಮಂಜುನಾಥ್

• **ಉದಯವಾಹಿನಿ, ಬೆಂಗಳೂರು**

ದಸರಾ ಸಮೀಪಿಸುತ್ತಿರುವ ಹಿನ್ನೆಲೆ ಸಂಸದ ಡಾ. ಸಿಎನ್ ಮಂಜುನಾಥ್ ಅವರು ಇಂದು ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ಹೈವೇಯನ್ನು ಪರಿಶೀಲನೆ ನಡೆಸಿದ್ದಾರೆ. ಕದಂಬ ಜಂಕ್ಷನ್‌ನಲ್ಲಿ, ವಾರಾಂತ್ಯದಲ್ಲಿ ಸುಮಾರು ಒಂದು ಲಕ್ಷ ವಾಹನಗಳು ಸಂಚರಿಸುತ್ತವೆ. ಸಂಚಾರ ದಟ್ಟಣೆಯು ಇಲ್ಲಿನ ಪ್ರಮುಖ ಸಮಸ್ಯೆಯಾಗಿದೆ. ದಸರಾ ಹತ್ತಿರವಾಗುತ್ತಿರುವ ಹಿನ್ನೆಲೆಯಲ್ಲಿ ಸಂಚಾರ ದಟ್ಟಣೆಯನ್ನು ನಿವಾರಿಸುವುದು ತುರ್ತು ಅಗತ್ಯವಾಗಿದೆ. ಸಂಚಾರ ಸುಗಮವಾಗುವಂತೆ ಮಾಡಲು, ಎನ್‌ಹೆಚ್‌ಎಐ ಇಂಜಿನಿಯರ್‌ಗಳು ಮತ್ತು ಅಧಿಕಾರಿಗಳೊಂದಿಗೆ ಸಂಭವನೀಯ ಪರಿಹಾರಗಳ ಬಗ್ಗೆ ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.



# ಕರ್ನಾಟಕದಲ್ಲಿ ಟಾಸ್ಕ್ ಫೋರ್ಸ್ ರಚಿಸಿ, ಭಯೋತ್ಪಾದನೆ ನಿಯಂತ್ರಿಸಿ

**ರಾಜ್ಯದಲ್ಲಿ ಭಯೋತ್ಪಾದನಾ ಚಟುವಟಿಕೆ ನಿಗ್ರಹಕ್ಕೆ 'ಟಾಸ್ಕ್ ಫೋರ್ಸ್' ರಚಿಸುವಂತೆ ಅವರು ಸರ್ಕಾರಕ್ಕೆ ಒತ್ತಾಯ**

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನಲ್ಲಿ ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟ ಪ್ರಕರಣ ತಲ್ಲಣ ಸೃಷ್ಟಿಸಿತ್ತು. ಈ ಕೆಫೆ ಬದಲು ಬಿಜೆಪಿ ಕಚೇರಿ ಸ್ಫೋಟಿಸಲು ಸಂಚು ರೂಪಿಸಲಾಗಿತ್ತು ಎಂಬ ಮಾಹಿತಿ ಇದೀಗ ಬಹಿರಂಗವಾಗಿದೆ. ಇದಕ್ಕೆ ಪ್ರತಿಕ್ರಿಯಿಸಿರುವ ವಿಪಕ್ಷ ನಾಯಕ ಆರ್. ಅಶೋಕ್ ಅವರು, ರಾಜ್ಯದಲ್ಲಿ ಭಯೋತ್ಪಾದನಾ ಚಟುವಟಿಕೆ ನಿಗ್ರಹಕ್ಕೆ 'ಟಾಸ್ಕ್ ಫೋರ್ಸ್' ರಚಿಸುವಂತೆ ಅವರು ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

ಕಾಂಗ್ರೆಸ್ ಸರ್ಕಾರದ ಮೇಲೆ ವಾಗ್ದಾಳಿ ನಡೆಸಿದರು. ಕಾಂಗ್ರೆಸ್ ನಾಯಕರ ಹೇಳಿಕೆಗಳಿಂದ ರಾಜ್ಯದಲ್ಲಿ ಯಾವುದೇ ತೊಂದರೆ ಇಲ್ಲ ಎಂದು ಭಯೋತ್ಪಾದಕರಿಗೆ ಅನ್ನಿಸಿದೆ ಎಂದು ಕಾಂಗ್ರೆಸ್ ಮೇಲೆ ಆರೋಪಿಸಿದರು. ಭಯೋತ್ಪಾದಕರು ಬಿಜೆಪಿ ಕಚೇರಿಯಲ್ಲಿ ಬಾಂಬ್ ಸ್ಫೋಟಿಸುವ ಸಂಚು ರೂಪಿಸಿದ್ದನ್ನು ಅವರು ಖಂಡಿಸಿದರು. ಉಗ್ರ ಚಟುವಟಿಕೆ ನಿಯಂತ್ರಣಕ್ಕೆ ಕಠಿಣ ಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರ ವಿಶೇಷ ಟಾಸ್ಕ್ ಫೋರ್ಸ್ ರಚಿಸಬೇಕು. ಐಟಿ, ಬಿಟಿ ಕೇಂದ್ರವಾಗಿರುವ ಉದ್ಯಾನ ನಗರಿ ಬೆಂಗಳೂರಿನಲ್ಲಿ ಭಯದ ವಾತಾವರಣ ಸೃಷ್ಟಿಸಲು ಪ್ಲಾನ್ ಮಾಡಿಕೊಂಡಿದ್ದಾರೆ. ನಗರದ ಆರ್ಥಿಕತೆಯನ್ನು ನಾಶಕ್ಕೆ ಭಯೋತ್ಪಾದಕರು ಮುಂದಾಗಿದ್ದರು.

> ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವ ವಿಚಾರದಲ್ಲಿ ನಮಗಿಂತಲೂ ಕಾಂಗ್ರೆಸ್ ನಾಯಕರಿಗೆ ಹೆಚ್ಚು ವಿಶ್ವಾಸ ಇದೆ. ಅದಕ್ಕಾಗಿ ಸಿಎಂ ಕುರ್ಚಿಗೆ ಸ್ಪರ್ಧೆ ಹೆಚ್ಚಿದ್ದು, ಎಲ್ಲಾರೂ ಮುಖ್ಯಮಂತ್ರಿಯಾಗುತ್ತೇನೆಂದು ಹೇಳುತ್ತಿದ್ದಾರೆ. ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ
> -ಆರ್.ಅಶೋಕ, ವಿಪಕ್ಷ ನಾಯಕ

ಇನ್ನೂ ಇದಕ್ಕೆ ಪೂರಕವಾಗಿ ಕಾಂಗ್ರೆಸ್‌ನ ವಿಧಾನಪರಿಷತ್ ಸದಸ್ಯರೊಬ್ಬರು, ಬಾಂಗ್ಲಾ ಮಾದರಿ ಹಲ್ಲೆ ಮಾಡಲಾಗುವುದು ಎಂದು ಬೆದರಿಕೆ ಹಾಕಿದ್ದರು.



### ಬಿಜೆಪಿ ಕಚೇರಿಯಲ್ಲಿ ಬಾಂಬ್ ಸ್ಫೋಟಿಸಬೇಕೆಂದು ಯೋಜನೆ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಭಯೋತ್ಪಾದಕರಿಗೆ ಭಯವೇ ಇಲ್ಲ. ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟವಾದಾಗ, ಇದು ವ್ಯಾಪಾರ ವ್ಯಾಜ್ಯ ಎಂದು ಸಚಿವರು ಹೇಳಿದ್ದರು. ಇದರಿಂದಾಗಿಯೇ ಭಯೋತ್ಪಾದನಾ ಚಟುವಟಿಕೆ ವ್ಯವಸ್ಥಿತವಾಗಿ ನಡೆಯುತ್ತಿದೆ. ರಾಮೇಶ್ವರಂ ಕೆಫೆ ಬದಲಾಗಿ ಬಿಜೆಪಿ ಕಚೇರಿಯಲ್ಲಿ ಬಾಂಬ್ ಸ್ಫೋಟಿಸಬೇಕೆಂದು ಯೋಜನೆ ರೂಪಿಸಲಾಗಿತ್ತು. ಈ ಪ್ರಕರಣದಲ್ಲಿ ಹಿಂದೂಗಳ ಮೇಲೆ ದಾಳಿ ನಡೆಸಲು ಪ್ಲಾನ್ ಮಾಡಲಾಗಿತ್ತು ಎಂದರು.

**ಸರ್ಕಾರದ ವಿರುದ್ಧ ವಾಗ್ದಾಳಿ**

ಬಾಂಗ್ಲಾದೇಶದಿಂದಲೂ ಹಲವರು ಆಧಾರ್ ಕಾರ್ಡ್ ಪಡೆದು ಬೆಂಗಳೂರಿಗೆ ಬರುತ್ತಿದ್ದು, ರಾಜ್ಯದಲ್ಲಿ ಇದರಿಂದ ಭಯೋತ್ಪಾದನಾ ಚಟುವಟಿಕೆ ಹೆಚ್ಚಾಗುತ್ತಿದೆ. ಕರ್ನಾಟಕ ರಾಜ್ಯ ಗೃಹ ಇಲಾಖೆ ಹೆಚ್ಚುತ್ತಿರುವ ಈ ಭಯೋತ್ಪಾದನಾ ಚಟುವಟಿಕೆ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ರಾಜ್ಯಕ್ಕೆ ನುಸುಳುವ ಬಾಂಗ್ಲಾ ಪ್ರಜೆಗಳನ್ನು ಕೂಡಲೇ ಪತ್ತೆ ಮಾಡಿ ಅವರನ್ನು ಹೊರಕ್ಕೆ ಹಾಕುವ ಕೆಲಸವನ್ನು ರಾಜ್ಯ ಸರ್ಕಾರ ಮಾಡಬೇಕಿದೆ.

ಇಲ್ಲವಾದರೆ ಪಶ್ಚಿಮ ಬಂಗಾಳ ಮತ್ತು ಅಸ್ಸಾಂನ ಸ್ಥಿತಿಯೇ ಕರ್ನಾಟಕ ರಾಜ್ಯಕ್ಕೂ ಬರಲಿದೆ. ನಮ್ಮ ರಾಜ್ಯದ ಜನರ ಬದುಕು ಭಯೋತ್ಪಾದಕರ ನಿಯಂತ್ರಣಕ್ಕೆ ಹೋಗಬಾರದು. ಸ್ಲೀಪರ್ ಸೆಲ್‌ಗಳನ್ನು ಪತ್ತೆ ಮಾಡುವ ಕೆಲಸವನ್ನು ಸರ್ಕಾರ ಮಾಡಬೇಕು ಎಂದು ಅವರು ಕೋರಿದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ಶಕ್ತಿ ಸೌಧದಲ್ಲೇ (ವಿಧಾನಸೌಧ) ಪಾಕಿಸ್ತಾನ ಪರ ಘೋಷಣೆ ಕೂಗಿದ್ದರು. ಈ ವಿಚಾರವನ್ನು ಖುದ್ದು ಕಾಂಗ್ರೆಸ್ ಸಚಿವರೇ ನಿರಾಕರಿಸಿದ್ದರು. ಪದೇ ಪದೇ ಭಯೋತ್ಪಾದಕರಿಗೆ ಪ್ರೇರಣೆಯಾಗುವ ಹೇಳಿಕೆಗಳನ್ನು ಕಾಂಗ್ರೆಸ್ ನಾಯಕರು ನೀಡಿದ್ದಾರೆ. ಇದರಿಂದಾಗಿ ಭಯೋತ್ಪಾದನೆಗೆ ಕುಮ್ಮಕ್ಕು ದೊರೆತಿದೆ. ರಾಜ್ಯದಲ್ಲಿ ಏನು ಮಾಡಿದರೂ ನಡೆಯುತ್ತದೆ ಎಂಬ ವಾತಾವರಣ ಭಯೋತ್ಪಾದಕರಿಗೆ ಬರುತ್ತಿರಬಹುದು. ಆದ್ದರಿಂದಲೇ ಇಲ್ಲಿ ಇಂತಹ ಸಮಾಜ ಮತ್ತು ಕಾನೂನು ವಿರೋಧಿ ಚಟುವಟಿಕೆಗಳು ಹೆಚ್ಚಾಗುತ್ತಿವೆ. ಆದ್ದರಿಂದ ಸರ್ಕಾರ ಇಂತಹ ಹೇಳಿಕೆ ಕೊಡಬಾರದು ಎಂದರು.



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

# ನಾ ಕಂಡಂತೆ ವಸಂತ ನಾಡಿಗೇರ

ನಿನ್ನೆ ಹಿರಿಯ ಪತ್ರಕರ್ತ ವಸಂತ ನಾಡಿಗೇರ ಇನ್ನಿಲ್ಲ. ಬಹಳ ಬೇಸರಗೊಂಡೆ. ಅವರೇನೂ ನನಗೆ ಚಿರಪರಿಚಿತರಲ್ಲ ಯಾವ ಒಡನಾಟವೂ ಇರಲಿಲ್ಲ. ಅವರನ್ನು ಕಂಡದ್ದು ಒಂದೇ ಬಾರಿ. ಆದರೂ ನನ್ನಲ್ಲಿ ಅಗಾಧ ಪ್ರಭಾವ ಬೀರಿದ್ದರು. ಕಳೆದ ಮೇ ನಲ್ಲಿ ಸಿದ್ಧಾರೂಢ ಮಿಷನ್ ನ ಇಪ್ಪತ್ತೈದರ ಸಂಭ್ರಮ ಜರುಗಿತು. ಮೇ ಎಂಟರಂದು ಪತ್ರಿಕಾಗೋಷ್ಠಿ ಮುಗಿಸಿ, ಆತ್ಮೀಯರಾದ ವಿಜಯಕರ್ನಾಟಕದ ಹಿರಿಯ ಪತ್ರಕರ್ತ ಧರಣೇಶರ ಸಲಹೆಯ ಮೇರೆಗೆ ಸಂಯುಕ್ತ ಕರ್ನಾಟಕ ಕಛೇರಿಯಲ್ಲಿ ವಸಂತ ನಾಡಿಗೇರ ಅವರನ್ನು ಭೇಟಿಯಾದೆ. ಆ ದೊಡ್ಡ ಪತ್ರಿಕೆಯ ಸಂಪಾದಕರಾದರೂ ಸಾಮಾನ್ಯ ಕರ್ಮಿಯಂತೆ ಒಂದು ಮೂಲೆಯ ಕೊಠಡಿಯಲ್ಲಿದ್ದರು. ಹಸನ್ಮುಖದಿಂದ ಮೃದು ಮಾತಿನಿಂದ ಬರಮಾಡಿಕೊಂಡರು. ಅವರ ಈ ಸೌಜನ್ಯ ಅವರ ಆ ಸುಂದರ ಶರೀರದ ಮುಡಿಗೇರಿಸಿದ ಕಿರೀಟದಂತಿತ್ತು. ಕೆಲ ಕ್ಷಣಗಳಲ್ಲಿಯೇ ಅವರು ಚಿರಪರಿಚಿತರಂತಾದರು. ಅವರು ಹಲವು ಕೃತಿಗಳ ಲೇಖಕರೆಂದು ಇಂದಷ್ಟೇ ತಿಳಿಯಿತು. ಮನ ಮೆಲುಕಿತು ಕಾಳಿದಾಸನ ಭಾವಸ್ಥಿರಾಣಿ ಜನನಾಂತರಸೌಹೃದಾನಿ ಅಪೇಕ್ಷೆ ಇಲ್ಲದೆಯೂ ಸೆಳೆತಕ್ಕೊಳಗಾಗುತ್ತೇವೆಂದರೆ ಒಳಗೆ ಹುದುಗಿರುವ ಜನ್ಮಾಂತರದ ಗಟ್ಟಿ ಬೆಸುಗೆ ಇರಬೇಕು ಎಂಬ ಮಾತನ್ನು. ಸಮಾನ ಶೀಲೇಷು ವ್ಯಸನೇಷು ಸಖ್ಯಂ ಸಮಾನ ಗುಣಧರ್ಮದವರಲ್ಲಿ ಸ್ನೇಹ ಮೂಡುತ್ತದೆ. ವಸಂತ ನಾಡಿಗೇರ ಅವರ ಆತ್ಮಕ್ಕೆ ಭಾವಪೂರ್ಣ ಶ್ರದ್ಧಾಂಜಲಿಗಳು.

# ದಾಸರ ಪದಗಳ ಗಾಯನ

• ಉದಯವಾಹಿನಿ ಬೆಂಗಳೂರು



ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಸೆಪ್ಟೆಂಬರ್ 12, ಗುರುವಾರ ಸಂಜೆ 7–30ಕ್ಕೆ ಶ್ರೀಮತಿ ಸ್ನೇಹಾ ಗುಡಿ ಇವರಿಂದ ದಾಸರ ಪದಗಳ ಗಾಯನ ಏರ್ಪಡಿಸಿದ್ದು, ಇವರ ಗಾಯನಕ್ಕೆ ಹಾರ್ಮೋನಿಯಂ ವಾದನದಲ್ಲಿ ಕು|| ಸೃಷ್ಟಿ ದೇಸಾಯಿ ಮತ್ತು ತಬಲಾ ವಾದನದಲ್ಲಿ ಶ್ರೀ ಸರ್ವೋತ್ತಮ ಸಹಕರಿಸಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಜಯನಗರ ಐದನೇ ಬಡಾವಣೆ, ಬೆಂಗಳೂರು–41

# ನಟ ದರ್ಶನ್ ವಿರುದ್ಧದ ಚಾರ್ಜ್ ಶೀಟ್ ವರದಿಯ ಸುದ್ದಿ ಬಿತ್ತರಿಸಬೇಡಿ

• ಉದಯವಾಹಿನಿ ಬೆಂಗಳೂರು

ನಟ ದರ್ಶನ್ ಕ್ರೌರ್ಯದ ಬಗ್ಗೆ ಸುದ್ದಿ ಬಿತ್ತರಿಸಿದಂತೆ ಮಾಧ್ಯಮಗಳಿಗೆ ನಿರ್ಬಂಧ ವಿಧಿಸಿ ಹೈಕೋರ್ಟ್ ಆದೇಶ ಹೊರಡಿಸಿದೆ. ರೇಣುಕಾಸ್ವಾಮಿ ಕೊಲೆ ಕೇಸ್‌ಗೆ ಚಾರ್ಜ್ ಶೀಟ್‌ನಲ್ಲಿ ಉಲ್ಲೇಖಿಸಲಾದ ಬಗ್ಗೆ ಸುದ್ದಿ ಬಿತ್ತರಿಸದಂತೆ ಮಾಧ್ಯಮಗಳಿಗೆ ನಿರ್ಬಂಧ ಹೇರುವಂತೆ ಕೋರಿ ನಟ ದರ್ಶನ್ ಹೈಕೋರ್ಟ್ ಮೆಟ್ಟಿಲೇರಿ ರಿಟ್ ಅರ್ಜಿ ಸಲ್ಲಿಕೆ ಮಾಡಿದ್ದರು. ದರ್ಶನ್ ಪರ ವಕೀಲರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಕೋರ್ಟ್ ಪೊಲೀಸ್ ಇಲಾಖೆ ಸಲ್ಲಿಸಿರುವ ಆರೋಪಪಟ್ಟಿಯ ವಿವರಗಳನ್ನು ಪ್ರಸಾರ ಮಾಡದಂತೆ ಮಾಧ್ಯಮಗಳಿಗೆ ಹೈಕೋರ್ಟ್ ನಿರ್ದೇಶನ ನೀಡಿದೆ. ಹಾಗೂ ಈ ಆದೇಶವನ್ನು ಉಲ್ಲಂಘಿಸಿದ ಮಾಧ್ಯಮಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೇಂದ್ರ ಮಾಹಿತಿ ಮತ್ತು ಪ್ರಸಾರ ಇಲಾಖೆಗೆ ಸೂಚನೆ ನೀಡಿದೆ.

# ಯಜಮಾನಿಯರಿಗೆ ಕೊನೆಗೂ ಗೃಹಲಕ್ಷ್ಮಿ ಹಣ ಖಾತೆಗೆ ಜಮಾ

• ಉದಯವಾಹಿನಿ ಬೆಂಗಳೂರು

ಹಣ ಬಾರದ ಯಜಮಾನಿಯರಿಗೆ ಗುಡ್ ನ್ಯೂಸ್ ಸಿಕ್ಕಿದ್ದು, ಕೊನೆಗೂ ಜೂನ್ ತಿಂಗಳ ಗೃಹಲಕ್ಷ್ಮಿ ಹಣ ಖಾತೆಗೆ ಜಮಾ ಆಗಿದೆ. ಜುಲೈ ,ಆಗಸ್ಟ್ ತಿಂಗಳ ಹಣ ಶೀಘ್ರವೇ ಜಮಾ ಆಗಲಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.ಈ ಬಗ್ಗೆ ಮಾಹಿತಿ ನೀಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ 'ಜೂನ್ ತಿಂಗಳ ಗೃಹಲಕ್ಷ್ಮಿ ಹಣ ಜಮಾ ಆಗಿದೆ. ಶೀಘ್ರವೇ ಬಾಕಿ ಇರುವ ಜುಲೈ ಹಾಗೂ ಆಗಸ್ಟ್ ತಿಂಗಳ ಗೃಹಲಕ್ಷ್ಮಿ' ಹಣ ಮಹಿಳೆಯರ ಖಾತೆಗೆ ಜಮಾ ಮಾಡಲಾಗುತ್ತದೆ ಎಂದರು. ಮಹಿಳಾ, ಮಕ್ಕಳ ಇಲಾಖೆಯಯಿಂದ ಈಗಾಗಲೇ ಜುಲೈ ತಿಂಗಳ ಹಣಕ್ಕೆ ಪತ್ರ ಬರೆಯಲಾಗಿದೆ. ಇನ್ನೂ ಹಣ ಬಿಡುಗಡೆ ಮಾಡಿಲ್ಲ. ಹೀಗಾಗಿ ಜುಲೈ ತಿಂಗಳ ಹಣ ಬರುವುದು ತಡವಾಗಲಿದೆ . ಹಣ ಬಂದ ಕೂಡಲೇ ಜಮಾ ಮಾಡುತ್ತೇವೆ ಎಂದರು.

# ನಿರುದ್ಯೋಗಿಗಳಿಗೆ ಬೆಂಗಳೂರಿನಲ್ಲಿ ಅಣಬೆ ಬೇಸಾಯ ತರಬೇತಿಗೆ ಅರ್ಜಿ

• ಉದಯವಾಹಿನಿ ಬೆಂಗಳೂರು

ತೋಟಗಾರಿಕೆ ಇಲಾಖೆಯ ಜೈವಿಕ ಕೇಂದ್ರ, ಹುಳಿಮಾವು, ಬೆಂಗಳೂರು ಇಲ್ಲಿ ದಿನಾಂಕ ಸೆಪ್ಟೆಂಬರ್ 13 2024 ರಂದು ಅಣಬೆ ಬೇಸಾಯ Production Technology of Mushroom ಬಗ್ಗೆ ತರಬೇತಿ ಕಾರ್ಯಕ್ರಮವನ್ನು ನಗರವಾಸಿಗಳಿಗೆ, ರೈತರಿಗೆ, ಸಾರ್ವಜನಿಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಒಂದು ದಿನದ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ. ತರಬೇತಿಯಲ್ಲಿ ಭಾಗವಹಿಸಲು ಆಸಕ್ತಿಯುಳ್ಳವರು ರೂ. 250/– ಗಳನ್ನು ಜೈವಿಕ ಕೇಂದ್ರ, ಹುಳಿಮಾವು, ಬೆಂಗಳೂರು ರವರ ಕಚೇರಿಯಲ್ಲಿ ತರಬೇತಿಯ ದಿನ ಪಾವತಿಸಿ ನೊಂದಣಿಯನ್ನು ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 9449833153, 9066764248, 7892618755 ಅಥವಾ ಇ–ಮೇಲ್ sadh.co23@gmail.com, jaivikakendra.hulimavu@gmail.com ಮೂಲಕ ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಿಚ್ಚನ ಹೆಸರು ತೆಗೆದು ಹಾಕಿದ ವಾಹಿನಿ ಬಿಗ್ ಬಾಸ್‌ಗೆ ಸುದೀಪ್ ಅನುಮಾನ?

• ಉದಯವಾಹಿನಿ ಬೆಂಗಳೂರು

ಕಿರುತೆರೆ ಪ್ರೇಕ್ಷಕರ ಮೆಚ್ಚಿನ ಶೋಗಳಲ್ಲಿ ಒಂದಾಗಿರುವ ಬಿಗ್ ಬಾಸ್ ಕನ್ನಡ –11 ಶೀಘ್ರದಲ್ಲೇ ಆರಂಭಗೊಳ್ಳಲಿದೆ ಎನ್ನಲಾಗುತ್ತಿದೆ. ಬಗ್ಗೆ ಇತ್ತೀಚೆಗೆ ಕಲರ್ಸ್ ಕನ್ನಡ ವಾಹಿನಿ ಅಧಿಕೃತವಾಗಿ ಹೊಸ ಸೀಸನ್ ಹೊಸ ಲೋಗೋವನ್ನು ಪರಿಚಯಿಸಿತು. ಪ್ರತಿ ವರ್ಷಕ್ಕಿಂತ ಈ ವರ್ಷದ ಬಿಗ್ ಬಾಸ್ ಆರಂಭಕ್ಕೆ ಹೆಚ್ಚಿನ ಕುತೂಹಲವಿದೆ. ಅದಕ್ಕೆ ಮುಖ್ಯ ಕಾರಣವೆಂದರೆ ಈ ಬಾರಿ ನಿರೂಪಕನ ವಿಚಾರದಲ್ಲಿ ಹುಟ್ಟಿಕೊಂಡಿರುವ ಪ್ರಶ್ನೆ. ಕಿಚ್ಚ ಸುದೀಪ್ ಅವರು ಈ ಬಾರಿ ಬಿಗ್ ಬಾಸ್ ನಡೆಸಿಕೊಡುವುದು ಅನುಮಾನವೆನ್ನಲಾಗುತ್ತಿದೆ. ಆದರೆ ಈ ಗೊಂದಲದ ನಡುವೆಯೇ ವಾಹಿನಿ ರಿವೀಲ್ ಮಾಡಿದ್ದ ಹೊಸ ಲೋಗೋ ವಿಡಿಯೋದಲ್ಲಿ ಕಿಚ್ಚ ಸುದೀಪ್ ಅವರ ಹೆಸರನ್ನು ಹ್ಯಾಷ್ ಟ್ಯಾಗ್ ಆಗಿ ಬಳಸಲಾಗಿತ್ತು. ಇದರಿಂದ ಕಿಚ್ಚ ಅವರೇ ಶೋ ನಡೆಸಿಕೊಡಲಿದ್ದಾರೆ ಎನ್ನುವ ಮಾತು ಮತ್ತೆ ಮುನ್ನೆಲೆಗೆ ಬಂದಿತ್ತು. ಆದರೆ ಇದೀಗ ಈ ಲೋಗೋ ವಿಡಿಯೋದಿಂದ ಕಿಚ್ಚ ಸುದೀಪ್ ಅವರ ಹೆಸರನ್ನು ತೆಗೆಯಲಾಗಿದೆ. ಹಾಗಾಗಿ ಅವರು ಶೋ ನಡೆಸಿಕೊಡುವ ಬಗೆಗಿನ ಚರ್ಚೆ ಮತ್ತೆ ಶುರುವಾಗಿದೆ.

# ಕರ್ನಾಟಕ ವೈವಿಧ್ಯಮಯ ಸಂಪನ್ಮೂಲಗಳ ನಾಡು: ಸಿಎಂ

## ದುಂಡುಮೇಜಿನ ಸಭೆಯಲ್ಲಿ ನಾವು ಕೇವಲ ವ್ಯಾವಹಾರಿಕ ಅವಕಾಶಗಳನ್ನಷ್ಟೇ ಚರ್ಚೆ ಮಾಡುತ್ತಿಲ್ಲ

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ನಡೆದ ಯುಎಸ್–ಇಂಡಿಯಾ ಬಿಸಿನೆಸ್ ಕೌನ್ಸಿಲ್‌ನ ಪ್ರತಿನಿಧಿಗಳೊಂದಿಗಿನ ದುಂಡು ಮೇಜಿನ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ನಾವು ನಡೆಸಿದ ಚರ್ಚೆಯು ಕರ್ನಾಟಕ ಮತ್ತು ಅಮೆರಿಕ ಮಧ್ಯೆ ಇರುವ ಸದೃಢ ಮತ್ತು ಕ್ರಿಯಾತ್ಮಕ ಪಾಲುದಾರಿಕೆಗೆ ಸಾಕ್ಷಿಯಾಗಿದೆ.

ಈ ದುಂಡುಮೇಜಿನ ಸಭೆಯಲ್ಲಿ ನಾವು ಕೇವಲ ವ್ಯಾವಹಾರಿಕ ಅವಕಾಶಗಳನ್ನಷ್ಟೇ ಚರ್ಚೆ ಮಾಡುತ್ತಿಲ್ಲ, ಹಿಂದೆಂದಿಗಿಂತಲೂ ಹೆಚ್ಚಿನ ಸಂಪರ್ಕ ಹೊಂದಿರುವ ಹಾಗೂ ಭವಿಷ್ಯದಲ್ಲಿ ಹೆಚ್ಚು ಸಮೃದ್ಧಿಯನ್ನು ತರುವ ನೀಲನಕ್ಷೆಯನ್ನು ರೂಪಿಸುತ್ತಿದ್ದೇವೆ ಎಂದರು.

ನಿಮಗೆಲ್ಲಾ ತಿಳಿದಿರುವಂತೆ ಬೆಂಗಳೂರು ಕರ್ನಾಟಕದ ರಾಜಧಾನಿ ಮಾತ್ರವಲ್ಲದೆ ಭಾರತದ ಸಿಲಿಕಾನ್ ವ್ಯಾಲಿ ಕೂಡ ಹೌದು.

ಈ ನಗರವು ಭಾರತದ ತಂತ್ರಜ್ಞಾನ ಕ್ರಾಂತಿಯ ಮುಂಚೂಣಿ ಯಲ್ಲಿರುವುದಲ್ಲದೇ ನಾವೀನ್ಯತೆ, ಉದ್ಯಮಶೀಲತೆ ಮತ್ತು ಅತ್ಯಾಧುನಿಕ ಸಂಶೋಧನೆ ಮತ್ತು ಅಭಿವೃದ್ಧಿಯ ಕೇಂದ್ರವಾಗಿ ಮುಂದುವರೆದಿದೆ.

**ಅತ್ಯಾಧುನಿಕ ಸಂಶೋಧನೆ, ಅಭಿವೃದ್ಧಿ**

ದೃಢವಾದ ವ್ಯವಹಾರಗಳನ್ನು ಪೋಷಿಸುವ ನಮ್ಮ ಬದ್ಧತೆ ಅಚಲವಾದುದು. ಅಭಿವೃದ್ಧಿ ಮತ್ತು ಯಶಸ್ಸಿಗೆ ಪೂರಕವಾದ ವಾತಾವರಣವನ್ನು ಸೃಜಿಸಲು ನಾವು ನಿರಂತರವಾಗಿ ಶ್ರಮಿಸುತ್ತಿದ್ದೇವೆ' ಎಂದು ಹೇಳಿದರು.

ಕರ್ನಾಟಕ ವೈವಿಧ್ಯಮಯ ಸಂಪನ್ಮೂಲಗಳ ನಾಡು. ಕೌಶಲ್ಯಭರಿತ ಕಾರ್ಯಪಡೆಯಿಂದ ಹಿಡಿದು ನೈಸರ್ಗಿಕ ಸಂಪತ್ತಿನವರೆಗೆ, ವೇಗವಾಗಿ ಬೆಳೆಯುತ್ತಿರುವ ಸ್ಟಾರ್ಟ್ ಅಪ್ ಸಂಸ್ಕೃತಿಯಿಂದ ಹಿಡಿದು ಸದೃಢ ಉತ್ಪಾದನಾ ತಳಪಾಯ ಇಲ್ಲಿದೆ. ರಾಜ್ಯವು ಜಗತ್ತಿನ ಮುಂಚೂಣಿಯಲ್ಲಿರುವ ಐ.ಟಿ ಕಂಪನಿಗಳಿಗೆ, ಬಯೋ ಟೆಕ್ನಾಲಜಿ ಉದ್ಯಮಗಳಿಗೆ ಮತ್ತು ಸ್ಟಾರ್ಟ್ ಅಪ್‌ಗಳಿಗೆ ತವರೂರಾಗಿದೆ. ನಾವೀನ್ಯತೆ, ಈಸ್ ಆಫ್ ಡೂಯಿಂಗ್ ಬ್ಯುಸಿನೆಸ್ ಹಾಗೂ ಸುಸ್ಥಿರ ಅಭಿವೃದ್ಧಿಗೆ ಪೂರಕವಾಗಿ ನಮ್ಮ ನೀತಿಗಳನ್ನು ರೂಪಿಸಲಾಗಿದೆ' ಎಂದರು.

> ರಾಜ್ಯ ವ್ಯಾಪಾರ–ವ್ಯವಹಾರಗಳಿಗೆ ಮುಕ್ತವಾಗಿದೆ. ಕರ್ನಾಟಕದಲ್ಲಿರುವ ಉತ್ತಮ ಅವಕಾಶಗಳನ್ನು ಸದುಪಯೋಗ ಪಡಿಸಿಕೊಳ್ಳಲು ಆಹ್ವಾನಿಸುತ್ತೇನೆ. ಐಟಿ–ಬಿಟಿ, ಏರೋಸ್ಪೇಸ್ ಅಥವಾ ಇನ್ಯಾವುದೇ ಕ್ಷೇತ್ರವಿರಲಿ, ಜಾಗತಿಕ ಸವಾಲುಗಳನ್ನು ಎದುರಿಸಲು ನಿಮ್ಮ ಸಹಯೋಗದೊಂದಿಗೆ ಒಟ್ಟಾಗಿ ಪರಿಹಾರಗಳನ್ನು ಕಂಡುಕೊಳ್ಳಲು ನಾವು ಸಿದ್ಧರಿದ್ದೇವೆ. ನಮ್ಮ ಸರ್ಕಾರ ಉದ್ಯಮಶೀಲತೆ ಹಾಗೂ ಸುಸ್ಥಿರ ಅಭಿವೃದ್ಧಿಯನ್ನು ಪೋಷಿಸುವ ವಾತಾವರಣವನ್ನು ಕಲ್ಪಿಸಲು ಬದ್ಧವಾಗಿದೆ. ಕರ್ನಾಟಕ ಅಪಾರ ಅವಕಾಶಗಳನ್ನು ಒದಗಿಸುವ ರಾಜ್ಯವಾಗಿದ್ದು, ನಮ್ಮ ಜನ ಹಾಗೂ ಜಾಗತಿಕ ಸಮುದಾಯದ ಭವಿಷ್ಯಕ್ಕಾಗಿ ಇವುಗಳನ್ನು ಬಳಸಿಕೊಳ್ಳಲು ಬದ್ಧರಾಗಿದ್ದೇವೆ' ಎಂದು ಹೇಳಿದರು.

> ಇಲ್ಲಿ ಕೈಗೊಂಡ ಸಹಯೋಗ ಹಾಗೂ ಸಂಪರ್ಕಗಳು ಕರ್ನಾಟಕ ಮತ್ತು ಯುನೈಟೆಡ್ ಸ್ಟೇಟ್ಸ್ ನಡುವೆ ಪರಸ್ಪರ ಲಾಭದಾಯಕ ಫಲಿತಾಂಶಗಳಿಗೆ ಎಡೆಮಾಡಿ ಕೊಡಲಿವೆ ಎಂದು ನಾನು ನಂಬಿದ್ದೇನೆ. ಇಂದಿನ ಚರ್ಚೆಯನ್ನು ನಾಳಿನ ಯಶಸ್ಸುಗಳಾಗಿ ಬದಲಾಯಿಸುವ ಪಾಲುದಾರಿಕೆಯನ್ನು ಎದುರುನೋಡುತ್ತಲೇ, ನಿಮ್ಮನ್ನೆಲ್ಲಾ ಕರ್ನಾಟಕಕ್ಕೆ ಹಾರ್ದಿಕವಾಗಿ ಸ್ವಾಗತಿಸುತ್ತೇನೆ. ಸಮೃದ್ಧಿ, ಪಾಲುದಾರಿಕೆ ಮತ್ತು ಪ್ರಗತಿಯ ಭವಿಷ್ಯದತ್ತ ಒಟ್ಟಾಗಿ ಹೆಜ್ಜೆಯಿಡೋಣ' ಎಂದು ಸಿಎಂ ನುಡಿದರು.

# ವಾಲ್ಮೀಕಿ ನಿಗಮದಲ್ಲಿ ಬಹುಕೋಟಿ ಹಗರಣ ಕೇಸ್

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ಅಧಿಕಾರಿಗಳು ಪ್ರಕರಣದ ಮಾಸ್ಟರ್ ಮೈಂಡ್ , ಮಾಜಿ ಸಚಿವ ನಾಗೇಂದ್ರ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ಗೆ ಇಡಿ ಅಧಿಕಾರಿಗಳು ಚಾರ್ಜ್ ಶೀಟ್ ಸಲ್ಲಿಕೆ ಮಾಡಿದ್ದಾರೆ. ವಾಲ್ಮೀಕಿ ನಿಗಮದಲ್ಲಿ ಅಕ್ರಮ ಪ್ರಕರಣ ಸಂಬಂಧ ಹೈಗ್ರೌಂಡ್ಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಚಾರ್ಜ್ ಶೀಟ್ ನಲ್ಲಿ ಇಡಿ ಅಧಿಕಾರಿಗಳು ನಾಗೇಂದ್ರ ಅವರನ್ನು ಪ್ರಕರಣದ ಮಾಸ್ಟರ್ ಮೈಂಡ್ ಎಂದು ಉಲ್ಲೇಖಿಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ರಾಜ್ಯ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರನ್.ಪಿ (52) ಆತ್ಮಹತ್ಯೆಯ ಬೆನ್ನಲ್ಲೇ ಅಕ್ರಮ ಹಣ ವರ್ಗಾವಣೆ ಪ್ರಕರಣ ಮುನ್ನೆಲೆಗೆ ಬಂದಿತ್ತು.

ಈ ಪ್ರಕರಣವನ್ನು ಮುಂದಿಟ್ಟುಕೊಂಡು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಚಿವ ಬಿ. ನಾಗೇಂದ್ರ ರಾಜೀನಾಮೆಗೆ ಬಿಜೆಪಿ ಪಟ್ಟು ಹಿಡಿಯಲಾಗಿತ್ತು, ನಂತರ ನಾಗೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.ಪ್ರಕರಣದಲ್ಲಿ ಮಾಜಿ ಸಚಿವ ಬಿ. ನಾಗೇಂದ್ರ, ಶಾಸಕ ದದ್ದಲ್ ಹಾಗೂ ಪಂಪಣ್ಣ ಅವರನ್ನು ಕೂಡ ವಿಚಾರಣೆ ನಡೆಸಲಾಗಿತ್ತು.

# ಗಣೇಶ ವಿಸರ್ಜನೆ; ಯುವಕರ ಪರ ಧ್ವನಿ ಎತ್ತಿದ ಆರ್.ಅಶೋಕ್

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ಗಣೇಶೋತ್ಸವಕ್ಕೆ ರಾಜ್ಯ ಸರ್ಕಾರ ಜಾರಿ ಮಾಡಿರುವ ಕಟ್ಟುನಿಟ್ಟಿನ ಕ್ರಮಗಳ ವಿರುದ್ಧ ಬಿಜೆಪಿ ನಾಯಕರು ಗರಂ ಆಗುತ್ತಿದ್ದಾರೆ. ವರ್ಷಕ್ಕೊಮ್ಮೆ ಆಚರಿಸುವ ಹಿಂದೂಗಳ ಈ ಹಬ್ಬಕ್ಕೆ ಉದ್ದೇಶಪೂರ್ವಕವಾಗಿ ಅಡೆತಡಗಳನ್ನು ತರುತ್ತಿದ್ದಾರೆ ಎಂದು ದೂರುತ್ತಿದ್ದಾರೆ. ಇದೀಗ ಬಿಬಿಎಂಪಿ ವ್ಯಾಪ್ತಿಯಲ್ಲಿ ಗಣೇಶನ ವಿಸರ್ಜನೆ ನಿಗದಿ ಮಾಡಿರುವ ಸಮಯದ ಬಗ್ಗೆ ವಿಪಕ್ಷ ನಾಯಕ ಆರ್.ಅಶೋಕ್ ಕೆಂಡಾಮಂಡಲರಾಗಿದ್ದಾರೆ.

ಬೆಂಗಳೂರಿನಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯಬಾರದು ಎಂಬ ನಿಟ್ಟಿನಲ್ಲಿ ರಾತ್ರಿ 10 ಗಂಟೆಯೊಳಗೆ ಗಣೇಶ ಮೂರ್ತಿ ವಿಸರ್ಜಿಸಬೇಕು ಎಂಬ ನಿಯಮಾವಳಿಯನ್ನು ತರಲಾಗಿದೆ. ಇದನ್ನು ಖಂಡಿಸಿರುವ ಆರ್.ಅಶೋಕ್, ಗಣೇಶ ಮೂರ್ತಿಗಳ ವಿಸರ್ಜನೆಯನ್ನ ರಾತ್ರಿ 10 ಗಂಟೆವರೆಗೆ ಮಾತ್ರ ಮಾಡಬೇಕು ಎಂಬುದು ಅರ್ಥವಿಲ್ಲದ ನಿಯಮ ಎಂದು ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ಗಣೇಶೋತ್ಸವ ಪೆಂಡಾಲ್‌ಗಳಲ್ಲಿ FSSAI ಮಾನ್ಯತೆ ಪಡೆದಿರುವ ವ್ಯಕ್ತಿ ಅಥವಾ ಸಂಸ್ಥೆಗಳು ತಯಾರಿಸಿದ ಪ್ರಸಾದವನ್ನು ಮಾತ್ರವೇ ವಿತರಿಸಬೇಕು ಎಂದು ಆದೇಶ ಹೊರಡಿಸಿದ್ದ ತುಘಲಕ್ ಸರ್ಕಾರ ಈಗ ಗಣೇಶ ಮೂರ್ತಿಗಳ ವಿಸರ್ಜನೆ ವಿಚಾರದಲ್ಲೂ ಎಂಬ ಅರ್ಥವಿಲ್ಲದ ನಿಯಮ ಹೇರಿದೆ ಎಂದಿದ್ದಾರೆ.

ಕೇಸರಿ ಕುಂಕುಮ ಕಂಡರೆ ಉರಿದು ಬೀಳುವ ರಾಜ್ಯ ಕಾಂಗ್ರೆಸ್ ನಾಯಕರಿಗೆ ಹಿಂದೂಗಳ ಹಬ್ಬ, ಜಾತ್ರೆ, ಉತ್ಸವಗಳೆಂದರೆ ಅದೇನೋ ಹೊಟ್ಟೆ ಉರಿ, ತಳಮಳ. ರಂಜಾನ್ ಸಂದರ್ಭದಲ್ಲಿ ನಡೆಯುವ ಇಫ್ತಾರ್ ಕೂಟಗಳಲ್ಲೆಲ್ಲ FSSAI ಮಾನ್ಯತೆ ಪಡೆದಿರುವ ಸಂಸ್ಥೆಗಳು, ವ್ಯಕ್ತಿಗಳೇ ಆಹಾರ ತಯಾರಿಸುತ್ತಿದ್ದಾರಾ ಕ್ರಿಸ್‌ಮಸ್ ಕೇಕ್ ತಯಾರಿಸುವವರೆಲ್ಲ FSSAI ಮಾನ್ಯತೆ ಪಡೆದಿರುತ್ತಾರಾ ಎಂದು ಪ್ರಶ್ನಿಸಿದ್ದಾರೆ.

> ಅನ್ಯಧರ್ಮೀಯರಿಗೆ ಮಾತ್ರ ಬೆಣ್ಣೆ, ಹಿಂದೂಗಳಿಗೆ ಸುಣ್ಣ ಎನ್ನುವ ಈ ತಾರತಮ್ಯ ಏಕೆ ಜಾತ್ಯತೀತತೆ ಅಂದರೆ ಇದೇನಾ? ಅಥವಾ ರಾಹುಲ್ ಗಾಂಧಿ ಅವರು ತೋರಿಸುವ ಸಂವಿಧಾನದಲ್ಲಿ ಹಿಂದೂಗಳು ಎರಡನೇ ದರ್ಜೆ ನಾಗರೀಕರು ಎಂದು ಬರೆಯಲಾಗಿದೆಯಾ ಎಂದು ಗುಡುಗಿದ್ದಾರೆ.
>
> –ಆರ್.ಅಶೋಕ್

# ಬಿಡಿಎ ಕಾಂಪ್ಲೆಕ್ಸ್ ಉಳಿಸುವ ಹೋರಾಟಕ್ಕೆ ಎಎಪಿ ಬೆಂಬಲ

• ಉದಯವಾಹಿನಿ ಬೆಂಗಳೂರು

ಬಿಡಿಎ ಕಾಂಪ್ಲೆಕ್ಸ್ ಉಳಿಸಿ ಹೋರಾಟ ಸಮಿತಿ' ವತಿಯಿಂದ ಸೆಪ್ಟೆಂಬರ್ 12 ರಂದು ನಗರದ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಲು ಕರೆಕೊಟ್ಟಿದ್ದು, ಈ ಪ್ರತಿಭಟನೆಗೆ ಆಮ್ ಆದ್ಮಿ ಪಾರ್ಟಿ ಸಂಪೂರ್ಣವಾಗಿ ಬೆಂಬಲ ನೀಡಲಿದೆ. ಪಕ್ಷದ ಎಲ್ಲಾ ಕಾರ್ಯಕರ್ತರು, ನಾಯಕರು ಭಾಗಿಯಾಗಲಿದ್ದಾರೆ ಎಂದು ಆಮ್ ಆದ್ಮಿ ಪಾರ್ಟಿ ರಾಜ್ಯ ಸಂಘಟನಾ ಕಾರ್ಯದರ್ಶಿ ಮೋಹನ್ ದಾಸರಿ ತಿಳಿಸಿದ್ದಾರೆ.

7 ಬಿಡಿಎ ಕಾಂಪ್ಲೆಕ್ಸ್‌ಗಳನ್ನು ಸರ್ಕಾರ ಖಾಸಗೀಕರಣ ಮಾಡಲು ಹೊರಟಿದೆ. ಇದು ಖಾಸಗೀಕರಣ ಅಲ್ಲ ಲೀಸ್‌ಗೆ ನೀಡಲಾಗುತ್ತಿದೆ ಎಂದು ಅವರು ಹೇಳಬಹುದು, ಆದರೆ ಮೊದಲು 30 ವರ್ಷ ಲೀಸ್‌ಗೆ ಕೊಡುತ್ತಾರೆ, ಬಳಿಕ ಇನ್ನೂ 30 ವರ್ಷ ಎನ್ನುತ್ತಾರೆ. ಕೊನೆಗೆ 90, 120 ವರ್ಷ ಎಂದು ಕೊನೆಗೆ ಆ ಆಸ್ತಿಗಳನ್ನು ಖಾಸಗಿಯವರೇ ಖರೀದಿ ಮಾಡುತ್ತಾರೆ ಈ ನಿಟ್ಟಿನಲ್ಲಿ ಎಎಪಿ ಸುಮಾರು ವರ್ಷಗಳಿಂದ ಬಿಡಿಎ ಕಾಂಪ್ಲೆಕ್ಸ್ ಖಾಸಗೀಕರಣದ ವಿರುದ್ಧ ಹೋರಾಟ ಮಾಡುವುದರ ಜತೆಗೆ ಸಾರ್ವಜನಿಕರಲ್ಲಿ ಈ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದೆ ಎಂದು ಸುದ್ದಿಗೋಷ್ಠಿಯಲ್ಲಿ ಆರೋಪಿಸಿದ್ದಾರೆ.




ಉದಯವಾಹಿನಿ ಚಿತ್ರ

ಇಂದಿರಾ ನಗರ ಬಿಡಿಎ ಕಾಂಪ್ಲೆಕ್ಸ್ ಅನ್ನು ಮೇವರಿಕ್ ಹೋಲ್ಡಿಂಗ್ಸ್ ಅವರಿಗೆ ನೀಡುತ್ತಾರಂತೆ. ಇದೇ ಮೇವರಿಕ್ ಹೋಲ್ಡಿಂಗ್‌ನ ಗರುಡಾಚಾರ್ ಪಿಪಿಪಿ ಮಾದರಿಯಲ್ಲಿ ಗರುಡಾ ಮಾಲ್ ಕಟ್ಟಿ ಬಿಬಿಎಂಪಿಯನ್ನು ಮುಳುಗಿಸಿದ್ದಾರೆ. ಬಿಬಿಎಂಪಿಗೆ ಇವರು 60–70 ಕೋಟಿ ರೂ. ಆಸ್ತಿ ತೆರಿಗೆ ಬಾಕಿ ಇದೆ. ಇಂತಹವರಿಗೆ ಇದನ್ನು ಕೊಡಲು ಮುಂದಾಗಿದ್ದಾರೆ. ಇನ್ನುಳಿದ ಆರು ಬಿಡಿಎ ಕಾಂಪ್ಲೆಕ್ಸ್‌ಗಳನ್ನು ಎಂಫಾರ್ ಎನ್ನುವ ಕಂಪನಿಗೆ ಕೊಡಲು ನಿರ್ಧರಿಸಿದ್ದಾರೆ. ಕಂಪನಿ ಬಗ್ಗೆ ಅನೇಕ ಕಥೆಗಳಿವೆ, ಬಿಡಿಎ ಅಧ್ಯಕ್ಷ ಹ್ಯಾರಿಸ್ ಅವರ ಸಹಭಾಗಿತ್ವ ಎಂದು ಹೇಳಲಾಗಿದೆ. ಇಬ್ಬರು ಮೂವರು ರಾಜಕಾರಣಿಗಳು ಒಟ್ಟಾಗಿ ಲೂಟಿ ಮಾಡಲು ಮುಂದಾಗಿದ್ದಾರೆ ಮೋಹನ್ ದಾಸರಿ ಆಕ್ರೋಶ ವ್ಯಕ್ತಪಡಿಸಿದರು.

### ಆಮ್ ಆದ್ಮಿ ಪಾರ್ಟಿ ಬಿಡಲ್ಲ ಎಚ್ಚರಿಕೆ

ನಿಮಗೆ ಬಿಡಿಎ ಕಾಂಪ್ಲೆಕ್ಸ್ ನೋಡಿಕೊಳ್ಳಲು ಆಗಲಿಲ್ಲ ಎಂದರೆ ಅವುಗಳನ್ನು ಉರುಳಿಸಿ ಪಾರ್ಕ್ ಮಾಡಿ. ಸ್ಥಳೀಯ ನಿವಾಸಿಗಳೇ ಅದನ್ನು ನೋಡಿಕೊಳ್ಳುತ್ತಾರೆ. ಜಾಗ ಖರೀದಿ ಮಾಡಿ, ಆಸ್ಪತ್ರೆ, ಶಾಲೆ ಕಟ್ಟಲು ಆಗಲ್ಲ. ಸರ್ಕಾರಿ ಸ್ವತ್ತುಗಳು ಖಾಸಗಿಯವರ ಪಾಲಾಗಲು ಆಮ್ ಆದ್ಮಿ ಪಾರ್ಟಿ ಬಿಡಲ್ಲ ಎಂದು ಎಚ್ಚರಿಕೆ ನೀಡಿದರು.

> ಕಾಂಪ್ಲೆಕ್ಸ್ ಕಟ್ಟಿದರೆ 70% ಖಾಸಗಿಯವರಿಗೆ ಬಿಡಿಎಗೆ 30% ಭಾಗ ಕೊಡುತ್ತಾರೆ ಎಂದು ಹೇಳಿದ್ದಾರೆ. ಎಲ್ಲಾ ಬಿಡಿಎ ಕಾಂಪ್ಲೆಕ್ಸ್‌ಗಳು ಆಯಕಟ್ಟಿನ ಜಾಗದಲ್ಲಿದ್ದು ಸಾವಿರಾರು ಕೋಟಿ ಬೆಲೆ ಬಾಳುತ್ತವೆ. 7 ಬಿಡಿಎ ಕಾಂಪ್ಲೆಕ್ಸ್‌ಗಳ ಒಟ್ಟು ಮೌಲ್ಯ 20–25 ಸಾವಿರ ಕೋಟಿ ಆಗುತ್ತದೆ ಇಷ್ಟು ದುಡ್ಡನ್ನು ಲೂಟಿ ಮಾಡಲು ರಾಜಕಾರಣಿಗಳು ಮುಂದಾಗಿದ್ದಾರೆ ಎಂದರು.

# ಮಹಾತ್ಮಗಾಂಧಿ ಸೇವಾ ಪ್ರಶಸ್ತಿಗೆ ನಾಮನಿರ್ದೇಶನ ಆಹ್ವಾನ

• ಉದಯವಾಹಿನಿ ಬೆಂಗಳೂರು

ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ ?ಮಹಾತ್ಮಗಾಂಧೀ ಸೇವಾ ಪ್ರಶಸ್ತಿ–ಕರ್ನಾಟಕ?ಗೆ 2024 ನೇ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ನಾಮನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

ಸಾರ್ವಜನಿಕ ಜೀವನದಲ್ಲಿ ಮಹಾತ್ಮ ಗಾಂಧೀಜಿ ಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರಶಸ್ತಿಯನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯನ್ನು ರಚಿಸಲಾಗುವುದು. 2024ರ ಅಕ್ಟೋಬರ್ 02 ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಮಹಾತ್ಮ ಗಾಂಧೀಜಿಯವರು ಪ್ರಚುರಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶ್ಯತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿ ವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ಧಾರ, ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು ಅಥವಾ ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ನಾಮನಿರ್ದೇಶನ ಕೂಡ ಮಾಡಬಹುದಾಗಿದೆ. ಸೆಪ್ಟೆಂಬರ್ 19 ರ ಸಂಜೆ 5.30 ರೊಳಗಾಗಿ ಅರ್ಜಿಗಳನ್ನು ಆಯುಕ್ತರು, ವಾರ್ತಾ, ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ನಂ. 17, ಭಗವಾನ್ ಮಹಾವೀರ ರಸ್ತೆ (ಇನ್ಫೆಂಟ್ರಿ ರಸ್ತೆ), ಬೆಂಗಳೂರು–560 001 ಅಥವಾ ಇ–ಮೇಲ್: informationdiprawards@gmail.com ವಿಳಾಸಕ್ಕೆ ಕಳುಹಿಸಬಹುದಾಗಿದೆ.

# ರೇಷನ್ ಕಾರ್ಡ್ ರದ್ದು ಪಡಿಸಲು ಹೊರಟ ರಾಜ್ಯ ಸರ್ಕಾರ

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ಉಚಿತ ಗ್ಯಾರಂಟಿಗಳನ್ನು ನೀಡಲು ಕಾಂಗ್ರೆಸ್ ಸರ್ಕಾರದ ಬಳಿ ಹಣವಿಲ್ಲ. ಅದಕ್ಕಾಗಿ ಇದೀಗ ಬಡವರ ರೇಷನ್ ಕಾರ್ಡ್ ರದ್ದು ಮಾಡಿ ದುಡ್ಡು ಮಾಡಲು ಹೊರಟಿದೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಟೀಕಿಸಿದ್ದಾರೆ.

ಈ ಕುರಿತು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ 60 ಲಕ್ಷ ರೇಷನ್ ಕಾರ್ಡ್ ರದ್ದುಪಡಿಸಲು ಕಾಂಗ್ರೆಸ್ ಸರ್ಕಾರ ಹೊರಟಿದೆ. 5 ಗ್ಯಾರಂಟಿಗಳಿಗೆ ಕೊಡಲು ಇವರ ಬಳಿ ಹಣವಿಲ್ಲ. ನಮ್ಮ ರೇಷನ್ ಕಾರ್ಡ್ ಕಿತ್ತುಕೊಳ್ಳುತ್ತಿದ್ದಾರೆಂದು ಬಡಜನರು ಆತಂಕಕ್ಕೀಡಾಗಿದ್ದಾರೆ. ಈ ವಿಚಾರದಲ್ಲಿ ಎಲ್ಲೆಡೆ ಗೊಂದಲ ಸೃಷ್ಟಿಯಾಗಿದೆ ಎಂದು ಹೇಳಿದರು. ಗ್ಯಾರಂಟಿಗಳಿಗೆ ಕೊಡಲು ಹಣವಿಲ್ಲ.

ಹೀಗಾಗಿ ರೇಷನ್ ಕಾರ್ಡ್ ಕತ್ತರಿ ಮೂರು ನಾಲ್ಕು ಸಾವಿರ ಕೋಟಿ ರೂಪಾಯಿ ಹಣ ಸಿಗುತ್ತದೆ ಎಂದು ಅಂತ ಅದಕ್ಕೆ ಕೈ ಹಾಕಿದ್ದಾರೆ.

**ಬಿಜೆಪಿ ಎಕ್ಸ್ ಸಂದೇಶದ ಮೂಲಕ ಆಕ್ರೋಶ**

ಸರ್ಕಾರದ ಆಡಳಿತ ಯಂತ್ರ ಪೂರ್ತಿ ಐಸಿಯುನಲ್ಲಿರುವಂತೆ ಕಾಣುತ್ತಿದೆ.ಕಾಂಗ್ರೆಸ್ ಸರ್ಕಾರ ಉದ್ಯಮಸ್ನೇಹಿ ವಾತಾವರಣವನ್ನು ಹಾಳು ಮಾಡುತ್ತಿದೆ ಎಂದು ಹೇಳಿದರು. ಕರ್ನಾಟಕದಲ್ಲಿಕಾಂಗ್ರೆಸ್ ಸರ್ಕಾರ ಉದ್ಯಮಸ್ನೇಹಿ ವಾತಾವರಣವನ್ನು ಹಾಳು ಮಾಡಿದೆ ಎಂದು ಬಿಜೆಪಿ ಟೀಕಿಸಿದೆ.ಕಾಂಗ್ರೆಸ್ ಸರ್ಕಾರದ ನೀತಿಗಳು ಹಾಗೂ ಅಸಮರ್ಪಕ ಆಡಳಿತದಿಂದ ಅನೇಕ ಉದ್ಯಮಗಳು ರಾಜ್ಯ ತೊರೆದು ಬೇರೆ ಕಡೆ ಹೋಗುತ್ತಿವೆ ಎಂದೂ ಬಿಜೆಪಿ ಎಕ್ಸ್ ಸಂದೇಶದ ಮೂಲಕ ಆಕ್ರೋಶ ವ್ಯಕ್ತಪಡಿಸಿದೆ.

> ನಮ್ಮ ಬಿಜೆಪಿ ಸರ್ಕಾರದ ಆಡಳಿತದ ನೀತಿ, ನಾವು ರಾಜ್ಯದಲ್ಲಿ ಮೂಡಿಸಿದ್ದ ಉದ್ಯಮಸ್ನೇಹಿ ವಾತಾವರಣದಿಂದ ಇಡೀ ಭಾರತದಲ್ಲೇ ಅತಿ ಹೆಚ್ಚಿನ ವಿದೇಶೀ ಬಂಡವಾಳ ಹೂಡಿಕೆ ನಮ್ಮ ಕರ್ನಾಟಕಕ್ಕೆ ಹರಿದು ಬಂದಿತ್ತು. ಜಗತ್ತೇ ಕೋವಿಡ್ ಮಹಾಮಾರಿಯಿಂದ ತತ್ತರಿಸಿ ಆರ್ಥಿಕವಾಗಿ ಕುಸಿದ ಸಮಯದಲ್ಲೂ ನಮ್ಮ ಆಡಳಿತ ವೈಖರಿಯಿಂದ ಅವೆಲ್ಲವನ್ನೂ ಸವಾಲಾಗಿ ಸ್ವೀಕರಿಸಿ ಎಫ್‌ಡಿಐ ನೀತಿ ಸುಧಾರಣೆಗಳ ಕುರಿತು ನಾವು ಕೈಗೊಂಡ ಕ್ರಮಗಳಿಂದ ಕರ್ನಾಟಕವನ್ನು ಎಫ್‌ಡಿಐನಲ್ಲಿ ದೇಶದಲ್ಲಿಯೇ ನಂಬರ್–1 ಸ್ಥಾನಕ್ಕೆ ಏರಿಸಿದ್ದೆವು ಎಂದು ಬಿಜೆಪಿ ತಿಳಿಸಿದೆ.

# ಈಗ ಲಿಂಗಾಯತ ಸಮುದಾಯ, ಕಲ್ಯಾಣ ಕರ್ನಾಟಕದ ಚರ್ಚೆ

## ಕಾಂಗ್ರೆಸ್ ಮುಖಂಡರು ನಾನೂ ಸಿಎಂ ಅಭ್ಯರ್ಥಿ, ನಾನ್ಯಾಕೆ ಸಿಎಂ ಆಗಬಾರದು ಎಂದು ಪ್ರಶ್ನೆ

• ಉದಯವಾಹಿನಿ ಬೆಂಗಳೂರು


ಮುಖ್ಯಮಂತ್ರಿ ಬದಲಾವಣೆ ಇಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಯಾವುದೇ ಕಾರಣಕ್ಕೂ ಸಿ.ಎಂ ಸ್ಥಾನದಿಂದ ಇಳಿಸುವುದಿಲ್ಲ ಎಂದು ಹೇಳಲಾಗುತ್ತಿದೆಯಾದರೂ, ಒಬ್ಬೊಬ್ಬರೇ ಕಾಂಗ್ರೆಸ್ ಮುಖಂಡರು ನಾನೂ ಸಿ.ಎಂ ಅಭ್ಯರ್ಥಿ, ನಾನ್ಯಾಕೆ ಸಿ.ಎಂ ಆಗಬಾರದು ಎಂದು ಪ್ರಶ್ನೆ ಮಾಡುತ್ತಿದ್ದಾರೆ.

ಸಿ.ಎಂ ಬದಲಾವಣೆಯ ಚರ್ಚೆ ಇದೀಗ ರಾಜಕೀಯ ಹಾಗೂ ಪಕ್ಷದಲ್ಲಿನ ಸೀನಿಯರ್ ಎನ್ನುವುದರಿಂದ ಕ್ರಮೇಣ ಸಮುದಾಯವಾರು, ಪ್ರದೇಶಿಕವಾರು ಚರ್ಚೆಗೆ ತೆರೆದುಕೊಂಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೇಲೆ ಮುಡಾ ಹಗರಣದಲ್ಲಿ ಶಾಮೀಲಾಗಿರುವ ಆರೋಪ ಕೇಳಿ ಬಂದಾಗಿನಿಂದಲೂ,ಕಾಂಗ್ರೆಸ್ ನೊಳಗೇ ಭಿನ್ನವಾದ ಚರ್ಚೆಗಳು ನಡೆಯುತ್ತಿವೆ. ಇನ್ನು ಸಿ.ಎಂ ಬದಲಾವಣೆ ವಿಚಾರಣೆಯಲ್ಲಿ ಬಿಜೆಪಿಗಿಂತಲೂ ಕಾಂಗ್ರೆಸ್‌ನ ನಾಯಕರು ಹಾಗೂ ಸಚಿವರೇ ಹೆಚ್ಚು ಚರ್ಚೆಗೆ ಗ್ರಾಸವಾಗುವಂತಹ ಹೇಳಿಕೆಗಳನ್ನು ಕೊಡುತ್ತಿದ್ದಾರೆ. ಇದರಿಂದ ಕಾಂಗ್ರೆಸ್‌ನಲ್ಲಿ ಮುಂದಿನ ಮುಖ್ಯಮಂತ್ರಿ ಯಾರು ಎನ್ನುವ ಚರ್ಚೆಯೇ ಜೋರಾಗಿದೆ. ಇದರ ಬೆನ್ನಲ್ಲೇ ಉತ್ತರ ಕನ್ನಡ, ಕಲ್ಯಾಣ ಕರ್ನಾಟಕ ಹಾಗೂ ಲಿಂಗಾಯತ ಸಮುದಾಯದ ಸಿಎಂ ಎನ್ನುವ ಚರ್ಚೆ ಮುನ್ನೆಲೆಗೆ ಬಂದಿದೆ.

ಇದೀಗ ನಾನು ಸಿಎಂ ಆಗಿ ಆಯ್ಕೆಯಾದರೆ ತಪ್ಪೇನು ಎಂದು ಮುಖ್ಯಮಂತ್ರಿಯ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ ಕೇಳಿದ್ದಾರೆ. ನಾನು ಸಹ ಕಲ್ಯಾಣ ಕರ್ನಾಟಕದಿಂದ ಹೆಚ್ಚು ಬಾರಿ ಆಯ್ಕೆಯಾಗಿದ್ದೇನೆ. ಕರ್ನಾಟಕ ಕರ್ನಾಟಕದಿಂದ ಹೆಚ್ಚು ಬಾರಿ ಆಯ್ಕೆಯಾದ ಶಾಸಕರಲ್ಲಿ ನಾನು ಸಹ ಒಬ್ಬ. ಬಿ.ಆರ್ ಪಾಟೀಲ ಅವರನ್ನು ಹೊರತು ಪಡಿಸಿದರೆ, ಈ ಭಾಗದಿಂದ ಆಯ್ಕೆ ಯಾದವರಲ್ಲಿ ನಾನೇ ಹಿರಿಯನಾಗಿದ್ದೇನೆ. ಈ ಭಾಗದವರಿಗೆ ಆದ್ಯತೆ ಹಾಗೂ ಲಿಂಗಾಯತ ಸಮುದಾಯದವರನ್ನು ಮುಂದಿನ ಮುಖ್ಯಮಂತ್ರಿ ಸ್ಥಾನಕ್ಕೆ ಆಯ್ಕೆ ಮಾಡಿದರೆ, ನಾನೇ ಮೊದಲ ಸಾಲಿನಲ್ಲಿ ಇರಲಿದ್ದೇನೆ ಎಂದು ಅವರು ಹೇಳಿದ್ದಾರೆ. ಯಾರಿಗೆ ಗೊತ್ತು ನನಗೂ ಒಂದು ದಿನ ಲಾಟರಿ ಹೊಡೆಯಬಹುದು.

**ಕಲ್ಯಾಣ ಕರ್ನಾಟಕ ಹೆಚ್ಚು ಬಾರಿ ಆಯ್ಕೆ**



ಈ ಮೂಲಕ ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿಗಳ ಪಟ್ಟಿಗೆ ಹೊಸ ಹೆಸರು ಸೇರ್ಪಡೆಯಾಗಿದೆ. ಪ್ರಜಾಪ್ರಭುತ್ವದಲ್ಲಿ ಯಾರು ಏನ್ ಆಗ್ತಾರೋ ಗೊತ್ತಿಲ್ಲ. ಯಾರು ಏನು ಬೇಕಾದರೂ ಆಗುವುದಕ್ಕೆ ಅವಕಾಶ ಇದೆ.

ಆದರೆ, ಇನ್ನು ಮೂರು ವರ್ಷಗಳ ಕಾಲವೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಮುಂದುವರಿಯಬೇಕು. ಆಗ ಮಾತ್ರ ಕರ್ನಾಟಕದ ಅಭಿವೃದ್ಧಿ ಯಾಗುತ್ತದೆ ಎಂದೂ ರಾಯರೆಡ್ಡಿ ಹೇಳಿದ್ದಾರೆ.

> ವಿರೋಧ ಪಕ್ಷಗಳು ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಸಿ.ಎಂ ಬದಲಾವಣೆಯ ಚರ್ಚೆಯ ಬಗ್ಗೆ ವ್ಯಂಗ್ಯವಾಡಿವೆ. ಸಿ.ಎಂ ಬದಲಾವಣೆಗೆ ಕ್ಯೂ ಸ್ಟಾರ್ಟ್ ಆಗಿದೆ. ನಿತ್ಯವೂ ನಾನು ಸಿ.ಎಂ, ನಾನು ಸಿ.ಎಂ ಎಂದು ಸಚಿವರು ಹೇಳಿಕೆಗಳನ್ನು ಕೊಡುತ್ತಿದ್ದಾರೆ ಎಂದು ವ್ಯಂಗ್ಯವಾಡಿದೆ. –ಬಿಜೆಪಿ

> ರಾಜಕೀಯದಲ್ಲಿ ಇರುವವರು ಯಾರೇ ಆದರೂ ಸಿ.ಎಂ ಸ್ಥಾನಕ್ಕೆ ಆಸೆ ಪಡುವುದರಲ್ಲಿ ತಪ್ಪೇನು ಸಹ ಇಲ್ಲ. ಆ ರೀತಿ ನೋಡಿದರೆ ನಾನು ಸಹ ಲಿಂಗಾಯತ ಕೋಟಾದ ಅಡಿಯಲ್ಲಿ ಬರುತ್ತೇನೆ. ನಮ್ಮ ಪಕ್ಷವು ನಮ್ಮ ಸಮುದಾಯದವರಿಗೆ ಟಿಕೆಟ್ ನೀಡಲು ಇಚ್ಛಿಸಿದರೆ, ನನಗೆ ಟಿಕೆಟ್ ನೀಡಲಿ. ನನಗೆ ಇದರಿಂದ ಯಾವ ಮುಜುಗರವೂ ಇಲ್ಲ. ಇದಕ್ಕೆಕಾಂಗ್ರೆಸ್ ಹೈಕಮಾಂಡ್ ಹಾಗೂ ಸಿದ್ದರಾಮಯ್ಯ ಅವರು ಮನಸ್ಸು ಮಾಡಬೇಕು. ಯಾವಾಗ ಯಾರು ಏನುಬೇಕಾದರೂ ಆಗಬಹುದು ಎಂದು ಹೇಳಿದ್ದಾರೆ. ಈ ಮೂಲಕ ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿಗಳ ಪಟ್ಟಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಲ್ಲೇ ಇದೆ.

# ಡಿಸಿ ವಿರುದ್ಧ ಆಕ್ರೋಶ: ಹೋರಾಟಗಾರರು ಪೊಲೀಸ್ ವಶಕ್ಕೆ

## • 32 ಬೇಡಿಕೆಗಳನ್ನು ಈಡೇರಿಸುವಂತೆ ಕಚೇರಿ ಪ್ರವೇಶದ್ವಾರದ ಎದುರು ಅನಿರ್ದಿಷ್ಟಾವಧಿ ಧರಣಿ

• ಉದಯವಾಹಿನಿ ರಾಮನಗರ

ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸದಂತೆ ಇತ್ತೀಚೆಗೆ ಹೊರಡಿಸಿರುವ ನಿಷೇಧಾಜ್ಞೆ ಹಿಂಪಡೆಯುವುದು ಸೇರಿದಂತೆ, ತಮ್ಮ 32 ಬೇಡಿಕೆಗಳನ್ನು ಈಡೇರಿಸುವಂತೆ ಕಚೇರಿ ಪ್ರವೇಶದ್ವಾರದ ಎದುರು ಅನಿರ್ದಿಷ್ಟಾವಧಿ ಧರಣಿ ನಡೆಸಿದ ರೈತಪರ, ದಲಿತಪರ ಹಾಗೂ ಕನ್ನಡಪರ ಸಂಘಟನೆಗಳ ಹೋರಾಟಗಾರರನ್ನು ಪೊಲೀಸರು ವಶಕ್ಕೆ ಪಡೆದರು.

ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರ ನೇತೃತ್ವದಲ್ಲಿ ಬೆಳಿಗ್ಗೆ ಜಮಾಯಿಸಿದ ಹೋರಾಟಗಾರರು, 'ತೊಲಗಲಿ ತೊಲಗಿ ಜಿಲ್ಲಾಧಿಕಾರಿ ತೊಲಗಲಿ' ಎಂದು ವಿರುದ್ಧ ಘೋಷಣೆ ಕೂಗುತ್ತಾ ಪ್ರವೇಶದ್ವಾರದತ್ತ ಬಂದರು. ಮುಂಜಾಗ್ರತಾ ಕ್ರಮವಾಗಿ ಪೊಲೀಸರು ಪ್ರವೇಶ ದ್ವಾರದ ಎದುರು ಬ್ಯಾರಿಕೇಡ್‌ಗಳನ್ನು ಅಳವಡಿಸಿ, ಯಾರೂ ಒಳಗೆ ಪ್ರವೇಶಿಸದಂತೆ ತಡೆದರು. ಇದರಿಂದ ರೊಚ್ಚಿಗೆದ್ದ ಹೋರಾಟಗಾರರು ಪ್ರವೇಶದ್ವಾರದ ಎದುರಿನ ರಸ್ತೆ ತಡೆದು ಧರಣಿ ಕುಳಿತರು.

ಜಿಲ್ಲಾಧಿಕಾರಿ ಸ್ಥಳಕ್ಕೆ ಬಂದು ಹೋರಾಟಗಾರರ

> ನಿಷೇಧಾಜ್ಞೆ ಆದೇಶ ಹಿಂಪಡೆಯುವುದು ಡಿಸಿ ವರ್ಗಾವಣೆ ಹಾಗೂ ರೈತರ 32 ಬೇಡಿಕೆಗಳ ಈಡೇರಿಕೆಗೆ ಸಚಿವರಲ್ಲಿ ಮನವಿ ಮಾಡಲಾಗುವುದು. ಪೂರಕವಾಗಿ ಸ್ಪಂದಿಸದಿದ್ದರೆ ಮತ್ತೆ ಧರಣಿ ಮುಂದುವರಿಸಲಾಗುವುದು'
> -ಕುಮಾರಸ್ವಾಮಿ, ಜಯ ಕರ್ನಾಟಕ ಜನಪರ ವೇದಿಕೆಯ ಸಲಹೆಗಾರ

ಕ್ಷಮೆ ಕೇಳಿ, ನಿಷೇಧಾಜ್ಞೆ ಆದೇಶ ಹಿಂಪಡೆಯಬೇಕು. ನಮ್ಮ ಬೇಡಿಕೆ ಈಡೇರಿಸುವ ಭರವಸೆ ನೀಡಬೇಕು. ಅಲ್ಲಿಯವರೆಗೆ ಸ್ಥಳದಿಂದ ಕದಲುವುದಿಲ್ಲ' ಎಂದು ಪಟ್ಟು ಹಿಡಿದರು. ಮಧ್ಯಾಹ್ನವಾದರೂ ಜಿಲ್ಲಾಧಿಕಾರಿ ಸೇರಿದಂತೆ ಯಾವ ಅಧಿಕಾರಿಗಳು ಸಹ, ಧರಣಿ ಸ್ಥಳಕ್ಕೆ ಬಾರಲಿಲ್ಲ. ಇದರಿಂದ ರೊಚ್ಚಿಗೆದ್ದ ಹೋರಾಟಗಾರರು, ಸ್ಥಳಕ್ಕೆ ಊಟ ತರಿಸಿಕೊಂಡು ಸೇವಿಸಿ ಧರಣಿ ಮುಂದುವರಿಸಲು ತೀರ್ಮಾನಿಸಿದರು.

ಅಷ್ಟೊತ್ತಿಗಾಗಲೇ ನಿಧಾನವಾಗಿ ಹನಿಯುತ್ತಿದ್ದ ಮಳೆ ಜೋರಾಯಿತು. ಪೊಲೀಸರು ಮನವೊಲಿಕೆಗೂ


ಉದಯವಾಹಿನಿ ಚಿತ್ರ

> ಇಂದು ಉಸ್ತುವಾರಿ ಸಚಿವರ ಭೇಟಿ ತಮ್ಮನ್ನು ವಶಕ್ಕೆ ಪಡೆದು ಇಟ್ಟಿದ್ದ ಕಲ್ಯಾಣ ಮಂಟಪದಲ್ಲಿ ಸಭೆ ನಡೆಸಿದ ಹೋರಾಟಗಾರರು ಜಿಲ್ಲಾಧಿಕಾರಿ ನಡೆ ವಿರೋಧಿಸಿ ಬೆಂಗಳೂರಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾ ರೆಡ್ಡಿ ಅವರನ್ನು ಭೇಟಿ ಮಾಡಲು ನಿರ್ಧರಿಸಿದ್ದಾರೆ.

ಜಗ್ಗದ ಹೋರಾಟಗಾರರು ಮಳೆಯಲ್ಲೇ ಧರಣಿ ಮುಂದುವರಿಸಿದರು.

ಆಗ ಪೊಲೀಸರು ಹೋರಾಟಗಾರರನ್ನು ವಶಕ್ಕೆ ಪಡೆದು 2 ಕೆಎಸ್‌ಆರ್‌ಟಿಸಿ ಬಸ್ಸು ಹಾಗೂ 3 ಪೊ

**ಪೊಲೀಸರ ವಿರುದ್ಧ ಧಿಕ್ಕಾರ**

ಸುರಿಯುವ ಮಳೆಯನ್ನೂ ಲೆಕ್ಕಿಸದೆ ಧರಣಿ ನಡೆಸುತ್ತಿದ್ದ ಹೋರಾಟಗಾರರನ್ನು ಪೊಲೀಸರು ವಶಕ್ಕೆ ಪಡೆದರು ಧರಣಿನಿರತ ಹೋರಾಟಗಾರರನ್ನು ಪೊಲೀಸರು ಮಳೆಯಲ್ಲೇ ವಶಕ್ಕೆ ಪಡೆದು ಪೊಲೀಸ್ ವಾಹನಕ್ಕೆ ತುಂಬಿಸಿದರುಧರಣಿನಿರತ ಮಹಿಳಾ ಹೋರಾಟಗಾರರು ಶೌಚಾಲಯಕ್ಕೆ ಹೋಗಲು ಪೊಲೀಸರು ಅವಕಾಶ ನೀಡಬೇಕು ಎಂದು ಮುಖಂಡರು ಪೊಲೀಸರಿಗೆ ಮನವಿ ಮಾಡಿದರು. ಅದಕ್ಕೆ ಪೊಲೀಸರು ನಿರಾಕರಿಸಿದಾಗ ಬಲವಂತವಾಗಿ ಒಳಕ್ಕೆ ಹೋಗಲು ಯತ್ನಿಸಿದರು. ಆಗ ಪೊಲೀಸರು ಮತ್ತು ಹೋರಾಟಗಾರರ ನಡುವೆ ವಾಗ್ವಾದ ನಡೆಯಿತು. ಆಗ ಹೋರಾಟಗಾರರು ಪೊಲೀಸರ ವಿರುದ್ಧವೂ ಧಿಕ್ಕಾರ ಕೂಗಿ ಆಕ್ರೋಶ ಹೊರಹಾಕಿದರು.

ಲೀಸ್ ವಾಹನಗಳಿಗೆ ಹತ್ತಿಸಿದರು. ಪ್ರತಿರೋಧ ತೋರಿದವರನ್ನು ಎತ್ತಿ ಒಳಕ್ಕೆ ತುಂಬಿದರು. ಕೆಲವರು ಪೊಲೀಸರಿಂದ ತಪ್ಪಿಸಿಕೊಂಡು ಸಮೀಪದ ಅಂಗಡಿಗಳಲ್ಲಿ ಆಶ್ರಯ ಪಡೆದರು. ರಾಮನಗರ ಮತ್ತು ಚನ್ನಪಟ್ಟಣದ ವಿವಿಧೆಡೆ ಹೋರಾಟಗಾರರನ್ನು ಸಂಜೆಯವರೆಗೆ ಇಟ್ಟುಕೊಂಡಿದ್ದ ಪೊಲೀಸರು, ನಂತರ ಬಿಟ್ಟು ಕಳಿಸಿದರು. ಅಹಿತರ ಘಟನೆ ನಡೆಯದಂತೆ ಸ್ಥಳದಲ್ಲಿ

**ತೊಲಗಲಿ ತೊಲಗಿ ಜಿಲ್ಲಾಧಿಕಾರಿ ತೊಲಗಲಿ**

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಟಿ.ವಿ. ಸುರೇಶ್, ರಾಮಚಂದ್ರಯ್ಯ, ಡಿವೈಎಸ್ಪಿಗಳಾದ ದಿನಕರ ಶೆಟ್ಟಿ, ಗಿರಿ, ಪ್ರವೀಣ್‌ಕುಮಾರ್ ಸೇರಿದಂತೆ 25ಕ್ಕೂ ಹೆಚ್ಚು ಅಧಿಕಾರಿಗಳು, 50ಕ್ಕೂ ಹೆಚ್ಚು ಸಿಬ್ಬಂದಿ ಸ್ಥಳದಲ್ಲಿದ್ದರು. ಡಿ.ಸಿ ಕಚೇರಿ ಎದುರಿನ ರಸ್ತೆಯಲ್ಲಿ ಧರಣಿನಿರತರು ಕುಳಿತಿದ್ದರಿಂದ, ಪಕ್ಕದ ರಸ್ತೆಯಲ್ಲಿ ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

# ರಾಗಿ ಬಿತ್ತನೆ ಹೆಚ್ಚಳ, ಶೇಂಗಾ ಬಿತ್ತನೆಗೆ ತೀವ್ರ ಹಿನ್ನಡೆ

• ಉದಯವಾಹಿನಿ ತುಮಕೂರು

ಜಿಲ್ಲೆಯಲ್ಲಿ ಈ ಬಾರಿ ನಿರೀಕ್ಷೆಗಿಂತಲೂ ಹೆಚ್ಚಿನ ಪ್ರದೇಶದಲ್ಲಿ ರಾಗಿ ಬಿತ್ತನೆಯಾಗಿದ್ದರೆ, ಶೇಂಗಾ ಬಿತ್ತನೆಗೆ ತೀವ್ರ ಹಿನ್ನಡೆಯಾಗಿದೆ. ಆದರೆ ಸೆಪ್ಟೆಂಬರ್ ತಿಂಗಳ ಮೊದಲ ವಾರ ಮಳೆ ಕೊರತೆಯಿಂದಾಗಿ ಬೆಳೆಗಳು ಬಾಡುತ್ತಿರುವುದು ರೈತರ ಆತಂಕವನ್ನು ಹೆಚ್ಚಿಸಿದೆ.

ಆಗಸ್ಟ್ ತಿಂಗಳಲ್ಲಿ ಎಲ್ಲೆಡೆ ಉತ್ತಮ ಮಳೆಯಾಗಿದ್ದು (ವಾಡಿಕೆ 85.8 ಮಿ.ಮೀಗೆ, 217.8 ಮಿ.ಮೀ ಬಿದ್ದಿದೆ) ರಾಗಿ ಬಿತ್ತನೆಗೆ ಸಾಕಷ್ಟು ನೆರವಾಗಿದ್ದು, ಗುರಿ ಮೀರಿದ ಸಾಧನೆಯಾಗಿದೆ. ಜಿಲ್ಲೆಯಲ್ಲಿ 1.51 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ ಹೊಂದಿದ್ದು, ಈವರೆಗೆ 1.64 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ರಾಗಿ ಬಿತ್ತನೆಯಾಗಿದೆ. ಹೆಚ್ಚುವರಿಯಾಗಿ ಸುಮಾರು 13 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾದಂತಾಗಿದೆ. ಅತಿ ಹೆಚ್ಚು ರಾಗಿ ಬೆಳೆಯುವ ಕುಣಿಗಲ್ ತಾಲ್ಲೂಕಿನಲ್ಲಿ 34,260 ಹೆಕ್ಟೇರ್ (ಗುರಿ 33,100 ಹೆಕ್ಟೇರ್), ತಿಪಟೂರು ತಾಲ್ಲೂಕಿನಲ್ಲಿ 22,900 ಹೆಕ್ಟೇರ್ (ಗುರಿ 18,700


ಉದಯವಾಹಿನಿ ಚಿತ್ರ

ಹೆಕ್ಟೇರ್), ತುಮಕೂರು ತಾಲ್ಲೂಕಿನಲ್ಲಿ 18,312 ಹೆಕ್ಟೇರ್, ತುರುವೇಕೆರೆ ತಾಲ್ಲೂಕಿನಲ್ಲಿ 19,700 ಹೆಕ್ಟೇರ್‌ನಲ್ಲಿ ಬಿತ್ತನೆ ಮಾಡಲಾಗಿದೆ.

ರಾಗಿ, ಜೋಳ ಸೇರಿದಂತೆ ಇತರೆ ಏಕದಳ ಧಾನ್ಯಗಳನ್ನು 1.94 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಇದ್ದರೆ, 2.07 ಲಕ್ಷ ಹೆಕ್ಟೇರ್‌ಗಳಲ್ಲಿ ಬಿತ್ತನೆಯಾಗಿದೆ. ಕಳೆದ ವರ್ಷ ಬರದಿಂದ ತತ್ತರಿಸಿದ್ದ ರೈತರು, ಮನೆಗೆ ಒಂದು ಕಾಳು ರಾಗಿ ತಂದಿರಲಿಲ್ಲ. ಈ ಬಾರಿ ವರುಣ ಆಶಾದಾಯಕ ವಾತಾವರಣ ಮೂಡಿಸಿದ್ದು, ರಾಗಿ ಉತ್ಪಾದನೆ ಹೆಚ್ಚಬಹುದು. ಜತೆಗೆ ರಾಸುಗಳಿಗೆ ಮೇವಿನ ಬರ ನೀಗಲಿದೆ ಎಂದು ಹೇಳಲಾಗುತ್ತಿದೆ.

# ಬಾಲ್ಯ ನೆನೆದ ಸಂಸದ ಯದುವೀರ್ ಒಡೆಯರ್

• ಉದಯವಾಹಿನಿ ಮೈಸೂರು

ನಾನು ಬೆಂಗಳೂರಿನ ವಿದ್ಯಾನಿಕೇತನದಲ್ಲಿ ಓದಿದೆ. ಪಠ್ಯಗಳ ಒತ್ತಡ ಹೆಚ್ಚಿದಂತೆ ಕ್ರೀಡೆ ಹೆಚ್ಚು ಆಪ್ತವಾಯಿತು. ಹೀಗಾಗಿ ಪಿಟಿ ಟೀಚರ್ ನನ್ನ ಫೇವರಿಟ್ ಆದರು' ಎಂದು ಸಂಸದ ಯದುವೀರ್ ಕೃಷ್ಣದತ್ತ ಒಡೆಯರ್ ನೆನೆದರು.ವಿದ್ಯಾರ್ಥಿನಿ ಅಪೂರ್ವಾಳ ಪ್ರಶ್ನೆಗೆ ಉತ್ತರಿಸುತ್ತಿದ್ದಂತೆಯೇ ವಿದ್ಯಾರ್ಥಿಗಳು ಕುತೂಹಲದಿಂದ ಅವರ ಮಾತುಗಳನ್ನು ಆಲಿಸಿದರು.

'ಕಲಿಸು' ಫೌಂಡೇಷನ್ ಇಲ್ಲಿನ ಕುಂಬಾರಕೊಪ್ಪಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸ್ಥಾಪಿಸಿದ ಗ್ರಂಥಾಲಯವನ್ನು ಉದ್ಘಾಟಿಸಿದ ಸಂಸದರು, ಬಳಿಕ ವಿದ್ಯಾರ್ಥಿಗಳೊಂದಿಗೆ ಸಂವಾದದಲ್ಲಿ ಮಾತನಾಡಿದರು.

ಶಾಲೆಯ 8ನೇ ತರಗತಿ ವಿದ್ಯಾರ್ಥಿನಿ ಗಾನವಿ ಗುಣಮಟ್ಟದ ಶಿಕ್ಷಣ ಎಂದರೇನು ಎಂದು ಪ್ರಶ್ನಿಸಿದಳು. ಅದಕ್ಕೆ ಪ್ರತಿಕ್ರಿಯಿಸಿ, ಶಿಕ್ಷಣಕ್ಕೆ ಪೂರಕವಾದ ವಾತಾವರಣ ಹಾಗೂ ತಂತ್ರಜ್ಞಾನದ ಜೊತೆಗಿನ ಕಲಿಕೆಯೇ ಗುಣಮಟ್ಟದ ಶಿಕ್ಷಣ.



ಉದಯವಾಹಿನಿ ಚಿತ್ರ

> ಒಗ್ಗಟ್ಟಿನ ಕಥೆ ಹೇಳಿದ ಯದುವೀರ್, ಕಲಿಸು ಫೌಂಡೇಷನ್ ವತಿಯಿಂದ ರೂಪಿಸಿದ 100ನೇ ಗ್ರಂಥಾಲಯ ಉದ್ಘಾಟಿಸಿದ ಯದುವೀರ್, ವಿದ್ಯಾರ್ಥಿಗಳಿಗೆ ಡಿಜಿಟಲ್ ತಂತ್ರಜ್ಞಾನದ ಸಹಾಯದಿಂದ ಒಗ್ಗಟ್ಟಿನಲ್ಲಿ ಬಲವಿದೆ' ಎಂಬ ನೀತಿ ಕಥೆಯನ್ನು ಹೇಳಿದರು.
> -ಯದುವೀರ್, ಸಂಸದ

ಈಗಿನ ತಲೆಮಾರಿನ ಮಕ್ಕಳಿಗೆ ಭಾರತದಲ್ಲಿ ವಿಪುಲ ಉದ್ಯೋಗ ಅವಕಾಶವಿದ್ದು, ಕೌಶಲಾಧರಿತ ಶಿಕ್ಷಣ ಪಡೆದರೆ ವೃತ್ತಿ ಜೀವನಕ್ಕೆ ಸಹಕಾರಿ ಆಗಲಿದೆ. ಸರ್ಕಾರಿ ಶಾಲೆಗಳಲ್ಲೂ ಖಾಸಗಿ ಶಾಲೆಗಳಂತೆ ಉತ್ತಮ ಸೌಲಭ್ಯ, ಗುಣಮಟ್ಟ ಸಿಗಲು ಶ್ರಮಿಸುತ್ತೇವೆ' ಎಂದರು.

4ನೇ ತರಗತಿಯ ಮುಕ್ತಾ 'ಸಮಾಜಸೇವೆಯ ಬಗ್ಗೆ ನಿಮ್ಮ ಅಭಿಪ್ರಾಯವೇನು' ಎಂದು ಪ್ರಶ್ನಿಸಿದಳು. 'ಸಮಾಜಸೇವೆ ಭಾರತೀಯರಲ್ಲಿ ರಕ್ತಗತವಾಗಿದ್ದು, ಮನೆಯಿಂದಲೇ ಅದರ ಆರಂಭವಾಗಬೇಕು. ತಂದೆ- ತಾಯಿಯ ಸೇವೆಯ ಬಳಿಕ ಸಮಾಜದ ಸಮಸ್ಯೆಗೂ ಪರಿಹಾರ ಕಂಡುಕೊಳ್ಳುವ ಕೆಲಸ ಮಾಡಬೇಕು' ಎಂದು ಯದುವೀರ್ ಉತ್ತರಿಸಿದರು.

8ನೇ ತರಗತಿಯ ಧನ್ಯಶ್ರೀ ವಿದ್ಯಾರ್ಥಿಗಳಿಗೆ ನಿಮ್ಮ ಕಿವಿ ಮಾತೇನು' ಎಂದು ಸಂಸದರನ್ನು ಕೇಳಿದಾಗ, ವಿದ್ಯಾಭ್ಯಾಸಕ್ಕೆ ಭಾರತದಲ್ಲಿ ಉತ್ತಮ ಅವಕಾಶಗಳಿವೆ, ಅವನ್ನು ಬಳಸಿಕೊಂಡು ನಿಮ್ಮ ಆಸಕ್ತಿಯ ಕ್ಷೇತ್ರದಲ್ಲಿ ಅಧ್ಯಯನ ನಡೆಸಿ' ಎಂದು ಸಲಹೆ ನೀಡಿದರು.

# ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆಯ ಪ್ರತಿಭಟನೆ

• ಉದಯವಾಹಿನಿ ನಾಪೋಕ್ಲು

ಅವೈಜ್ಞಾನಿಕವಾದ ಬೃಹತ್ ಭೂಪರಿವರ್ತನೆಗಳು ಹಾಗೂ ವಿಲೇವಾರಿಗಳು ಕೊಡಗಿನ ಪರಿಸರಕ್ಕೆ ಹಾಗೂ ಕೊಡವರ ಅಸ್ತಿತ್ವಕ್ಕೆ ಭಾರಿ ಬೆದರಿಕೆಗಳನ್ನು ಒಡ್ಡಿವೆ. ಜಿಲ್ಲೆಯಲ್ಲಿ ಇಂತಹ ಕೃತ್ಯಗಳಿಗೆ ಅವಕಾಶ ಮಾಡಿಕೊಡಬಾರದು ಎಂದು ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆಯ ಅಧ್ಯಕ್ಷ ಎನ್.ಯು.ನಾಚಪ್ಪ ಒತ್ತಾಯಿಸಿದರು.

ಇಲ್ಲಿನ ನಾಪೋಕ್ಲುವಿನಲ್ಲಿ ಈ ಕುರಿತು ಅವರು ಜನಜಾಗೃತಿ ಮಾನವ ಸರಪಳಿ ರಚಿಸಿ ಮಾತನಾಡಿದರು.

ನಗರೀಕರಣ, ವಿಲ್ಲಾ, ರೆಸಾರ್ಟ್‌ಗಳ ನಿರ್ಮಾಣದಿಂದ ಕೊಡಗಿನಲ್ಲಿ ಜನಸಂಖ್ಯೆ ಹೆಚ್ಚಾಗಲಿದ್ದು, ಇದನ್ನು ತಡೆದೊಳ್ಳುವ ಶಕ್ತಿ ಇಲ್ಲಿನ ಭೂಪ್ರದೇಶಕ್ಕೆ ಇಲ್ಲ. ಹಾಗಾಗಿ, ಬೃಹತ್ ಭೂಪರಿವರ್ತನೆ ಮತ್ತು ಭೂವಿಲೇವಾರಿಯನ್ನು ತಕ್ಷಣ ನಿಲ್ಲಿಸಬೇಕು ಎಂದು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

**ಕೊಡವ ಭೂಮಿಯನ್ನು ಉಳಿಸಿ**

ಆದಿಮಸಂಜಾತ ಕೊಡವ ಬುಡಕಟ್ಟಿನ ಜನರು ಇಲ್ಲಿಯವರೆಗೆ ಹಸಿರಿನ ಕೊಡವ ಭೂಮಿಯನ್ನು ಉಳಿಸಿ, ಬೆಳೆಸಿಕೊಂಡು ಬಂದಿದ್ದಾರೆ. ಆದರೆ, ಇಂದು ಭೂಮಾಫಿಯಾ, ರೆಸಾರ್ಟ್ ಮಾಫಿಯಾ, ವಿಲ್ಲಾ, ಟೌನ್ ಶಿಪ್, ಬೃಹತ್ ಭೂಪರಿವರ್ತನೆ, ಭೂವಿಲೇವಾರಿ ಮಾಫಿಯಾಗಳು ಹಾಗೂ ಕಪ್ಪುಹಣದ ಬಂಡವಾಳ ಶಾಹಿಗಳು ಕೊಡವಲ್ಯಾಂಡ್ ಅನ್ನು ನಾಶ ಮಾಡುತ್ತಿದ್ದಾರೆ ಮತ್ತು ಕೊಡವರನ್ನು ಬಲಿಪಶು ಮಾಡುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಕೊಡಗು ಬೆಟ್ಟಗುಡ್ಡ, ನದಿ, ತೊರೆಗಳಿಂದ ಕೂಡಿದ್ದು, ಅತ್ಯಂತ ಸೂಕ್ಷ್ಮತೆಯನ್ನು ಹೊಂದಿದೆ. ಆದ್ದರಿಂದ ಬಯಲುಸೀಮೆಯಂತೆ ಕೊಡಗಿನ ಭೌಗೋಳಿಕ ಸ್ಥಿತಿಗತಿಯನ್ನು ಪರಿಗಣಿಸಬಾರದು ಎಂದು ಆಗ್ರಹಿಸಿದರು. ಆರ್ಥಿಕವಾಗಿ ಹಿಂದುಳಿದಿರುವ ಕೊಡವರು ಸ್ವಾಭಿಮಾನದಿಂದ ಜೀವನ ಸಾಗಿಸಲು ಬ್ಯಾಂಕ್ ಮತ್ತು ಸಹಕಾರ ಸಂಘಗಳು ಸಾಲದ ಸೌಲಭ್ಯ ನೀಡಬೇಕು ಎಂದು ಒತ್ತಾಯಿಸಿದರು.

# ಮೃಗಾಲಯ ನಿರ್ವಹಣೆ, ಸಮನ್ವಯ ಅಗತ್ಯ

• ಉದಯವಾಹಿನಿ ಮೈಸೂರು

ಮೃಗಾಲಯ ನಿರ್ವಹಣೆ ಸವಾಲಿನಿಂದ ಕೂಡಿದೆ. ವನ್ಯಜೀವಿಗಳ ಪುನರ್‌ವಸತಿ, ಪಾಲನೆ, ಆರೈಕೆಯಲ್ಲಿ ಪಶು ವೈದ್ಯರು, ಸಿಬ್ಬಂದಿ ಹಾಗೂ ಅಧಿಕಾರಿಗಳ ನಡುವೆ ಸಮನ್ವಯ ಇರಬೇಕು' ಎಂದು ಸಿಕ್ಕಿಂನ ಹೆಚ್ಚುವರಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಪಿ.ಸೆಂಥಿಲ್ ಕುಮಾರ್ ಪ್ರತಿಪಾದಿಸಿದರು. ನಗರದ ಚಾಮರಾಜೇಂದ್ರ ಮೃಗಾಲಯದಲ್ಲಿ ಭಾರತೀಯ ಅರಣ್ಯ ಸೇವೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಾಗಿ ಆಯೋಜಿಸಿದ್ದ 'ಮೃಗಾಲಯ ವ್ಯವಸ್ಥಾಪಕರಿಗಾಗಿ ವನ್ಯಜೀವಿಗಳು ಹಾಗೂ ಮೃಗಾಲಯ ನಿರ್ವಹಣೆ' ಕುರಿತ ಐದು ದಿನಗಳ ಕಾರ್ಯಾಗಾರವನ್ನು ಸೋಮವಾರ ಉದ್ಘಾಟಿಸಿ ಅವರು ಮಾತನಾಡಿದರು.

ಮೃಗಾಲಯದಲ್ಲಿ ಅಳಿವಿನಂಚಿನ, ಜಾಗತಿಕವಾಗಿ ಕಡಿಮೆ ಸಂಖ್ಯೆಯಲ್ಲಿರುವ ವನ್ಯಜೀವಿಗಳೂ ಇವೆ. ಮನೆಯಲ್ಲಿ ಮಗುವನ್ನು ಪಾಲನೆ ಮಾಡಿದಂತೆಯೇ ಎಚ್ಚರಿಕೆಯಿಂದ ನೋಡಿಕೊಳ್ಳಬೇಕು. ಆಗ ಮಾತ್ರ ಮಾದರಿ ಮೃಗಾಲಯಗಳು ರೂಪುಗೊಳ್ಳಲು ಸಾಧ್ಯ' ಎಂದರು ಅಭಿಪ್ರಾಯಪಟ್ಟರು.


ಉದಯವಾಹಿನಿ ಚಿತ್ರ

ಮೃಗಾಲಯಗಳ ನಿರ್ವಹಣೆ ಮಾಡಲು ಅನುಭವ ಇರಬೇಕು. ಎಲ್ಲಾ ಸಿಬ್ಬಂದಿಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು. ವನ್ಯಜೀವಿ ಪಾಲಕರ ಅನುಭವವನ್ನು ಬಳಸಿಕೊಂಡು ಉತ್ತಮ ವಾತಾವರಣವನ್ನು ಮೃಗಾಲಯಗಳಲ್ಲಿ ನಿರ್ಮಿಸಬೇಕು' ಎಂದು ಸಲಹೆ ಮಾಡಿದರು.

ಮೈಸೂರು ಮೃಗಾಲಯ ನಿರ್ವಹಣೆಯೂ ದೇಶದ ಎಲ್ಲಾ ಮೃಗಾಲಯಗಳಿಗೆ ಮಾದರಿಯಾಗಿದೆ. ಹೀಗಾಗಿಯೇ ಕೇಂದ್ರ ಮೃಗಾಲಯ ಪ್ರಾಧಿಕಾರವು ಇಲ್ಲಿ ಕಾರ್ಯಾಗಾರ ಆಯೋಜಿಸಿದೆ. ತರಬೇತಿಯನ್ನು ಪಡೆದು, ಉತ್ತಮ ವ್ಯವಸ್ಥಾಪಕರಾಗಿ ಹೊರಹೊಮ್ಮಬೇಕು' ಎಂದು ತಿಳಿಸಿದರು.

# ಶಿಕ್ಷಕನ ಮೊಬೈಲ್‌ನಲ್ಲಿ 5,000 ನಗ್ನಚಿತ್ರ: ಪೋಷಕರ ಆತಂಕ

• ಉದಯವಾಹಿನಿ ಕೋಲಾರ

ಮಾಲೂರು ತಾಲ್ಲೂಕಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಚಿತ್ರಕಲಾ ಶಿಕ್ಷಕ ಮುನಿಯಪ್ಪ ಅವರ ಮೊಬೈಲ್‌ನಲ್ಲಿ ಐದು ಸಾವಿರಕ್ಕೂ ಹೆಚ್ಚು ನಗ್ನ ದೃಶ್ಯಗಳಿದ್ದವು ಎನ್ನಲಾದ ವಿಚಾರ ಪೋಷಕರಲ್ಲಿ ಆತಂಕ ತಂದೊಡ್ಡಿದೆ.

ಈ ಸಂಬಂಧ ಪೋಷಕರು, ಸಂಬಂಧಿಕರು ವಸತಿ ಶಾಲೆಯ ಪ್ರಾಂಶುಪಾಲರು ಹಾಗೂ ಶಿಕ್ಷಕರಿಗೆ ಕರೆ ಮಾಡಿ ವಿಚಾರಿಸುತ್ತಿದ್ದಾರೆ.ತಮ್ಮ ಮಕ್ಕಳಿಗೆ ಸಂಬಂಧಿಸಿದ ವಿಡಿಯೋಗಳು ಇವೆಯೇ ಎಂದು ಆತಂಕಗೊಂಡಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಪೋಷಕರೊಬ್ಬರು, ವಸತಿ ಶಾಲೆಯಲ್ಲಿ ಮಕ್ಕಳು ಬಟ್ಟೆ ಬದಲಾಯಿಸುವ ಫೋಟೊವನ್ನು ಕೆಲವರು ಮೊಬೈಲ್‌ನಲ್ಲಿ



ಉದಯವಾಹಿನಿ ಚಿತ್ರ

ತೆಗೆದಿದ್ದ ಬಗ್ಗೆ ಆಗಲೇ ದೂರು ನೀಡಿದ್ದೆವು' ಎಂದರು.

ಈ ಕುರಿತು ಪ್ರತಿಕ್ರಿಯಿಸಿರುವ ವಸತಿ ಶಾಲೆಯ ಹೊಸ ಪ್ರಾಂಶುಪಾಲ, ಆರೋಪಿ ಶಿಕ್ಷಕ ಈಗ ನಮ್ಮ ವಸತಿ ಶಾಲೆಯಲ್ಲಿ ಇಲ್ಲ. ಕೆಲ ಸಾಮಾಜಿಕ ಜಾಲತಾಣಗಳು ನಮ್ಮ ಶಾಲೆಯಲ್ಲಿರುವ ಶಿಕ್ಷಕ ಎಂದು ಉಲ್ಲೇಖಿಸುತ್ತಿವೆ. ಪೋಷಕರು ಆತಂಕಗೊಂಡು ಕರೆ ಮಾಡಿ ವಿಚಾರಿಸುತ್ತಿದ್ದಾರೆ. ನಾವು ಸಮಾಧಾನ ಮಾಡುತ್ತಿದ್ದೇವೆ. ಈಗ ನಮ್ಮ ವಸತಿ ಶಾಲೆಯಲ್ಲಿ ಯಾವುದೇ ಸಮಸ್ಯೆ ಇಲ್ಲ ಎಂದರು.

ಪ್ರಕರಣ ನಡೆದಾಗ ಇದ್ದ ವಸತಿ ಶಾಲೆಯ ಪ್ರಾಂಶುಪಾಲರು, ಶಿಕ್ಷಕರು, ಅತಿಥಿ ಶಿಕ್ಷಕರು, ಅಡುಗೆ ಸಿಬ್ಬಂದಿ, ಭದ್ರತಾ ಸಿಬ್ಬಂದಿ ಸೇರಿದಂತೆ ಎಲ್ಲರನ್ನೂ ಈಗಾಗಲೇ ವರ್ಗಾವಣೆ ಮಾಡಲಾಗಿದೆ.

# ಭತ್ತದ ಸಸಿ ನಾಟಿಗೆ ಶಾಸಕ ಚಾಲನೆ

• ಉದಯವಾಹಿನಿ ಮದ್ದೂರು

ಬೋರಾಪುರ ಗ್ರಾಮದಲ್ಲಿ ಕೃಷಿ ಇಲಾಖೆ ಮಂಗಳವಾರ ಹಮ್ಮಿಕೊಂಡಿದ್ದ ಯಂತ್ರದ ಮೂಲಕ ಭತ್ತದ ಸಸಿ ನಾಟಿ ಹಾಗೂ ಬೇಸಾಯ ಪ್ರಾತ್ಯಕ್ಷಿಕೆಗೆ ಶಾಸಕ ಉದಯ್ ಯಾಂತ್ರಿಕ ನಾಟಿ ಮಾಡಿ ಚಾಲನೆ ನೀಡಿದರು. ಅವರು ಮಾತನಾಡಿ, ರೈತರು ಆಧುನಿಕ ಕೃಷಿ ಪದ್ಧತಿಯನ್ನು ಅನುಸರಿಸಿ ಆರ್ಥಿಕ ಪ್ರಗತಿ ಸಾಧಿಸಬಹುದು. ವೈಜ್ಞಾನಿಕ ವಿಧಾನದಲ್ಲಿ ಕೃಷಿ ಬಗ್ಗೆ ಇಲಾಖೆಯಿಂದ ಮಾಹಿತಿ ಪಡೆದುಕೊಳ್ಳಬೇಕು. ಸಮಯ ಉಳಿಕೆ, ಖರ್ಚನ್ನು ಕಡಿಮೆ ಮಾಡಿ ಆದಾಯ ಹೆಚ್ಚಿಸಬಹುದು ಕೃಷಿ ಕೆಲಸಗಾರರ ಕೊರತೆಯಲ್ಲೂ ಇದು ರೈತರಿಗೆ ಅನುಕೂಲವಾಗಲಿದೆ. ಯಂತ್ರಗಳು ರಿಯಾಯ್ತಿ ದರದಲ್ಲಿ ದೊರಕುತ್ತಿವೆ ಎಂದರು.

ಕೃಷಿ ಇಲಾಖೆಯ ಉಪ ನಿರ್ದೇಶಕ ಮುನೇಗೌಡ, ಸಹಾಯಕ ಕೃಷಿ ಅಧಿಕಾರಿ ಪ್ರತಿಭಾ, ರೂಪಶ್ರೀ, ಗವಾಸ್ಕರ್, ಮುಖಂಡ ಬಸವರಾಜು ಭಾಗವಹಿಸಿದ್ದರು.

# ಭ್ರೂಣ ಹತ್ಯೆ ಪ್ರಕರಣ: 6 ಆರೋಪಿಗಳ ಬಂಧನ

• ಉದಯವಾಹಿನಿ ಮಂಡ್ಯ

ಜಿಲ್ಲೆಯ ಪಾಂಡವಪುರ, ಬೆಳ್ಳೂರು ಮತ್ತು ಮೇಲುಕೋಟೆ ಪೊಲೀಸ್ ಠಾಣೆಗಳಲ್ಲಿ ದಾಖಲಾದ 'ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆಗೆ ಸಂಬಂಧಿಸಿದ ಪ್ರಕರಣಗಳ ತನಿಖೆಯನ್ನು ಚುರುಕುಗೊಳಿಸಿರುವ ಪೊಲೀಸರು, ಮತ್ತೆ ಆರು ಆರೋಪಿಗಳನ್ನು ಬಂಧಿಸಿದ್ದಾರೆ. ಇದರೊಂದಿಗೆ ಬಂಧಿತರ ಸಂಖ್ಯೆ 36ಕ್ಕೆ ಏರಿಕೆಯಾಗಿದೆ.

ಮೈಸೂರು ಜಿಲ್ಲೆಯ ತಿ.ನರಸೀಪುರ ತಾಲ್ಲೂಕಿನ ಬೇವಿನಹಳ್ಳಿಯ ರಾಮಕೃಷ್ಣ ಬಿನ್ ನಿಂಗೇಗೌಡ (55), ಬನ್ನೂರು ಪಟ್ಟಣದ ಗುರು ಬಿನ್ ನಿಂಗಣ್ಣ (22), ಮೈಸೂರು ನಗರದ ಆದಿಶಕ್ತಿ ಬಡಾವಣೆಯ ಸೋಮಶೇಖರ್ ಪಟೇಲ್ (38), ಮೈಸೂರಿನ ರಾಘವೇಂದ್ರ ಬಡಾವಣೆಯ ಶಂಕರ ಜಿ.ಎನ್. (54), ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕು ಹಿರೇಮರಳಿ ಗ್ರಾಮದ ನವೀನ್ ಎಚ್.ಕೆ (41) ಮತ್ತು ಹರಳಹಳ್ಳಿ ಗ್ರಾಮದ ಜಬ್ಬರ್ ಬಿನ್ ಜಿಯಾವುಲ್ಲಾ (46) ಬಂಧಿತರು. ಇವರಿಂದ ಎರಡು ಸ್ಕ್ಯಾನಿಂಗ್ ಯಂತ್ರಗಳು ಹಾಗೂ 2 ಕಾರ್ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡುತ್ತಿದ್ದ ಜಾಲವನ್ನು ಭೇದಿಸಿರುವ ಮಂಡ್ಯ ಜಿಲ್ಲೆಯ 7 ವಿಶೇಷ ತನಿಖಾ ತಂಡ ಗಳು, ಶಂಕಿತರನ್ನು ಕರೆತಂದು ವಿಚಾರಣೆ ನಡೆಸುತ್ತಿವೆ. ಎಲ್ಲಾ ಆರೋಪಿಗಳನ್ನು ಬಂಧಿಸಿ, ಈ ಕೃತ್ಯಕ್ಕೆ ಸಂಪೂರ್ಣ ಕಡಿವಾಣ ಹಾಕಲು ಅಗತ್ಯ ಕ್ರಮ ಕೈಗೊಂಡಿದ್ದೇವೆ' ಎಂದು ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದ್ದಾರೆ.

# ಕರ್ನಾಟಕ ಸುವರ್ಣ ಸಂಭ್ರಮ ರಥಕ್ಕೆ ಅದ್ದೂರಿ ಸ್ವಾಗತ

## • ಕನ್ನಡ ಕುರಿತಾದ ಗೀತೆಗಳ ಗಾಯನ, ಗಿರಿಜನ ಕಲಾತಂಡದ ನೃತ್ಯಗಳು ಮೆರವಣಿಗೆಗೆ ಮೆರಗು ತುಂಬಿದವು

• ಉದಯವಾಹಿನಿ, ಮಡಿಕೇರಿ

ನಗರದಲ್ಲಿ ಜಿನುಗುತ್ತಿದ್ದ ಮಳೆಯ ನಡುವೆ ಕರ್ನಾಟಕ ಸುವರ್ಣ ಸಂಭ್ರಮ ರಥ'ಕ್ಕೆ ಕನ್ನಡಾಭಿಮಾನಿಗಳು ಅದ್ದೂರಿ ಸ್ವಾಗತ ಕೋರಿ ದರು. ಮಳೆ ನಿಧಾನಿಸಿ ಹೂಮಳೆಯ ಸಿಂಚನವನ್ನು ಸಿಂಪಡಿಸಿ ಜನಮನವನ್ನು ಉಲ್ಲಾಸಿತಗೊಳಿಸಿತು.

ಕನ್ನಡ ಕುರಿತಾದ ಗೀತೆಗಳ ಗಾಯನ, ಗಿರಿಜನ ಕಲಾತಂಡದ ನೃತ್ಯ ಗಳು ಮೆರವಣಿಗೆಗೆ ಮೆರಗು ತುಂಬಿದವು. ಕನ್ನಡದ ಬಾವುಟಗಳು ಹಾರಾಡಿ, ಮಂಜಿನ ನಗರಿಯಲ್ಲಿ ಕನ್ನಡ ಝೇಂಕರಿಸಿತು.

ಈ ಎಲ್ಲ ಸೊಬಗಿನ ದೃಶ್ಯಗಳು ರಾಜ್ಯವು ಕರ್ನಾಟಕ'ವೆಂದು ನಾಮಕರಣಗೊಂಡು 5 ದಶಕಗಳು ಪೂರೈಸಿದ ಹಿನ್ನೆಲೆ ರಾಜ್ಯಾದ್ಯಂತ ಸಂಚರಿಸುತ್ತಿರುವ 'ಕರ್ನಾಟಕ ಸುವರ್ಣ ಸಂಭ್ರಮ ರಥ'ದ ಮೆರವಣಿಗೆಯಲ್ಲಿ ಕಂಡು ಬಂದವು. ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಸಾಹಿತ್ಯ ಪರಿಷತ್ತು ಸೇರಿದಂತೆ ಅನೇಕ ಸಂಘಟನೆಗಳ ವತಿಯಿಂದ ನಡೆದ ಈ ಕಾರ್ಯಕ್ರಮದಲ್ಲಿ ನೂರಾರು ಮಂದಿ ನಗರದ ಜನರಲ್ ಕೆ.ಎಸ್.ತಿಮ್ಮಯ್ಯ ವೃತ್ತದಲ್ಲಿ ಭವ್ಯ


ಉದಯವಾಹಿನಿ ಚಿತ್ರ

**ಭುವನೇಶ್ವರಿ ವಿಗ್ರಹಕ್ಕೆ ಪುಷ್ಪ ನಮನ**

ರಥವನ್ನು ಬರಮಾಡಿಕೊಂಡರು. ಇದಕ್ಕೆ ಶಾಲಾ, ಕಾಲೇಜುಗಳ ನೂರಾರು ವಿದ್ಯಾರ್ಥಿಗಳೂ ಸಾಥ್ ನೀಡಿದರು.

ಗಣ್ಯರು ತಾಯಿ ನಾಡದೇವಿ ಭುವನೇಶ್ವರಿ ವಿಗ್ರಹಕ್ಕೆ ಪುಷ್ಪ ನಮನ ಸಲ್ಲಿಸಿದರು.

ನಗರದ ಜನರಲ್ ತಿಮ್ಮಯ್ಯ ವೃತ್ತದಿಂದ ಮಂಗೇರಿರ ಮುತ್ತಣ್ಣ ವೃತ್ತದ ಮೂಲಕ ಸ್ಕ್ವಾಡ್ರನ್ ಲೀಡರ್ ಅಜ್ಜಮಾಡ ದೇವಯ್ಯ ವೃತ್ತದಲ್ಲಿ ಜನರು ಅದ್ದೂರಿಯಾಗಿ ಸ್ವಾಗತಿಸಿದರು.

ಕನ್ನಡ ಸಾಹಿತ್ಯ ಪರಿಷತ್ತು ಮಾಜಿ ಅಧ್ಯಕ್ಷ ಟಿ.ಪಿ.ರಮೇಶ್ ಮಾತನಾಡಿ, 'ಕರ್ನಾಟಕ ನಾಮಕರಣವಾಗಿ 50 ವರ್ಷ ಪೂರ್ಣಗೊಂಡ ಹಿನ್ನೆಲೆ 50ರ ಸಂಭ್ರಮ ಪ್ರಯುಕ್ತ ನೆನಪಿಸುವುದರ ಜೊತೆಗೆ ಕನ್ನಡಿಗರಲ್ಲಿ ಜಾಗೃತಿ ಮೂಡಿಸಲು ಸುವರ್ಣ

**ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದ ಕನ್ನಡಾಭಿಮಾನಿಗಳು**

ಕನ್ನಡ ರಥವನ್ನು ಕನ್ನಡಾಭಿಮಾನಿಗಳು ಮಡಿಕೇರಿ ನಗರದಲ್ಲಿ ಸಂಭ್ರಮದಿಂದ ಸ್ವಾಗತಿಸಿದರು. ರಥದಲ್ಲಿ ಕನ್ನಡ ಸಂಸ್ಕೃತಿಯನ್ನು ಬಿಂಬಿಸುವ ಮಾದರಿಗಳು ಗಮನ ಸೆಳೆದವು. ಭುವನೇಶ್ವರಿ ತಾಯಿ ವಿಗ್ರಹಕ್ಕೆ ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಪುಷ್ಪನಮನ ಸಲ್ಲಿಸಿದರು. ರಮೇಶ್ ಮತ್ತು ತಂಡದಿಂದ ಗಿರಿಜನ ನೃತ್ಯ ಪ್ರದರ್ಶನ ಶಾಲಾ-ಕಾಲೇಜು ವಿದ್ಯಾರ್ಥಿಗಳು ನೂರಾರು ಸಂಖ್ಯೆಯಲ್ಲಿ ಭಾಗಿ ಕೊಡೆ ಹಿಡಿದು ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದ ಕನ್ನಡಾಭಿಮಾನಿಗಳು ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಮಾತನಾಡಿ 'ಕನ್ನಡ ನಾಡು-ನುಡಿ ಮತ್ತು ಸಂಸ್ಕೃತಿ ಬೆಳವಣಿಗೆಗೆ ಪ್ರತಿಯೊಬ್ಬರೂ ಶ್ರಮಿಸಬೇಕು ಎಂದರು.

ಕರ್ನಾಟಕ ರಥ ಜ್ಯೋತಿಯಾತ್ರೆ ಹಮ್ಮಿಕೊಳ್ಳಲಾಗಿದೆ' ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಕರ್ನಾಟಕ ನಾಮಕರಣದ ಸುವರ್ಣ ಮಹೋತ್ಸವದ ಅಂಗವಾಗಿ 'ಸುವರ್ಣ ಸಂಭ್ರಮ-50' 'ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ' ಎಂಬ ಶೀರ್ಷಿಕೆಯಡಿ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ಸಂಭ್ರಮ 50 ಪ್ರಯುಕ್ತ ಕನ್ನಡ ಜ್ಯೋತಿ ರಥಯಾತ್ರೆಯು ರಾಜ್ಯದ 31 ಜಿಲ್ಲೆಗಳಲ್ಲಿ ಹಲವು ಜಿಲ್ಲೆಗಳಲ್ಲಿ ಈಗಾಗಲೇ ಸಂಚರಿಸಿದ್ದು, ಕೊಡಗು ಜಿಲ್ಲೆಯ ನಂತರ ಹಾಸನ, ಚಿಕ್ಕಮಗಳೂರು, ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಗಳಲ್ಲಿ ಸಂಚರಿಸಲಿದೆ.

ಸ್ವಾಗತ ಹಾಗೂ ಮೆರವಣಿಗೆ ಸಂದರ್ಭದಲ್ಲಿ ತಹಶೀಲ್ದಾರ್ ಪ್ರವೀಣ್ ಕುಮಾರ್, ಕಸಾಪ ಜಿಲ್ಲಾ ಗೌರವ ಕಾರ್ಯದರ್ಶಿ ಮುನೀರ್ ಅಹ್ಮದ್, ರೇವತಿ ರಮೇಶ್, ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷೆ ಕಡ್ಲೇರ ತುಳಸಿ ಮೋಹನ್, ಸರ್ವೋದಯ ಸಮಿತಿ ಜಿಲ್ಲಾಧ್ಯಕ್ಷ ಅಂಬೆಕಲ್ಲು ಕುಶಾಲಪ್ಪ, ಜಾನಪದ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಜಿ. ಅನಂತಶಯನ, ನೆರವಂಡ ಉಮೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ, ಮಣಜೂರು ಮಂಜುನಾಥ್, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಶೇಖರ್, ಕ್ಷೇತ್ರ ಶಿಕ್ಷಣಾಧಿಕಾರಿ ದೊಡ್ಡೇಗೌಡ, ಕಸಾಪ ಸದಸ್ಯರಾದ ಚುಮ್ಮಿ ದೇವಯ್ಯ, ಜಾನ್ ಸುಂಟಿಕೊಪ್ಪ, ಬೆಪ್ಪುರನ ಬೋಪಯ್ಯ, ಸಿದ್ದರಾಜು ಬೆಳ್ಳಯ್ಯ, ಅಂಬೆಕಲ್ಲು ನವೀನ್, ಟಿ.ಎಂ.ಮುದ್ದಯ್ಯ, ಜಿ.ಆರ್.ರಾಜು ಮೆರವಣಿಗೆಯಲ್ಲಿದ್ದರು.

> ಕರ್ನಾಟಕ ರಾಜ್ಯವೆಂದು ನಾಮಕರಣವಾಗಿದೆ 50 ವರ್ಷ ಪೂರ್ಣಗೊಂಡ ಹಿನ್ನೆಲೆ ಸುವರ್ಣ ಸಂಭ್ರಮ ರಥಯಾತ್ರೆಯನ್ನು ರಾಜ್ಯದ್ಯಾಂತ ಹಮ್ಮಿಕೊಳ್ಳಲಾಗಿದೆ. ಕನ್ನಡ ನಾಡು ನುಡಿ ಕನ್ನಡ ಭಾಷೆಗೆ ಇರುವ ಇತಿಹಾಸವನ್ನು ನೆನಪಿಸಿಕೊಳ್ಳಲು ಇದೊಂದು ಸುವರ್ಣ ಅವಕಾಶವಾಗಿದೆ' ಎಂದರು. ಸುವರ್ಣ ಸಂಭ್ರಮ 50ರ ರಥ ಯಾತ್ರೆಯು ಗೋಣಿಕೊಪ್ಪ-ಪೊನ್ನಂಪೇಟೆ-ವಿರಾಜಪೇಟೆ ಮೂಲಕ ಮಡಿಕೇರಿಗೆ ಆಗಮಿಸಿದೆ. ಸೋಮವಾರಪೇಟೆ ಮತ್ತು ಕುಶಾಲನಗರಕ್ಕೆ ತೆರಳಲಿದೆ
> -ಆರ್.ಐಶ್ವರ್ಯ, ಜಿಲ್ಲಾಧಿಕಾರಿ

## ಮಿನಿ ನ್ಯೂಸ್

### ಬೈಕ್ ವ್ಹೀಲಿಂಗ್, ಯುವಕನ ಬಂಧನ

• ಉದಯವಾಹಿನಿ, ಬಾಗೇಪಲ್ಲಿ


ಉದಯವಾಹಿನಿ ಚಿತ್ರ

ಪಟ್ಟಣದ ನ್ಯಾಷನಲ್ ಕಾಲೇಜಿನ ರಸ್ತೆಯಲ್ಲಿ ಬೈಕ್ ವ್ಹೀಲಿ ಮಾಡಿದ ಯುವಕನನ್ನು ಪೊಲೀಸರು ಬಂಧಿಸಿದ್ದಾರೆ. ಪಟ್ಟಣದ ಡಾ.ಎಚ್.ಎನ್.ವೃತ್ತದಿಂದ ನ್ಯಾಷನಲ್ ಕಾಲೇಜಿಗೆ ಕಡೆಯ ಮುಖ್ಯರಸ್ತೆಯಲ್ಲಿ ಪಟ್ಟಣದ ಸಂತೋಷ್ ನಾಯಕ್ ಎಂಬ ಯುವಕ ಬೈಕ್ ವ್ಹೀಲಿ ಮಾಡಿದ್ದಾರೆ.

ಪೊಲೀಸರಿಗೆ ಖಚಿತ ಮಾಹಿತಿಯಂತೆ ಸರ್ಕಲ್ ಇನ್ಸ್‌ಪೆಕ್ಟರ್ ಪ್ರಶಾಂತ್ ವರ್ಣಿ ನೇತೃತ್ವದ ಪೊಲೀಸ್ ತಂಡ ದಾಳಿ ಮಾಡಿ ಯುವಕ ಸಂತೋಷ್ ನಾಯಕ್ ದ್ವಿಚಕ್ರ ವಾಹನ ಸಮೇತ ವಶಕ್ಕೆ ಪಡೆದಿದ್ದಾರೆ. ಬಾಗೇಪಲ್ಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

3 ದಿನಗಳ ಹಿಂದೆ ಪಟ್ಟಣದ ಹೊರವಲಯದ ರಾಷ್ಟ್ರೀಯ ಹೆದ್ದಾರಿ ರಸ್ತೆ 44ರಲ್ಲಿ ಬೈಕ್ ವ್ಹೀಲಿ ಮಾಡಿದ ಘಟನೆ ಯಲ್ಲಿ ಒಬ್ಬ ಬಾಲಕನನ್ನು ವಶಕ್ಕೆ ಪಡೆದಿದ್ದಾರೆ. ಉಳಿದ 3 ಮಂದಿ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಈ ಘಟನೆಯ ನಂತರ ಮತ್ತೊಂದು ಪ್ರಕರಣ ದಾಖಲಿಸಿದ್ದಾರೆ.

### ರೀಲ್ಸ್ ಮೂಲಕ ಕ್ಷಮೆ ಕೇಳಿಸಿದ ಪೊಲೀಸರು

• ಉದಯವಾಹಿನಿ ಚಿಕ್ಕಬಳ್ಳಾಪುರ

ತಾಲ್ಲೂಕಿನ ಆವುಲಬೆಟ್ಟದ ವ್ಯೂ ಪಾಯಿಂಟ್‌ನಲ್ಲಿ ರೀಲ್ಸ್ ಮಾಡಿದ ವ್ಯಕ್ತಿಯನ್ನು ಪೊಲೀಸರು ವಶಕ್ಕೆ ಪಡೆದು ಎಚ್ಚರಿಕೆ ನೀಡಿದ್ದಾರೆ. ಅಲ್ಲದೆ ಆತನಿಂದಲೇ ವಿಡಿಯೋ ಮಾಡಿಸಿ ಇನ್ನು ಮುಂದೆ ಯಾರೂ ಈ ರೀತಿಯಲ್ಲಿ ಹುಚ್ಚಾಟದ ಸಾಹಸಗಳನ್ನು ಮಾಡಬಾರದು ಎಂದು ಕಿವಿಮಾತು ಹೇಳಿಸಿದ್ದಾರೆ. ಅಕ್ಷಯ್ ಕುಮಾರ್ ಎಂಬಾತ ವ್ಯೂ ಪಾಯಿಂಟ್‌ನ ಅಪಾಯಕಾರಿ ಸ್ಥಳದಲ್ಲಿ ರೀಲ್ಸ್ ಮಾಡಿದ್ದ. ಇದನ್ನು ತನ್ನ ಇನ್‌ಸ್ಟಾಗ್ರಾಂನಲ್ಲಿ ಪೋಸ್ಟ್ ಮಾಡಿದ್ದ.


ಉದಯವಾಹಿನಿ ಚಿತ್ರ

ವ್ಯೂ ಪಾಯಿಂಟ್ ಸ್ಥಳದಲ್ಲಿ ಹೀಗೆ ರೀಲ್ಸ್ ಮಾಡುವವರ ಹುಚ್ಚಾಟಗಳು ಆಗಾಗ್ಗೆ ವರದಿ ಆಗುತ್ತಿರುವ ಹಿನ್ನೆಲೆಯಲ್ಲಿ ಪೊಲೀಸರು ವ್ಯೂ ಪಾಯಿಂಟ್ ಹಾದಿಯಲ್ಲಿ ತಡೆಗೋಡೆ ನಿರ್ಮಿಸಿದ್ದಾರೆ.


ಪ್ರವಾಸಿ ತಾಣಗಳಲ್ಲಿ ಹೀಗೆ ಅಪಾಯಕಾರಿಯಾದ ರೀತಿಯಲ್ಲಿ ರೀಲ್ಸ್ ಮಾಡುವುದು ಸರಿಯಲ್ಲ. ಇಂತಹ ಪ್ರಕರಣಗಳು ಕಂಡು ಬಂದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ. ಪ್ರಕರಣ ದಾಖಲಿಸಲಾಗುತ್ತದೆ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ತಿಳಿಸಿದ್ದಾರೆ.

### ಪಾತಾಳಕ್ಕಿಳಿದ ಶುಂಠಿ ಬೆಲೆ: ಬೆಳೆಗಾರ ಕಂಗಾಲು

• ಉದಯವಾಹಿನಿ ಮೈಸೂರು

ಕಳೆದೆರೆಡು ವರ್ಷ ಬಂಗಾರದ ಬೆಳೆಯಾಗಿದ್ದ ಶುಂಠಿ, ಪ್ರಸಕ್ತ ಸಾಲಿನಲ್ಲಿ ಬೆಲೆ ಪಾತಾಳಕ್ಕಿಳಿದಿದ್ದು, ಲಕ್ಷಾಂತರ ರೂ. ಬಂಡವಾಳ ಹಾಕಿದ್ದ ಬೆಳೆಗಾರರು ಕಂಗಾಲಾಗಿದ್ದಾರೆ. ಹಳೇ ಮೈಸೂರು ಭಾಗ ಸೇರಿದಂತೆ ಮಲೆನಾಡಿನಲ್ಲಿ ಹೆಚ್ಚು ಬೆಳೆಯುವ ಶುಂಠಿಗೆ ವರ್ಷದ ಆರಂಭದಲ್ಲಿ ಉತ್ತಮ ಬೆಲೆ ಇದ್ದರೂ, ನಿರೀಕ್ಷೆಗೂ ಮೀರಿದ ಬಿತ್ತನೆ ಪರಿಣಾಮ ಬೆಲೆ ಇಳಿಕೆಯಾಗಿದೆ.

ಇತ್ತ ಅತಿಯಾದ ಮಳೆಯಿಂದ ಇಳುವರಿಯೂ ಕುಂಠಿತವಾಗಿದೆ. ಅಲ್ಲದೇ ಶುಂಠಿ ಬೆಳೆಗೆ ಲಕ್ಷಾಂತರ ರೂ. ಹೂಡಿಕೆ ಮಾಡಿದ್ದ ರೈತರು ನಷ್ಟ ಅನುಭವಿಸುವಂತಾಗಿದೆ. ಐದು ತಿಂಗಳ ಹಿಂದೆಯಷ್ಟೇ 60 ಕೆ.ಜಿ. ಬ್ಯಾಗ್‌ವೊಂದಕ್ಕೆ 5ರಿಂದ 6 ಸಾವಿರ ರೂ. ಮಾರಾಟವಾಗಿದ್ದ ಶುಂಠಿ, ಪ್ರಸ್ತುತ 950ರಿಂದ 1500 ರೂ. ವರೆಗೆ ಮಾರಾಟವಾಗುತ್ತಿದೆ. ಜುಲೈನಲ್ಲಿ ಕೆ.ಜಿ. ಶುಂಠಿಗೆ 400 ರೂ. ಇದ್ದ ಬೆಲೆ, ಪ್ರಸ್ತುತ 25ರಿಂದ 30 ರೂ.ಗೆ ಇಳಿಕೆಯಾಗಿದ್ದರಿಂದ ಬೆಳೆಗಾರರಿಗೆ ಹೂಡಿಕೆ ಮಾಡಿದ್ದ ಬಂಡವಾಳವೂ ವಾಪಸ್ ಬರದಂತಹ ಪರಿಸ್ಥಿತಿ ನಿರ್ಮಾಣವಾಗಿದೆ.


ಉದಯವಾಹಿನಿ ಚಿತ್ರ

2023ರಲ್ಲಿ 60 ಕೆ.ಜಿ. ಬ್ಯಾಗ್ 8ರಿಂದ 14 ಸಾವಿರ ರೂ. ವರೆಗೆ ಹಳೇ ಶುಂಠಿ ಮಾರಾಟವಾಗಿದ್ದರೆ, 6ರಿಂದ 8 ಸಾವಿರದ ವರೆಗೆ ಹೊಸ ಶುಂಠಿ ಮಾರಾಟವಾಗಿತ್ತು.

ಶುಂಠಿ ಬೆಲೆ ದಿಢೀರ್ ಕುಸಿತದಿಂದಾಗಿ ಬಿತ್ತನೆ ಮಾಡಿದವರಿಗೆ ಹೂಡಿಕೆಯ ಬಂಡವಾಳವೂ ಇಲ್ಲದಂತಾಗಿದೆ. ದರ ಏರುವ ನಿರೀಕ್ಷೆಯಲ್ಲಿರುವ ರೈತರಿಗೆ ಮಳೆ ಆತಂಕ ಮೂಡಿಸಿದೆ.

### ಸರ್ಕಾರಿ ಜಮೀನು ಒತ್ತುವರಿ: ಸ್ಥಳ ಪರಿಶೀಲಿಸಿದ ರೂಪಕಲಾ ಶಶಿಧರ್

• ಉದಯವಾಹಿನಿ ಕೆಜಿಎಫ್

ಆಂಧ್ರಪ್ರದೇಶದ ಮೂಲದವರು ತಾಲ್ಲೂಕು ವ್ಯಾಪ್ತಿಯಲ್ಲಿ ಜಮೀನು ಒತ್ತುವರಿ ಮಾಡಿಕೊಂಡಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಶಾಸಕಿ ಎಂ. ರೂಪಕಲಾ ಶಶಿಧರ್ ಪೀಲವಾರ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನೆರೆಯ ಆಂಧ್ರಪ್ರದೇಶಕ್ಕೆ ಹೊಂದಿಕೊಂಡ ಶ್ರೀನಿವಾಸಸಂದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪೀಲವಾರ ಗ್ರಾಮದ ಸರ್ಕಾರಿ ಗೋಮಾಳ 98ರ ಸರ್ವೆ ನಂಬರ್‌ನಲ್ಲಿ 650 ಎಕರೆ ಜಮೀನು ಇದ್ದು, ಅದನ್ನು ಆಂಧ್ರಪ್ರದೇಶದವರು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿದ್ದಾರೆ ಎಂಬ ವ್ಯಾಪಕ ದೂರುಗಳು ಕೇಳಿ ಬಂದಿದ್ದವು.

ಈ ಹಿನ್ನೆಲೆಯಲ್ಲಿ ತಹಶೀಲ್ದಾರ್ ನಾಗವೇಣಿ ಮತ್ತು ಇತರ ಸಿಬ್ಬಂದಿಯೊಡನೆ ಸ್ಥಳ ಪರಿಶೀಲನೆ ನಡೆಸಲಾಗಿದೆ. 650 ಎಕರೆ ಜಮೀನು ಪೈಕಿ ಉಳುಮೆ ನಡೆಸುತ್ತಿರುವ ಅಧಿಕೃತ ಮತ್ತು ಅಧಿಕೃತ ಸ್ವಾಧೀನದಾರರ ಬಗ್ಗೆ ಮಾಹಿತಿ ಕಲೆ ಹಾಕಿ ನೀಡಬೇಕು ಎಂದು ಶಾಸಕಿ ಅಧಿಕಾರಿಗಳಿಗೆ ಸೂಚಿಸಿದರು.

ಈ ಪ್ರದೇಶದಲ್ಲಿ ಬರುವ ಜಮೀನಿನ ಪೈಕಿ 200 ಎಕರೆ ಜಮೀನು ಅರಣ್ಯ ಇಲಾಖೆ ಸುಪರ್ದಿಗೆ ಬರುತ್ತದೆ ಎಂದು ತಹಶೀಲ್ದಾರ್ ಕೆ.ನಾಗವೇಣಿ ಮಾಹಿತಿ ನೀಡಿದರು.

ಅರಣ್ಯ ಇಲಾಖೆ ಜಮೀನಿನಲ್ಲಿ ಸಾಗುವಳಿ ಮಾಡುತ್ತಿರುವ ಕೆಲ ರೈತರು ತಮ್ಮ ಜಮೀನನ್ನು ಅರಣ್ಯ ಇಲಾಖೆಯಿಂದ ಬಿಡಿಸಿ ಕೊಡುವಂತೆ ಮನವಿ ಮಾಡಿದರು.


ಉದಯವಾಹಿನಿ ಚಿತ್ರ

ಅಂತರಾಳದಿಂದ..
EDITORIAL

# ಹದಿನಾರನೇ ಹಣಕಾಸು ಆಯೋಗ
# ರಾಜ್ಯಗಳ ಬೇಡಿಕೆಗೆ ಧ್ವನಿಯಾಗಲಿ

ಕೇಂದ್ರ ಸರ್ಕಾರವು 1ನೇ ಹಣಕಾಸು ಆಯೋಗವನ್ನು ರಚಿಸಿದ ಬೆನ್ನಲ್ಲೇ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವಿನ ದಿತ್ತೀಯ ಅಧಿಕಾರಗಳು ಹಾಗೂ ಹಕ್ಕುಗಳು, ಸಂಪನ್ಮೂಲದ ಹಂಚಿಕೆ, ವಿತ್ತೀಯ ಒಕ್ಕೂಟ ವ್ಯವಸ್ಥೆ ಸೇರಿದಂತೆ ಹಲವು ವಿಷಯಗಳು ಚರ್ಚೆಯ ಮುನ್ನೆಲೆಗೆ ಬಂದಿವೆ. 2026ರ ಏಪ್ರಿಲ್‌ನಿಂದ ಐದು ವರ್ಷಗಳ ಅವಧಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಮಧ್ಯೆ ವರಮಾನದ ಹಂಚಿಕೆಯ ಮಾರ್ಗಸೂಚಿಗಳನ್ನು ಆಯೋಗವು ಅಂತಿಮಗೊಳಿಸಲಿದೆ. ಆಯೋಗವು ರಾಜ್ಯ ಸರ್ಕಾರಗಳ ಜತೆ ಈ ಸಂಬಂಧ ಚರ್ಚೆಯನ್ನೂ ಆರಂಭಿಸಿದೆ. ತೆರಿಗೆ ವರಮಾನದಲ್ಲಿ ನ್ಯಾಯಯುತ ಪಾಲು ನೀಡುವಂತೆ ಬೇಡಿಕೆ ಮಂಡಿಸಿರುವ ಕೆಲವು ರಾಜ್ಯಗಳು ಕೇಂದ್ರದ ಜತೆ ಸಂಘರ್ಷಕ್ಕೆ ಮುಂದಾಗಿರುವುದು. ಕುರಿತು ಹೊಸ ಹೊಸ ವ್ಯಾಖ್ಯಾನಗಳು ಬರುತ್ತಿರುವುದರಿಂದ ಆಯೋಗದ ಮುಂದೆ ಹಲವು ಸವಾಲುಗಳು ಇವೆ. ಕೇಂದ್ರ ರಾಜಕಾರಣವೂ ಸುಸುಳಿಕೊಂಡಿರುವುದರಿಂದ ಆಯೋಗದ ಕೆಲಸವು ತುಸು ಜಟಿಲವಾಗುವ ಸಾಧ್ಯತೆ ಇದೆ. ರಾಜಕೀಯ ಒಕ್ಕೂಟ ವ್ಯವಸ್ಥೆ ಮತ್ತು ವಿತ್ತೀಯ ಒಕ್ಕೂಟ ವ್ಯವಸ್ಥೆಯು ಒಂದರೊಳಗೆ ಮತ್ತೊಂದು ನಿಕಟವಾಗಿ ಬೆಸೆದುಕೊಂಡಿವೆ. ಹೀಗಾಗಿ ಆಯೋಗವು ಅತ್ಯಂತ ಕಠಿಣವಾದ ಮಾರ್ಗದಲ್ಲಿ ಸಾಗಬೇಕಾದ ಪರಿಸ್ಥಿತಿ ಇದೆ.16ನೇ ಹಣಕಾಸು ಆಯೋಗವು ಕರ್ನಾಟಕದಲ್ಲಿ ಇತ್ತೀಚೆಗೆ ನಡೆಸಿದ ಚರ್ಚೆಗಳನ್ನೂ ಇದೇ ದೃಷ್ಟಿಕೋನ ದಲ್ಲಿ ನೋಡಬೇಕಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಹಂಚಿಕೆಯಾಗುವ ತೆರಿಗೆ ವರಮಾನದ ನಿಧಿಗೆ ರಾಜ್ಯವು ಸಂದಾಯ ಮಾಡುತ್ತಿರುವ ಮೊತ್ತದಲ್ಲಿ ಶೇಕಡ 90ರಷ್ಟನ್ನು ರಾಜ್ಯವೇ ಪಡೆದುಕೊಳ್ಳಲು ಅವಕಾಶ ನೀಡಬೇಕು ಎಂಬ ಬೇಡಿಕೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಯೋಗಕ್ಕೆ ಸಲ್ಲಿಸಿರುವ ಮನವಿಯಲ್ಲಿ ಮಂಡಿಸಲಾಗಿದೆ. ದೇಶದ ಒಟ್ಟು ಜನಸಂಖ್ಯೆಗೆ ಹೋಲಿಸಿದರೆ ಶೇ 5ರಷ್ಟು ಜನರನ್ನು ಹೊಂದಿರುವ ಕರ್ನಾಟಕವು ಭಾರತದ ನಿವ್ವಳ ಅಂತರಿಕ ಉತ್ಪನ್ನಕ್ಕೆ ಶೇ 34ರಷ್ಟು ಕೊಡುಗೆ ನೀಡುತ್ತಿದೆ. ರಾಜ್ಯವು ಪಾವತಿಸುವ ಪ್ರತಿ ರೂಪಾಯಿ ತೆರಿಗೆಯಲ್ಲಿ 15 ಪೈಸೆಯಷ್ಟು ಮಾತ್ರ ರಾಜ್ಯಕ್ಕೆ ತೆರಿಗೆ ವರಮಾನ ಹಂಚಿಕೆ ರೂಪದಲ್ಲಿ ಬರುತ್ತಿದೆ ಎಂಬುದನ್ನು ಆಧರಿಸಿ ಮುಖ್ಯಮಂತ್ರಿಯವರು ತೆರಿಗೆ ವರಮಾನದ ನ್ಯಾಯಯುತ ಹಂಚಿಕೆಗೆ ಪಟ್ಟು ಹಿಡಿದಿದ್ದಾರೆ. ತೆರಿಗೆ ಪಾಲಿನ ಹಂಚಿಕೆಯ ಸೂತ್ರದಲ್ಲಿನ ಬದಲಾವಣೆಯಿಂದಾಗಿ 'ಹಂಚಿಕೆಯಾಗಬಹುದಾದ ತೆರಿಗೆ ನಿಧಿಯಿಂದ ರಾಜ್ಯಕ್ಕೆ ಬರುತ್ತಿರುವ ಪಾಲು ನಿರಂತರವಾಗಿ ಇಳಿಕೆಯಾಗುತ್ತಿದೆ ಮತ್ತು ಹೆಚ್ಚಿನ ಮೊತ್ತವು ಬೇರೆ ರಾಜ್ಯಗಳಿಗೆ ಹೋಗುತ್ತಿದೆ ಎಂಬುದನ್ನು ಅಂಕಿಅಂಶಗಳು ಹೇಳುತ್ತವೆ. ಬೆಂಗಳೂರು ಮತ್ತು ಕಲ್ಯಾಣ ಕರ್ನಾಟಕದ ಜಿಲ್ಲೆಗಳ ಅಭಿವೃದ್ಧಿಗೆ ವಿಶೇಷ ಅನುದಾನ ಹಾಗೂ ಪಶ್ಚಿಮ ಘಟ್ಟಗಳಲ್ಲಿ ನೈಸರ್ಗಿಕ ವಿಕೋಪ ತಡೆಗೆ ನಿರ್ವಹಣಾ ಕೆಲಸಗಳನ್ನು ಕೈಗೊಳ್ಳಲು ವಿಶೇಷ ಅನುದಾನ ಒದಗಿಸುವಂತೆ ರಾಜ್ಯ ಸರ್ಕಾರವು 14ನೇ ಹಣಕಾಸು ಆಯೋಗವನ್ನು ಕೋರಿದೆ ಬೆಂಗಳೂರಿನಂತಹ ದೊಡ್ಡ ನಗರಗಳನ್ನು ಹೊರಗಿಟ್ಟು ರಾಜ್ಯಗಳಲ್ಲಿನ ತಲಾ ಆದಾಯವನ್ನು ಲೆಕ್ಕ ಹಾಕುವಂತೆಯೂ ಮುಖ್ಯಮಂತ್ರಿ ಆಗ್ರಹಿಸಿದ್ದಾರೆ. ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಉತ್ತಮ ಸಾಧನೆ ತೋರುತ್ತಿರುವುದಕ್ಕಾಗಿಯೇ ತೆರಿಗೆ ಪಾಲಿನ ಹಂಚಿಕೆಯಲ್ಲಿ ತಮ್ಮನ್ನು ಶಿಕ್ಷಿಸಲಾಗುತ್ತಿದೆ ಎಂಬ ಭಾವನೆ ದಕ್ಷಿಣದ ರಾಜ್ಯಗಳಲ್ಲಿದೆ. ಈ ಕಾರಣದಿಂದಾಗಿಯೇ ದಕ್ಷಿಣದ ಎಲ್ಲಾ ರಾಜ್ಯಗಳೂ ಏಕರೂಪದ ಬೇಡಿಕೆಗಳನ್ನು ಹೊಂದಿವೆ. ಹೆಚ್ಚು ಅಭಿವೃದ್ಧಿ ಹೊಂದಿರುವ ರಾಜ್ಯಗಳು ಅಭಿವೃದ್ಧಿಯಲ್ಲಿ ಹಿಂದುಳಿದಿರುವ ರಾಜ್ಯಗಳಿಗೆ ನೆರವಾಗಬೇಕು ಎಂಬ 'ಸಮಾನತೆ'ಯ ಸೂತ್ರವನ್ನು ತೆರಿಗೆ ಪಾಲಿನ ಹಂಚಿಕೆಯಲ್ಲಿ ಅನುಸರಿಸಲಾಗುತ್ತಿದೆ. ಉತ್ತರ ಮತ್ತು ಪೂರ್ವ ಭಾರತದ ರಾಜ್ಯಗಳ ಕಳಪೆ ಸಾಧನೆಯ ಕಾರಣಕ್ಕೆ ತಮ್ಮ ತೆರಿಗೆ ಪಾಲು ಕಡಿತಗೊಳ್ಳುವುದು ಸರಿಯಲ್ಲ ಎಂಬ ವಾದವನ್ನು ದಕ್ಷಿಣದ ರಾಜ್ಯಗಳು ಮಂದಿಸುತ್ತಿವೆ. ಈ ವಿಷಯದಲ್ಲಿ ಸ್ಪಷ್ಟ ನಿಲುವು ಪ್ರದರ್ಶಿಸಿರುವ ಸಿದ್ದರಾಮಯ್ಯ, 'ನಮ್ಮ ರಾಜ್ಯಗಳ ಜನರ ಮೇಲೆ ಹೊರೆ ಹೊರಿಸಿ ಬೇರೆ ರಾಜ್ಯಗಳಿಗೆ ನೆರವು ನೀಡಲಾಗದು' ಎಂದಿದ್ದಾರೆ.

**ಕೇಂದ್ರ ಸರ್ಕಾರವು ತಮ್ಮನ್ನು ತಾರತಮ್ಯದಿಂದ ನೋಡುತ್ತಿದೆ ಎಂಬ ಭಾವನೆ ದಕ್ಷಿಣದ ರಾಜ್ಯಗಳಲ್ಲಿದ್ದು ಪಕ್ಷಪಾತದ ಧೋರಣೆಯ ವಿರುದ್ಧ ರಾಜಕೀಯ ಆಕ್ರೋಶವೂ ಬಲವಾಗುತ್ತಿದೆ. ಸಂಪನ್ಮೂಲ ಹಂಚಿಕೆಯ ವಿಚಾರದಲ್ಲಿ ಸಮತೋಲನದಿಂದ ಕೂಡಿದ ಮತ್ತು ಪಾರದರ್ಶಕವಾದ ಸ್ಪಂದನವನ್ನು ಆಯೋಗದಿಂದ ಬಯಸಿರುವುದಾಗಿ ಕರ್ನಾಟಕ ಹೇಳಿದೆ. ಭಿನ್ನಾಭಿಪ್ರಾಯಗಳಿಗೆ ಅವಕಾಶ ಕಲ್ಪಿಸುವಂತಹ ನಿರ್ಧಾರಗಳನ್ನು ತಾನು ಕೈಗೊಳ್ಳುವುದಿಲ್ಲ ಎಂದು ಆಯೋಗ ಹೇಳಿದೆ.**

# ಹಾಡೋಣ... ಹಾರೋಣ ಬಾ..
# ಆದರ್ಶ ಬಿತ್ತಿ ಹೋದ ಬುಲ್ಬುಲ್ ಹಕ್ಕಿಗಳು..!



ವೀರಣ್ಣ ಕಲಕೇರಿ
• ಉದಯವಾಹಿನಿ, ವಿಶೇಷ

ನೆರೆಹೊರೆಯವರಾಗಿಯೂ ಹೊರೆಯಾಗದಂತೆ ಬದುಕಿನ ಹದವರಿತು ಮುದದಿಂದ ಆದರ್ಶವಾಗಿ ಬದುಕಿ, ಆಗಾಗ ಮನಸು ಹಗುರಗೊಳಿಸುತ್ತಿದ್ದ ಆ ನವ ಜೋಡಿಗಳು ಬರುವಾಗ ದಂಪತಿಗಳು ಇಬ್ಬರೆ ಇದ್ದರು. ಹೋಗುವಾಗ ಇಬ್ಬರು ಮಕ್ಕಳು ಜತೆಗೋಡಿ ಹೋದರು. ಯಾರಿಂದಲೂ ಯಾವ ನಿರೀಕ್ಷೆಯಿಲ್ಲದೆ ತಮ್ಮಷ್ಟಕ್ಕೆ ತಾವು ಸ್ವತಂತ್ರ ಸ್ವಚ್ಛಂದವಾಗಿ ಬದುಕಿ, ಬದುಕಿನ ಆದರ್ಶ ಬಿತ್ತಿ ಹೋದ ಆ ಬುಲ್ಬುಲ್ ಹಕ್ಕಿಗಳು.

ನಮ್ಮ ಮನೆಯ ವರಾಂಡವೆ ಹಾಗಿದೆ. ಅದು ಮನೆಯೊಳಗಿನ ಚಿಕ್ಕ ಓನ್ ಪ್ಲೇಸ್. ಇಷ್ಟರಲ್ಲೆ ಒಂದು ಮಿನಿ ವನ ನಮ್ಮದು. ಈ ವನದ ಮದ್ಯದಲ್ಲಿಯೇ ನಮ್ಮ ನಿತ್ಯ ಓಡಾಟ. ಬ್ರಹ್ಮ ಕಣಗಲ, ಶಂಕಪುಷ್ಪ, ದುಂಡು ಮಲ್ಲಿಗೆ, ಮಲ್ಲಿಗೆ, ದಾಸವಾಳ, ಕಸ್ತೂರಿ, ಸಾಲದ್ದಕ್ಕೆ ನಾಲ್ಕಾರು ಕುಂಡದೊಳಗಿನ ಸಸಿ. ಹೀಗೆ ಸುಮಾರು ಹತ್ತಾರು ತರಹದ ಗಿಡಬಳ್ಳಿಗಳು ಇಷ್ಟರಲ್ಲಿಯೇ ದಟ್ಟವಾಗಿ ಬೆಳೆದು ನಿಂತಿವೆ. ಇವೆಲ್ಲವೂ ನಮಗೆ ಹೊರಗೆ ಹೋಗುವಾಗು ಬೀಳ್ಕೊಟ್ಟಂತೆ, ತಿರುಗಿ ಮನೆಗೆ ಬಂದಾಗ ಸ್ವಾಗತಿಸಿದಂತ ಅನುಭೂತಿ ನಮ್ಮದು. ಇಷ್ಟು ವಿಧಗಳು ಇವೆ ಎಂಬುದು ಇದೀಗ ಬರೆಯುತ್ತಿರುವಾಗ ಇವತ್ತೆ ನನ್ನ ಗಮನಕ್ಕೂ ಬಂದದ್ದು. ಇದೆ ಕಾರಣಕ್ಕಾಗಿಯೆ ಯಾವಾಗಲೂ ಅಪರೂಪದ ಅತೀಥಿಗಳ ಆಗಮನ ನಮ್ಮ ಮನೆಗೆ ಆಗಾಗ ಒಂದೆರಡು ತಿಂಗಳು ಅಂತರದಲ್ಲಿ ಸಹಜ ಇರುತ್ತದೆ, ಹೀಗೆ ಬಂದಂತಹ ಅತೀಥಿಗಳಿಗೆ ನಾವೇನು ವಿಶೇಷ ವ್ಯವಸ್ಥೆ ಕಲ್ಪಿಸುವುದಿಲ್ಲವೆಂದರೂ, ಅವರೆ ಸೂಕ್ತ ಸುರಕ್ಷಿತವೆಂದರಿತೇ ಬರುವರು.

ಕಲ್ಲುಗುಬ್ಬಚ್ಚಿಗಳು, ಪರ್ಪಲ್ ಹಕ್ಕಿ, ಕರಿ ಗುಬ್ಬಚ್ಚಿ, ಮೈನಾ ಹೀಗೆ ಹಲವು ಬಗೆಯ ಹಕ್ಕಿಗಳು ಜೊತೆ ಜೊತೆಯಾಗಿ ಬಂದು ತಿಂಗಳೆರಡು ತಿಂಗಳು ಠಿಕಾಣಿ ಹಾಕುವುದು ಸರ್ವೆಸಾಮಾನ್ಯ. ಇತ್ತೀಚೆಗೆ ಹೊಸದಾಗಿ ಬಂದ ಜೊಡಿ ಎಂದರೆ? ಅದು ಬುಲ್ಬುಲ್ (ಪಿಕಳಾರ) ಹಕ್ಕಿಗಳು, ಪರ್ಪಲ್ ಹಕ್ಕಿಗಳು ಹೋದವು ಎನ್ನುವಷ್ಟರಲ್ಲಿ, ಇವುಗಳ ಆಗಮನ.



**ಮೊಟ್ಟೆ ಇಟ್ಟು ಕಾವು ಕೊಡುವ ಸಂದರ್ಭ**

ಸುಮಾರು ಒಂದುವರೆ ಎರಡು ತಿಂಗಳ ಹಿಂದೆ ಬಂದವು ಎನ್ನಿ, ಯಾವಾಗ ಎಂಟ್ರಿ ಕೊಟ್ಟವೋ ಆವಾಗನಿಂದ ಆ ಕಲರವ, ಇಂಚರ ನಿತ್ಯ ಕೇಳುವ ಸಂಭ್ರಮ ನಮಗಾದರೆ, ಅವುಗಳಿಗೂ ಕೂಡ ಸಂಭ್ರಮ, ಆರಂಭಿಕ ಬದುಕು ಹೊಸ ಸಂಸಾರ ಬೇರೆ, ಆಶ್ರಯಕ್ಕೆ ಸುಭದ್ರ ಮನೆ ಕಟ್ಟಿಕೊಳ್ಳುವ ಸಂಭ್ರಮ.

ಮನೆಯಂಗಳದ ದಾಸವಾಳದ ಬಳ್ಳಿಯೊಳಗೆ ಸೂಕ್ತ ಸ್ಥಳದ ಆಯ್ಕೆ, ಸೂರ್ಯೋದಯಕ್ಕೆ ರವಿಕಿರಣ ಯಾವುದೆ ಅಡೆತಡೆ ಇಲ್ಲದೆ ಅವುಗಳ ಮನೆಯಂಗಳಕ್ಕೆ ಹಾಯಬೇಕು. ಮಳೆ ಬಂದರೂ ಒಂದನಿ ಬೀಳಬಾರದು ಹಿಗೆ ಎಲ್ಲಾ ರೀತಿಯ ಭವಿಶ್ಯದ ಆಲೋಚನೆಯೊಂದಿಗೆ ಹಕ್ಕಿಗಳೆರಡು ನೋಡ ನೋಡುತ್ತಲೆ ವಾರ್ಹತ್ತು ದಿನಗಳಲ್ಲಿ ಗೂಡು ಕಟ್ಟಿಯೇ ಬಿಟ್ಟವು. ನಮಗಂತು ಹಕ್ಕಿಗಳು ಯಾವ ಕಡ್ಡಿ ತಂದವು, ಕೊಕ್ಕಿನಲ್ಲಿ ತಂದ ವಸ್ತು ಯಾವ ತರಹದು ಗೂಡು ಯಾವಾಗ ಮುಗಿಯುತ್ತೆ ದಿನದಿಂದ ದಿನಕ್ಕೆ ಹಕ್ಕಿಗಳು ಗೂಡು ಕಟ್ಟಲು ಆರಂಭಿಸಿ ಹೊರಗಿನಿಂದ ಕಸ ಕಡ್ಡಿ ತಂದು ಗೂಡು ಕಟ್ಟವುದನ್ನು ನೋಡುವುದೆ ನಮಗೆಲ್ಲಾ ಅಚ್ಚರಿ ಕುತುಹಲ ಜತೆಗೆ ವಿಸ್ಮಯ ಎಲ್ಲವೂ ಒಟ್ಟುಗೂಡಿದಂತಿತ್ತು. ಅಂತೂ ಗೂಡು ಕಟ್ಟಿಯೂ ಆಯಿತು, ಮೊಟ್ಟೆ ಇಟ್ಟು ಕಾವು ಕೊಡುವ ಸಂದರ್ಭ, ಅಬ್ಬಾ ಅದೇನು ಬಾಂಧವ್ಯ ಎರಡೂ ಹಕ್ಕಿಗಳದ್ದು ಅದೂ ಕೂಡ ಪಾಠವೆ ಮನುಷ್ಯನಿಗೆ. ಆರಂಭದಲ್ಲಿ ಗೂಡಿನ ಪಕ್ಕದಲ್ಲಿ ಹಾದುಹೊಗುವಾಗ ಪುರ್ರನೆ ಹಾರಿ ನಮ್ಮನ್ನೆ ಹೆದರಿಸುವಂತೆ ತೋರುತ್ತಾ ಮತ್ತೆ ಬಂದು ಕೂರುತ್ತಿದ್ದ ಹಕ್ಕಿ, ಬರಬರುತ್ತಾ ಪರಿಚಯ ವಾಯ್ತಲ್ಲ ಹಾಗಾಗಿ ನಮ್ಮಿಂದ ಏನೂ ಅಪಾಯವಿಲ್ಲವೆಂದರಿತು ಗೂಡು ಬಿಟ್ಟು ಹಾರಿಹೋಗುವದನ್ನು ನಿಲ್ಲಿಸಿತು.

ಗೂಡಿನ ಮುಂದೆ ಜಾಸ್ತಿ ಇಲ್ಲವೆಂದರೂ ತುಸು ಹೊತ್ತು ನಿಂತು ನೋಡುವಷ್ಟು ಅವಕಾಶನೂ ಸಿಕ್ಕಿತು ಎನ್ನಿ ಆ ಮಟ್ಟಕ್ಕೆ ಪರಿಚಯ ವಾಯಿತು. ಹಕ್ಕಿಗಳು ಮನೆಯಂಗಳಕ್ಕೆ ಬಂದು ಒಂದು ವಾರ ಟಿಕಾಣಿ ನಿರ್ಮಾಣ, ನಂತರ ಮೊಟ್ಟೆ ಇಟ್ಟು ಹೆಚ್ಚುಕಮ್ಮಿ ವಾರಾಂತರದೋಳು ಮರಿಗಳು ಹೊರಬಂದು, ಮುಂದೆ ನಾಲ್ಕಾರು ದಿನಗಳಲ್ಲಿ ರೆಕ್ಕೆ ಬಿಚ್ಚಿದವು ಬಲಿತ ಮರಿಗಳು ಗೂಡಿನಿಂದ ಇಣಕಿ ನೋಡುವುದು ಇವೆಲ್ಲವೂ ಸೌರಭವೆ ನಮಗೆಲ್ಲ. ಆರಂಭದ ಮೌಂಸದ ಮುದ್ದೆಯಂತಿದ ಮರಿಗಳಿಗೆ ತಾಯಿ ಹಕ್ಕಿ ಅದೇ ಮಾಂಸದ ಮುದ್ದೆಯಂತ ಕೀಟಗಳು ಅಂದರೆ ಮಳೆ ಹುಳು, ಕಂಬಳಿ ಹುಳುಗಳಂತ ಮೆತ್ತನೆ ಅಂಗರಚನೆ ಕೀಟಗಳನ್ನು ತಿನುಸುವುದು ಬಲಿತ ನಂತರ ಮಿಡತೆಯಂತ ಕೀಟಗಳು, ಅವುಗಳ ದೇಹದ ಬಿಡಿ ಬಾಗಗಳನ್ನು ತಂದು ಮರಿಗಳ ಬಾಯಿಗೆ ಇಡುವುದು. ಇದೆಲ್ಲವನ್ನು ಆಗಾಗ ನಾವೂ ದೂರ ಕೂತು ನೋಡುವುದು ಹೀಗೆಯೇ ಎಲ್ಲವೂ ಒಂದ್ಹದಿನೈದು ದಿನ ಏನೋ ಒಂದು ರೀತಿಯ ಜಗ ಮರೆತು ಮನಸು ಮುದಗೊಂಡು ಅವುಗಳ ಬದುಕಿನ ಮಧುರತೆಯಲ್ಲಿ ತೇಲುತ್ತಿರುವಾಗ. ಹಕ್ಕಿಗಳು ಮನೆ ಕಟ್ಟಿದವು ಮನೆಯಲ್ಲಿ ಹತ್ತಾರು ದಿನ ವಾಸವೂ ಮಾಡಿ, ಮಕ್ಕಳೂ ಮಾಡಿದವು. ಮಕ್ಕಳ ಪೋಷಣೆಯೂ ಆಯಿತು, ನಮ್ಮಂತೆ ಮನೆಯಲ್ಲೆ ಊಟ ನಿದ್ದೆ ಎಲ್ಲವೂ ಆಯಿತು. ಮನೆಯಲ್ಲಿ ತಂದೆ ತಾಯಿ ಮಕ್ಕಳು ಪ್ರೀತಿ ವಾತ್ಸಲ್ಯಕ್ಕೇನು ಕೊರತೆಯಿರಲಿಲ್ಲ. ವಾತ್ಸಲ್ಯ ಪ್ರೀತಿ ತುಂಬಿ ತುಳುಕುತ್ತಿತ್ತು.

ನೋಡಬೇಕು ಆ ಎರಡ್ಹಕ್ಕಿಗಳು ಮರಿಗಳಿಗೆ ಆಹಾರ ತಿನಿಸಿದ ನಂತರ ಗೂಡಿನಲ್ಲಿ ಕಳೆಯುವ ಸಂತಸದ ಕ್ಷಣ, ಮರಿಹಕ್ಕಿಗಳನ್ನು ಮುದ್ದಿಸುತ್ತಾ ಜೋಡಿ ಹಕ್ಕಿಗಳ ಸಂಭಾಷಣೆ, ಮತ್ತೆ ಎರಡು ಹಕ್ಕಿಗಳು ಮರಿ ಹಕ್ಕಿಗಳಿಗೆ ಏನೋ ಕಿವಿಮಾತು ಹೇಳಿದಂತೆ, ಮತ್ತೆ ಒಂದಕ್ಕೊಂದು ಮಾತನಾಡಕೊಂಡು ಆಹಾರ ಅರಸಿ ಪುರ್ರೆಂದು ಹಾರಿ ಬೆನ್ನಿಂದೆ ಒಂದೆರಡು ನಿಮಿಷದಲ್ಲಿ ಕೊಕ್ಕಿನಲ್ಲಿ ಕೀಟವಿಡಿದು ಚೀಂವ್ ಚೀಂವ್ ಶಬ್ದ ಮಾಡುತ್ತಾ ನಿಶ್ಯಬ್ದದೋಳು ಮತ್ತೆ ಕಲರವ ಮತ್ತೆ ಅದೇ ಆನಂದ ಅದೇ ಖುಷಿ. ಅವುಗಳದ್ದು ಸಂಗ್ರಹ ಶೂನ್ಯ ಮನೆ. ಹಾಗಾಗಿಯೇ ಮನೆ ಬಿಟ್ಟು ಹೊರಡುವಾಗ ಅವರಲ್ಲಿ ಯಾವುದೆ ದುಃಖ, ವ್ಯಥೆ ಕಾಣಲೇ ಇಲ್ಲ. ಏಕೆಂದರೆ ಹಕ್ಕಿಗಳು ಮನುಷ್ಯನಂತೆ ಮನಸಿನೊಳಗೆ ಮನೆ ಕಟ್ಟಲಿಲ್ಲ.

ಮನಸು ಬಿಟ್ಟು ಹೊರಗೆ ಕಟ್ಟಿದವು. ಅದಕ್ಕಾಗಿಯೇ ಅವು ಮನೆ ಬಿಟ್ಟು ಹೋಗುವಾಗ ಮನೆಯ ಮೇಲಿನ ಮೋಹ ಚೂರೂ ತೋರಲಿಲ್ಲ. ಹಕ್ಕಿಗಳಿಗೆ ಗೊತ್ತು, ಇದು ಖಾಲಿ ಮನೆಯಂತ, ಚಿಕ್ಕ ಖಾಲಿ ಮನೆಯಲ್ಲಿ ಕಾಲ ಕಳೆಯುವುದಕ್ಕಿಂತ ಜಗದ ಮನೆಯಂಗಳದಲ್ಲಿಯೆ ಸ್ವಚ್ಛಂದವಾಗಿರೋಣ ಹಾಡೋಣ ಹಾರೋಣವೆಂದು ಎಲ್ಲವೂ ನಮ್ಮದೇ ಎಂಬ ಸಮಷ್ಟಿ ಭಾವದೊಂದಿಗೆ ಮಕ್ಕಳಿಗೂ ಅದೇ ಅಭಿನ್ನ ಸಂಸ್ಕಾರ ಬಿತ್ತಿ ಅಣಿಗೊಳಿಸಿ ದಿಗಂತದತ್ತ ನಡೆದವು.. ಹಾರಿದವು, ಹಾರಿದವು.. ಹಾಡುತ್ತ ಹಾರಿದವು. ಆ ಪಿಕಳಾರಗಳು ಮತ್ತೆ ಬರುತ್ತವೆ ಎಂಬ ನಂಬಿಕೆಯಲ್ಲಿ ನಾವೀಗ.

# ರಸ್ತೆ ಗುಂಡಿಗಳಿಗೆ ತ್ವರಿತಗತಿಯಲ್ಲಿ ಮುಕ್ತಿ

• ಉದಯವಾಹಿನಿ ಬೆಂಗಳೂರು

ದಕ್ಷಿಣ ವಲಯ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಗುರುತಿಸಿ, ಅವುಗಳಿಗೆ ತ್ವರಿತಗತಿಯಲ್ಲಿ ಮುಕ್ತಿ ನೀಡಲಾಗುತ್ತಿದೆ ಎಂದು ವಲಯ ಆಯುಕ್ತರಾದ ವಿನೋತ್ ಪ್ರಿಯಾ ರವರು ತಿಳಿಸಿದರು. ನಗರದ ಬಿಟಿಎಂ ಲೇಔಟ್ 2ನೇ ಹಂತದ ಬಳಿ ರಸ್ತೆ ಗುಂಡಿಗಳನ್ನು ಪರಿಶೀಲನೆ ಮಾಡಿದ ಬಳಿಕ ಮಾತನಾಡಿದ ಅವರು, ದಕ್ಷಿಣ ವಲಯ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳಿಗೆ ಸಂಬಂಧಿಸಿದಂತೆ ಆಯಾ ವಿಭಾಗದ ಕಾರ್ಯಪಾಲಕ ಅಭಿಯಂತತರಿಗೆ ಸಂಪೂರ್ಣ ಜವಾಬ್ದಾರಿ ನೀಡಿ ತಮ್ಮ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ಶೀಘ್ರಗತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲು ಸೂಚನೆ ನೀಡಲಾಗಿದೆ.

ದಕ್ಷಿಣ ವಲಯ ವ್ಯಾಪ್ತಿಯಲ್ಲಿ ನಿರಂತರವಾಗಿ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ನಡೆಯುತ್ತಿದ್ದು, ದಕ್ಷಿಣ ವಲಯ ವ್ಯಾಪ್ತಿಯಲ್ಲಿ ಬರುವ ಪ್ರಮುಖ ರಸ್ತೆ ಹಾಗೂ ವಾರ್ಡ್ ರಸ್ತೆಗಳಲ್ಲಿರುವ ರಸ್ತೆಗುಂಡಿಗಳನ್ನು ಗುರುತಿಸಿ ಮುಚ್ಚುವ ಕೆಲಸ ಮಾಡಲಾಗುತ್ತಿದೆ ಎಂದರು.



**ದಕ್ಷಿಣ ವಲಯ ಆಯುಕ್ತೆಯಾದ ವಿನೋತ್ ಪ್ರಿಯಾ**

ಉದಯವಾಹಿನಿ ಚಿತ್ರ

**ಕೆಲಸ ನಿರ್ವಹಣೆಗಾಗಿ ಇಶ್ಯೂ ತಂತ್ರಾಂಶ:** ದಕ್ಷಿಣ ವಲಯ ವ್ಯಾಪ್ತಿಯಲ್ಲಿ ರಾಜಕಾಲುವೆಯಲ್ಲಿ ಹೂಳೆತ್ತುವ, ಕಟ್ಟಡ ಭಗ್ನಾವಶೇಷಗಳ ತೆರವು, ಮುರಿದಿರುವ ಸ್ಲ್ಯಾಬ್‌ಗಳ ತೆರವು, ಕಸ ಸುರಿಯುವ ಸ್ಥಳ, ನೀರು ನಿಲ್ಲುವ ಸ್ಥಳ, ರಸ್ತೆ ಗುಂಡಿ ಸೇರಿದಂತೆ ಇನ್ನಿತರೆ ಕೆಲಸ-ಕಾರ್ಯಗಳ ಬಗ್ಗೆ ಗಮನಹರಿಸುವ ನಿಟ್ಟಿನಲ್ಲಿ ಪ್ರತ್ಯೇಕವಾಗಿ ಇಶ್ಯೂ ತಂತ್ರಾಂಶ (ISSUE App) ಸಿದ್ದಪಡಿಸಿಕೊಂಡಿದ್ದು, ಅದರ ಮೂಲಕ ಮೇಲ್ವಿಚಾರಣೆ ಮಾಡಲಾಗುತ್ತಿದೆ.

**ತಂತ್ರಾಂಶದಲ್ಲಿ ಬರುವ ದೂರುಗಳಿಗೆ ಹೆಚ್ಚು ಆದ್ಯತೆ:** ದಕ್ಷಿಣ ವಲಯದಲ್ಲಿ ರಸ್ತೆ ಗುಂಡಿ ಗಮನ ತಂತ್ರಾಶ, ಇಶ್ಯೂ ತಂತ್ರಾಂಶ ಹಾಗೂ ಸಹಾಯ 2.0 ತಂತ್ರಾಂಶದಲ್ಲಿ ಬರುವ ದೂರುಗಳಿಗೆ ಹೆಚ್ಚು ಆದ್ಯತೆ ನೀಡಿ ರಸ್ತೆ ಗುಂಡಿಗಳನ್ನು ಮುಚ್ಚಲಾಗುತ್ತಿದೆ. ರಸ್ತೆ ಗುಂಡಿ ಗಮನ ತಂತ್ರಾಂಶದಲ್ಲಿ ಏಪ್ರಿಲ್ 2024 ರಿಂದ 438 ದೂರುಗಳು ಬಂದಿದ್ದು, ಈಗಾಗಲೇ 379 ಗುಂಡಿಗಳನ್ನು ಮುಚ್ಚಲಾಗಿದೆ. ಉಳಿದ 59 ಗುಂಡಿಗಳನ್ನು ಕೂಡಾ ತ್ವರಿತಗತಿಯಲ್ಲಿ ಮುಚ್ಚಲಾಗುವುದು. ಇನ್ನು ಇಶ್ಯೂ ತಂತ್ರಾಂಶದಲ್ಲಿ 750 ದೂರುಗಳ ಪೈಕಿ 599 ದೂರುಗಳನ್ನು ಬಗೆಹರಿಸಲಾಗಿದ್ದು, 151 ಗುಂಡಿಗಳನ್ನು ಮುಚ್ಚಬೇಕಿದೆ. ಸಹಾಯ 2.0 ಬಂದಿರುವ ಎಲ್ಲಾ ದೂರುಗಳನ್ನು ಇತ್ಯರ್ಥಪಡಿಸಲಾಗಿದೆ. ನಾಗರೀಕರಿಂದ ಬರುವ ದೂರುಗಳು ಮಾತ್ರವಲ್ಲದೆ ಇಂಜಿಯರ್‌ಗಳು ಕೂಡಾ ರಸ್ತೆಗುಂಡಿಗಳನ್ನು ಗುರುತಿಸಿ ಮುಚ್ಚುವ ಕೆಲಸ ಮಾಡಲಾಗುತ್ತಿದೆ.

**75.30 ಕಿ.ಮೀ ಉದ್ದರ ರಸ್ತೆಗೆ ಡಾಂಬರೀಕರಣ:** ದಕ್ಷಿಣ ವಲಯ ವ್ಯಾಪ್ತಿಯಲ್ಲಿ ಪ್ರಮುಖ ರಸ್ತೆ ಹಾಗೂ ವಾರ್ಡ್ ರಸ್ತೆಗಳು ಸೇರಿದಂತೆ ಒಟ್ಟು 1746 ಕಿ.ಮೀ ಉದ್ದದ ರಸ್ತೆಯಿದ್ದು, ಸಂಪೂರ್ಣ ಹಾಳಾಗಿರುವ ರಸ್ತೆಗಳನ್ನು ಡಾಂಬರೀಕರಣ ಮಾಡಲು ಕೈಗೆತ್ತಿಕೊಳ್ಳಲಾಗುತ್ತಿದೆ. ಈ ನಿಟ್ಟಿನಲ್ಲಿ 75.30 ಕಿ.ಮೀ ಉದ್ದದ ರಸ್ತೆಯಲ್ಲಿ ಡಾಂಬರೀಕರಣ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

### ದಕ್ಷಿಣ ವಲಯದ ಪ್ರಮುಖ ಅಂಶಗಳು

- ವಿಧಾನಸಭಾ ಕ್ಷೇತ್ರಗಳ ಸಂಖ್ಯೆ: 06
- ವಾರ್ಡ್ ಗಳ ಸಂಖ್ಯೆ: 44
- ವಾರ್ಡ್ ರಸ್ತೆಗಳ ಸಂಖ್ಯೆ: 10768
- ವಾರ್ಡ್ ರಸ್ತೆಗಳ ಉದ್ದ: 1528.70 ಕಿ.ಮೀ
- ಪ್ರಮುಖ ರಸ್ತೆಗಳ ಸಂಖ್ಯೆ: 87
- ಪ್ರಮುಖ ರಸ್ತೆಗಳ ಉದ್ದ: 218 ಕಿ.ಮೀ
- ದಕ್ಷಿಣ ವಲಯ ವ್ಯಾಪ್ತಿಯ ರಸ್ತೆಗಳ ಒಟ್ಟು ಉದ್ದ: 1746.70 ಕಿ.ಮೀ

# ಬೆಂಗಳೂರಿನಲ್ಲಿ ನಾಗಾಲ್ಯಾಂಡ್‌ನ ಸಂಗೀತ ಸಂಭ್ರಮ

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ವಿಶ್ವದ ಏಕೈಕ ಬಹು-ಪ್ರಕಾರದ ಪಿಯಾನೋ ಫೆಸ್ಟಿವಲ್ ಬ್ರಿಲಾಂಟೆಯ 5ನೇ ಆವೃತ್ತಿ ಬೆಂಗಳೂರಿನಲ್ಲಿ ಆಯೋಜನೆಗೊಂಡಿದ್ದು, ಈ ಪ್ರತಿಷ್ಠಿತ ಸಂಗೀತ ಕಾರ್ಯಕ್ರಮವು ಸೆಪ್ಟೆಂಬರ್ 28 ಮತ್ತು 29ರಂದು ಪ್ರೆಸ್ಟೀಜ್ ಶ್ರೀಹರಿ ಖೋಡೆ ಸೆಂಟರ್ ಫಾರ್ ಪರ್ಫಾರ್ಮಿಂಗ್ ಆರ್ಟ್ಸ್‌ನಲ್ಲಿ ನಡೆಯಲಿದೆ.

ವಿಶ್ವದ ಏಕೈಕ ಬಹು-ಪ್ರಕಾರದ ಪಿಯಾನೋ ಫೆಸ್ಟಿವಲ್ ಎಂದೇ ಪ್ರಸಿದ್ಧಿ ಹೊಂದಿರುವ ನಾಗಾಲ್ಯಾಂಡ್ ಮೂಲದ ಬ್ರಿಲಾಂಟೆ ಫೆಸ್ಟಿವಲ್ ಬೆಂಗಳೂರಿನಲ್ಲಿ ಆಯೋಜನೆಗೊಳ್ಳುವ ಮೂಲಕ ದಕ್ಷಿಣ ಭಾರತದಲ್ಲಿ ಮೊದಲ ಬಾರಿಗೆ ಆಯೋಜನೆಗೊಳ್ಳುತ್ತಿದೆ. ನಾಗಾಲ್ಯಾಂಡ್‌ನ ಕೊಹಿಮಾ ಎಂಬ ಪ್ರದೇಶದಲ್ಲಿ ಹುಟ್ಟಿಕೊಂಡ ಬ್ರಿಲಾಂಟೆ ಫೆಸ್ಟಿವಲ್ ಈಗ ರಾಷ್ಟ್ರವ್ಯಾಪಿ ಸಂಗೀತ ಚಳುವಳಿಯಾಗಿ ರೂಪುಗೊಂಡಿದೆ. ಈ ಕಾರ್ಯಕ್ರಮವು ಜನ ಸಮುದಾಯದಲ್ಲಿನ ಸಂಗೀತ ಅಭಿವ್ಯಕ್ತಿಯ ಶ್ರೀಮಂತಿಕೆಯನ್ನು ಸಾರುವ ಉದ್ದೇಶ ಹೊಂದಿದೆ. ಕೊಡೈಕೆನಾಲ್ ಇಂಟರ್‌ನ್ಯಾಷನಲ್ ಸ್ಕೂಲ್ ಪ್ರಸ್ತುತ ಪಡಿಸಿದ ಬ್ರಿಲಾಂಟೆ ಪಿಯಾನೋ ಫೆಸ್ಟಿವಲ್ 18 ದೇಶಗಳು ಮತ್ತು ಭಾರತದ 15 ರಾಜ್ಯಗಳ ಅಮೋಘ ಸಂಗೀತಗಾರರ ಅದ್ಭುತ ಸಮ್ಮಿಳನವಾಗಿದೆ. ಈ ಸಂಗೀತ ಉತ್ಸವವು ಸಂಗೀತ ಪ್ರೇಮಿಗಳಿಗೆ ಮಂತ್ರಮುಗ್ಧಗೊಳ್ಳುವ ಅನುಭವ ನೀಡಲಿದ್ದು, ಕಾರ್ಯಕ್ರಮದಲ್ಲಿ ಸಂಗೀತ ಕಛೇರಿಗಳು, ಸ್ಪರ್ಧೆಗಳು, ಕಾರ್ಯಾಗಾರಗಳು, ಸಂವಾದ ಮತ್ತು ಸಾಂಸ್ಕೃತಿಕ ವೈಭವ ನಡೆಯಲಿದೆ.

**ಸಂಗೀತಗಾರರ ಅದ್ಭುತ ಸಮ್ಮಿಳ**

**ಬ್ರಿಲಾಂಟೆ ಪಿಯಾನೋ ಫೆಸ್ಟಿವಲ್‌ನ ವಿಶೇಷತೆಗಳು ವಿಶ್ವ ದರ್ಜೆಯ ಕಾರ್ಯಕ್ರಮಗಳು:** ಲೀಡಿಯನ್ ನಾದಸ್ವರಮ್, ಮರೂನ್ ಬೆನಾಬ್ದೆಲ್ಲಾ, ಅಮನ್ ಮಹಾಜನ್, ಆಡಮ್ ಗ್ರೆಗ್, ಗ್ರ್ಯಾಮಿ ವಿಜೇತ ಮನೋಜ್ ಜಾರ್ಜ್ (ಯಮಹಾ ಕಲಾ ವಿದ), ರಾಧಾ ಥಾಮಸ್, ಡೆರೆಕ್ ಮತ್ತು ಕ್ಯಾಟ್ಸ್ ಮುಂತಾದ ನಾಗಾಲ್ಯಾಂಡ್ ಮತ್ತು ಸುತ್ತಮುತ್ತಲಿನ ಯುವ ಪ್ರತಿಭೆಗಳು ಒಳಗೊಂಡ ಪ್ರಸಿದ್ಧ ಸಂಗೀತಗಾರರ ತಂಡ ಕಾರ್ಯಕ್ರಮ ನೀಡಲಿದೆ.

**ವಿವಿಧ ಪ್ರಕಾರಗಳು:** ಶಾಸ್ತ್ರೀಯ ಪದ್ಧತಿಯಿಂದ ಹಿಡಿದು ಕಂಟೆಂಪರರಿ ಪದ್ಧತಿಗಳವರೆಗೆ ಬಹು ಪ್ರಕಾರಗಳ ಮತ್ತು ಬಹು ಶೈಲಿಯ ಸಂಗೀತ ಕಾರ್ಯಕ್ರಮ ನಡೆಯಲಿದೆ.

**ಸಂಗೀತದ ಶಕ್ತಿ:** ವಿಶೇಷ ಚೇತನ ಸಂಗೀತಗಾರರು ಪ್ರದರ್ಶನ ನೀಡಲಿದ್ದು, ಸಂಗೀತದ ಶಕ್ತಿಯ ಪ್ರದರ್ಶನ ಮಾಡಲಿದ್ದಾರೆ. ಈ ಮೂಲಕ ಕಾರ್ಯಕ್ರಮವು ವೈವಿಧ್ಯತೆ ಮತ್ತು ಒಳಗೊಳ್ಳುವಿಕೆಗೆ ಸಾಕ್ಷಿಯಾಗಲಿದೆ.

**ಶೈಕ್ಷಣಿಕ ಅವಕಾಶಗಳು:** ಕಾರ್ಯಾಗಾರಗಳು ಮತ್ತು ಪರಿಣಿತರು ನಡೆಸಿಕೊಡುವ ಗೋಷ್ಠಿಗಳು ಸಂಗೀತ ಕ್ಷೇತ್ರದ ಕುರಿತ ಅಮೂಲ್ಯ ಮಾಹಿತಿಗಳನ್ನು ನೀಡಲಿವೆ.

**ಶಾಪಿಂಗ್ ಅವಕಾಶ:** ಫುಡ್ ಆಂಡ್ ಮಾರ್ಕೆಟ್ ವಲಯದಲ್ಲಿ ನಾಗಾಲ್ಯಾಂಡ್‌ನ ಸ್ಟಾರ್ಟ್ ಅಪ್ ವಿವಿಧ ರೀತಿಯ ಭಕ್ಷ್ಯಗಳು, ಉತ್ಪನ್ನಗಳನ್ನು ಒದಗಿಸಲಿದ್ದು, ಶಾಪಿಂಗ್ ಮಾಡಬಹುದಾಗಿದೆ. ಈ ಕುರಿತು ಬ್ರಿಲಾಂಟೆ ಪಿಯಾನೋ ಫೆಸ್ಟಿವಲ್ ಸಂಸ್ಥಾಪಕ ಕ್ಯೋಚಾನೋ ಟಿಸಿಕೆ ಅವರು, ಬ್ರಿಲಾಂಟೆ ಪಿಯಾನೋ ಫೆಸ್ಟಿವಲ್ ವಿಶ್ವದರ್ಜೆಯ ಸಂಗೀತ ಪ್ರದರ್ಶನಗಳನ್ನು ಒದಗಿಸುವುದರ ಜೊತೆಗೆ ಸಮಗ್ರ ಸಂಗೀತದ ಸಂತೋಷವನ್ನು ಒದಗಿಸುತ್ತದೆ. ಹೊಸ ಪಿಯಾನೋ ಮತ್ತು ಕೀಬೋರ್ಡ್ ಉತ್ಪನ್ನಗಳನ್ನು ನೋಡುವುದರಿಂದ ಹಿಡಿದು, ಪರಿಣತರ ಮಾತುಗಳನ್ನು ಕೇಳುವವರೆಗೆ ಎಲ್ಲರಿಗೂ ಜ್ಞಾನದಾಯಕ ಅನುಭವ ಸಿಗಲಿದೆ. ಇದು ಕಿವಿ, ಮನಸ್ಸು ಎಲ್ಲಕ್ಕೂ ಹಬ್ಬವಾಗಿದೆ.

ಈ ಉತ್ಸವ ಪ್ರತಿ ದಿನ ಬೆಳಗ್ಗೆ 10 ರಿಂದ ರಾತ್ರಿ 10 ರವರೆಗೆ ನಡೆಯಲಿದೆ ತೆರೆದಿರುತ್ತದೆ, ಇದು ಆಕರ್ಷಕ ಮತ್ತು ಶ್ರೀಮಂತ ಅನುಭವವನ್ನು ನೀಡುತ್ತದೆ ಎಂದು ಹೇಳಿದರು. ಕೊಡೈಕೆನಾಲ್ ಇಂಟರ್‌ನ್ಯಾಷನಲ್ ಸ್ಕೂಲ್‌ನ ಮುಖ್ಯ ಮಾರ್ಕೆಟಿಂಗ್ ಅಧಿಕಾರಿ ಶ್ರೀಮತಿ ಸ್ಟೆಫನಿ ಕಾವೆಟ್ ಮಾತನಾಡಿ, ಈ ಹಬ್ಬಕ್ಕಾಗಿ ಬ್ರಿಲಾಂಟೆ ಜೊತೆ ಸಹಭಾಗಿತ್ವ ಹೊಂದಲು ನಮಗೆ ಹೆಮ್ಮೆ ಮತ್ತು ಸಂತೋಷ ಇದೆ. ಬ್ರಿಲಾಂಟೆ ಪಿಯಾನೋ ಫೆಸ್ಟಿವಲ್‌ನ ಬೆಂಗಳೂರು ಆವೃತ್ತಿ ಮಹತ್ವದ ಕ್ಷಣವಾಗಿದ್ದು, ಸಂಗೀತ ಪ್ರೇಮಿಗಳಿಗೆ ಅದ್ಭುತ ಅನುಭವ ನೀಡಲಿದೆ ಎಂದು ಹೇಳಿದರು. ಕೊಡೈಕೆನಾಲ್ ಇಂಟರ್‌ನ್ಯಾಷನಲ್ ಸ್ಕೂಲ್, ಫರ್ಟಾಡೋಸ್ ಮ್ಯೂಸಿಕ್, ಸ್ಟೈನ್‌ವೇ ಮತ್ತು ಸನ್ಸ್, ಯಮಹಾ, ಟಾಟಾ ಟ್ರಸ್ಟ್, ಕೋಕಾ-ಕೋಲಾ ಮತ್ತು ಇತರ ಸಂಸ್ಥೆಗಳು ಈ ಸಂಗೀತೋತ್ಸವಕ್ಕೆ ಬೆಂಬಲ ನೀಡಿವೆ. ಹೆಚ್ಚಿನ ಮಾಹಿತಿಗಾಗಿ, ಟಿಕೆಟ್‌ಗಳನ್ನು ಖರೀದಿಸಲು, ದಯವಿಟ್ಟು ಭೇಟಿ ನೀಡಿ: https://brillantefest.org/registration

# ಭರತನಾಟ್ಯ ಪ್ರದರ್ಶಿಸಿ ಮೆಚ್ಚುಗೆ

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ಇತ್ತಿಚಿಗೆ ಬ್ಯಾಂಕಾಕ್‌ನ ವಿಷ್ಣು ದೇವಸ್ಥಾನದಲ್ಲಿ ಗಣೇಶ ಹಬ್ಬದ ಪ್ರಯುಕ್ತ ಹಿಂದೂ ಧರ್ಮ ಸಭಾ ಆಡಳಿತ ಮಂಡಳಿ, ಶ್ರೀ ಸಾಯಿ ಆರ್ಟ್ಸ್ ಅಕಾಡೆಮಿ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಗುರು ಮೋನಿಷಾ ನವೀನ್ ರವರ ನೇತ್ರತ್ವದಲ್ಲಿ ತನಿಷಾ ಸುಮೋಹನ, ಚಿರಂಜೀವಿ ಸುಮೋಹನ, ಸ್ನೇಹ ಸ್ವಾಮಿ, ಮಂಜುಶ್ರೀ.ಬಿ ಅವರು ಅದ್ಭುತವಾದಂತ ಭರತನಾಟ್ಯವನ್ನು ಪ್ರದರ್ಶಿಸಿ ಎಲ್ಲರ ಮೆಚ್ಚುಗೆ ಗಳಿಸಿದ್ದಾರೆ, ಅವರಿಂದ ಗೌರವಾನ್ವಿತ ಸನ್ಮಾನ ಪಡೆದಿದ್ದಾರೆ.

# ಮಹಾಭಾರತ
## ಸ್ವರ್ಗಾರೋಹಣಪರ್ವ



• ಹಿಂದಿನ ಸಂಚಿಕೆಯಿಂದ

ಈ ಧ್ವನಿಗಳೆಲ್ಲ ಪರಿಚಿತವಾಗಿವೆಯಲ್ಲ ಎಂದುಕೊಂಡ ಯುಧಿಷ್ಠಿರನು ''ಯಾರಪ್ಪನೀವು, ನನ್ನ ಸಹಾಯವನ್ನು ಬಯಸುತ್ತಿರುವವರು ಎಂದು ಕೇಳಲು, ಧ್ವನಿಗಳು ''ನಾನು ರಾಧೇಯ'' ''ನಾನು ಭೀಮ'' ಇತ್ಯಾದಿಯಾಗಿ ಧೃಷ್ಟದ್ಯುಮ್ನ, ದ್ರೌಪದಿ ಮತ್ತು ಅವನ ಸೋದರರೆಲ್ಲರ ಧ್ವನಿಗಳೂ ಕೇಳಿಬಂದವು. ಯುಧಿಷ್ಠಿರನಿಗೆ ಅತ್ಯಂತ ಆಶ್ಚರ್ಯವಾಯಿತು. ಅವನ ಕೋಪವು ಮೇರೆಮೀರಿತು. ಇವರೆಲ್ಲರೂ ಇಲ್ಲೇಕೆ ಇರುವರು ಇವರಾರು ಪಾಪ ಮಾಡಿದವರಲ್ಲ. ನನಗೆ ಈ ಸ್ವರ್ಗದ ರೀತಿನೀತಿಗಳೇ ಅರ್ಥವಾಗುತ್ತಿಲ್ಲ. ಅಂಥ ಪರಮಪಾಪಿಯಾದ ದುರ್ಯೋಧನನು ಎರಡನೆಯ ಇಂದ್ರನಂತೆ ಅಲ್ಲಿ ವೈಭವದಿಂದ ಕುಳಿತಿದ್ದಾನೆ. ನನ್ನ ಪ್ರೀತಿಯ ಸೋದರರೂ, ದ್ರೌಪದಿ ಮುಂತಾದ ನಿಷ್ಪಾಪ ಜೀವಿಗಳೂ ಇಲ್ಲಿ ನರಕದಲ್ಲಿದ್ದಾರೆ. ನಾನು ಎಚ್ಚೆತ್ತಿರುವೆನೆ, ಅಥವಾ ಇದೊಂದು ಭಯಾನಕ ಸ್ವಪ್ನವೇ?'' ಎಂದು ಕೂಗಿದನು. ಅನಂತರ ಇಂದ್ರನ ಅನುಚರನನ್ನು ಕುರಿತು ''ನಾನು ನನ್ನ ಸೋದರರ ಧ್ವನಿಗಳನ್ನು ಕೇಳಿದೆನು. ಇನ್ನು ನೀನು ಹೋಗಬಹುದು ಎಂದನು. ಒಂದು ಗಂಟೆ ಕಾಲ ಹಾಗೆ ಕಳೆಯಿತು. ಅನಂತರ ಇಂದ್ರನೇ ಮೊದಲಾದ ಸ್ವರ್ಗದ ದೇವತೆಗಳೆಲ್ಲರೂ ಯುಧಿಷ್ಠಿರನಿದ್ದಲ್ಲಿಗೆ ಬಂದರು. ಅವರು ಬರುತ್ತಿದ್ದಂತೆಯೇ ವಾತಾವರಣವು ಇದ್ದಕ್ಕಿದ್ದಂತೆ ಬದಲಾಯಿತು. ಕತ್ತಲೆ ಕಳೆದು ಬೆಳಕಾಯಿತು. ಭೀಕರತೆ ಮಾಯವಾಯಿತು. ಗಾಳಿ ಸುಗಂಧ ಪೂರಿತವಾಯಿತು. ಯುಧಿಷ್ಠಿರನಿಗೆ ಇದೆಲ್ಲ ಏನೆಂದೇ ತಿಳಿಯದಾಯಿತು. ಇಂದ್ರನು ನಕ್ಕು ''ನಾವೆಲ್ಲರೂ ನಿನ್ನ ನಡತೆಯಿಂದ ಪ್ರೀತರಾಗಿದ್ದೇವೆ, ಯುಧಿಷ್ಠಿರ. ನೀನಿಂದು ಸ್ವರ್ಗವನ್ನು ನಿಜವಾಗಿ ಸಂಪಾದಿಸಿಕೊಡಿರುವೆ. ನಿನ್ನ ಭ್ರಾ ಪ್ರೇಮ ಅನುಪಮವಾದದ್ದು. ಪ್ರತಿಯೊಬ್ಬ ರಾಜನೂ ನರಕದ ಮೂಲಕ ಹಾದುಹೋಗಬೇಕೆಂಬುದು ಇಲ್ಲಿಯ ನಿಯಮ. ಅದಕ್ಕಾಗಿ ಮತ್ತು ದ್ರೋಣನ ಸಾವಿನ ಸಂದರ್ಭದಲ್ಲಿ ಹೇಳಿದ ಆ ಒಂದು ಸುಳ್ಳಿಗಾಗಿ ನೀನು ಇಲ್ಲಿಗೆ ಬರಬೇಕಾಯಿತು. ಈಗ ನೀನು ಸರ್ವಪಾಪಗಳಿಂದಲೂ ಮುಕ್ತನಾಗಿ ಪುನೀತನಾಗಿದ್ದೀಯೆ. ಸ್ವರ್ಗದ ನಿಯಮಗಳು ಅರ್ಥವಾಗುವುದಿಲ್ಲ ಎಂದೆ. ನಾನು ಹೇಳುತ್ತೇನೆ ಕೇಳು. ''ಯಾರ ಪಾಪವು ಪುಣ್ಯಕ್ಕಿಂತ ಹೆಚ್ಚಾಗಿರುವುದೋ ಅವನು ಮೊದಲು ತನ್ನ ಪುಣ್ಯಫಲವನ್ನು ಅನುಭವಿಸುವುದಕ್ಕಾಗಿ ಸ್ವರ್ಗಕ್ಕೆ ಬರುತ್ತಾನೆ. ಅದು ಮುಗಿದೊಡನೆ ನರಕಕ್ಕೆ ಹೋಗುತ್ತಾನೆ. ಆದರೆ ಯಾರ ಪುಣ್ಯವು ಪಾಪಕ್ಕಿಂತ ಬಹಳವಾಗಿರುವುದೋ ಅವನಿಗೆ ಮೊದಲು ನರಕದ ಅನುಭವವಾಗುತ್ತದೆ. ಪಾಪಫಲವನ್ನು ಹಾಗೆ ಕಳೆದುಕೊಂಡು ಅವನು ಸ್ವರ್ಗಕ್ಕೆ ಬರುತ್ತಾನೆ. ನಿನ್ನ ಪಾಪ ತುಂಬ ಅಲ್ಪವಾಗಿತ್ತು. ನಿಜವಾಗಿ ಹೇಳಬೇಕೆಂದರೆ ಆ ಒಂದು ಸುಳ್ಳು ಮಾತ್ರವೇ ನೀನು ಮಾಡಿದ ಪಾಪವೆನ್ನಬಹುದು. ನಿನ್ನ ಸೋದರರ ವಿಚಾರವಾಗಿ, ಅವರು ಮಾಡಿದ ಪಾಪಗಳೇನೆಂಬುದನ್ನು ಬರುತ್ತ ದಾರಿಯಲ್ಲಿ ನೀನೇ ಹೇಳಿರುವೆ. ಅದಕ್ಕಾಗಿಯೇ ಅವರು ಕೆಲವು ಗಂಟೆಗಳ ಕಾಲ ನರಕದಲ್ಲಿರಬೇಕಾಯಿತು.

ಮುಂದುವರಿಯುವುದು...

# ಭೂದಾನ ಚಳುವಳಿಯ ಹರಿಕಾರ ಭಾರತರತ್ನ ಆಚಾರ್ಯ ವಿನೋಬಾಭಾವೆರವರ 129ನೇ ವರ್ಷದ ಜನ್ಮ ದಿನಾಚರಣೆ




ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

• ಉದಯವಾಹಿನಿ, ವಿಶೇಷ

ಆಚಾರ್ಯ ವಿನೋಬಾ ಭಾವೆರವರು 1895 ಸೆಪ್ಟೆಂಬರ್ 11ರಂದು ಮಹಾರಾಷ್ಟ್ರದ ಕೊಲಾಬಾ ಜಿಲ್ಲೆಗೆ ಸೇರಿದ ಗಾಗೋಜಿ ಎಂಬ ಗ್ರಾಮದ ಬ್ರಾಹ್ಮಣ ಕುಟುಂಬ ದಲ್ಲಿ ಜನಿಸಿದರು. ತಂದೆ ನರಹರಿ ಶಂಭುರಾವ್ ಭಾವೆ, ತಾಯಿರುಕ್ಮಿಣಿದೇವಿ ವಿನೋಬಾ ಭಾವೆರವರಿಗೆ ತಂದೆ ತಾಯಿಯಿಂದ ಸಂಸ್ಕಾರ ಜೊತೆಗೆ ಉತ್ತಮ ಗುಣ ಮಟ್ಟದ ಶಿಕ್ಷಣ ದೊರಕಿತು. ವಿನೋಬಾಭಾವೆರವರು ಗಾಂಧೀಜಿಯವರ ಸತ್ಯ, ಧರ್ಮ, ಅಹಿಂಸೆಯ ಮೂಲ ತತ್ವವನ್ನು ಅರ್ಥಮಾಡಿಕೊಂಡು ಅವರ ಪ್ರಭಾವಕ್ಕೆ ಒಳಗಾಗಿ ಮುಂದೆ ಅವರ ಮುಖಂಡತ್ವದ ಸ್ವಾತಂತ್ರ್ಯ ಹೋರಾಟದಲ್ಲಿ ಸ್ವಇಚ್ಛೆಯಿಂದ ಭಾಗವಹಿಸಿರುತ್ತಾರೆ.

1916 ಜೂನ್ 7 ರಂದು ವಿನೋಬಾಭಾವೆರವರು ಗಾಂಧೀಜಿಯವರನ್ನು ಸಬರಮತಿ ಆಶ್ರಮದಲ್ಲಿ ಭೇಟಿಮಾಡಿದರು. ಆ ಅಪೂರ್ವ ಭೇಟಿ ವಿನೋಬಾ ಅವರ ಜೀವನದ ದಿಕ್ಕನ್ನೇ ಬದಲಿಸಿತು. ದಿನಕಳೆದಂತೆ ಗಾಂಧೀಜಿ ಮತ್ತು ವಿನೋಬಾರವರ ಬಾಂಧ ವ್ಯದ ಬೆಸುಗೆ ಭದ್ರಗೊಂಡಿತು.

ವಿನೋಬಾರವರು ಆಶ್ರಮದ ಎಲ್ಲಾ ಚಟುವಟಿಕೆಗಳಲ್ಲಿ



ಅತ್ಯಾಸಕ್ತಿ ,ಶ್ರದ್ಧೆಯಿಂದ ಪಾಲ್ಗೊಂಡರು. ಬೋಧನೆ, ಅಧ್ಯಯನ, ಚರಕದಿಂದ ನೂಲು ತೆಗೆಯುವುದು ಮತ್ತು ಸಮುದಾಯದ ಬದುಕನ್ನು ಉತ್ತಮಗೊಳಿಸಲು ಹಲವು ವಿಧಾಯಕ ಕಾರ್ಯಗಳಲ್ಲಿ ಭಾಗವಹಿಸುವುದು ಅವರ ನಿತ್ಯದ ಕಾರ್ಯ ಗಳಾಗಿದ್ದವು. ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾಗವಹಿಸಿದರು. 1940 ರಲ್ಲಿ ಗಾಂಧೀಜಿಯವರು ವಿನೋಬಾರವರನ್ನು ಸ್ವತಂತ್ರ ಸತ್ಯಾಗ್ರಹಿಯನ್ನಾಗಿ ಆಯ್ಕೆ ಮಾಡಿದರು. ಗಾಂಧೀಜಿ ರೂಪಿಸಿದ ಖಾದಿ ಚಳುವಳಿ, ಗ್ರಾಮೀಣ ಉದ್ಯೋಗಗಳ ಸುಧಾರಣೆ, ಮೂಲಶಿಕ್ಷಣ ಪ್ರಯೋಗಗಳು, ಅಸ್ಪೃಶ್ಯತಾ ನಿವಾರಣೆ ಇವುಗಳಿಗೆ ವಿನೋಬಾರವರು ತಾತ್ವಿಕ ಬುನಾದಿಯನ್ನು ನಿರ್ಮಿಸಿಕೊಟ್ಟರು. 1942 ಆಗಸ್ಟ್ ರಲ್ಲಿ ನಡೆದ ಕ್ವಿಟ್ ಇಂಡಿಯಾ ಚಳುವಳಿಯಲ್ಲಿ ಬ್ರಿಟಿಷರೇ ಭಾರತ ಬಿಟ್ಟು ತೊಲಗಿರಿ ಎಂಬ ಚಳುವಳಿಯಲ್ಲಿ ವಿನೋಬಾರವರು ಭಾಗವಹಿಸಿದ್ದಕ್ಕಾಗಿ ಸುಮಾರು 15 ತಿಂಗಳು ಸೆರೆಮನೆವಾಸ ಅನುಭವಿಸಿದರು. 1947 ರಲ್ಲಿ ದೇಶ ಇಬ್ಭಾಗವಾಗಿ ಆ ಸಮಯದಲ್ಲಿ ನಡೆದ ಕೋಮು ಘರ್ಷಣೆ ದೇಶವನ್ನು ಜರ್ಜರಿಗೊಳಿ ಸಿತ್ತು. ಸಾವಿರಾರು ಹಿಂದೂ-ಮುಸ್ಲಿಮರ ಮಾರಣಹೋಮ ನಡೆಯಿತು. ಗಾಂಧೀಜಿ ಕೋಮುದ್ವೇಷದ ಜ್ವಾಲೆಯನ್ನು ನಂದಿಸಲು ಕಲ್ಕತ್ತಾದಲ್ಲಿ ಉಪವಾಸ ಸತ್ಯಾಗ್ರಹ ನಡೆಸಿದರು. 1948 ಜನವರಿ 30ರಂದು ಗಾಂಧೀಜಿಯವರು ಹಂತಕನ ಗುಂಡಿಗೆ ಬಲಿಯಾದರು. ಗಾಂಧೀಜಿಯವರ ಸಾವು ವಿನೋಬಾ ಅವರಿಗೆ ಮಾನಸಿಕವಾಗಿ ದೊಡ್ಡ ಆಘಾತವಾಯಿತು. ವಿನೋಬಾಭಾವೆರವರು ಭೂದಾನ ಚಳುವಳಿ ಪ್ರಾರಂಭಿಸಿದರು. ದೊಡ್ಡ ದೊಡ್ಡ ಜಮೀನ್ದಾರರ ಬಳಿಯಿದ್ದ ಭೂಮಿಯನ್ನು ದಾನವಾಗಿ ಪಡೆದು ಭೂಮಿ ಇಲ್ಲದವರಿಗೆ ಹಂಚಿದರು. ವಿನೋಬಾರವರು 13 ವರ್ಷಗಳ ಕಾಲ ಭಾರತದ ಉದ್ದಗಲಕ್ಕೂ ಪಾದಯಾತ್ರೆ ಮಾಡಿದರು. ಈ ಅವಧಿಯಲ್ಲಿ ಸಾವಿರಾರು ಮೈಲುಗಳನ್ನು ಕ್ರಮಿಸಿದರು. ಸಾವಿರಾರು ಸಭೆಗಳಲ್ಲಿ ಸಹಸ್ರಾರು ಜನರನ್ನು ಉದ್ದೇಶಿಸಿ ಭಾಷಣ ಮಾಡಿದರು. 43 ಲಕ್ಷ ಎಕರೆ ಭೂಮಿಯನ್ನು ಭೂಮಿ ಇಲ್ಲದ ರೈತರಿಗೆ ವಿತರಣೆ ಮಾಡಿದರು. ಜಾತಿ-ಮತ-ಪಂತ, ಭಾಷೆ, ಪ್ರಾಂತ್ಯ ಯಾವ ಭೇದವಿಲ್ಲದೇ ವಿನೋಬಾಜಿ ಜನರನ್ನು ಸಂಘಟಿಸಿ ಭೂದಾನ ಯಜ್ಞವನ್ನು ಯಶಸ್ವಿಗೊಳಿಸಿದರು. ಭೂದಾನದ ಜೊತೆಯಲ್ಲಿ ಸಂಪತ್ತು ದಾನ, ಶ್ರಮದಾನ, ಸಮಯ ದಾನ ಹೀಗೆ ಜನರಲ್ಲಿ ಇವುಗಳಲ್ಲಿ ಯಾವುದನ್ನು ನೀಡುವ ಸಾಮರ್ಥ್ಯವಿದ್ದರೂ ನಿಸ್ವಾರ್ಥ ಮನೋಭಾವದಿಂದ ನೀಡಿ ಕೃತಾರ್ಥರಾಗಬೇಕೆಂದು ವಿನೋಬಾಜಿ ತಿಳಿಸಿದರು. ಡಕಾಯಿತರಿದ್ದ ಚಂಬಲ್ ಕಣಿವೆಯಲ್ಲಿ ಪ್ರವಾಸ ಮಾಡಿ ಅವರನ್ನು ಅಹಿಂಸಾ ಮಾರ್ಗಕ್ಕೆ ತರಲು ಪ್ರಯತ್ನಿಸಿ ಸಫಲರಾದರು. ಆ ಬಳಿಕ ವಿನೋಬಾಜಿ ಗೋಹತ್ಯೆ ವಿರುದ್ಧ ಚಳುವಳಿ ನಡೆಸಿದರು. ಮುಂದೆ ಅವರು ಆಧ್ಯಾತ್ಮಿಕ ಸಾಧನೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡರು. ವಿನೋಬಾಜಿಯವರು ವಿಶ್ರಾಂತಿ ಜೀವನದ ತನ್ನ 87 ನೇ ವಯಸ್ಸಿನಲ್ಲಿ ವಯೋ ಸಹಜದಿಂದ ಅಂದರೆ 1982 ನವಂಬರ್ 15 ರಂದು ಆಶ್ರಮದಲ್ಲಿಯೇ ದಿವಂಗತರಾದರು. 1983ರಲ್ಲಿ ವಿನೋಬಾ ಭಾವೆ ರವರಿಗೆ ಮರಣೋತ್ತರವಾಗಿ ಭಾರತ ಸರ್ಕಾರ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿತು. ಇಂತಹ ಮಹಾನ್ ಚೇತನ, ಮಹಾನ್ ಮಾನವತವಾದಿ, ಆದರ್ಶ ಪುರುಷ, ಭೂದಾನ ಚಳುವಳಿಯ ಹರಿಕಾರ ಇಂದು ಅವರ 129 ನೇ ವರ್ಷದ ಜನ್ಮದಿನಾಚರಣೆಯ ಅಂಗವಾಗಿ ಭಾರತೀಯರಾದ ನಾವುಗಳು ಅವರನ್ನು ಸ್ಮರಿಸಿ ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲಿ ಎಂದು ಆ ಭಗವಂತನಲ್ಲಿ ಪ್ರಾರ್ಥಿಸೋಣ.

# ಆರು ತಿಂಗಳಲ್ಲಿ ಮಾಡಿದ ಸಿಸಿ ರಸ್ತೆಗಳು ಈಗಲೇ ಕಿತ್ತು ಹೋಗಿವೆ

## ಸಿ.ಎಸ್ ನಾಡಗೌಡರು ಉತ್ತರಿಸಬೇಕು ನಡಹಳ್ಳಿ ಅವರ ಪ್ರಶ್ನೆಗೆ ಕೈ ಪಕ್ಷದ ಮುಖಂಡರು ಸ್ಪಷ್ಟವಾದ ಉತ್ತರವನ್ನು ನೀಡಿಲ್ಲ

• ಉದಯವಾಹಿನಿ, ಮುದ್ದೇಬಿಹಾಳ

ಮುದ್ದೇಬಿಹಾಳ ಕಾಂಗ್ರೇಸ್ ಶಾಸಕರಾದ ಸಿ.ಎಸ್ ನಾಡಗೌಡರು ಹುಡ್ಕೊ ಮನೆ ಹಂಚಿಕೆಯಲ್ಲಿ ಮುಡಾ ಮಾದರಿಯ ಹಗರಣ ಮಾಡಿದ್ದಾರೆ ಎಂಬ ಬಿಜೆಪಿಯ ಮಾಜಿ ಶಾಸಕ ಎ.ಎಸ್ ಪಾಟೀಲ್ ನಡಹಳ್ಳಿ ಅವರ ಆರೋಪಕ್ಕೆ ಶಾಸಕರಾದ ಸಿ.ಎಸ್ ನಾಡಗೌಡರು ಉತ್ತರಿಸಬೇಕು ನಡಹಳ್ಳಿ ಅವರ ಪ್ರಶ್ನೆಗೆ ಕಾಂಗ್ರೇಸ್ ಪಕ್ಷದ ಮುಖಂಡರು ಸ್ಪಷ್ಟವಾದ ಉತ್ತರವನ್ನು ನೀಡಿಲ್ಲ ಕಾಂಗ್ರೇಸ್ ಮುಖಂಡರಲ್ಲಿ ಅವರ ಶಾಸಕರು ತಂದ ಅನುದಾನದ ತುಂಬಾ ಗೊಂದಲವಿದೆ ಸ್ಪಷ್ಟತೆ ಇಲ್ಲವೆಂದು ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ್ ಪಂಪಣ್ಣನವರ ಹೇಳಿದರು ಅವರು ಮಂಗಳವಾರ ಪ್ರವಾಸಿ ಮಂದಿರದಲ್ಲಿ ಬಿಜೆಪಿ ಪಕ್ಷದಿಂದ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು



ಉದಯವಾಹಿನಿ ಚಿತ್ರ

ನಾಡಗೌಡರು25 ವರ್ಷದ ಆಡಳಿತದಲ್ಲಿ ಮತಕ್ಷೇತ್ರದ ಅಭಿವೃದ್ಧಿಯಾಗಿದೆ ಎಂದು ಹೇಳುವ ಕಾಂಗ್ರೇಸ್ ಮುಖಂಡರು ಹಿಂದಿನ ದಿವಂಗತ ಶಾಸಕರು ಸಚಿವರಾಗಿದ್ದ ಜೆ ಎಸ್ ದೇಶಮುಖರು ತಾಲ್ಲೂಕಿನಲ್ಲಿ ವಿದ್ಯುತ್ ಸರಬರಾಜು ಸೇರಿದಂತೆ ಅನೇಕ ಜನಪರ ಕೆಲಸ ಮಾಡಿದ್ದಾರೆ ಎಂ.ಎಂ. ಸಜ್ಜನ ಶಾಸಕರ ಅವಧಿಯಲ್ಲಿ ಬಸ್ ನಿಲ್ದಾಣ ತಂಗಡಗಿ ಬ್ರಿಡ್ಜ್ ಅನೇಕ ಸರಕಾರಿ ಕಟ್ಟಡಗಳನ್ನು ಮಾಡಿದ್ದಾರೆ ಅದನ್ನು ಸ್ಮರಿಸಬೇಕು ಅಂತಯೇ ನಮ್ಮ ನಡಹಳ್ಳಿ ಶಾಸಕರು ಸಹ ಜನರ ಕಣ್ಣಿಗೆ ಕಾಣುವಂತೆ ಅಭಿವೃದ್ಧಿ ಯೋಜನೆ ಕಾಮಗಾರಿಗಳನ್ನು ಮಾಡಿದ್ದಾರೆ ಎಂದರು. ಎಸ್ಸಿ ಮೋರ್ಚಾ ಅಧ್ಯಕ್ಷ ಮಲ್ಲಿಕಾರ್ಜುನ ತಂಗಡಗಿ ಮಾತನಾಡಿ 25 ವರ್ಷಗಳಿಂದ ಧೂಳು ತುಂಬಿದ ತಾಲ್ಲೂಕನ್ನು ನಡಹಳ್ಳಿ ಶಾಸಕರು ಮೂರುವರೆ ವರ್ಷದಲ್ಲಿ ಎಷ್ಟು ಅಭಿವೃದ್ಧಿ ಮಾಡಿದ್ದಾರೆ ಎಂದು ಪ್ರಜ್ಞಾವಂತ ಮತದಾರರಿಗೆ ಗೊತ್ತಿದೆ, ತಾಲ್ಲೂಕಿನ ಪ್ರಮುಖ ಗ್ರಾಮಗಳಲ್ಲಿ ಹೊಸ ವಿದ್ಯುತ್ ಸ್ಟೇಶನ್, ಹೊಸ ಶಾಲಾ ಕಟ್ಟಡಗಳು ಕರೆಗಳಿಗೆ ನೀರು ತುಂಬಿಸುವುದು, ಸ್ವಂತ ಹಣದಲ್ಲಿ ವಿದ್ಯಾರ್ಥಿಗಳಿಗೆ ನೋಟಬುಕ್ಸ ಹಂಚಿಕೆ ಮಾಡಿದ್ದಾರೆ. ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಹರೀಶ ನಾಟಿಕಾರ ಮಾತನಾಡಿ ಕಾಂಗ್ರೇಸ್ ಮುಖಂಡರು ಶಾಸಕರಾದ ನಾಡಗೌಡರು ಒಂದುವರೆ ವರ್ಷದಲ್ಲಿ ನೂರಾರು ಕೋಟಿ ಅನುದಾನ ತಂದಿದ್ದಾರೆ ಎನ್ನುತ್ತಾರೆ ತಾಲ್ಲೂಕಿನಲ್ಲಿ ಕಾಮಗಾರಿ ಪ್ರಾರಂಭವಾಗಿಲ್ಲಾ ಮಾಜಿ ಶಾಸಕರು ಶಾಸಕರಿಗೆ ಏಕವಚನ ಪದ ಬಳಕೆ ಮಾಡಿಲ್ಲಾ ಕಾಂಗ್ರೇಸ್ ಮುಖಂಡರು ಇಲ್ಲಸಲ್ಲದ ಆರೋಪ ಮಾಡ್ತಾರೆ ಬಸವಣ್ಣ ಅಂಬೇಡ್ಕರ್ ಹೆಸರಿನಲ್ಲಿ ಅಧಿಕಾರಕ್ಕೆ ಬಂದ ಶಾಸಕರು ತಾಲ್ಲೂಕಿನ ಅಂಬೇಡ್ಕರ್, ಬಸವಣ್ಣ, ವಿರೇಶ್ವರ ಶರಣ ಕಂಚಿನ ಮೂರ್ತಿಗಳು ಕಳಪೆಯಾಗಿವೆ ಎನ್ನುತ್ತಾರೆ ಕಂಚಿನ ಪ್ರತಿಮೆ ಕಳಪೆಯಾಗಲು ಸಾಧ್ಯವೇ? ಬಿಜೆಪಿ ಸರಕಾರದ ಎಸ್ಸಿಟಿಎಸ್ಪಿ ಯಲ್ಲಿ 36 ಸಾವಿರ ಕೋಟಿ ಮೀಸಲು ಇಟ್ಟಿದ್ದನ್ನು ಕಾಂಗ್ರೇಸ್ ಸರ್ಕಾರ ಗ್ಯಾರಂಟಿ ಯೋಜನೆಗೆ ಬಳಕೆ ಮಾಡಿದೆ, ಪಟ್ಟಣದ ಎಪಿಎಂಸಿಯಲ್ಲಿ ಶಾಸಕರ ಸಂಬಂಧಿಕರೇ ಮಾಡುತ್ತಿರುವ ಸಿಸಿ ರಸ್ತೆ ಕಳಪೆಯಾಗಿದೆ ಡ್ರೈನಜ್ ಮಾಡದೆ ಸಿಸಿ ರಸ್ತೆ ಮಾಡುತ್ತಿದ್ದಾರೆ ಎಂದರು.

**ಶಾಸಕರು ಹುಡ್ಕೊ ಮನೆ ಹಂಚಿಕೆ ಬಗ್ಗೆ ಸ್ಪಷ್ಟಪಡಿಸಲಿ**

> **ಸಿಎಂ ಅವರ ಮುಡಾ ಹಗರಣದಲ್ಲಿ ಶಾಸಕ ನಾಡಗೌಡರ ಸೈಟು ಇರುವ ಬಗ್ಗೆ ನಡಹಳ್ಳಿ ಅವರು ದಾಖಲೆ ಬಿಡುಗಡೆ ಮಾಡಲಿದ್ದಾರೆ, ತಾಲ್ಲೂಕಿನಲ್ಲಿ ಪೋಲೀಸ್ ಹಾಗೂ ಅಬಕಾರಿ ಅಧಿಕಾರಿಗಳಿಗೆ ಪ್ರತಿ ತಿಂಗಳು 40ರಿಂದ 50 ಸಾವಿರ ರೂ ಮಂತ್ಲಿ ಹೋಗುತ್ತದೆ ಪೂಲೀಸರು ಲಂಚವನ್ನು ಪೋನ್ ಪೇ ಮಾಡಿಸಿಕೊಳ್ಳುತ್ತಾರೆ ಈ ಬಗ್ಗೆ ಸಿಬಿಐ ತನಿಖೆಯಾಗಲಿ**
>
> -ಹರೀಶ ನಾಟಿಕಾರ

> **ದ್ವೇಷದ ರಾಜಕಾರಣ ಮಾಡುವುದಿಲ್ಲವೆಂದ ನಾಡಗೌಡರ ಒಡಹುಟ್ಟಿದ ತಮ್ಮನ ಮಗನನ್ನು ಠಾಣೆಯಲ್ಲಿ ಕೂರಿಸಿದರು ಸರಕಾರಿ ಅಧಿಕಾರಿಗಳನ್ನು ವರ್ಗಾವಣೆ ಮಾಡುವುದಿಲ್ಲವೆಂದು ಅಧಿಕಾರಕ್ಕೆ ಬಂದ ಮೇಲೆ ವರ್ಗಾವಣೆ ಮಾಡಿದರು**
>
> -ಮಲ್ಲಿಕಾರ್ಜುನ ತಂಗಡಗಿ

# ಬಾಯಿ, ಮುಖ, ದವಡೆ ಚಿಕಿತ್ಸೆ ತರಬೇತಿ ಶಿಬಿರ

• ಉದಯವಾಹಿನಿ, ಬಳ್ಳಾರಿ

ಸೆಪ್ಟೆಂಬರ್ 13ರಿಂದ 15ರವರೆಗೆ ಭಾರತೀಯ ವೈದ್ಯಕೀಯ ಸಂಘದಿಂದ ತೋರಣಗಲ್ಲಿನ ವಿದ್ಯಾನಗರದ ಜೆ ಎಸ್ ಡಬ್ಲ್ಯೂ ನಲ್ಲಿ ಮೂರು ದಿನಗಳ ಕಾಲ ಬಾಯಿ ಮುಖ ಆಗುತ್ತೆ ಬಗ್ಗೆ ಯುವ ದಂತ ವೈದ್ಯರಿಗೆ ನುರಿತ ತಂತ್ರಜ್ಞರಿಂದ ಮತ್ತು ಹಿರಿಯ ವೈದ್ಯರುಗಳಿಂದ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ದಂತ ವೈದ್ಯಕೀಯ ಸಂಘದ ಅಧ್ಯಕ್ಷರಾದ ಡಾ. ಮಧುಸೂದನ್ ರೆಡ್ಡಿ ತಿಳಿಸಿದರು.

ಅವರು ಮಂಗಳವಾರ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿರುವ ಭಾರತೀಯ ವೈದ್ಯಕೀಯ ಸಂಘದ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ನಡೆಸಿಮಾತನಾಡಿ, ಯುವ ವೈದ್ಯರು ಮತ್ತು ಯುವ ಶಸ್ತ್ರಚಿಕಿತಕರಿಗೆ ತಜ್ಞ ವೈದ್ಯರುಗಳು ಇಡೀ ದಿನ ವಿವಿಧ ವಿಷಯಗಳಲ್ಲಿ ತರಬೇತಿ ನೀಡುವರು, ಮತ್ತು 14ರಂದು ಖ್ಯಾತ ವೈದ್ಯ ಕಿಶೋರ ನಾಯಕ ಅವರ ಸ್ಮರಣಾರ್ಥ ವಿವಿಧ ವಿಷಯಗಳ ಉಪನ್ಯಾಸವನ್ನು ಏರ್ಪಡಿಸಲಾಗಿದೆ. ಉಪನ್ಯಾಸವನ್ನು ರಾಮದಾಸ ಬಾಲಕೃಷ್ಣ ಡಾ. ವೆಂಕಟೇಶ್ ಆನೆ ಹೊಸೂರು ಡಾ. ಕುಮಾರ್ ಮುಂಗಲ ದೀಪೇಶ್ ರಾವ್ ಒಳಗೊಂಡಂತೆ ಹಲವಾರು ತಜ್ಞ ವೈದ್ಯರು ಸರ್ಜರಿ ಬಗ್ಗೆ ಯುವಜನತೆಗೆ ಉಪನ್ಯಾಸದ ಮೂಲಕ ತಿಳಿಸಲಿದ್ದಾರೆ ಎಂದರು. ಅದೇ ರೀತಿಯಾಗಿ ಸೆಪ್ಟೆಂಬರ್ 15ರಂದು ಚೀಳು ತುಟಿ ಚಿಕಿತ್ಸೆ ಮುಖವನ್ನು ಸುಂದರಗೊಳಿಸುವುದು ದವಡೆ ಭಾಗ ಕತ್ತರಿಸಿ ಮರುಜೋಡಿಸುವುದು ಸೇರಿದಂತೆ ಇನ್ನೂ ಹಲವಾರು ವಿಷಯಗಳ ಬಗ್ಗೆ ಉಪನ್ಯಾಸವನ್ನು ಆಯೋಜಿಸಲಾಗಿದೆ ಎಂದು ಡಾಕ್ಟರ್ ರೆಡ್ಡಿ ತಿಳಿಸಿದರು.





ಉದಯವಾಹಿನಿ ಚಿತ್ರ

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಬಳ್ಳಾರಿ ವಿಜಯನಗರ ಅವಳಿ ಜಿಲ್ಲೆಯ ಸಂಸದರಾದ ಈ ತುಕಾರಾಂ ನೆರವೇರಿಸುವರು, ಜೆ ಎಸ್‌ಡಬ್ಲ್ಯೂ ವಿಜಯನಗರ ವರ್ಕ್ಸ್ ಇದರ ಅಧ್ಯಕ್ಷರಾದ ಪಿಕೆ ಮುರುಗನ್, ಬಳ್ಳಾರಿ ಮೆಡಿಕಲ್ ಕಾಲೇಜ್ ನಿರ್ದೇಶಕ ಡಾಕ್ಟರ್ ಗಂಗಾಧರ ಗೌಡ, ಸರ್ಕಾರಿ ದಂತ ಕಾಲೇಜಿನ ಪ್ರಾಂಶುಪಾಲರಾದ ಎಸ್. ಹೆಚ್. ಭಾರತಿ, ಡಾಕ್ಟರ್ ಭಗವಾನ್ ದಾಸ್ ರೈ, ಅಖಿಲ ಭಾರತ ಬಾಯಿ ಮುಖ ಹಾಗೂ ದೌಡೆ ಚಿತ್ರ ಸಂಘದ ಅಧ್ಯಕ್ಷ ಕಾರ್ಯದರ್ಶಿ ಗಿರಿಸಾವ್ ಈ ಕಾರ್ಯಕ್ರಮದಲ್ಲಿ ಮತ್ತು ಈ ತರಬೇತಿ ಶಿಬಿರದಲ್ಲಿ 200 ಕ್ಕೂ ಹೆಚ್ಚು ವೈಜ್ಞಾನಿಕ ವಿವರಗಳನ್ನು ನೀಡುವವರು, 350 ಕ್ಕೆ ಹೆಚ್ಚು ವೈದ್ಯರು ನುರಿತ ತಂತ್ರಜ್ಞರು ಪಾಲ್ಗೊಳ್ಳುವರು ಎಂದು ತಿಳಿಸಿದರು.


ಕಾರ್ಯಕ್ರಮದಲ್ಲಿ ಡಾ. ನಂದಕುಮಾರ್ ಹಾಗೂ ಡಾ ಕ್ಟರ್ ಪ್ರಕಾಶ್ ತಂದೂರ್ ಅವರನ್ನು ಜೀವಮಾನದ ಸಾಧನೆಯನ್ನು ಪರಿಗಣಿಸಿ ದಂತ ವೈದ್ಯಕೀಯ ಸಂಘದ ವತಿಯಿಂದ

ಸನ್ಮಾನಿಸಿ ಸತ್ಕರಿಸಲಾಗುವುದು ಎಂದು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಡಾಕ್ಟರ್ ಬಸವರಾಜ್. ಆರ್ಗನೈಸಿಂಗ್ ಸೆಕ್ರೆಟರಿ ಗುರುಪ್ರಸಾದ್ ಎಡೆಹಳ್ಳಿ ಸೇರಿದಂತೆ ಹಲವರಿದ್ದರು.

# ನಮ್ಮ ಸರ್ಕಾರ ಅಧಿಕಾರದಲ್ಲಿ ಇರುವವರೆಗೂ ಸಿದ್ದು ಅವರೇ ಸಿಎಂ

• ಉದಯವಾಹಿನಿ, ಬೆಳಗಾವಿ

ನಮ್ಮ ಸರ್ಕಾರ ಅಧಿಕಾರದಲ್ಲಿ ಇರುವವರೆಗೂ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ. ನಾನು ಸಿ.ಎಂ ಸ್ಥಾನದ ಆಕಾಂಕ್ಷಿಯಲ್ಲ ಎಂದು ರಾಜ್ಯ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ.ದೇಶಪಾಂಡೆ ಹೇಳಿದರು.



ಇಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ನಾವು ಅಧಿಕಾರಕ್ಕೆ ಬಂದು ಒಂದು ವರ್ಷವಾಗಿದೆ. ಇನ್ನೂ ನಾಲ್ಕು ವರ್ಷ ಅಧಿಕಾರ ನಡೆಸ ಬೇಕಿದೆ. ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿ ಕೆಲಸ ಮಾಡುತ್ತಿದ್ದಾರೆ. ಹೀಗಿರುವಾಗ ಸಿ.ಎಂ ಬದಲಾವಣೆ ಬಗ್ಗೆ ಮಾತನಾಡುವುದು ತಪ್ಪಾಗುತ್ತದೆ. ಸಿದ್ದರಾಮಯ್ಯ ಬದಲಾವಣೆ ವಿಚಾರ ನನಗೆ ಕಾಣಿಸುತ್ತಿಲ್ಲ. ಮುಖ್ಯಮಂತ್ರಿ ಬದಲಿಸುತ್ತಾರೆ ಎಂದು ಯಾರು ಹೇಳಿದ್ದಾರೆ' ಎಂದು ಪ್ರಶ್ನಿಸಿದರು. ಸಿ.ಎಂ ಕುರ್ಚಿ ಖಾಲಿ ಇದ್ದಾಗ, ಆ ಸ್ಥಾನಕ್ಕೆ ಕ್ಲೇಮ್ ಮಾಡಬೇಕು. ಈಗ ಆ ಸ್ಥಾನವೇ ಖಾಲಿ ಇಲ್ಲ. ಅನೇಕರು ತಮ್ಮ ಅಭಿಪ್ರಾಯಗಳನ್ನು ಹೇಳುತ್ತಿದ್ದಾರೆ. ನಾನು ಈಗ ಸಿ.ಎಂ ಸ್ಥಾನದ ಆಕಾಂಕ್ಷಿಯಲ್ಲ ಎಂದು ಸಚಿವ ಸತೀಶ ಜಾರಕೊಹೊಳಿ ಸ್ಪಷ್ಟವಾಗಿ ಹೇಳಿದ್ದಾರೆ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ದೀಪಾವಳಿ ಬಳಿಕ ರಾಜ್ಯದಲ್ಲಿ ಸಿ.ಎಂ ಬದಲಾವಣೆ ಆಗುತ್ತಾರೆ' ಎಂಬ ಬಿಜೆಪಿ ನಾಯಕರ ಹೇಳಿಕೆಗೆ ಪ್ರತಿಕ್ರಿಯಿಸಿದ ದೇಶಪಾಂಡೆ, 'ದೀಪಾವಳಿ ನಂತರ ಕಾಂಗ್ರೆಸ್ ಸರ್ಕಾರ ಅಸ್ಥಿರಗೊಳಿಸಬೇಕು ಎಂದು ಆ ಪಕ್ಷದವರು ಪ್ರಯತ್ನಿಸುತ್ತಿದ್ದಾರೆ. ಆದರೆ, ಹಲವು ಸಮಸ್ಯೆಗಳಿದ್ದರೂ ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಗೆ 57 ಸಾವಿರ ಕೋಟಿ ಅನುದಾನ ವ್ಯಯಿಸಿದ್ದೇವೆ. ಬಿಜೆಪಿಯವರು ಅದನ್ನು ಅರ್ಥೈಸಿಕೊಳ್ಳಬೇಕು' ಎಂದರು.

ನಾನೂ ಸ್ವತಃ ವಕೀಲನಿದ್ದೇನೆ. ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ಯಾವುದೇ ಅವ್ಯವಹಾರವಾಗಿಲ್ಲ. ಸಿ.ಎಂ, ಅವರ ಪತ್ನಿ ತಪ್ಪು ಹೆಜ್ಜೆ ಇರಿಸಿಲ್ಲ. ನಮ್ಮ ಪರವಾಗಿಯೇ ನ್ಯಾಯಾಲಯ ಆದೇಶ ನೀಡಲಿದೆ' ಎಂದು ತಿಳಿಸಿದರು. ಕಾಂಗ್ರೆಸ್‌ನಲ್ಲಿ ನಾಯಕರು ಒಳಗೊಳಗೆ ಕತ್ತಿ ಮಸಿಯುತ್ತಿದ್ದಾರೆ' ಎಂಬ ಸಂಸದ ಜಗದೀಶ ಶೆಟ್ಟರ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, 'ಶೆಟ್ಟರ್ ಏಕೆ ಹೀಗೆ ಹೇಳಿದ್ದಾರೆ ಗೊತ್ತಿಲ್ಲ. ಅವರು ಈ ರೀತಿ ಮಾತನಾಡುವವರಲ್ಲ' ಎಂದರು.

# ಸಿದ್ದು ಪತ್ನಿ ಹೆಸರು ಥಳಕು ಹಾಕಿಕೊಂಡಿದ್ದಕ್ಕೆ ನೋವಾಗಿದೆ

• ಉದಯವಾಹಿನಿ, ಶಿವಮೊಗ್ಗ

ಸಿದ್ದರಾಮಯ್ಯ ಭ್ರಷ್ಟಾಚಾರಕ್ಕೆ ಅವರ ಪತ್ನಿ ಹೆಸರು ಚರ್ಚೆಯಾಗುತ್ತಿದೆ. ವ್ಯವಹಾರ ಮಾಡುವವರು ಆದಾಯ ತೆರಿಗೆ ಇತ್ಯಾದಿಗಳಿಗೆ ಮಡದಿಯ ಸಹಿ ಹಾಕಿಸಿಕೊಳ್ಳುವುದು ಸಾಮಾನ್ಯ. ಅದೇ ರೀತಿ ಪಾರ್ವತಮ್ಮ ಅವರು ಸಹಿ ಹಾಕಿರಬಹುದು. ಪ್ರಕರಣ ಏನೆಂದೇ ಅವರಿಗೆ ಗೊತ್ತಿರಲಿಕ್ಕಿಲ್ಲ. ಸಾರ್ವಜನಿಕವಾಗಿ ಎಂದೂ ಗುರುತಿಸಿಕೊಳ್ಳದ ಹೆಣ್ಣುಮಗಳ ಹೆಸರು ಬಳಕೆ ಯಾಗುತ್ತಿರುವುದು ನನಗೂ ನೋವು ತಂದಿದೆ ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದೇ ದಿನ 849 ನಿವೇಶನ ಹಂಚಿಕೆ ಮಾಡಿ ಕಾನೂನು ಉಲ್ಲಂಘನೆ ಮಾಡಿದ್ದ ಅಂದಿನ ಮುಡಾ ಅಧ್ಯಕ್ಷರ ವಿರುದ್ಧ ಸರ್ಕಾರ ತಕ್ಷಣ ಕಾನೂನು ಕ್ರಮ ಜರುಗಿಸಬೇಕು. ಹಿಂದೆ ಯಾವ ಪಕ್ಷದಲ್ಲಿ ಅವರಿದ್ದರು ಎಂಬುದು ಮುಖ್ಯವಲ್ಲ. ಈಗ ಅವರು ಮಾಡಿರುವ ಅಕ್ರಮ ಬಹಿರಂಗವಾಗಿದೆ. ತನ್ನ ಅಕ್ರಮ ವ್ಯವಹಾರ ರಕ್ಷಣೆ ಮಾಡಿಕೊಳ್ಳುವ ಉದ್ದೇಶದಿಂದಲೇ ಅವರು ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ್ದಾರೆ. ಮುಡಾದಲ್ಲಿ ಇಂತಹ ಹಗರಣ ಎಷ್ಟು ನಡೆದಿವೆಯೋ ಎಂಬ ಅನುಮಾನ ಮೂಡುತ್ತಿದೆ. ಇದು ಮೈಸೂರು ಮಾತ್ರವಲ್ಲ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ನಡೆದಿರಬಹುದು. ಸಿದ್ದರಾಮಯ್ಯ ಕೂಡಲೇ ತನಿಖೆಗೆ ಆದೇಶ ನೀಡಬೇಕು. ಭ್ರಷ್ಟಾಚಾರವನ್ನು ಯಾವ ಪಕ್ಷದವರು ಮಾಡಿದರೂ ಶಿಕ್ಷೆ ನೀಡಬೇಕು ಎಂದರು.

# ಅಧ್ಯಕ್ಷ ಆನಂದ ಟೈಗರ್, ಉಪಾಧ್ಯಕ್ಷ ಸುಲ್ತಾನಬೇಗಂ ಅವಿರೋಧ ಆಯ್ಕೆ

• ಉದಯವಾಹಿನಿ,ಚಿಂಚೋಳಿ

ಪಟ್ಟಣದ ಪುರಸಭೆಯ ಎರಡನೇ ಅವಧಿಗೆ ನಡೆದ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಕಾಂಗ್ರೇಸ್ ಪಕ್ಷದ ಆನಂದ ಟೈಗರ್ ಉಪಾಧ್ಯಕ್ಷರಾಗಿ ಸುಲ್ತಾನಾಬೇಗಂ ಖಲೀಲ್ ಪಟೇಲ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಪುರಸಭೆಯಲ್ಲಿ ಒಟ್ಟು 23ಸದಸ್ಯರ ಬಲವಿದ್ದು, ಸಂಸದರು ಮತ್ತು ಶಾಸಕರು ಸೇರಿ ಒಟ್ಟು 25ಮತಗಳು ಇದ್ದವು, 25ಮತಗಳಲ್ಲಿ 19 ಜನ ಹಾಜರಿದ್ದರು ಶಾಸಕರು ಸೇರಿ 06 ಜನ ಮತದಾರರು ಗೈರಾಗಿದ್ದರು.

**ಪುರಸಭೆ ಕಾಂಗ್ರೇಸ್ ತೆಕ್ಕೆಗೆ**



ಉದಯವಾಹಿನಿ ಚಿತ್ರ

ಪುರಸಭೆ ಚುನಾವಣೆಯಲ್ಲಿ ಶಾಸಕ, ಸಂಸದರ ಮತ ಚಲಾವಣೆಗೆ ಅವಕಾಶವಿರುವುದರಿಂದ ಬೀದರ ಸಂಸದ ಸಾಗರ ಈಶ್ವರ ಖಂಡ್ರೆ, ಹಾಜರಿದ್ದರು.

ಅಧ್ಯಕ್ಷ ಉಪಾಧ್ಯಕ್ಷ ಎರಡೂ ಸ್ಥಾನಕ್ಕೂ ಒಂದೊಂದೆ ನಾಮಪತ್ರ ಸಲ್ಲಿಕೆಯಾಗಿರುವುದರಿಂದ ಅವಿರೋಧವಾಗಿ ಆಯ್ಕೆಯಾಗಿದ್ದಾರೆ, ಕಾಂಗ್ರೇಸ್ ಪಕ್ಷದ ಅಧ್ಯಕ್ಷ ಉಪಾಧ್ಯಕ್ಷ ಆಯ್ಕೆಯಾದ ಹಿನ್ನೆಲೆಯಲ್ಲಿ ಕಾಂಗ್ರೇಸ್ ಪಕ್ಷದ ಕಾರ್ಯಕರ್ತರು ಪುರಸಭೆ ಎದುರು ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿ ಸಂಭ್ರಮಿಸಿದರು, ನಂತರ ನೂತನ ಅಧ್ಯಕ್ಷರನ್ನು ಸತ್ಕರಿಸಲಾಯಿತು. ಈ ಸಂದರ್ಭದಲ್ಲಿ ಬೀದರ ಲೋಕಸಭಾ ಕ್ಷೇತ್ರದ ಸಂಸದ ಸಾಗರ ಖಂಡ್ರೆ, ಕಾಶಿನಾಥ ಧನ್ನಿ, ಟಿಟಿ ಭೀಮರಾವ, ಮಹೇಮೂದ್ ಪಟೇಲ, ಶರಣುಪಾಟೀಲ, ನಾಗೇಶ್ವರರಾವ ಪಾಟೀಲ, ಸುಭಾಷ್ ರಾಠೋಡ್, ಅಬ್ದುಲ್ ಬಾಷೀದ್, ಅನ್ವರ್ ಖತೀಬ್, ಶಬ್ಬೀರ ಅಹೇಮದ್, ಚಿರಂಜೀವಿ ಪಾಪಯ್ಯ, ಹಾಫೀಜ್ ಅಬ್ದುಲ್ ಹಮೀದ್, ಲಕ್ಷ್ಮಣ ಆವುಂಟಿ, ಸಂತೋಷ ಗುತ್ತೇದಾರ, ವಿಶ್ವನಾಥ ಹೊಡೆಬೀರನಳ್ಳಿ, ಅನೇಕರಿದ್ದರು.

# 19ನೇ ಸಚಿವ ಸಂಪುಟದಲ್ಲಿ ಏತ ನೀರಾವರಿ ಯೋಜನೆ ಜಾರಿಗೊಳಿಸಿ

• ಉದಯವಾಹಿನಿ,ಚಿಂಚೋಳಿ

ಕಲಬುರ್ಗಿಯಲ್ಲಿ ನಡೆಯುವ 19ನೇ ಸಚಿವ ಸಂಪುಟದಲ್ಲಿ ಈ ಭಾಗದ ಎರಡು ದಶಕಗಳ ಕಾಲ ರೈತರ ಹೋರಾಟ ನಡೆಸಿ ಯೋಜನೆ ಜಾರಿಗೆ ನಿರೀಕ್ಷೆಯಲ್ಲಿರುವ ರೈತರು ಐನಾಪೂರ ಏತ ನೀರಾವರಿ ಯೋಜನೆ ಜಾರಿಗೆ ಮಾಡಿ ತಾವೇ ಯೋಜನೆ ಉಧ್ಘಾಟನೆ ಮಾಡಬೇಕು ಎಂದು ಕಲಬುರ್ಗಿ ಉಸ್ತುವಾರಿ ಸಚಿವರಾದ ಪ್ರೀಯಾಂಕ್ ಖರ್ಗೆಯವರಿಗೆ ಐನಾಪೂರ ಮುಲ್ಲಾಮಾರಿ ಏತ ನೀರಾವರಿ ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಿವಾನಂದ ಮಾಲಿಪಾಟೀಲ ಮನವಿ ಮಾಡಿದರು.

ಐನಾಪೂರ ಮುಲ್ಲಾಮಾರಿ ಏತ ನೀರಾವರಿ ಅಭಿವೃದ್ಧಿ ಸಮಿತಿಯ ಪದಾಧಿಕಾರಿಗಳು ಕಲಬುರ್ಗಿ ಉಸ್ತುವಾರಿ ಸಚಿವರಿಗೆ ಭೇಟಿಯಾಗಿ ಮನವಿಪತ್ರ ಸಲ್ಲಿಸಿದ ಅವರು, ರೈತರ ನಿರಂತರವಾಗಿ ಹೋರಾಟದ ಫಲವಾಗಿ ಕೆಳದಂಡೆ ಮುಲ್ಲಾಮಾರಿ ಜಲಾಶಯದಿಂದ ಐನಾಪೂರ ವಲಯದ ಏತ ನೀರಾವರಿ ಯೋಜನೆ ಅನುಷ್ಠಾನಕ್ಕಾಗಿ

**ಅಧ್ಯಕ್ಷ ಶಿವಾನಂದ ಮಾಲಿ ಪಾಟೀಲ ಮನವಿ**



ಉದಯವಾಹಿನಿ ಚಿತ್ರ

ಈಗಾಗಲೇ ಬೇಕಾಗಿರುವ 225ಕೋಟಿ ರೂ.ಕ್ರೀಯಾಯೋಜನೆ ನೀಲಿ ನಕ್ಷೆ, ಸರ್ಕಾರದ ಅನುಮೋದನೆ ದೊರಕಿದ್ದು ರೂಪರೇಷಗಳು ಸಿದ್ದಗೊಂಡಿದ್ದು ಯೋಜನೆ ಜಾರಿಗಾಗಿ 10ಕೋಟಿ ರೂ.ಮಂಜೂರುಗೊಳಿಸಲಾಗಿದೆ.

ಈಗಿನ ಸರ್ಕಾರ ಐನಾಪೂರ ಭಾಗದ ರೈತರ ಬಂಜಾರು ಭೂಮಿಗಳಿಗೆ ನೀರಾವರಿ ಭೂಮಿಯಾಗಿ ಪರಿವರ್ತನೆಗೊಳಿಸಿ ರೈತರ ಬಾಳು ಹಸುನಗೊಳಿಸಲು ಏತ ನೀರಾವರಿ ಯೋಜನೆ ಜಾರಿಗೆಗೊಳಿಸಬೇಕು.

ನಮ್ಮ ಕಲಬುರ್ಗಿ ಜಿಲ್ಲೆಯಲ್ಲಿಯೇ ಸಚಿವ ಸಂಪುಟ ಸಭೆ ಆಗುತ್ತಿರುವುದರಿಂದ ಈ ಭಾಗದ ಐನಾಪೂರ ಏತ ನೀರಾವರಿ ಯೋಜನೆ ಜಾರಿಗೆ ಬರುತ್ತದೆ ಎಂಬುವುದು ರೈತರ ಆಸೆಯಾಗಿದೆ,ಕಾರಣ ಯೋಜನೆಗೆ ಬೇಕಾಗುವ ಸಂಪೂರ್ಣ ಅನುದಾನವನ್ನು ಘೋಷಿಸಿ ತಾವು ಸೇರಿದಂತೆ ಮುಖ್ಯಮಂತ್ರಿಗಳು ಉಪ ಮುಖ್ಯಮಂತ್ರಿಗಳು ಸೇರಿದಂತೆ ಸಚಿವ ಸಂಪುಟ ಸಚಿವರು ಆಗಮಿಸಿ ಯೋಜನೆಗೆ ಚಾಲನೆ ನೀಡಿ ಈ ಭಾಗದ ರೈತರ ಬಹುದಿನಗಳ ಕನಸು ನನಸು ಮಾಡಬೇಕು ಎಂದು ಮನವಿ ಮಾಡಿದರು.

# ಸ್ನೇಹಿತನಿಗೆ ಸುಪಾರಿ ಕೊಟ್ಟು ಪತ್ನಿಯನ್ನು ಕೊಲ್ಲಿಸಿದ ಪಾಪಿ ಪತಿ

• ಉದಯವಾಹಿನಿ, ಹಾಸನ

ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ, ಪತಿ ಪತ್ನಿ ದೂರವಾಗಿದ್ದರು. ಈ ವೇಳೆ, ಪತಿ ಪತ್ನಿಯ ನಡುವೆ ಗಲಾಟೆ ನಡೆದು ವಿಕೋಪಕ್ಕೆ ತಿರುಗಿದಾಗ, ಪತಿಯಾದವನು ತನ್ನ ಸ್ನೇಹಿತನಿಗೆ ಸುಪಾರಿ ಕೊಟ್ಟು ತನ್ನ ಹೆಂಡತಿಯನ್ನೇ ಕೊಲ್ಲಿಸಿರುವ ಅಮಾನವೀಯ ಘಟನೆ ಹಾಸನ ಜಿಲ್ಲೆಯ ಬೇಲೂರು ತಾಲ್ಲೂಕಿನ ಯಕಶೆಟ್ಟಿಹಳ್ಳಿಯಲ್ಲಿ ನಡೆದಿದೆ.

ಹೌದು ಪತಿ ಜಗದೀಶ್ ತನ್ನ ಸ್ನೇಹಿತ ರಾಜಶೇಖರನಿಗೆ ಪತ್ನಿ ಶೀಲಳನ್ನು ಕೊಲ್ಲುವಂತೆ ಸುಪಾರಿ ನೀಡಿದ್ದ. ಈ ಹಿನ್ನೆಲೆಯಲ್ಲಿ, ಕಳೆದ ಶನಿವಾರ ಮನೆಯ ಬಳಿ ಬಂದು ಪತಿ ಜಗದೀಶ್ ಜಗಳ ಮಾಡಿದ್ದ. ಸ್ನೇಹಿತನ ಮೂಲಕ ಜಗದೀಶ್ ಹೊರಗೆ ಕರೆಸಿದ್ದ. ಮನೆಯ ಮುಂದೆ ಬಟ್ಟೆಯಿಂದ ಕುತ್ತಿಗೆಗೆ ಬಿಗಿದು ಶೀಲಾಳನ್ನು ರಾಜಶೇಖರ್ ಎನ್ನುವ ಹತ್ಯೆಗೆದಿದ್ದಾನೆ. ನಂತರ ಕಲ್ಲುಕಟ್ಟಿ ಶವವನ್ನು ಪಕ್ಕದಲ್ಲಿರುವ ಹಳ್ಳಕ್ಕೆ ಎಸೆದಿದ್ದಾನೆ. ಜಗದೀಶ್ ಸ್ನೇಹಿತನಿಂದಲೆ ಹಾಡು ಹಗಲೇ ಪತ್ನಿಯನ್ನು ಕೊಲೆ ಮಾಡಿರುವ ದೃಶ್ಯ ಇದೀಗ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಕೆಲ ವರ್ಷಗಳಿಂದ ಪತಿ ಜಗದೀಶ್, ಕೊಲೆಯಾದ ಪತ್ನಿ ಶೀಲಾ ದೂರವಾಗಿದ್ದರು. ಅಲ್ಲದೆ ಪ್ರತ್ಯೇಕವಾಗಿ ವಾಸವಾಗಿದ್ದರು. ಇದಲ್ಲದೆ ತನ್ನ ತಾಯಿ ಕಾಣೆಯಾಗಿರುವುದರ ಕುರಿತಾಗಿ ಶೀಲಾ ಮಗಳು ಪೊಲೀಸ್ ಠಾಣೆಗೆ ದೂರು ನೀಡಿದ್ದಳು.

> **ಶನಿವಾರ ಕೊಲೆಯಾದ ನಂತರ ಭಾನುವಾರ ಶೀಲಾ ಪುತ್ರಿ, ತನ್ನ ತಾಯಿ ಕಾಣೆಯಾಗಿದ್ದಾಳೆ ಎಂದು ದೂರು ನೀಡಿದ್ದಾಳೆ. ನಾಪತ್ತೆ ಕೇಸು ದಾಖಲಿಸಿಕೊಂಡ ಪೊಲೀಸರು ತನಿಖೆಯ ವೇಳೆ ಈ ಒಂದು ಕೊಲೆಯ ರಹಸ್ಯ ಬಯಲಾಗಿದೆ. ಹಂತಕ ರಾಜಶೇಖರ್ ಪತಿ ಜಗದೀಶನ್ನು ಇದೀಗ ಪೊಲೀಸರುಬಂಧಿಸಿದ್ದು, ಬೇಲೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಒಂದು ಘಟನೆ ನಡೆದಿದೆ.**

# 2ನೇ ದಿನವೂ ಪತ್ತೆಯಾಗದ ಪ್ರವಾಹದಲ್ಲಿ ಕೊಚ್ಚಿ ಹೋದ ಬಾಲಕ

• ಉದಯವಾಹಿನಿ, ಸೇಡಂ

ಕಮಲಾವತಿ ನದಿ ಪ್ರವಾಹದಲ್ಲಿ ಕೊಚ್ಚಿ ಹೋದ ಬಾಲಕ ರಾಹುಲ್ ಎಳ್ಳಿ ಈವರೆಗೂ ಪತ್ತೆಯಾಗಿಲ್ಲ, ಕಾರ್ಯಾಚರಣೆ ವೇಳೆ ಬಂದಿದ್ದ ಸಚಿವ ಡಾ.ಶರಣಪ್ರಕಾಶ ಪಾಟೀಲ ಮತ್ತು ಮಾಜಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ ಅವರು ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಬೆಳಿಗ್ಗೆ ಮಾಜಿ ಶಾಸಕ ರಾಜಕುಮಾರ ಪಾಟೀಲ ತೆಲ್ಕೂರ ಭೇಟಿ ನೀಡಿ, ರಾಹುಲ್ ತಂದೆ-ತಾಯಿಗೆ ಧೈರ್ಯ ತುಂಬಿದರು. ಧೈರ್ಯ ಕಳೆದುಕೊಳ್ಳಬಾರದು. ಉಳಿದ ಮಕ್ಕಳ ಜವಾಬ್ದಾರಿಯಿದೆ. ನದಿಯಲ್ಲಿ ಮಗ ಸಿಗುತ್ತಾನೆಂದ ಅವರು, ಜಿಲ್ಲಾಧಿಕಾರಿಗೆ ದೂರವಾಣಿ ಮೂಲಕ ಮಾತನಾಡಿ, ಎಸ್‌ಡಿಆರ್‌ಎಫ್ ತಂಡ ಕಳುಹಿಸಬೇಕು ಎಮದು ಮನವಿ ಮಾಡಿದರು. ಮಧ್ಯಾಹ್ನ ಸಚಿವ ಡಾ.ಶರಣಪ್ರಕಾಶ ಪಾಟೀಲ, ಪತ್ನಿ ಡಾ.ಭಾಗ್ಯಶ್ರೀ ಪಾಟೀಲ ಸಮೇತ ಭೇಟಿ ನೀಡಿ, ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. 'ಉಳಿದ ಮಕ್ಕಳಿಗೆ ದುಃಖವಾಗುತ್ತದೆ, ಅಳುವುದನ್ನು ನಿಲ್ಲಿಸಿ, ಆರೋಗ್ಯದತ್ತ ಕಾಳಜಿ ವಹಿಸಿ' ಎಂದು ಸಾಂತ್ವನ ಹೇಳಿದರು. ಸಚಿವ ಡಾ. ಶರಣಪ್ರಕಾಶ ಪಾಟೀಲ ಬಾಲಕರನ ಕಾರ್ಯಾರಣೆ ಚುರುಕುಗೊಳಿಸಬೇಕು. ನದಿಯತ್ತ ಜನರಿಗೆ ತೆರಳದಂತೆ ಮುಂಜಾಗ್ರತೆ ಕ್ರಮಕೈಗೊಳ್ಳಬೇಕು ಎಂದು ಸೂಚಿಸಿದರು.

ಅಧಿಕಾರಿ ಉಪವಿಭಾಗಾಧಿಕಾರಿ ಪ್ರಭುರೆಡ್ಡಿ, ತಹಶೀಲ್ದಾರ್ ಶ್ರೀಯಾಂಕ ಧನಶ್ರೀ, ಪುರಸಭೆ ಮುಖ್ಯಾಧಿಕಾರಿ ಶರಣಯ್ಯಸ್ವಾಮಿ, ಪುರಸಭೆ ಅಧ್ಯಕ್ಷ ವೀರೇಂದ್ರ ರುದ್ನೂರು, ಪುರಸಭೆ ಸದಸ್ಯ ಸಂತೋಷ ತಳವಾರ, ಮುಖಂಡ ರಾಘವೇಂದ್ರ ಮೆಕ್ಯಾನಿಕ್ ಸೇರಿದಂತೆ ಅಗ್ನಿಶಾಮಕ ಮತ್ತು ಎಸ್.ಡಿ.ಆರ್.ಎಫ್ ಸಿಬ್ಬಂದಿ ಇದ್ದರು.

# ಪ್ರಸ್ತಾವಗಳ ಅನುಮೋದನೆಗೆ ಪಟ್ಟಿ ಸಲ್ಲಿಸಿ: ಪ್ರಿಯಾಂಕ್ ಖರ್ಗೆ

## ಸರ್ಕಾರದ ಹಂತದಲ್ಲಿ ಪ್ರದೇಶದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಸ್ತಾವನೆ ಬಾಕಿ ಇದ್ದಲ್ಲಿ ಕೂಡಲೇ ಡಿಸಿಗೆ ಸಲ್ಲಿಸಬೇಕು

• ಉದಯವಾಹಿನಿ, ಕಲಬುರಗಿ

ದಶಕದ ಬಳಿಕ ಕಲಬುರಗಿಯಲ್ಲಿ ಇದೇ 17ರಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಸಭೆ ನಡೆಯಲಿದ್ದು, ಸರ್ಕಾರದ ಹಂತದಲ್ಲಿ ಪ್ರದೇಶದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಸ್ತಾವನೆ ಬಾಕಿ ಇದ್ದಲ್ಲಿ ಕೂಡಲೇ ಜಿಲ್ಲಾಧಿಕಾರಿಗೆ ಸಲ್ಲಿಸಬೇಕು' ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐಟಿ-ಬಿಟಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಸಂಸದರು, ಶಾಸಕರು ಹಾಗೂ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 'ಮಂಗಳವಾರ ರಾಜ್ಯದ ಮುಖ್ಯ ಕಾರ್ಯದರ್ಶಿಗಳ ಜೊತೆ ಜಿಲ್ಲಾಧಿಕಾರಿ ಅವರು ಸರ್ಕಾರದಲ್ಲಿ ಬಾಕಿ ಇರುವ ಪ್ರಸ್ತಾವಗಳ ಬಗ್ಗೆ ಚರ್ಚಿಸಲಿದ್ದಾರೆ.

ಸಂಪುಟ ಸಭೆಯ ಗಾಂಭೀರ್ಯ ಅರಿತು ಕೂಡಲೇ ಇಲಾಖಾವಾರು ಆಯಾ ಅಧಿಕಾರಿಗಳು ಬಾಕಿ ಪ್ರಸ್ತಾವನೆ ಬಗ್ಗೆ ಮಾಹಿತಿ ನೀಡಿದಲ್ಲಿ ಅದನ್ನು ಸಚಿವ ಸಂಪುಟದ ಮುಂದಿಟ್ಟು ಅನುಮೋದನೆ ಪಡೆಯಲು ಸರ್ವ ಪ್ರಯತ್ನ ಮಾಡಲಾಗುವುದು' ಎಂದರು.



ಉದಯವಾಹಿನಿ ಚಿತ್ರ

ಮುಖ್ಯಮಂತ್ರಿ ಸೇರಿ ಸಚಿವರು, ಸರ್ಕಾರದ ಹಿರಿಯ ಅಧಿಕಾರಿಗಳು ಜಿಲ್ಲೆಗೆ ಆಗಮಿಸುವುದರಿಂದ ಕಲಬುರಗಿ ನಗರದಾದ್ಯಂತ ಸ್ವಚ್ಛತೆ, ನೈರ್ಮಲ್ಯ ಕಾಪಾಡಬೇಕು. ನಗರದಲ್ಲಿ ಅನಧಿಕೃತ ಬ್ಯಾನರ್, ಪೋಸ್ಟರ್ ತೆರವುಗೊಳಿಸುವುದಲ್ಲದೆ ನಗರ ಸೌಂದರ್ಯೀಕರಣಕ್ಕೆ ಒತ್ತು ನೀಡಬೇಕು. ರಸ್ತೆ ಗುಂಡಿಗಳನ್ನು ಮುಚ್ಚಬೇಕು. ಸಚಿವರು, ಅಧಿಕಾರಿಗಳಿಗೆ ವಸತಿ ವ್ಯವಸ್ಥೆ ಕಲ್ಪಿಸಬೇಕು. ಸಚಿವರಿಗೆ ಆಯಾ ಇಲಾಖೆ ಅಧಿಕಾರಿಗಳೇ ಲೈಸನ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದರು.

ಸೆ.15 ರಿಂದ 17ರವರೆಗೆ ನಗರದಾದ್ಯಂತ ಪ್ರಮುಖ ವೃತ್ತಗಳಿಗೆ ದೀಪಾಲಂಕಾರ ವ್ಯವಸ್ಥೆ ಮಾಡಬೇಕು. ಕಲ್ಯಾಣ ಕರ್ನಾಟಕ ಉತ್ಸವ ದಿನದಂದು ಪೊಲೀಸ್ ಪರೇಡ್ ಮೈದಾನದಲ್ಲಿ ಸ್ತಬ್ಧ ಚಿತ್ರಗಳ ಪ್ರದರ್ಶನ ಆಯೋಜಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಪ್ರಾದೇಶಿಕ ಆಯುಕ್ತ ಕೃಷ್ಣ ಬಾಜಪೇಯಿ, ಕೆಕೆಆರ್‌ಡಿಬಿ ಕಾರ್ಯದರ್ಶಿ ಎಂ.ಸುಂದರೇಶ ಬಾಬು, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯಿತಿ ಸಿಇಒ ಭಂವರ್ ಸಿಂಗ್ ಮೀನಾ, ಕಲಬುರಗಿ ಪೊಲೀಸ್ ಕಮಿಷನರ್ ಶರಣಪ್ಪ ಎಸ್.ಡಿ., ಎಸ್ಪಿ ಅಡ್ಡೂರು ಶ್ರೀನಿವಾಸಲು, ಡಿಸಿಪಿ ಕನಿಕಾ ಸಿಕ್ರಿವಾಲ್, ಡಿಸಿಎಫ್ ಸುಮಿತ್ ಪಾಟೀಲ, ಕೆಕೆಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಎಂ.ರಾಚಪ್ಪ, ಶಾಲಾ ಶಿಕ್ಷಣ ಇಲಾಖೆಯ ಹೆಚ್ಚುವರಿ ಆಯುಕ್ತ ಡಾ. ಆಕಾಶ್ ಶಂಕರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

> **ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ, 'ಜಿಲ್ಲೆಯ ಜೀವನಾಡಿಯಾದ ಭೀಮಾ ನದಿಯ ನೀರನ್ನು ಮಹಾರಾಷ್ಟ್ರ ಹಿಡಿದಿಟ್ಟುಕೊಳ್ಳುತ್ತಿರುವುದರಿಂದ ಪ್ರತಿ ವರ್ಷ ಜಿಲ್ಲೆಯ 155 ಹಳ್ಳಿಗಳು ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿವೆ. ಕಲುಷಿತ ನೀರು ನದಿಗೆ ಸೇರುತ್ತಿದೆ. ಇದಕ್ಕೆ ಶಾಶ್ವತ ಪರಿಹಾರ ನೀಡುವ ನಿಟ್ಟಿನಲ್ಲಿ ಭೀಮಾ ನ್ಯಾಯಮಂಡಳಿ ಸ್ಥಾಪಿಸಬೇಕಿದ್ದು, ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆಯಾಗಲಿ'**
>
> - ಪ್ರಿಯಾಂಕ್ ಖರ್ಗೆ, ಸಚಿವ

### ನೀರಾವರಿ ಯೋಜನೆಗಳಿಗೆ ಆದ್ಯತೆ ಸಿಗಬೇಕು

**ಅರಣ್ಯ ಕಾಲೇಜು ಸ್ಥಾಪನೆ ನನೆಗುದಿಗೆ ಬಿದ್ದಿದ್ದು ಈ ಬಗ್ಗೆ ಸರ್ಕಾರ ಗಮನ ಹರಿಸಬೇಕು ಕನೀಜ್ ಫಾತಿಮಾ ಕಲಬುರಗಿ ಉತ್ತರ ಶಾಸಕಿಕಲಬುರಗಿ ನಗರದ ಸರ್ವೆ 1972-76ರ ಅವಧಿಯಲ್ಲಿ ಆಗಿದ್ದು ನಗರ ಬೆಳವಣಿಗೆ ದೃಷ್ಟಿಯಿಂದ ಮತ್ತೆ ಸರ್ವೆ ಮಾಡುವ ಅವಶ್ಯಕತೆ ಇದೆ ಬಸವರಾಜ ಮತ್ತಿಮಡು ಕಲಬುರಗಿ ಗ್ರಾಮೀಣ ಶಾಸಕಕಮಲಾಪುರ ಬಸ್ ನಿಲ್ದಾಣವು ಚಿಕ್ಕದಾಗಿದ್ದು ನಿವೇಶನ ದೊರಕಿಸಿಕೊಡುವ ಮೂಲಕ ದೊಡ್ಡ ಬಸ್ ನಿಲ್ದಾಣವನ್ನು ನಿರ್ಮಾಣ ಮಾಡಬೇಕು ತಿಪ್ಪಣ್ಣಪ್ಪ ಕಮಕನೂರ ವಿಧಾನಪರಿಷತ್ ಸದಸ್ಯಪ್ರದೇಶದ ನೀರಾವರಿ ಯೋಜನೆಗಳಿಗೆ ಆದ್ಯತೆ ಸಿಗಬೇಕು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯ ಸ್ಥಾಪಿಸಬೇಕು.**

ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದ ಹಿರಿಯ ಅಧಿಕಾರಿಗಳು, ಜನಪ್ರತಿನಿಧಿಗಳು ಅಲ್ಲಮಪ್ರಭು ಪಾಟೀಲ ಕಲಬುರಗಿ ದಕ್ಷಿಣ ಶಾಸಕಕಲಬುರಗಿ ಬೆಳೆಯುತ್ತಿರುವುದರಿಂದ ಸಮಗ್ರ ಮೂಲಸೌಕರ್ಯಕ್ಕೆ 100 ಕೋಟಿ ವಿಶೇಷ ಅನುದಾನ ಘೋಷಿಸಬೇಕು. ನಗರದ ನಾಲ್ಕು ದಿಕ್ಕಿನಲ್ಲಿ ಸ್ಯಾಟಲೈಟ್ ಬಸ್ ಸ್ಟ್ಯಾಂಡ್ ನಿರ್ಮಿಸಬೇಕು ಅವಿನಾಶ ಜಾಧವ ಚಿಂಚೋಳಿ ಶಾಸಕ ಚಂದ್ರಂಪಳ್ಳಿ ಜಲಾಶಯದ ಪರಿಸರವನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಬೇಕು.



## ಮಿನಿ ನ್ಯೂಸ್

### ಕೆಲಸಕ್ಕೆ ತೆರಳುತ್ತಿದ್ದ ವೇಳೆ ತಲೆ ಮೇಲೆ ಬಿದ್ದ ಕಬ್ಬಿಣ ರಾಡ್: ಎಎಸ್‌ಐ ಗಂಭೀರ

• ಉದಯವಾಹಿನಿ, ಹುಬ್ಬಳ್ಳಿ

ಹುಬ್ಬಳ್ಳಿಯ ಕೋರ್ಟ್ ಸರ್ಕಲ್ ಬಳಿ ಫ್ಲೈ ಓವರ್ ಕಾಮಗಾರಿ ನಡೆಯುತ್ತಿದ್ದ ಸ್ಥಳದಲ್ಲಿ ಅವಘಡ ಸಂಭವಿಸಿದೆ. ಉಪನಗರ ಠಾಣೆಯ ಎಎಸ್‌ಐ ನಾಭಿರಾಜ ದಯಣ್ಣನವರ(59) ಅವರ ತಲೆ ಮೇಲೆ ಕಬ್ಬಿಣದ ರಾಡ್ ಬಿದ್ದು ಗಂಭೀರವಾಗಿ ಗಾಯಗೊಂಡಿದ್ದಾರೆ. ಕಾಮಗಾರಿ ಸ್ಥಳದಲ್ಲಿ ಅವೈಜ್ಞಾನಿಕವಾಗಿ ಕಬ್ಬಿಣದ ಸಲಾಕೆ ಜೋಡಿಸುವ ಸಂದರ್ಭದಲ್ಲಿ ಅವರ ತಲೆ ಮೇಲೆ ರಾಡ್ ಬಿದ್ದು ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ತಲೆ ಮೇಲೆ ಕಬ್ಬಿಣದ ರಾಡ್ ಬಿದ್ದು ತೀವ್ರ ರಕ್ತಸ್ರಾವವಾಗಿದ್ದ ನಾಭಿರಾಜ ದಯಣ್ಣನವರ ಅವರನ್ನು ಕೂಡಲೇ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಜನರ ಓಡಾಟ ಹೆಚ್ಚಾಗಿರುವಾಗಲೇ ಹಾಡ ಹಗಲೇ ಕಬ್ಬಿಣದ ಸಲಾಕೆಗಳನ್ನು ಅವೈಜ್ಞಾನಿಕವಾಗಿ ಜೋಡಿಸಲಾಗುತ್ತಿದೆ ಇದೇ ಅವಘಡಕ್ಕೆ ಕಾರಣವಾಗಿದೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಬಾಗಲಕೋಟೆಯಲ್ಲಿ 214 ಸರ್ಕಾರಿ ನೌಕರರ ಬಳಿ ಬಿಪಿಎಲ್ ಕಾರ್ಡ್

• ಉದಯವಾಹಿನಿ, ಬಾಗಲಕೋಟೆ

ಜಿಲ್ಲೆಯಲ್ಲಿ ಸುಮಾರು 214 ಸರ್ಕಾರಿ ನೌಕರರು ಬಿಪಿಎಲ್ ಕಾರ್ಡ್ ಹೊಂದಿದ್ದು ಪತ್ತೆಯಾಗಿದ್ದು, ಅವುಗಳನ್ನು ಎಪಿಎಲ್‌ಗೆ ವರ್ಗಾಯಿಸಿ 93.18 ಲಕ್ಷ ರೂ. ದಂಡ ವಿಧಿಸಲಾಗಿದೆ. 9 ತಾಲ್ಲೂಕು ವ್ಯಾಪ್ತಿಯಲ್ಲಿ 214 ಜನ ಸರ್ಕಾರಿ ನೌಕರರು ಬಿಪಿಎಲ್ ಪಡಿತರ ಚೀಟಿ ಹೊಂದಿದ್ದರಿಂದ ಅವರು ಯಾವ ತಿಂಗಳಿಂದ, ಎಷ್ಟು ಪಡಿತರ ಆಹಾರಧಾನ್ಯ ಪಡೆದಿದ್ದಾರೋ ಅಷ್ಟು ಪ್ರಮಾಣದ ದಂಡ ಕೂಡ ವಸೂಲಿ ಮಾಡಲಾಗಿದೆ. ಅಲ್ಲದೇ 7831 ಅನಧಿಕೃತ ಪಡಿತರ ಕಾರ್ಡ್ ಪತ್ತೆ ಮಾಡಲಾಗಿದ್ದು, ಅದರಲ್ಲಿ ಸರ್ಕಾರಿ ನೌಕರರು, ತೆರಿಗೆ ಪಾವತಿದಾರರು, ಆರು ತಿಂಗಳಿಂದ ಪಡಿತರವನ್ನೇ ಪಡೆಯದವರಿದ್ದಾರೆ.

### ಪುಣೆ-ಬೆಳಗಾವಿ-ಹುಬ್ಬಳ್ಳಿ ವಂದೇ ಭಾರತ್ ರೈಲಿಗೆ ಮೋದಿಯಿಂದ ಚಾಲನೆ

• ಉದಯವಾಹಿನಿ, ಬೆಳಗಾವಿ

ಪುಣೆ-ಬೆಳಗಾವಿ ಮಧ್ಯೆ ವಂದೇ ಭಾರತ್ ರೈಲು ಆರಂಭಿಸಲು ನಡೆಸಿದ ಪ್ರಯತ್ನ ಈಗ ಸಾಕಾರಗೊಂಡಿದೆ. ಹುಬ್ಬಳ್ಳಿವರೆಗೆ ಸೇವೆ ವಿಸ್ತರಣೆಗೊಂಡಿದ್ದು, ಸೆ.15ರಂದು ಪ್ರಧಾನಿ ನರೇಂದ್ರ ಮೋದಿ ರೈಲಿಗೆ ಚಾಲನೆ ನೀಡಲಿದ್ದಾರೆ' ಎಂದು ಸಂಸದ ಜಗದೀಶ್ ಶೆಟ್ಟರ್ ಹೇಳಿದರು. ಇಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಕೆಲವು ತಿಂಗಳ ಹಿಂದೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಭೇಟಿಯಾಗಿ, ಪುಣೆ -ಬೆಳಗಾವಿ ಮಧ್ಯೆ ವಂದೇ ಭಾರತ್ ರೈಲು ಆರಂಭಿಸಬೇಕು. ಬೆಂಗಳೂರು-ಧಾರವಾಡ ವಂದೇ ಭಾರತ ರೈಲಿನ ಸೇವೆಯನ್ನು ಬೆಳಗಾವಿಯವರೆಗೆ ವಿಸ್ತರಿಸಬೇಕು ಎಂದು ಮನವಿ ಮಾಡಿದ್ದೆ. ಈಗ ಪುಣೆ-ಬೆಳಗಾವಿ-ಹುಬ್ಬಳ್ಳಿ ವಂದೇ ಭಾರತ್ ರೈಲು ಸೇವೆ ಆರಂಭವಾಗಿದೆ. ಅಂದು ಬೆಳಗಾವಿ ನಿಲ್ದಾಣದಲ್ಲೂ ಕಾರ್ಯಕ್ರಮ ಆಯೋಜಿಸಿ, ರೈಲು ಸ್ವಾಗತಿಸಲಾಗುವುದು' ಎಂದರು.

ಬೆಂಗಳೂರು-ಧಾರವಾಡ ವಂದೇ ಭಾರತ್ ರೈಲಿನ ಸೇವೆಯನ್ನು ಬೆಳಗಾವಿಯವರೆಗೆ ವಿಸ್ತರಣೆಗೆ ಎದುರಾಗಿದ್ದ ಅಡೆ-ತಡೆಗಳೆಲ್ಲ ಈಗ ನಿವಾರಣೆಯಾಗಿವೆ. ಆ ರೈಲನ್ನು ಬೆಳಗಾವಿಗೆ ವಿಸ್ತರಿಸಲು ಶೀಘ್ರವೇ ನಿರ್ಧಾರ ತೆಗೆದುಕೊಳ್ಳಲಾಗುವುದು' ಎಂದರು. ಬೆಳಗಾವಿ-ಧಾರವಾಡ ನೇರ ರೈಲು ಮಾರ್ಗ ನಿರ್ಮಾಣಕ್ಕಾಗಿ ಭೂಸ್ವಾಧೀನ ಒಂದೆರಡು ತಿಂಗಳಲ್ಲಿ ಪೂರ್ಣಗೊಳ್ಳಲಿದೆ. ಕಾಮಗಾರಿ ಶೀಘ್ರ ಆರಂಭವಾಗಲಿದೆ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

### ವೈದ್ಯರು, ಸಿಬ್ಬಂದಿಗೆ ಆರು ತಿಂಗಳಿಂದ ವೇತನವಿಲ್ಲ

• ಉದಯವಾಹಿನಿ, ಚಿತ್ರದುರ್ಗ

ಗಣಿಬಾಧಿತ ಪ್ರದೇಶಗಳ ಜನರಿಗೆ ಆರೋಗ್ಯ ತಪಾಸಣೆ ನಡೆಸುತ್ತಿರುವ ಸಂಚಾರ ಆರೋಗ್ಯ ಘಟಕಗಳ ಸಿಬ್ಬಂದಿಗೆ 6 ತಿಂಗಳಿಂದ ವೇತನ ಪಾವತಿ ಮಾಡಿಲ್ಲ. ಜೊತೆಗೆ ಔಷಧವನ್ನೂ ಸಮರ್ಪಕವಾಗಿ ಪೂರೈಸದ ಪರಿಣಾಮ ಬೆಟ್ಟಗುಡ್ಡಗಳ ಆಸುಪಾಸಿನಲ್ಲಿರುವ ಗಣಿಬಾಧಿತರಿಗೆ ಚಿಕಿತ್ಸೆ ಮರೀಚಿಕೆಯಾಗಿದೆ. ಬಳ್ಳಾರಿ, ಚಿತ್ರದುರ್ಗ, ತುಮಕೂರು ಜಿಲ್ಲೆಗಳಲ್ಲಿ ಗಣಿಬಾಧಿತ ಪ್ರದೇಶಗಳನ್ನು ಗುರುತಿಸಲಾಗಿದ್ದು, ಅಲ್ಲಿಯ ಜನರಿಗೆ ಚಿಕಿತ್ಸೆ ನೀಡಲು ಕೋವಿಡ್ ಸಂದರ್ಭದಲ್ಲಿ ಆಂಬುಲೆನ್ಸ್ ಸೇವೆ ಆರಂಭಿಸಲಾಯಿತು. ಪ್ರತಿ ತಾಲ್ಲೂಕಿಗೆ ತಲಾ ಒಂದರಂತೆ ಆಂಬುಲೆನ್ಸ್ ನೀಡಿ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ 6 ಆಂಬುಲೆನ್ಸ್‌ಗಳು ಸೇವೆ ನೀಡುತ್ತಿವೆ.

ಪ್ರತಿ ಆಂಬುಲೆನ್ಸ್‌ನಲ್ಲಿ ಒಬ್ಬರು ಎಂಬಿಬಿಎಸ್ ವೈದ್ಯ, ಒಬ್ಬರು ಶುಶ್ರೂಷಕ, ಒಬ್ಬರು ಪ್ರಯೋಗಾಲಯ ತಂತ್ರಜ್ಞ, ಔಷಧ ವಿತರಕ, 'ಡಿ' ಗ್ರೂಪ್ ನೌಕರ, ಚಾಲಕ ಇರುತ್ತಾರೆ. ಫೆಬ್ರುವರಿ ನಂತರ ಇಲ್ಲಿಯವರೆಗೂ ಸಿಬ್ಬಂದಿಗೆ ವೇತನ ಬಿಡುಗಡೆ ಮಾಡದ ಕಾರಣ ಸಿಬ್ಬಂದಿ ಅತಂತ್ರರಾಗಿದ್ದಾರೆ. ಗಣಿ ಮತ್ತು ಭೂವಿಜ್ಞಾನ ಇಲಾಖೆ, ಆರೋಗ್ಯ ಇಲಾಖೆ ಸಹಯೋಗದಲ್ಲಿ ಆರಂಭವಾಗಿರುವ ಈ ಯೋಜನೆಗೆ ಜಿಲ್ಲಾ ಖನಿಜ ನಿಧಿಯಿಂದ ಹಣ ಬಿಡುಗಡೆಯಾಗಬೇಕು. ನಿಧಿಯಲ್ಲಿ ಹಣವಿದ್ದರೂ ಇಲ್ಲಿಯವರೆಗೂ ವೇತನ ಬಿಡುಗಡೆಯಾಗಿರುವುದು ಸಿಬ್ಬಂದಿಯ ಆಕ್ರೋಶಕ್ಕೆ ಕಾರಣವಾಗಿದೆ.

### ಕಾಲಮಿತಿಯಲ್ಲಿ ಬಳಕೆಯಾಗದ ಶಾಸಕರ ಅನುದಾನ

• ಉದಯವಾಹಿನಿ, ದಾವಣಗೆರೆ

ಕ್ಷೇತ್ರದ ಜನರ ಆಶೋತ್ತರಗಳಿಗೆ ಸ್ಪಂದಿಸಲು ಹಾಗೂ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಡಿ ದೊರೆತ ಅನುದಾನವನ್ನು ಜಿಲ್ಲೆಯ ಶಾಸಕರು ಕಾಲಮಿತಿಯಲ್ಲಿ ಬಳಕೆ ಮಾಡಿಕೊಳ್ಳುತ್ತಿಲ್ಲ. ಸರ್ಕಾರ ಬಿಡುಗಡೆಗೊಳಿಸಿದ 14 ಕೋಟಿಯಲ್ಲಿ 6.25 ಕೋಟಿ ಮಾತ್ರ ವೆಚ್ಚವಾಗಿದೆ. ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿ ಅಡಿಯಲ್ಲಿ ವಿಧಾನಸಭೆ ಹಾಗೂ ವಿಧಾನಪರಿಷತ್ ಸದಸ್ಯರಿಗೆ ಪ್ರತಿ ವರ್ಷ 2 ಕೋಟಿ ಅನುದಾನವನ್ನು ಸರ್ಕಾರ ಮಂಜೂರು ಮಾಡುತ್ತದೆ.

2023-24ನೇ ಆರ್ಥಿಕ ವರ್ಷದಲ್ಲಿ ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರದ ಸದಸ್ಯರಿಗೆ ನಿಗದಿತ ಅನುದಾನ ಒದಗಿಸಲಾಗಿದೆ. ಇದರಲ್ಲಿ ಇನ್ನೂ 8.16 ಕೋಟಿ ಅನುದಾನ ಬಳಕೆಗೆ ಬಾಕಿ ಉಳಿದಿದೆ. ಭೀಕರ ಬರ ಪರಿಸ್ಥಿತಿಯ ಸಂದರ್ಭದಲ್ಲಿಯೂ ಶಾಸಕರು ಅನುದಾನ ಬಳಸಿಕೊಳ್ಳದಿರುವುದಕ್ಕೆ ಆಕ್ಷೇಪ ವ್ಯಕ್ತವಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಆಹ್ವಾನಿಸದ ಯಾವುದೇ ಅತಿಥಿ ಇಂದು ಮನೆಗೆ ಬರಬಹುದು.

**ವೃಷಭ** ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು.

**ಮಿಥುನ** ಇಂದು ನಿಮಗೆ ತುಂಬ ಉನ್ನತ ಶಕ್ತಿಯಿರುವ ದಿನ ಮತ್ತು ನೀವು ಸಣ್ಣ ವಿಷಯಗಳಿಗೂ ಕಿರಿಕಿರಿಗೊಳ್ಳುತ್ತೀರಿ. ಭವಿಷ್ಯದಲ್ಲಿ ನೀವು ಆರ್ಥಿಕವಾಗಿ ಬಲವಾಗಿರಬೇಕೆಂದು ಬಯಸಿದರೆ ಇಂದಿನಿಂದಲೇ ಹಣವನ್ನು ಉಳಿಸಿ.

**ಕರ್ಕಾಟಕ** ಕುಟುಂಬದಲ್ಲಿ ತೊಂದರೆಯುಂಟಾಗಬಹುದು. ಕುಟುಂಬದ ಜವಾಬ್ದಾರಿಗಳ ಬಗ್ಗೆ ನಿಮ್ಮ ಉದಾಸೀನತೆ ಅವರಿಗೆ ಸಿಟ್ಟು ತರಬಹುದು. ಭಾವಪೂರ್ಣ ಪ್ರೀತಿಯ ಭಾವಪರವಶತೆಯನ್ನು ಇಂದು ಅನುಭವಿಸಬಹುದು.

**ಸಿಂಹ** ಮಾನಸಿಕ ಸ್ಪಷ್ಟತೆಯನ್ನು ನಿರ್ವಹಿಸಲು ಗೊಂದಲ ಮತ್ತು ಹತಾಶೆಯನ್ನು ತಪ್ಪಿಸಿ ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ ಮತ್ತು ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ.

**ಕನ್ಯಾ** ಇಂದು ನಿಮಗೆ ಆರ್ಥಿಕ ನಷ್ಟವನ್ನು ಉಂಟುಮಾಡಬಹುದು. ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ ಇದು ಶಾಂತಿ ಭಂಗವುಂಟುಮಾಡಬಹುದು. ಪ್ರೀತಿಯ ವ್ಯವಹಾರಗಳಲ್ಲಿ ಬಲವಂತ ಮಾಡುವುದನ್ನು ತಪ್ಪಿಸಿ.

**ತುಲಾ** ಇಂದು ಶಾಂತವಾಗಿ ಒತ್ತಡ ಮುಕ್ತವಾಗಿರಿ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ.

**ವೃಶ್ಚಿಕ** ಆರೋಗ್ಯ ಚೆನ್ನಾಗಿರುತ್ತದೆ. ನೀವು ಉಳಿಸಿರುವ ಹಣ ಇಂದು ನಿಮ್ಮ ಕೆಲಸಕ್ಕೆ ಬರಬಹುದು. ಇದರೊಂದಿಗೆ ಇದರ ಹೋಗುವ ದುಃಖವು ನಿಮಗೆ ಆಗುತ್ತದೆ. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ.

**ಧನಸ್ಸು** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ.

**ಮಕರ** ಪ್ರೀತಿ ಕೇವಲ ವಸಂತ; ಹೂಗಳು, ಗಾಳಿ, ಬಿಸಿಲು, ಚಿಟ್ಟೆಗಳು. ನೀವು ಇಂದು ಪ್ರಣಯದ ಕಚಗುಳಿಯನ್ನು ಅನುಭವಿಸುತ್ತೀರಿ. ಇಂದು ನಿಮ್ಮ ಕೆಲಸದಲ್ಲಿ ನಿಮ್ಮ ಉತ್ತಮ ಕಾರ್ಯಗಳಿಗಾಗಿ ನಿಮ್ಮನ್ನು ಸನ್ಮಾನಿಸಲಾಗುವುದು.

**ಕುಂಭ** ನಿಮ್ಮ ಸಂವಹನ ಕೌಶಲಗಳನ್ನು ಪರಿಣಾಮಕಾರಿ , ಈ ದಿನ ನಿಜವಾಗಿಯೂ ಪ್ರೇಮಭರಿತವಾಗಿದೆ. ಒಳ್ಳೆಯ ಆಹಾರ, ಸುಗಂಧ, ಸಂತೋಷಗಳ ಜೊತೆ ನೀವು ನಿಮ್ಮ ಅರ್ಧಾಂಗಿಯ ಜೊತೆ ಒಳ್ಳೆಯ ಸಮಯ ಕಳೆಯುತ್ತೀರಿ.

**ಮೀನ** ಇಂದು ನಿಮ್ಮ ಮನಸ್ಸಿನಲ್ಲಿ ಉದ್ಭವವಾಗುವ ಹೊಸ ಹಣಗಳಿಕೆಯ ವಿಚಾರಗಳ ಲಾಭ ತೆಗೆದುಕೊಳ್ಳಿ. ಪ್ರಯಾಣ ಹೊಸ ಸ್ಥಳಗಳನ್ನು ನೋಡಲು ಮತ್ತು ಪ್ರಮುಖರನ್ನು ಭೇಟಿಯಾಗಲು ನಿಮಗೆ ಅವಕಾಶ ನೀಡುತ್ತದೆ.

## ಬಾಗವಾನಗೆ ಡಾ.ರಾಧಾಕೃಷ್ಣನ್ ಪ್ರಶಸ್ತಿ

• ಉದಯವಾಹಿನಿ ಮುದ್ದೇಬಿಹಾಳ




ಉದಯವಾಹಿನಿ ಚಿತ್ರ

ಮುದ್ದೇಬಿಹಾಳ ಪಟ್ಟಣದ ವಿಬಿಸಿ ಹೈಸ್ಕೂಲ್ ನ ಶಿಕ್ಷಕ ಸಾಹಿತಿ ಬರಹಗಾರ ಹೆಚ್ ಆರ್ ಬಾಗವಾನ ಅವರಿಗೆ ಗೋಕಾಕನ ನಾಡಿನ ಸಮಾಚಾರ ಸೇವಾ ಸಂಘ ಹಾಗೂ ದಿನಪತ್ರಿಕೆ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಗುರುವಂದನಾ ಕಾರ್ಯಕ್ರಮದಲ್ಲಿ ಡಾ.ರಾಧಾಕೃಷ್ಣನ್ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ. ಡಾ.ರಾಧಾಕೃಷ್ಣನ್ ಪ್ರಶಸ್ತಿ ಪುರಸ್ಕೃತ ಶಿಕ್ಷಕ ಹೆಚ್ ಆರ್ ಬಾಗವಾನ ಅವರಿಗೆ ವಿಬಿಸಿ ಹೈಸ್ಕೂಲ್ ಆಡಳಿತ ಮಂಡಳಿ ಹಾಗೂ ಶಿಕ್ಷಕರು ಮತ್ತು ಸ್ನೇಹಿತರು ಆತ್ಮೀಯ ಹಿತೈಷಿ ಬಳಗ ಅಭಿನಂದಿಸಿದ್ದಾರೆ.

## ಅತಿಥಿ ಶಿಕ್ಷಕರ ವೇತನ ಬಿಡುಗಡೆ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಸಚಿವರಿಗೆ ಮನವಿ

• ಉದಯವಾಹಿನಿ, ಯಾದಗಿರಿ



ಉದಯವಾಹಿನಿ ಚಿತ್ರ

ಶಹಾಪೂರ ತಾಲ್ಲೂಕಿನ ಪ್ರವಾಸಿ ಮಂದಿರದಲ್ಲಿ ಅತಿಥಿ ಶಿಕ್ಷಕರ ಸಂಘದ ವತಿಯಿಂದ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪ ಗೌಡ ದರ್ಶನಾಪೂರ ಅವರನ್ನು ಭೇಟಿಯಾಗಿ ಅತಿಥಿ ಶಿಕ್ಷಕರ ನಾಲ್ಕು ತಿಂಗಳ ವೇತನ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಮನವಿ ಸಲ್ಲಿಸಲಾಯಿತು ಮನವಿಗೆ ಸ್ಪಂದಿಸಿದ ಸಚಿವರು ಶಿಕ್ಷಣ ಇಲಾಖೆ ಮುಖ್ಯ ಕಾರ್ಯದರ್ಶಿ ರೀತೇಶ್ ಕುಮಾರ್ ಅವರ ಜೋತೆ ಮಾತಾಡಿ ಶೀಘ್ರದಲ್ಲಿ ವೇತನ ಬಿಡುಗಡೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಹಾಗೂ 2023ರ ಸರ್ಕಾರದ ಆರ್ಥಿಕ ಇಲಾಖೆಯ ಅನುಮೋದನೆ ಗೊಳ್ಳಬೇಕಿದ್ದ ಪ್ರಾಥಮಿಕ ಶಾಲಾ ಶಿಕ್ಷಕರಿಗೆ 15000 ಹಾಗೂ ಪ್ರೌಢಶಾಲಾ ಶಿಕ್ಷಕರಿಗೆ 16000 ವೇತನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಮನವಿ ಸಲ್ಲಿಸಲಾಯಿತು .ಈ ಸಂದರ್ಭದಲ್ಲಿ ಯಾದಗಿರಿ ಜಿಲ್ಲಾಧ್ಯಕ್ಷರಾದ ತಿಪ್ಪಣ್ಣ ಹತ್ತಿಗುಡೂರು , ಜಿಲ್ಲಾ ಉಪಾಧ್ಯಕ್ಷರಾದ ನಾಮಣ್ಣಸಗರ ಅನಿಲ ಕುಮಾರ್ ಸೋನೆಗಾರ , ಶಹಾಪೂರ ತಾಲ್ಲೂಕು ಅಧ್ಯಕ್ಷರಾದ ಮಲ್ಲಿಕಾರ್ಜುನ ರಸ್ತಾಪೂರ , ವಡಗೇರಾ ತಾಲ್ಲೂಕು ಅಧ್ಯಕ್ಷರಾದ ವಿರೇಶ್ ಕೊಂಕಲ,ಹಾಗೂ ಸಂಘಟನಾ ಸಂಚಾಲಕರಾದ ಮಲ್ಲಿಕಾರ್ಜುನ ಬಿರನೂರು , ತಾಯಪ್ಪ ಕೊಂಗಂಡಿ,ಶಂಕರ್ ಕೊಂಗಂಡಿ,ನಿಂಗಪ್ಪ ಕೊಂಗಂಡಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಎಲ್‌ಪಿಜಿ ಡೆಲಿವರಿ ಸಮಸ್ಯೆ : ಕೆಲಸ ಕಾರ್ಯ ಬಿಟ್ಟು ಸಿಲಿಂಡರ್‌ಗಾಗಿ ಅಲೆದಾಡುವ ಪರಿಸ್ಥಿತಿ

• ಉದಯವಾಹಿನಿ, ಆಳಂದ್

ಆಳಂದ್ ಪಟ್ಟಣದ ನಿವಾಸಿಗಳು ಇತ್ತೀಚೆಗೆ ಗ್ಯಾಸ್ ಡೆಲಿವರಿ ಸಮಸ್ಯೆಯಿಂದ ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಗ್ಯಾಸ್ ಸಿಲಿಂಡರ್‌ಗಳನ್ನು ಬುಕ್ ಮಾಡಿದ ನಂತರ ಡೆಲಿವರಿ ಮೆಸೇಜ್ ಬಂದರೂ, ಗ್ಯಾಸ್ ಸಿಲಿಂಡರ್ ಮನೆಗೆ ತಲುಪದ ಸಮಸ್ಯೆ ಹೆಚ್ಚಾಗಿದೆ. ಜನರು ಗ್ಯಾಸ್ ಸಿಲಿಂಡರ್ ಪಡೆಯಲು ತಮ್ಮ ಕೆಲಸ ಕಾರ್ಯವನ್ನು ಬಿಟ್ಟು, ಎಲ್‌ಪಿಜಿ ಕೇಂದ್ರಗಳಿಗೆ ತೆರಳಿ ಕ್ಯೂನಲ್ಲಿ ನಿಂತು, ನಂಬರ್ ಬಂದ ನಂತರ ಸಂಪೂರ್ಣ ಹಣ ಪಾವತಿಸಿ ಗ್ಯಾಸ್ ತೆಗೆದುಕೊಂಡು ಬರಬೇಕಾದ ಪರಿಸ್ಥಿತಿ ಉಂಟಾಗಿದೆ. ಈ ಸಮಸ್ಯೆಯ ಕುರಿತು ಇಲ್ಲಿನ ನಿವಾಸಿಗಳು ಅನೇಕ ಬಾರಿ ಸಂಬಂಧಿತ ಅಧಿಕಾರಿಗಳಿಗೆ ತಿಳಿಸಿದರೂ, ಇದುವರೆಗೂ ಸುಧಾರಣೆ ಕಾಣಿಸುವ ಯಾವುದೇ ಲಕ್ಷಣಗಳು ಕಾಣುತ್ತಿಲ್ಲ. ಇದರಿಂದ ನಿವಾಸಿಲಿಗಳು ಗ್ಯಾಸ್ ಅಧಿಕಾರಿಗಳ ವಿರುದ್ಧ ಅಸಮಾಧಾನ ಹೊರ ಹಾಕಿದ್ದಾರೆ. ದಿನಬಳಕೆಯ ವಸ್ತುಗಳಲ್ಲಿ ಗ್ಯಾಸ್ ಅಗತ್ಯವಾಗಿರುವುದರಿಂದ, ಅಧಿಕಾರಿಗಳು ಈ ಸಮಸ್ಯೆಗೆ ಶೀಘ್ರದಲ್ಲಿ ಪರಿಹಾರ ಒದಗಿಸಬೇಕು ಎಂದು ಜನರು ಬೇಡಿಕೆ ಇಟ್ಟಿದ್ದಾರೆ.



ಉದಯವಾಹಿನಿ ಚಿತ್ರ

# ತಾಲ್ಲೂಕಿನ ಒಂದು ಗ್ರಾಮ ಶರಾಯಿ ಮುಕ್ತ ಮಾಡಿ: ಯಶವಂತರಾಯಗೌಡ

### ಅ. 2ರಿಂದ ಶರಾಯಿ ಮುಕ್ತ ಗ್ರಾಮ ಮಾಡಲು ಕಾರ್ಯ ಯೋಜನೆ ರೂಪಿಸಲಾಗುವುದು: ಅಬೀದ್ ಗದ್ಯಾಳ

• ಉದಯವಾಹಿನಿ, ಇಂಡಿ

ಇಂಡಿ ತಾಲ್ಲೂಕಿನಲ್ಲಿಯ ಯಾವದಾದರೂ ಒಂದು ಗ್ರಾಮವನ್ನು ಶರಾಯಿ ಮುಕ್ತ ಮಾಡಿ ಅದು ಇತರ ಗ್ರಾಮಗಳಿಗೆ ಪ್ರೇರಣೆಯಾಗುತ್ತದೆ ಎಂದು ಅಬಕಾರಿ ಇಲಾಖಾ ಅಧಿಕಾರಿಗಳಿಗೆ ಇಂಡಿಯ ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು.

ಪಟ್ಟಣದ ಮಿನಿ ವಿಧಾನಸೌಧ ಆವರಣದಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಮಾತನಾಡಿದರು.

ಅದಕ್ಕೆ ಪೂರಕವಾಗಿ ಮಾತನಾಡಿದ ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಸ್ಥಳಿಯ ಧರ್ಮಸ್ಥಳ ಸೇವಾ ಸಂಸ್ಥೆ ಮತ್ತು ಪೂಜ್ಯ ಶ್ರೀ ಅಮೃತಾನಂದ ಅವರ ಸಹಕಾರದಿಂದ ಯಾವದಾದರೂ ಒಂದು ಗ್ರಾಮ ಗುರುತಿಸಿ ಬರುವ ಅಕ್ಟೋಬರ್ 2 ರಿಂದ ಶರಾಯಿ ಮುಕ್ತ ಗ್ರಾಮ ಮಾಡಲು ಕಾರ್ಯ ಯೋಜನೆ ರೂಪಿಸಲಾಗುವದು ಎಂದರು.

ತಾಲ್ಲೂಕಿನಲ್ಲಿ 71876 ಮಹಿಳೆಯರು ಪ್ರತಿ ತಿಂಗಳು ರೂ. 2000 ಹಣ ಪಡೆಯುತ್ತಿದ್ದು ಪ್ರತಿ ತಿಂಗಳು ಆ ಹಣ ಒಟ್ಟು 14 ಕೋಟಿ ವಿತರಣೆಯಾಗುತ್ತಿದ್ದು ಈ ವರೆಗೆ 11 ತಿಂಗಳಲ್ಲಿ 154 ಕೋಟಿ ರೂ ವಿತರಣೆಯಾಗಿದೆ ಎಂದರು.

ವಿದ್ಯುತ್ ಇಲಾಖೆಯಿಂದ ಒಟ್ಟು 81 ಸಾವಿರ ಮನೆಗಳಲ್ಲಿ 39 ಸಾವಿರ ಮನೆಗಳಿಗೆ ಒಟ್ಟು 06 ಕೋಟಿ ಮೌಲ್ಯದ ವಿದ್ಯುತ್ ಉಚಿತ ಮತ್ತು ತಾಲ್ಲೂಕಿನಲ್ಲಿ 61 ಸಾವಿರ ಜನರಿಗೆ ಅಕ್ಕಿಯ ಹಣ ಕುರಿತು ಪ್ರತಿಯೊಬ್ಬರಿಗೆ ರೂ 170 ರಂತೆ 22 ಕೋಟಿ ರೂ ಹಣ ನೀಡಲಾಗುವದು ಎಂದು ಸಭೆಯಲ್ಲಿ ಸಂಬಂದಿತ ಅಧಿಕಾರಿಗಳು ಮತ್ತು ಶಾಸಕರು ತಿಳಿಸಿದರು.

ಪಶು ಇಲಾಖೆಯ ಮುಖ್ಯ ವೈದ್ಯಾಧಿಕಾರಿ ರಾಜಕುಮಾರ ಅಡಕಿ ಮಾತನಾಡಿ ಸಿಡಿಲು ಬಡಿದು ಸಾವು ಸಂಬವಿಸಿದ 14 ಜಾನುವಾರುಗಳಿಗೆ ಮತ್ತು 90 ಇತರೆ ಕಾರಣಗಳಿಂದ ಮರಣ ಹೊಂದಿದ ಜಾನುವಾರುಗಳಿಗೆ ಪರಿಹಾರ ಹಣ ನೀಡಿದೆ ಎಂದರು.

ರೈತರು 1912 ಕ್ಕೆ ಕರೆ ಮಾಡಿದರೆ ರೈತರ ಹೊಲಗಳಿಗೆ ಅಂಬುಲನ್ಸ ಬರುತ್ತದೆ ಎಂದರು.

**ವಿಧಾನಸೌಧ ಆವರಣದಲ್ಲಿ ನಡೆದ ಕೆಡಿಪಿ ಸಭೆ**



ಉದಯವಾಹಿನಿ ಚಿತ್ರ

ಕೃಷಿ ತೋಟಗಾರಿಕೆ, ಹೆಸ್ಕಾಂ, ಅರಣ್ಯ ಆರೋಗ್ಯ ಸೇರಿದಂತೆ ವಿವಿಧ ಇಲಾಖೆಗಳ ಕುರಿತು ಚರ್ಚೆ ನಡೆಯಿತು. ಕೆಡಿಪಿಗೆ ನೂತನವಾಗಿ ಆಯ್ಕೆಯಾದ ನಾಮ ನಿರ್ದೇಶಕ ಸದಸ್ಯರಾದ ಬಿ.ಕೆ.ಪಾಟೀಲ, ಗುರನಗೌಡ ಪಾಟೀಲ,ಕೆಂಪೆಗೌಡ ಪರಗೊಂಡ ಕರಜಗಿ ಗುರುಗಳನ್ನು ಸನ್ಮಾನಿಸಲಾಯಿತು.

ವೇದಿಕೆಯ ಮೇಲೆ ಎಸಿ ಅಬೀದ್ ಗದ್ಯಾಳ, ಜಿಪಂ ನ ವಿಜಯಕುಮಾರ ಅಜುರೆ, ತಹಶೀಲ್ದಾರ ಬಿ.ಎಸ್.ಕಡಕಬಾವಿ, ಡಿ,ವಾಯ್ ಎಸ್ ಪಿ ಜಗದೀಶ ಎಚ್.ಎಸ್, ಇಒ ಬಾಬು ರಾಠೋಡ, ಭೀಮು ಕವಲಗಿ, ಇಲಿಯಾಸ ಬೋರಾಮಣ , ಪ್ರಶಾಂತ ಕಾಳೆ, ಮಲ್ಲನಗೌಡ ಬಿರಾದಾರ ಮತ್ತಿತರಿದ್ದರು.

ಅಧಿಕಾರಿಗಳಾದ ಆರ್.ಎಸ್.ರುದ್ರವಾಡಿ , ಮಹಾಂತೇಶ ಹಂಗರಗಿ, ಮಹಾದೇವಪ್ಪ ಏವೂರ ಅರಣ್ಯ ಇಲಾಖೆಯ ಎಸ್.ಜಿ.ಸಂಗಾಲಕ, ಮಂಜುನಾಥ ಧುಳೆ ಮತ್ತಿತರಿದ್ದರು.

### ಬಸ್ ಸೌಲಭ್ಯಕ್ಕಾಗಿ ಘಟಕ ವ್ಯವಸ್ಥಾಪಕರ ಜೊತೆ ಚರ್ಚೆ

ಮಹಾರಾಷ್ಟ್ರದ ಸೋಲಾಪುರಕ್ಕೆ ಹೋಗಲು ಮಹಿಳೆಯರಿಗೆ ಉಚಿತ ಬಸ್ ಸೌಲಭ್ಯಕ್ಕಾಗಿ ಶಾಸಕರು ಘಟಕ ವ್ಯವಸ್ಥಾಪಕರ ಜೊತೆ ಚರ್ಚೆ ನಡೆಸಿದರು. ಅನೇಕರು ದವಾಖಾನೆಗೆ ಹೋಗುತ್ತಾರೆ. ಹೀಗಾಗಿ ಬೆಳಗಾಂವ ಜಿಲ್ಲೆ ಅನೇಕ ಕಡೆ ಉಚಿತ ಬಸ್ ವ್ಯವಸ್ಥೆ ನೀಡಿದ್ದಾರೆ ನಮ್ಮ ತಾಲ್ಲೂಕಿನವರಿಗೂ ಸವಲತ್ತು ಕೊಡಲು ಚರ್ಚೆ ನಡೆಯಿತು. ಅದಲ್ಲದೆ ಪಟ್ಟಣದ 10 ಕಿ.ಮಿ ವರೆಗೆ ನಗರ ಸಾರಿಗೆ ಮಾಡಲು ಕೇಳಿಕೊಂಡರು. ಬಸ್ ನಿಲ್ದಾಣದಲ್ಲಿ ಸ್ವಚ್ಛತೆ ಕಾಪಾಡಬೇಕು, ನಗರದ ಡ್ರೇನೇಜ ನೀರು ಬಸ್ ನಿಲ್ದಾಣದಲ್ಲಿ ಬರುತ್ತದೆ ಎಂಬ ಕುರಿತು ಚರ್ಚೆ ನಡೆಯಿತು.

> ಜೂನ ತಿಂಗಳಲ್ಲಿ 102 ಮಿ.ಮಿ ಮಳೆ ಬರಬೇಕಾಗಿತ್ತು. 181 ಮಿ ಮಿ ಬಂದಿದೆ. ಜುಲೈ ತಿಂಗಳಲ್ಲಿ 97 ಮಿ.ಮಿ ಬರಬೇಕಾಗಿದ್ದು 94 ಮಿ.ಮಿ ಬಂದಿದೆ. ಅಗಸ್ಟ ತಿಂಗಳಲ್ಲಿ 101 ಬರಬೇಕಾಗಿತ್ತು 191 ಮಿಮಿ ಮಳೆ ಬಂದಿದೆ. ವಾಡಿಕೆಯಂತೆ ಹೆಚ್ಚಿಗೆ ಮಳೆ ಬಂದಿದೆ ಎಂದರು. ತೋಟಗಾರಿಕೆ ಇಲಾಖೆಯ ಎಚ್.ಎಸ್.ಪಾಟೀಲರು ಮಾತನಾಡಿ ಬೆಳೆಹಾನಿ 31 ಹೇಕ್ಟರ್ ಪ್ರದೇಶದಲ್ಲಿ ಹಾಳಾಗಿದ್ದು 105 ಜನರಿಗೆ ಪರಿಹಾರ ಬಂದಿದೆ. ಬರಗಾಲದಿಂದ 105 ಹೇ ಪ್ರದೇಶಕ್ಕೆ ಪರಿಹಾರ ಹಣ ನೀಡಿದ್ದಾರೆ
>
> -ಮಹಾದೇವಪ್ಪ ಏವೂರ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ

## ಅಕ್ರಮ ಮದ್ಯ ಮಾರಾಟಗಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ: ಸಿದ್ಧಲಿಂಗ ಪೂಜಾರಿ

• ಉದಯವಾಹಿನಿ, ಜೇವರ್ಗಿ

ತಾಲ್ಲೂಕಿನಾದ್ಯಂತ ಅಕ್ರಮ ಮದ್ಯ ಮಾರಾಟಗಾರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆಯ ತಾಲೂಕ ಅಧ್ಯಕ್ಷ ಸಿದ್ಧಲಿಂಗ ಪೂಜಾರಿ ಆಗ್ರಹಿಸಿದರು.

ಪಟ್ಟಣದ ತಾಲ್ಲೂಕ ಆಡಳಿತ ಆವರಣದಲ್ಲಿ ತಹಸೀಲ್ದಾರ್ ಅವರಿಗೆ ಮನವಿ ಪತ್ರ ಸಲ್ಲಿಸಿ ಅನಧಿಕೃತ ಮದ್ಯ ಮಾರಾಟಗಾರರ ಮಳಿಗೆಗಳನ್ನು ಮುಚ್ಚಿಸಿ ಅವರ ವಿರುದ್ಧ ಕಠಿಣ ಕ್ರಮ ಜರಗಿಸಬೇಕೆಂದು ಹೇಳಿದರು. ತಾಲ್ಲೂಕಿನ ನಗರಗಳಲ್ಲಿ ಮತ್ತು ಸುತ್ತಮುತ್ತಲಿನ ಹಳ್ಳಿಗಳಲ್ಲಿ ಮಾರಾಟ ಪರವಾನಿಗೆ ಇಲ್ಲದೆ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದು, ಅಂತಹ ಮಳಿಗೆಗಳಿಗೆ ಸಾಗುಸಿತ್ತಿರವಂತ ಮದ್ಯ ಮಾರಾಟಗಾರ ವಿರುದ್ಧ ಆತ್ಮಕವಾಗಿ ಪರವಾನಿಗೆ ರದ್ದುಪಡಿಸಿ ಅಂಥವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಒಂದು ವೇಳೆ ನಮ್ಮ ಮನವಿಗೆ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವದು.



ಉದಯವಾಹಿನಿ ಚಿತ್ರ

ಆಗ್ರಹಿಸಿದರು. ಈ ಸಂದರ್ಭದಲ್ಲಿ ತಾಲ್ಲೂಕ ಪ್ರಧಾನ ಕಾರ್ಯದರ್ಶಿ ಕಿರಣ್ ಸರಡಗಿ, ಮಲ್ಲಣ್ಣ ಗೌಡ ಪೊಲೀಸ್ ಪಾಟೀಲ, ಮೌನೇಶ್ ನರಿಬೋಳ ಸಂಘದ ಮಹಿಳಾ ಘಟಕದ ತಾಲ್ಲೂಕ ಅಧ್ಯಕ್ಷ ಜಯಶ್ರೀ ಅವರಾದ, ಉಪಧ್ಯಕ್ಷೆ ಭೀಮಾಬಾಯಿ ಅವರಾದ, ಸಿದ್ದಮ್ಮ ಅವರಾದ ರವಿ ಮಿಣಜಗಿ, ಮಾನಪ್ಪ ದೊಡ್ಡಮನಿ ಇದ್ದರು.

## ಎನ್‌ಹೆಚ್‌ಎಂ ಯೋಗ ತರಬೇತುದಾರರ ಸಭೆ

### ಯೋಗದ ಲಾಭವನ್ನು ಹೆಚ್ಚು ಜನರಿಗೆ ತಲುಪಿಸುವಂತೆ ಜಿಲ್ಲಾ ಸರ್ವೇಕ್ಷಣಾ ಅಧಿಕಾರಿಗಳ ಸಲಹೆ

• ಉದಯವಾಹಿನಿ, ಚಿತ್ರದುರ್ಗ

ಆರೋಗ್ಯ ಇಲಾಖೆಯ ಮಹತ್ವದ ಯೋಜನೆಯಾದ ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಡಿಯಲ್ಲಿ ಬರುವ ಯೋಗ ತರಬೇತಿ ಕಾರ್ಯಕ್ರಮ ಹೆಚ್ಚಿನ ಜನರಿಗೆ ತಲುಪಬೇಕು ಮತ್ತು ಜನರು ರೋಗ ಮುಕ್ತ ಮತ್ತು ಔಷಧ ಮುಕ್ತ ಜೀವನ ನಡೆಸುವಂತಾಗಬೇಕು ಎಂದು ಚಿತ್ರದುರ್ಗ ಜಿಲ್ಲಾ ಸರ್ವೇಕ್ಷಣಾ ಅಧಿಕಾರಿಗಳಾದ ಚಂದ್ರಶೇಖರ ಕಂಬ್ಳಿಮಠ ಇಲಾಖೆಯ ಯೋಗ ತರಬೇತು ದಾರರಿಗೆ ಸಲಹೆಬನೀಡಿದ್ದಾರೆ.

ಅವರು ಮಂಗಳವಾರ ಜಿಲ್ಲಾ ಸರ್ವೇಕ್ಷಣಾ ಅಧಿಕಾರಿಗಳ ಕಛೇರಿಯಲ್ಲಿ ಕರೆದಿದ್ದ ಯೋಗ ತರಬೇತುದಾರರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಇದೇ ಸಂಧರ್ಭದಲ್ಲಿ ಯೋಗ ತರಬೇತುದಾರರ ಸಮಸ್ಯೆಗಳ ಬಗ್ಗೆ ಚರ್ಚಿಸಿ ಯೋಗ ತರಬೇತಿ ಕಾರ್ಯಕ್ರಮದ ಸರಿಯಾದ ಅನುಷ್ಠಾನಕ್ಕಾಗಿ ಯೋಗ ತರಬೇತುದಾರರಿಗೆ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಹೇಳಿದರು.



ಉದಯವಾಹಿನಿ ಚಿತ್ರ

ಸಭೆಯಲ್ಲಿ ಯೋಗ ತರಬೇತುದಾರರಾದ ಲಲಿತಾ ಬೇದ್ರೆ, ವಸಂತಲಕ್ಷ್ಮಿ, ಮಂಜುಳಾ, ಕೆ.ರವಿ, ಮಂಜುನಾಥ್, ತಿಪ್ಪೇಸ್ವಾಮಿ, ರುದ್ರಪ್ಪ, ಬಸವರಾಜ್, ಹಾಗೂ ಕಛೇರಿ ಸಿಬ್ಬಂದಿ ರಾಧ ಉಪಸ್ಥಿತರಿದ್ದರು.


> ಯೋಗ ತರಬೇತಿ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾಗಿದ್ದು ಇದರ ಮೂಲಕ ಪ್ರತಿಯೊಬ್ಬ ನಾಗರೀಕರಿಗೂ ಯೋಗ ತರಬೇತಿ ನೀಡುವುದ್ದಾಗಿದೆ ಅದರಲ್ಲೂ ಗ್ರಾಮೀಣ ಪ್ರದೇಶದ ಜನರಿಗೆ ಯೋಗಭ್ಯಾಸದ ಉಪಯೋಗ ತಿಳಿಸಿ ಜನರು ನಿತ್ಯ ಯೋಗಭ್ಯಾಸ ಮಾಡುವುದರ ಮೂಲಕ ರೋಗ ಮುಕ್ತ ಮತ್ತು ಔಷಧ ಮುಕ್ತ ಜೀವನ ನಡೆಸುವಂತಾಗಬೇಕು ಇದಕ್ಕಾಗಿ ಯೋಗ ತರಬೇತುದಾರರು ಆರೋಗ್ಯ ಇಲಾಖೆಯ ಜೊತೆಗೆ ಹೆಚ್ಚಿನ ಶ್ರಮ ವಹಿಸಬೇಕಿದೆ
>
> -ಚಂದ್ರಶೇಖರ ಕಂಬ್ಳಿಮಠ

## ದೇಶಕ್ಕೆ ಅನ್ನ ನೀಡುವ ರೈತನೇ ನಿಜವಾದ ದೇವರು

• ಉದಯವಾಹಿನಿ, ವಡಗೇರಾ

ದೇಶಕ್ಕೆ ಅನ್ನ ನೀಡುವ ರೈತನೇ ನಿಜವಾದ ದೇವರು ರೈತರನ್ನು ಪ್ರತಿಯೊಬ್ಬರು ಗೌರವಿಸಿ ಬೆಂಬಲಿಸಿ ದೇವರು ಮುನಿಸಿಕೊಂಡರೆ ಬದುಕಬಹುದು ರೈತ ಮುನಿಸಿಕೊಂಡರೆ ನಾವು ನೀವು ಬದುಕಲು ಸಾಧ್ಯವಿಲ್ಲ ಎಂದು ಪರಮಪೂಜ್ಯ ಶ್ರೀ ವಿಶ್ವರಾಧ್ಯ ಮಹಾಸ್ವಾಮಿಗಳು ಸುಕ್ಷೇತ್ರ ಚಟ್ನಳ್ಳಿ ನುಡಿದರು. ತಾಲ್ಲೂಕಿನ ತಡಬಿಡಿ ಗ್ರಾಮದಲ್ಲಿ ರಾಜ್ಯ ರೈತ ಸಂಘ ಹಸಿರು ಸೇನೆ ವಾಸುದೇವ ಮೇಟಿ ಬಣದ ತಡಬಿಡಿ ಗ್ರಾಮ ಘಟಕ ಉದ್ಘಾಟನೆ ಹಾಗೂ ರೈತರಿಗೆ ಶಾಲು ದೀಕ್ಷೆ ಕಾರ್ಯಕ್ರಮದ ಸಾನಿಧ್ಯವನ್ನು ವಹಿಸಿ ಅವರು ಮಾತನಾಡಿದರು.

ರೈತನಿಲ್ಲದಿದ್ದರೆ ನಾವು ನೀವುಗಳು ಇಲ್ಲ ಎಂದರು. ರೈತನ ಬೆಳೆಗೆ ಯಾರು ಕೂಡ ಚೌಕಾಸಿ ಮಾಡಬಾರದು ಅದರ ಹಿಂದೆ ರೈತರ ಶ್ರಮ ಹೇಚಿತ್ತಿರುತ್ತದೆ ರೈತರ ಉತ್ಪನ್ನಗಳನ್ನು ಖರೀದಿ ಮಾಡುವ ದಲ್ಲಾಳಿಗಳು ಬೆಲೆ ನಿಗದಿ ಮಾಡಿ ಮಾರಾಟ ಮಾಡುತ್ತಾರೆ ಆದರೆ ಅದೇ ರೈತ ಬೆಳೆದ ಬೆಳೆಗಳಿಗೆ ಬೆಂಬಲ ನಿಗದಿ ಮಾಡಿಕೊಳ್ಳುವ ಹಕ್ಕು ರೈತನಿಗೆ ಇಲ್ಲದಿರುವುದು ದುರಾದೃಷ್ಟಕರ ಸರ್ಕಾರಗಳು ಗ್ಯಾರಂಟಿಗಳ ರೀತಿಯಲ್ಲಿ ರೈತರಿಗೆ ಬೆಂಬಲ ಬೆಲೆ ಗ್ಯಾರಂಟಿ ಘೋಷಣೆ ಮಾಡುವಂತೆ ರಾಜ್ಯ ಸರಕಾರಕ್ಕೆ ಸಲಹೆ ನೀಡಿದರು. ಈ ಕಾರ್ಯಕ್ರಮವನ್ನು ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷರಾದ ವಾಸುದೇವ ಮೇಟಿ ಉದ್ಘಾಟಿಸಿ ಗ್ರಾಮ ಘಟಕದ ಪದಾಧಿಕಾರಿಗಳಿಗೆ ಶಾಲು ದೀಕ್ಷೆ ಮಾಡಿ ಮಾತನಾಡಿದರು. ನಮ್ಮ ಸಂಘಟನೆಯ ತತ್ವಸಿದ್ಧಾಂತಗಳಿಗೆ ಬದ್ಧರಾಗಿ ಕಾರ್ಯನಿರ್ವಹಿಸಿ ಆಸೆ ಆಮಿಷಗಳಿಗೆ ಬಲಿಯಾಗದೆ ರೈತರ ಪರ ಹೋರಾಟಗಳಿಗೆ ಕಂಕಣ ಬದ್ಧರಾಗುವಂತೆ ತಿಳಿಸಿದರು. ಪ್ರತಿಯೊಂದು ಸರ್ಕಾರ ಜನಪ್ರತಿನಿಧಿಗಳು ರೈತರನ್ನು ಕಡೆಗಣಿಸುತ್ತಲೆ ಇದ್ದಾರೆ ರೈತರ ಪ್ರಮುಖ ಬೇಡಿಕೆಗಳನ್ನು ಈಡೇರಿಸದೆ ರೈತರ ಜೀವನದ ಜೊತೆಗೆ ಚೆಲ್ಲಾಟವಾಡುತ್ತಿದ್ದಾರೆ ಎಂದು ಕಿಡಿಕಾರಿದರು.



ಉದಯವಾಹಿನಿ ಚಿತ್ರ

ಕಾರ್ಯಕ್ರಮಕ್ಕೂ ಮೊದಲು ಎತ್ತು ಬಂಡಿಗಳನ್ನು ಸಿಂಗರಿಸಿ ಗ್ರಾಮದಲ್ಲಿ ಮೆರವಣಿಗೆ ಮಾಡಲಾಯಿತು.ಯಾದಗಿರಿ ಜಿಲ್ಲಾಧ್ಯಕ್ಷ ಮಲ್ಲಣ್ಣಗೌಡ ಹಗರಟಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾಮ ಘಟಕದ ಅಧ್ಯಕ್ಷರಾಗಿ ದೇವಪ್ಪ ರವರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಮುನ್ನಯ್ಯಸ್ವಾಮಿ, ರಾಜ್ಯ ಕಾರ್ಯದರ್ಶಿ ನೂರ್ ಅಹಮದ್, ಕಲಬುರ್ಗಿ ಜಿಲ್ಲಾಧ್ಯಕ್ಷ ಪ್ರಶಾಂತ ಗೌಡ, ಬಸನಗೌಡ ಮಾಲಿ ಪಾಟೀಲ್, ಶರಣಪ್ಪ ವಾಗಣಗೇರಿ, ವೆಂಕುಬ ಕಟ್ಟಿಮನಿ, ಶಿವಶರಣಪ್ಪ ಸಾಹುಕಾರ್ , ಮಹೀಪಾಲ್ ರೆಡ್ಡಿ, ಶರಣಪ್ಪ ಸಾಹುಕಾರ್ ಭೇಟಗೇರಿ,ಹಳ್ಳೆಪ್ಪ ತೇಜೇರ, ಮಲ್ಲು ನಾಟೇಕಾರ, ಸತೀಶ್ ಪೂಜಾರಿ, ಹಾಗೂ ರೈತ ಸಂಘದ ಪದಾಧಿಕಾರಿಗಳು ಸದಸ್ಯರು ಉಪಸ್ಥಿತರಿದ್ದರು.

### ಉಗ್ರ ಹೋರಾಟದ ಎಚ್ಚರಿಕೆ

ಈಗಾಗಲೇ ಅತಿ ಹೆಚ್ಚು ಮಳೆಯ ಹಾನಿಯಿಂದ ಹತ್ತಿ ತೊಗರಿ ಇನ್ನಿತರ ಬೆಳೆಗಳು ಹಾಳಾಗಿದ್ದು ಅಧಿಕಾರಿಗಳು ರೈತರಿಗೆ ಕೂಡಲೇ ಪರಿಹಾರ ಒದಗಿಸುವ ಕಾರ್ಯಕ್ಕೆ ಮುಂದಾಗಬೇಕು. ರೈತರಿಗೆ ಸಂಬಂಧಿಸಿದ ಸರಕಾರಿ ಇಲಾಖೆಯ ಕೆಲಸ ಕಾರ್ಯಗಳನ್ನು ಸಕಾಲದಲ್ಲಿ ಮಾಡಿ ಕೊಡಬೇಕು ವಿಳಂಬ ಮಾಡಿದ್ದಲ್ಲಿ ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

## ಸೇತುವೆಯ ಸಾಮರ್ಥ್ಯ ತಪಾಸಣೆ ಯಂತ್ರ ಆಗಮನ

• ಉದಯವಾಹಿನಿ, ಬಂಟ್ವಾಳ

ಪೊಳಲಿ ಸಮೀಪದ ಅಡ್ಡೂರು ಸೇತುವೆಯ ಸಾಮರ್ಥ್ಯ ಪರಿಶೀಲನೆಗಾಗಿ ಬೆಂಗಳೂರಿನಿಂದ ರಾಜ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಅಧೀನದ ಸೇತುವೆ ತಪಾಸಣೆ ಯಂತ್ರವು ಆಗಮಿಸಿ ಸೋಮವಾರದಿಂದ ಸಾಮರ್ಥ್ಯ ತಪಾಸಣೆಯ ಕಾರ್ಯ ಆರಂಭಿಸಿದ್ದು, ಸುಮಾರು 3 ದಿನಗಳ ಕಾಲ ಈ ಕಾರ್ಯ ಮುಂದುವರಿಯುವ ಸಾಧ್ಯತೆ ಇದೆ.

ಸೇತುವೆಯಲ್ಲಿ 11 ಸ್ಪಾನ್‌ಗಳಿದ್ದು, ಪ್ರತಿಯೊಂದರ ಕೋರ್ ಮಾದರಿ ಪಡೆದು ಬಳಿಕ ಬೆಂಗಳೂರಿನ ಪ್ರಯೋಗಾಲಯಕ್ಕೆ ಕಳುಹಿಸಿ ಅಲ್ಲಿ ತಪಾಸಣೆ ಮಾಡಲಾಗುತ್ತದೆ. ಅವರು ಪರಿಶೀಲನ ವರದಿಯನ್ನು ಲೋಕೋಪಯೋಗಿ ಇಲಾಖೆಗೆ ನೀಡಿ ದ.ಕ. ಡಿಸಿಗೆ ಒಪ್ಪಿಸಲಿದ್ದಾರೆ.

ಬಳಿಕ ಡಿಸಿ ಸಂಚಾರದ ಕುರಿತು ನಿರ್ಧಾರ ತೆಗೆದುಕೊಳ್ಳಲಿದ್ದಾರೆ. ಮೊದಲ ದಿನ 2 ಸ್ಪಾನ್‌ಗಳ ಪರಿಶೀಲನೆ ನಡೆದಿದೆ ಎನ್ನಲಾಗಿದೆ. ಆಗಾಗ ಮಳೆಯಾಗುತ್ತಿದ್ದು, ತಪಾಸಣೆ ವೇಗಕ್ಕೆ ಅಡ್ಡಿಯಾಗಿದೆ ಎಂದು ಮೂಲವು ತಿಳಿಸಿದೆ.



ಉದಯವಾಹಿನಿ ಚಿತ್ರ

ಅಡ್ಡೂರು ಸೇತುವೆ ತಪಾಸಣೆಯ ಬಳಿಕ ಮಂಗಳೂರು ಉಪವಿಭಾಗ ವ್ಯಾಪ್ತಿಯ ಉಳಾಯಿಬೆಟ್ಟು, ಮರವೂರು, ಪಲಿಮಾರು ಸೇತುವೆಗಳ ತಪಾಸಣೆಯ ಕಾರ್ಯ ನಡೆಯಲಿದೆ. ಮೊದಲ ದಿನ ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಎಂಜಿನಿಯರ್ ಗೋಕುಲ್‌ದಾಸ್, ಕಾರ್ಯನಿರ್ವಾಹಕ ಎಂಜಿನಿಯರ್ ಅಮರನಾಥ ಜೈನ್, ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಆರ್.ಬಿ.ನಾಗರಾಜ್, ಸಹಾಯಕ ಎಂಜಿನಿಯರ್ ಹೇಮಂತ್‌ಕುಮಾರ್ ಮತ್ತಿತರರು ಸ್ಥಳದಲ್ಲಿದ್ದರು.

## ಉತ್ತಮ ಪತ್ರಕರ್ತ ಪ್ರಶಸ್ತಿಪತ್ರ, ನೆನಪಿನ ಕಾಣಿಕೆ ಪ್ರದಾನ, ಸನ್ಮಾನ

• ಉದಯವಾಹಿನಿ, ಚಿಂಚೋಳಿ

ಕರ್ನಾಟಕ ರಾಜ್ಯ ಮಾಹಿತಿ ಹಕ್ಕು ಮತ್ತು ಕಾರ್ಯಕರ್ತರ ತಾಲ್ಲೂಕಾ ವೇದಿಕೆ ವತಿಯಿಂದ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅತ್ಯುತ್ತಮ ಪತ್ರಕರ್ತವೆಂದು ಪರಿಗಣಿಸಿ ಮಹೇಬೂಬಶಾ ಅಣವಾರ ಅವರಿಗೆ ಪ್ರಶಸ್ತಿಪತ್ರ ಮತ್ತು ನೆನಪಿನ ಕಾಣಿಕೆ ನೀಡಿದ್ದಕ್ಕಾಗಿ ವಕೀಲರ ಸಂಘದ ಸದಸ್ಯರಾದ ರಾಜೇಂದ್ರಕುಮಾರ ವರ್ಮಾ ನೇತೃತ್ವದಲ್ಲಿ ವಕೀಲರ ಸಂಘದ ಸದಸ್ಯರು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ವಕೀಲರಾದ ವಿಶ್ವನಾಥ ಬೆನಕಿನ್,ಹಣಮಂತ ಹಿರೇಮನಿ ಪೂಜಾರಿ,ಚಂದ್ರಶೇಟ್ಟಿ ಜಾಧವ,ರವೀಂದ್ರ ಹೂವಿನಭಾವಿ, ಶ್ರೀನಿವಾಸ ಬಂಡಿ,ಇರ್ಫಾನ್ ಮಾಲಿಪಟೇಲ,ಜಗನ್ನಾಥ ಗಂಜಗಿರಿ,ಉಮೇಶ ಪಾಟೀಲ,ಡಿ.ಕೆ ಚವ್ಹಾಣ,ಶಂಕರ ರಾಠೋಡ್, ಸಂಜೀವ ಕುಮಾರ ಮೇತ್ರಿ , ಚಂದ್ರಶೇಖರ ಮಲಸಾ, ಸೂರ್ಯಕಾಂತ ಚಿಂಚೋಳಿ, ರಾಜೇಂದ್ರ ರೇವಣೋರ, ಶಶಿಕಾಂತ ಅಡಕಿ,ರಾಮಲಿಂಗ ಹೊಡೆಬೀರನಳ್ಳಿ, ಶಿಶಂಕರ ಐನೋಳ್ಳಿ, ಮಲ್ಲಿಕಾರ್ಜುನ,ರಾಜಶೇಖರ ಹುಡಗಿ ದೇಗಲಮಡಿ ಮತ್ತು ಆರ್.ಗಣಪತರಾವ ಇದ್ದರು.



ಉದಯವಾಹಿನಿ ಚಿತ್ರ

## ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಲಾರಿ, ತಪ್ಪಿದ ಅನಾಹುತ

• ಉದಯವಾಹಿನಿ, ಚಿಕ್ಕಮಗಳೂರು

ಭಾರೀ ಮಳೆಯ ಹಿನ್ನೆಲೆಯಲ್ಲಿ ರಸ್ತೆ ಕಾಣದೆ ಲಾರಿಯೊಂದು ಡಿವೈಡರ್ ಮೇಲೇರಿ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ವಿದ್ಯುತ್ ಕಂಬ ತುಂಡಾಗಿ ಲಾರಿಯ ಮೇಲೆ ಬಿದ್ದ ಘಟನೆ ಚಿಕ್ಕಮಗಳೂರು ನಗರದ ಎಐಟಿ ವೃತ್ತದಲ್ಲಿ ಸಂಭವಿಸಿದೆ. ಚಿಕ್ಕಮಗಳೂರಿನಲ್ಲಿ ಭಾರೀ ಮಳೆಯಾಗುತ್ತಿದ್ದು ಈ ಹಿನ್ನೆಲೆಯಲ್ಲಿ ಲಾರಿ ಚಾಲಕನಿಗೆ ರಸ್ತೆ ಕಾಣದೆ ಡಿವೈಡರ್ ಮೇಲೇರಿದೆ ಈ ವೇಳೆ ಅಲ್ಲಿದ್ದ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿದೆ ಪರಿಣಾಮ ವಿದ್ಯುತ್ ಕಂಬ ತುಂಡಾಗಿ ಲಾರಿಯ ಮೇಲೆಯೇ ಬಿದ್ದಿದೆ ಅದೃಷ್ಟವಶಾತ್ ಡಿಕ್ಕಿ ಹೊಡೆದ ಕೂಡಲೇ ಪವರ್ ಕಟ್ ಆದ ಹಿನ್ನೆಲೆಯಲ್ಲಿ ಸಂಭವನೀಯ ಅವಘಡ ತಪ್ಪಿದೆ, ಜೊತೆಗೆ ಘಟನೆಯಲ್ಲಿ ಯಾವುದೇ ಅನಾಹುತ ಸಂಭವಿಸಿಲ್ಲ ಎಂದು ಹೇಳಲಾಗಿದೆ.



ಉದಯವಾಹಿನಿ ಚಿತ್ರ

ಮಹಾರಾಷ್ಟ್ರದಿಂದ ತರಕಾರಿ ಖರೀದಿಗಾಗಿ ಚಿಕ್ಕಮಗಳೂರಿಗೆ ಲಾರಿ ಬಂದಿತ್ತು ಎಂದು ಹೇಳಲಾಗಿದೆ.

# ಜಿಲ್ಲಾ ಮಟ್ಟದ ಎಸ್ಸಿಎಸ್ಟಿ ಮತ್ತು ಟಿಎಸ್ಪಿ ಪ್ರಗತಿ ಪರಿಶೀಲನೆ ಸಭೆ

### ಪರಿಶಿಷ್ಟರ ಅಭಿವೃದ್ಧಿಗಾಗಿಯೇ ಎಸ್ಸಿಎಸ್ಟಿ, ಟಿಎಸ್ಪಿ ಅನುದಾನ ಮೀಸಲು: ಪ್ರೊ.ವಿಜಯೇಂದ್ರ, ಬಾಬು

• ಉದಯವಾಹಿನಿ, ಬಳ್ಳಾರಿ

ಪರಿಶಿಷ್ಟರ ಆರ್ಥಿಕ ಸ್ಥಿತಿ ಸುಧಾರಣೆಯಾಗಲು, ಅವರ ಪ್ರಮಾಣಕ್ಕನುಸಾರವಾಗಿ ರಾಜ್ಯ ಸರ್ಕಾರವು ಆಯವ್ಯಯದಲ್ಲಿ ವಿಶೇಷ ಅನುದಾನ ಮೀಸಲಿಡಲಾಗುತ್ತಿದ್ದು, ಅಧಿಕಾರಿಗಳು ಅವರಿಗಾಗಿಯೇ ಪೂರ್ಣ ಪ್ರಮಾಣದಲ್ಲಿ ವ್ಯಯಿಸಬೇಕು ಎಂದು ಬೆಂಗಳೂರು ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಗಾಗಿ ಸಂಸ್ಥೆಯ (ಐಎಸ್‌ಇಸಿ) ಸಲಹೆಗಾರ ಹಾಗೂ ಮಾಜಿ ಯೋಜನಾ ನಿರ್ದೇಶಕ ಪ್ರೊ.ವಿಜಯೇಂದ್ರ ಬಾಬುಅವರು ಹೇಳಿದರು.

ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕುಟುಂಬಗಳ ಯೋಗಕ್ಷೇಮದ ಮೇಲೆ ಎಸ್ಸಿಎಸ್ಪಿ ಮತ್ತು ಟಿಎಸ್ಪಿ ಯೋಜನೆ ಕಾರ್ಯಕ್ರಮಗಳ ಪರಿಣಾಮ ಕುರಿತು ಅಧ್ಯಯನದ ಭಾಗವಾಗಿ ನಗರದ ಜಿಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಎಸ್ಸಿಎಸ್ಪಿ ಮತ್ತು ಟಿಎಸ್ಪಿ ಪ್ರಗತಿ ಪರಿಶೀಲನೆ ಮತ್ತು ಸಂವಾದ ಸಭೆ ಉದ್ಘಾಟಿಸಿ ಅವರು ಮಾತನಾಡಿದರು. ಅಧಿಕಾರಿಗಳು ತಮ್ಮ ಇಲಾಖೆಗಳಿಂದ ನೀಡುವ ವಿವಿಧ ಸೌಲಭ್ಯ ಹಾಗೂ ಉಪಕರಣಗಳ ಬಗ್ಗೆ ಸಾಕಷ್ಟು ಪ್ರಚಾರ ನೀಡಬೇಕು. ಪರಿಶಿಷ್ಟರ ಸಮುದಾಯದಲ್ಲಿ ಸಾಕ್ಷಾರತಾ ಅರಿವು ಕಡಿಮೆ. ಸೌಲಭ್ಯಗಳ ಮಾಹಿತಿ ತಲುಪುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದ ಅವರು, ಮನೆ ಭೇಟಿ ನೀಡುವ ಮೂಲಕ ಕ್ಷೇತ್ರ ಪ್ರಚಾರ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸಲಹೆ ನೀಡಿದರು.

ವಿವಿಧ ಯೋಜನೆಗಳಡಿಯಲ್ಲಿ ಫಲಾಪೇಕ್ಷಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು. ಅರ್ಜಿಗಳನ್ನು ಆಹ್ವಾನಿಸದೇ ಫಲಾನುಭವಿಗಳನ್ನು ಆಯ್ಕೆ ಮಾಡುವುದು ಸೂಕ್ತವಲ್ಲ. ಆಯ್ಕೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆಯನ್ನು ಪಾಲಿಸಬೇಕು ಎಂದರು. ಅದೇರೀತಿಯಾಗಿ ಒಂದೇ ಫಲಾನುಭವಿಗೆ ಮತ್ತೊಮ್ಮೆ ಸೌಲಭ್ಯ ನೀಡುವಂತಿಲ್ಲ, ಫಲಾನು ಭವಿಗಳು ತಮಗೆ ನೀಡಿರುವ ಉಪಕ ರಣ ಹಾಗೂ ಸೌಲಭ್ಯಗಳನ್ನು ಸ್ವತ: ಉಪಯೋಗಿಸಿಕೊಂಡಿರುವ ಬಗ್ಗೆ ಇಲಾಖಾಧಿಕಾರಿಗಳು ಖಾತ್ರಿಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

**ಶಿಸ್ತುಕ್ರಮ:** ಅಧಿಕಾರಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉಪಯೋಜನೆಯಡಿ ಅನುಷ್ಠಾನಗುವ ಕಾರ್ಯಕ್ರಮಗಳನ್ನು ಉದ್ದೇಶಪೂರ್ವಕವಾಗಿ ನಿರ್ಲಕ್ಷಿಸಿದಲ್ಲಿ ಶಿಸ್ತುಕ್ರಮ ಅಥವಾ ಕ್ರಿಮಿನಲ್ ಕ್ರಮಕ್ಕೆ ಒಳಪಡುತ್ತಾರೆ ಎಂದು ಅವರು ತಿಳಿಸಿದರು. ಜಿಲ್ಲಾ ಮಟ್ಟದಲ್ಲಿ ವಿವಿಧ ಇಲಾಖೆಗಳಲ್ಲಿ ಎಸ್‌ಸಿಎಸ್‌ಪಿ, ಟಿಎಸ್‌ಪಿ ನೋಡಲ್ ಅಧಿಕಾರಿಗಳನ್ನು ನೇಮಿಸಬೇಕು. ಇದರ ಮೇಲ್ವಿಚಾರಣೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮೇಲ್ವಿಚಾರಣಾ ಸಮಿತಿ ರಚಿಸಿ, ಪ್ರಗತಿ ವಿಚಾರಣೆ ನಡೆಸಬೇಕು ಎಂದು ನಿರ್ದೇಶನ ನೀಡಿದರು. ಮುಖ್ಯವಾಗಿ ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆಯಡಿ ಒದಗಿಸಿದ ಅನುದಾನವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಾತ್ರ ವಿನಿಯೋಗಿಸಬೇಕು ಎಂದರು. ಅಧಿಕಾರಿಗಳು ತಮ್ಮ ಇಲಾಖೆಗಳಿಗೆ ಒದಗಿಸಿದ ಎಸ್‌ಸಿಎಸ್‌ಪಿ, ಟಿಎಸ್‌ಪಿ ಅನುದಾನವನ್ನು ಪರಿಶಿಷ್ಟರ ಏಳಿಗೆಗಾಗಿ ತಲುಪಿಸುವಲ್ಲಿ ತೊಂದರೆಗಳಿದ್ದಲ್ಲಿ ತಿಳಿಸಬೇಕು. ಈ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ಹೇಳಿದರು. ಇದೇ ವೇಳೆ ವಿವಿಧ ಇಲಾಖಾವಾರು ನೀಡುವ ಸೌಲಭ್ಯಗಳು ಮತ್ತು ಉಪಕರಣಗಳ ಬಗ್ಗೆ ವಿಚಾರಿಸಿ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಬೆಂಗಳೂರು ಐಎಸ್‌ಇಸಿಯ ಮುಖ್ಯಸ್ಥರು ಹಾಗೂ ಪ್ರಾಧ್ಯಾಪಕರಾದ ಪ್ರೊ.ಎಸ?.ಮಾಧೇಶ್ವರನ್, ಸಹಾಯಕ ಪ್ರಾಧ್ಯಾಪಕಿ ಬಿ.ಪಿ.ವಾಣಿ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ದಿವಾಕರ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.




ಉದಯವಾಹಿನಿ ಚಿತ್ರ

### ಬಳಕೆಯಾಗದ ಅನುದಾನ ಮರುಹಂಚಿಕೆ

ಎಸ್ಸಿಎಸ್ಟಿ ಮತ್ತು ಟಿಎಸ್ಪಿ ಯೋಜನೆಯಡಿ ಹಂಚಿಕೆ ಮಾಡಿರುವ ಮೊತ್ತವು ಖರ್ಚಾಗದೆ ಉಳಿದ ಸಂದರ್ಭದಲ್ಲಿ ಲೆಕ್ಕ ಪರಿಶೋಧನೆಯಾದ ಬಳಿಕ ಅದರ ಮುಂದಿನ ಹಣಕಾಸು ವರ್ಷಕ್ಕೆ ಸೇರ್ಪಡೆಯಾಗುತ್ತದೆ. ಈ ಅನುದಾನದಲ್ಲಿ 1/3 ಭಾಗ ಸಮಾಜ ಕಲ್ಯಾಣ ಇಲಾಖೆಗೆ ಹಾಗೂ 3/2 ಭಾಗ ಆಯಾ ಇಲಾಖೆಗೆ ಹಂಚಿಕೆಯಾಗುತ್ತದೆ. ಆ ವರ್ಷ ಮೀರಿದ ನಂತರ ಅದನ್ನು ಮುಂದುವರೆಸಲಾಗುವುದಿಲ್ಲ ಎಂದು ಅಧಿಕಾರಿಗಳಿಗೆ ಸ್ಪಷ್ಟಪಡಿಸಿದರು.

> ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳ ವೈಯಕ್ತಿಕ ಅಭಿವೃದ್ಧಿಗಾಗಿ ಅನುಷ್ಠಾನ ಮಾಡುವ ಕಾರ್ಯಕ್ರಮಗಳಿಗೆ ಅನುದಾನ ಹಂಚಿಕೆ ಮಾಡಲಾಗುತ್ತದೆ. ಅವರನ್ನು ಮುನ್ನಲೆಗೆ ತರಲು ಅ?ಕಾರಿಗಳು ಪ್ರಾಮಾಣಿಕವಾಗಿ ಸೌಲಭ್ಯ ವಿತರಿಸಿ ಅನುದಾನ ವೆಚ್ಚ ಮಾಡಬೇಕು
>
> -ಪ್ರೊ.ವಿಜಯೇಂದ್ರ, ಬಾಬು

# ಡಿವೋರ್ಸ್ ಬಳಿಕ ನಿವಿ ಫುಲ್ ಆಕ್ಟೀವ್



ರ್‍ಯಾಪರ್ ಚಂದನ್ ಶೆಟ್ಟಿ ಜೊತೆಗಿನ ಡಿವೋರ್ಸ್ ಬಳಿಕ ನಿವೇದಿತಾ ಗೌಡ ಸೋಶಿಯಲ್ ಮೀಡಿಯಾದಲ್ಲಿ ಫುಲ್ ಆಕ್ಟೀವ್ ಆಗಿದ್ದಾರೆ. ಮತ್ತಷ್ಟು ಹಾಟ್ ಆಗಿರುವ ನಿವೇದಿತಾ ಹೊಸ ರೀಲ್ಸ್‌ಗಳ ಮೂಲಕ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ಶೇರ್ ಮಾಡಿರುವ ರೀಲ್ಸ್‌ನಲ್ಲಿ ನಟಿಯ ಅವತಾರ ನೋಡಿ ನೆಟ್ಟಿಗರು ಕಾಲೆಳೆದಿದ್ದಾರೆ. ಬಿಗ್ ಬಾಸ್, ಗಿಚ್ಚಿ ಗಿಲಿಗಿಲಿ ಶೋ ನಂತರ ಹೊಸ ಹೊಸ ಫೋಟೋಶೂಟ್‌ಗಳಲ್ಲಿ ನಿವೇದಿತಾ ಕಾಣಿಸಿಕೊಳ್ಳುತ್ತಿದ್ದಾರೆ. ಇಂಗ್ಲಿಷ್ ಹಾಡಿಗೆ ಹೆಜ್ಜೆ ಹಾಕಿದ್ದಾರೆ. ಸಖತ್ ಹಾಟ್ ಆಗಿ ಕಾಣಿಸಿಕೊಂಡಿರುವ ನಟಿಗೆ ಪಾಸಿಟಿವ್ ಮತ್ತು ನೆಗೆಟಿವ್ ಕಾಮೆಂಟ್ ವ್ಯಕ್ತವಾಗಿದೆ. ಮೊದಲು ಬಾತ್‌ರೂಮ್‌ನಿಂದ ಆಚೆ ಬನ್ನಿ ಎಂದೆಲ್ಲಾ ನಟಿಗೆ ನೆಟ್ಟಿಗರು ಟೀಕಿಸಿದ್ದಾರೆ. ಅಂದಹಾಗೆ, ಚಂದನ್ ಶೆಟ್ಟಿ ಮುದ್ದುರಾಕ್ಷಸಿ, ಸೃಜನ್ ಲೋಕೇಶ್ ನಿರ್ದೇಶನದ 'ಜಿಎಸ್‌ಟಿ' ಚಿತ್ರದಲ್ಲಿಯೂ ನಿವೇದಿತಾ ನಟಿಸಿದ್ದಾರೆ. ಎರಡು ಸಿನಿಮಾಗಳ ರಿಲೀಸ್‌ಗೆ ನಟಿ ಎದುರು ನೋಡ್ತಿದ್ದಾರೆ.



# ಸಿಖಂದರ್ ಚಿತ್ರತಂಡ ಸೇರಿಕೊಂಡ ಕಾಜಲ್

ಸಲ್ಮಾನ್ ಖಾನ್, ರಶ್ಮಿಕಾ ಮಂದಣ್ಣ ನಟನೆಯ ಬಹುನಿರೀಕ್ಷಿತ 'ಸಿಖಂದರ್' ಸಿನಿಮಾಗೆ ಸೌತ್ ಸ್ಟಾರ್ ನಟಿ ಕಾಜಲ್ ಅಗರ್ವಾಲ್ ಎಂಟ್ರಿ ಕೊಟ್ಟಿದ್ದಾರೆ. ಈ ಮೂಲಕ ಬಾಲಿವುಡ್‌ನ ಬಿಗ್ ಆಫರ್‌ವೊಂದನ್ನು ನಟಿ ಬಾಚಿಕೊಂಡಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ. ಈಗಾಗಲೇ 'ಸಿಖಂದರ್' ಸಿನಿಮಾದ ಶೂಟಿಂಗ್ ಭರದಿಂದ ನಡೆಯುತ್ತಿದೆ. ಸಲ್ಮಾನ್ ಖಾನ್ ಚಿತ್ರೀಕರಣದಲ್ಲಿ ಬ್ಯುಸಿಯಾಗಿದ್ದಾರೆ. ರಶ್ಮಿಕಾ ನಂತರ ಮತ್ತೋರ್ವ ನಟಿ ಕಾಜಲ್ ಚಿತ್ರಕ್ಕೆ ಸಾಥ್ ನೀಡುತ್ತಿದ್ದಾರೆ. ಅವರು 'ಸಿಖಂದರ್' ಸಲ್ಮಾನ್ ಜೊತೆ ಪ್ರಮುಖ ಪಾತ್ರದಲ್ಲಿ 'ಮಗಧೀರ' ನಟಿ ಕಾಣಿಸಿಕೊಳ್ತಿದ್ದಾರೆ ಎನ್ನಲಾಗಿದೆ. ಆದರೆ ನಟಿಯ ಎಂಟ್ರಿಯ ಹಾಗೂ ಆ ಪಾತ್ರದ ಕುರಿತು ಚಿತ್ರತಂಡ ಅಧಿಕೃತವಾಗಿ ತಿಳಿಸುವವರೆಗೂ ಕಾಯಬೇಕಿದೆ.

ಕಾಜಲ್ ಎಂಟ್ರಿಯ ಬಗ್ಗೆ ಗುಸು ಗುಸು ಶುರುವಾಗುತ್ತಿದ್ದಂತೆ ಸಿನಿಮಾ ಕುರಿತು ಫ್ಯಾನ್ಸ್‌ಗೆ ನಿರೀಕ್ಷೆ ಹೆಚ್ಚಾಗಿದೆ. ಸಲ್ಮಾನ್, ರಶ್ಮಿಕಾ, ಕಾಜಲ್ ಈ ಮೂವರನ್ನು ತೆರೆಯ ಮೇಲೆ ಕಣ್ತುಂಬಿಕೊಳ್ಳೋಕೆ ಫ್ಯಾನ್ಸ್ ಕಾಯ್ತಿದ್ದಾರೆ. 'ಕಾಂತ' ಚಿತ್ರಕ್ಕಾಗಿ ಕೈಜೋಡಿಸಿದ ರಾಣಾ ದಗ್ಗುಬಾಟಿ, ದುಲ್ಕರ್ ಸಲ್ಮಾನ್ ಇನ್ನೂ ಈ ಚಿತ್ರವನ್ನು ಸ್ಟಾರ್ ಡೈರೆಕ್ಟರ್ ಎ.ಆರ್ ಮುರಗದಾಸ್ ನಿರ್ದೇಶನ ಮಾಡ್ತಿದ್ದಾರೆ. ಚಿತ್ರದಲ್ಲಿ ಪ್ರತೀಕ್ ಬಬ್ಬರ್, ಸತ್ಯರಾಜ್ ಸೇರಿದಂತೆ ಹಲವರು ನಟಿಸುತ್ತಿದ್ದಾರೆ. ಮುಂದಿನ ವರ್ಷ ಸಿನಿಮಾ ರಿಲೀಸ್ ಆಗಲಿದೆ.




# ವಿಕ್ರಾಂತ್ ರೋಣ ಪಾರ್ಟ್ 2 ಮಾಡುವ ಬಗ್ಗೆ ಅನೂಪ್ ಸುಳಿವು

'ವಿಕ್ರಾಂತ್ ರೋಣ' ಸಿನಿಮಾಗೆ ಆಕ್ಷನ್ ಕಟ್ ಹೇಳಿದ್ದ ನಿರ್ದೇಶಕ ಅನೂಪ್ ಭಂಡಾರಿ ಮತ್ತೊಮ್ಮೆ ಸುದೀಪ್ ಜೊತೆ ಕೈಜೋಡಿಸಿದ್ದಾರೆ. 'ಬಿಲ್ಲಾ ರಂಗ ಭಾಷಾ' ಸಿನಿಮಾಗಾಗಿ ಜೊತೆಯಾಗುತ್ತಿದ್ದಾರೆ. 'ವಿಕ್ರಾಂತ್ ರೋಣ 2' ಬರುವ ಬಗ್ಗೆ ನಿರ್ದೇಶಕ ಸೀಕ್ರೆಟ್ ಬಿಚ್ಚಿಟ್ಟಿದ್ದಾರೆ. ಜೊತೆಗೆ ಈ ಹಿಂದೆ ಸುದೀಪ್ ಜೊತೆ 'ಅಶ್ವತ್ಥಾಮ' ಚಿತ್ರಕ್ಕೆ ಅನೂಪ್ ನಿರ್ದೇಶನ ಮಾಡಬೇಕಿತ್ತು. ಆ ಪ್ರಾಜೆಕ್ಟ್ ಏನಾಯ್ತು ಎಂದು ತಿಳಿಸಿದ್ದಾರೆ. 'ಅಶ್ವತ್ಥಾಮ' ಸಿನಿಮಾ ಸುದೀಪ್ ಅವರ ಜೊತೆ ಮಾಡಬೇಕಿತ್ತು. ಅದು ವಿಕ್ರಾಂತ್ ರೋಣ ನಂತರ ಚಿತ್ರ ಮಾಡಲು ಪ್ಲ್ಯಾನ್ ಆಗಿತ್ತು.

2020ರಲ್ಲಿ 'ವಿಕ್ರಾಂತ್ ರೋಣ' ನನ್ನ ಹುಟ್ಟುಹಬ್ಬದ ದಿನವೇ ಶೂಟಿಂಗ್ ಶುರುವಾಗಿತ್ತು. ಎರಡೆರಡು ಬಾರಿ ಕೊವೀಡ್‌ನಿಂದ ಲಾಕ್‌ಡೌನ್ ಆಯ್ತು. ಶೂಟಿಂಗ್ ನಿಂತು ನಿಂತು ಒಂದೂವರೆ ವರ್ಷ ಪ್ಲ್ಯಾನ್ ಮಾಡಿದ ಪ್ರಾಜೆಕ್ಟ್ 4 ವರ್ಷ ತೆಗೆದುಕೊಂಡಿತ್ತು. ಚಿತ್ರೀಕರಣ ಬೇಗ ಮುಗಿದಿದ್ರೆ, ವಿಕ್ರಾಂತ್ ರೋಣ ಬಳಿಕ 'ಅಶ್ವತ್ಥಾಮ' ಸಿನಿಮಾ ಮಾಡುತ್ತಿದ್ವಿ ಎಂದು ನಿರ್ದೇಶಕ ಅನೂಪ್ ಭಂಡಾರಿ ಮಾತನಾಡಿದ್ದಾರೆ. ಅಷ್ಟರಲ್ಲಿ 'ಕಲ್ಕಿ 2898 ಎಡಿ' ಸಿನಿಮಾ ಬಂತು ಅದರಲ್ಲಿ ಅಶ್ವತ್ಥಾಮ ಪಾತ್ರ ಹೈಲೆಟ್ ಆಯ್ತು. ಮತ್ತೊಂದು 'ಅಶ್ವತ್ಥಾಮ' ಸಿನಿಮಾ ಅನೌನ್ಸ್ ಆಯಿತು. ಅದಕ್ಕೆ ಮುಂದೆ ನೋಡೋಣ ಎಂದು ಹೋಲ್ಡ್ ಮಾಡಿದ್ವಿ. ಈಗ ನಮ್ಮ ಹತ್ತಿರ 'ಬಿಲ್ಲಾ ರಂಗ ಭಾಷಾ' ಇದೆ. 'ವಿಕ್ರಾಂತ್ ರೋಣ 2' ಮಾಡಬೇಕು ಅಂದ್ರು, ಅದಕ್ಕೂ ಅವಕಾಶ ಇದೆ ಎಂದು ಸೀಕ್ವೆಲ್ ಬರುವ ಬಗ್ಗೆ ಸುಳಿವು ನೀಡಿದ್ದಾರೆ ಅನೂಪ್. ಹಾಗಾದ್ರೆ, ಈ ಸಿನಿಮಾ ಬಗ್ಗೆಯೂ ಅಧಿಕೃತವಾಗಿ ಅನೌನ್ಸ್ ಆಗುತ್ತಾ ಕಾದುನೋಡಬೇಕಿದೆ.

# ಕಾಶಿನಾಥ್ ಪುತ್ರನ ಸಿನಿಮಾದ ಟೀಸರ್ ರಿಲೀಸ್



ಯುವ ಆವೇಗದ ತಂಡವೊಂದು ಅಖಾಡಕ್ಕಿಳಿಯಿತೆಂದರೆ, ಅಚ್ಚರಿದಾಯಕ ಕಂಟೆಂಟೊಂದು ರೂಪುಗೊಳ್ಳುತ್ತಿದೆ ಎಂದೇ ಅರ್ಥ. ಅದನ್ನು ಮತ್ತೆ ನಿಜವಾಗಿಸುವ ನಿಟ್ಟಿನಲ್ಲಿ 'ಎಲ್ಲಿಗೆ ಪಯಣ ಯಾವುದೋ ದಾರಿ ಚಿತ್ರದ ಮೂಲಕ ತಂಡವೊಂದು ಎಂಟ್ರಿ ಕೊಟ್ಟಿದೆ. ಈಗಾಗಲೇ ತಣ್ಣಗೆ ಚಿತ್ರೀಕರಣ ಮುಗಿಸಿಕೊಂಡಿರುವ ಈ ಚಿತ್ರದ ಟೀಸರ್ ಇದೀಗ ಬಿಡುಗಡೆಗೊಂಡಿದೆ. ಸೀಮಿತ ದೃಶ್ಯಗಳಲ್ಲಿಯೇ ಕುತೂಹಲದ ಕನೆಗಟ್ಟಿಕೊಂಡಿರುವಂತೆ ಭಾಸವಾಗುವ ಈ ಟೀಸರ್ ಪ್ರೇಕ್ಷಕರನ್ನು ಸಲೀಸಾಗಿ ತನ್ನತ್ತ ಸೆಳೆದುಕೊಳ್ಳುವಂತಿದೆ. ಇದು ಅಭಿಮನ್ಯು ಕಾಶಿನಾಥ್ ನಾಯಕನಾಗಿ ನಟಿಸಿರುವ ಚಿತ್ರ. ಬೇರೆಯದ್ದೇ ತೆರನಾದ ವಿಶಿಷ್ಟ ಪಾತ್ರದ ಮೂಲಕ ಅಭಿಮನ್ಯು ಪ್ರೇಕ್ಷಕರನ್ನು ಮುಖಾಮುಖಿಯಾಗಲು ತಯಾರಾಗಿದ್ದಾರೆ.

ಸದರಿ ಟೀಸರ್‌ನಲ್ಲಿ ಅವರು ವಿಭಿನ್ನ ಗೆಟಪ್ಪಿನಲ್ಲಿ ಕಾಣಿಸಿಕೊಂಡಿದ್ದಾರೆ. ಪ್ರಧಾನವಾಗಿ ಇದೊಂದು ಥ್ರಿಲ್ಲರ್ ಕಥನವನ್ನು ಒಳಗೊಂಡಿರುವ ಚಿತ್ರವೆಂಬ ಸಂದೇಶವೊಂದು, ಅತ್ಯಂತ ಪರಿಣಾಮಕಾರಿಯಾಗಿ ಪ್ರೇಕ್ಷಕರತ್ತ ದಾಟಿಕೊಂಡಿದೆ. ಈ ಟೀಸರ್ ಜೊತೆ ಜೊತೆಗೇ ಒಂದಷ್ಟು ಸೂಕ್ಷ್ಮ ಸಂಗತಿಗಳನ್ನು ಚಿತ್ರತಂಡ ಹಂಚಿಕೊಂಡಿದೆ. ಇದು ಕಿರಣ್ ಎಸ್ ಸೂರ್ಯ ನಿರ್ದೇಶನದ ಚೊಚ್ಚಲ ಚಿತ್ರ. ಈಗಾಗಲೇ ಹನ್ನೆರಡು ವರ್ಷಗಳ ಕಾಲ ಚಿತ್ರರಂಗದ ನಾನಾ ವಿಭಾಗಗಳಲ್ಲಿ ಕಾರ್ಯ ನಿರ್ವಹಿಸಿರುವವರು ಕಿರಣ್.

# ಜೀವನ ಕ್ಷಣಿಕ ಎಂದ 'ಪುಷ್ಪ' ನಟಿ



ರಶ್ಮಿಕಾಗೆ ಅಪಘಾತ

ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಅವರು ನಾನ್ಯಾಕೆ ಇತ್ತೀಚಿನ ದಿನಗಳಲ್ಲಿ ಸೋಶಿಯಲ್ ಮೀಡಿಯಾದಲ್ಲಿ ದೂರವಿದ್ದೆ ಎಂಬುದನ್ನು ರಿವೀಲ್ ಮಾಡಿ ದ್ದಾರೆ. ಇತ್ತೀಚೆಗೆ ನನಗೆ ಸಣ್ಣದಾಗಿ ಅಪಘಾತವಾಗಿತ್ತು. ಈಗ ನಾನು ಚೇತರಿಸಿಕೊಂಡಿದ್ದೇನೆ ಎಂದು ತಿಳಿಸಿದ್ದಾರೆ. ಜೀವನ ತುಂಬಾ ಕ್ಷಣಿಕ. ಇರುತ್ತೇವೋ, ಇಲ್ಲವೋ ಗೊತ್ತಿಲ್ಲ ಎಂದು ಅಪಘಾತದ ಬೆನ್ನಲ್ಲೇ ನಟಿ ಪೋಸ್ಟ್ ಹಂಚಿಕೊಂಡಿ ದ್ದಾರೆ. ಒಂದು ಶಾಕಿಂಗ್ ಪೋಸ್ಟ್ ಹಂಚಿಕೊಂಡ ರಶ್ಮಿ ಕಾ, ತಮಗೆ ಅಪಘಾತ ಆಗಿದ್ದರ ಬಗ್ಗೆ ಮಾಹಿತಿ ತಿಳಿಸಿದ್ದಾರೆ. ಎಲ್ಲರೂ ಹೇಗಿದ್ದೀರಿ ನಾನು ಇಲ್ಲಿಗೆ ಬಂದು ಸ್ವಲ್ಪ ಸಮಯವಾಗಿದೆ ಮತ್ತು ನಾನು ಸಾರ್ವಜನಿಕವಾಗಿ ಕಾಣಿಸಿಕೊಂಡಿಲ್ಲ ಎಂಬುದು ನನಗೆ ತಿಳಿದಿದೆ. ಕಳೆದ ತಿಂಗಳು ನಾನು ಹೆಚ್ಚು ಸಕ್ರಿಯವಾಗಿರಲಿಲ್ಲ. ಕಾರಣ ಏನೆಂದರೆ, ನನಗೆ ಚಿಕ್ಕ ಅಪಘಾತವಾಗಿತ್ತು. ನಾನು ಈಗ ಚೇತರಿಸಿಕೊಂಡಿದ್ದೇನೆ. ಆದರೆ ವೈದ್ಯರು ಹೇಳಿದಂತೆ ಮನೆಯಲ್ಲಿಯೇ ವಿಶ್ರಾಂತಿ ಪಡೆದುಕೊಂಡಿದ್ದೇನೆ ಎಂದು ರಶ್ಮಿಕಾ ಮಂದಣ್ಣ ಹೇಳಿದ್ದಾರೆ. ನಾನು ಈಗ ಚೇತರಿಸಿಕೊಂಡಿದ್ದೇನೆ ಮತ್ತು ನನ್ನ ಎಂದಿನ ಚಟುವಟಿಕೆಗಳನ್ನು ಮಾಡಲು ಇನ್ನಷ್ಟು ಸೂಪರ್ ಆಕ್ಟೀವ್ ಆಗುವ ಹಂತದಲ್ಲಿದ್ದೇನೆ. ನಿಮ್ಮ ಬಗ್ಗೆ ಕಾಳಜಿ ವಹಿಸಲು ಯಾವಾಗಲೂ ಆದ್ಯತೆ ನೀಡಿ. ಯಾಕೆಂದರೆ, ಜೀವನ ತುಂಬ ಚಿಕ್ಕದು. ನಮಗೆ ನಾಳೆ ಅನ್ನೊದು ಇದೆಯೋ, ಇಲ್ಲವೋ ಎಂಬುದೇ ತಿಳಿದಿಲ್ಲ. ಆದ್ದರಿಂದ ಪ್ರತಿದಿನವು ಸಂತೋಷವಾಗಿರಿ ಎಂದು ರಶ್ಮಿಕಾ ಸಲಹೆ ನೀಡಿದ್ದಾರೆ.

ಮತ್ತೊಂದು ಅಪ್ಡೇಟ್, ನಾನು ಈಗ ಲಡ್ಡುಗಳನ್ನು ತಿನ್ನುತ್ತಿದ್ದೇನೆ ಎಂದು ಪೋಸ್ಟ್ ಹಾಕಿದ್ದಾರೆ. ಆದರೆ ರಶ್ಮಿಕಾ ಎಲ್ಲಿಯೂ ಕೂಡ ತಮಗೆ ಏನಾಗಿತ್ತು ಯಾವ ರೀತಿ ಸಮಸ್ಯೆಗಳನ್ನು ಎದುರಿಸಿದ್ದರು ಎಂದು ಹೇಳಿಲ್ಲ.

ಅಂದಹಾಗೆ, ರಶ್ಮಿಕಾಗೆ ಸೌತ್ ಮತ್ತು ಬಾಲಿವುಡ್‌ನಲ್ಲಿ ಭಾರೀ ಬೇಡಿಕೆಯಿದೆ. ಸಾಲು ಸಾಲು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಪುಷ್ಪ 2, ಛಾವಾ ಸಿನಿಮಾ ರಿಲೀಸ್‌ಗೆ ಸಿದ್ಧವಾಗಿದೆ. ಜೊತೆಗೆ ಕುಬೇರ, ಸಿಖಂದರ್, ದಿ ಗರ್ಲ್ ಫ್ರೆಂಡ್, ರೈನ್‌ಬೋ ಸಿನಿಮಾಗಳ ಕೆಲಸ ನಡೆಯುತ್ತವೆ.

# ಭಾರತ ಎ ತಂಡಕ್ಕೆ ಮಯಾಂಕ್ ನಾಯಕ



ಪ್ರಸ್ತುತ ನಡೆಯುತ್ತಿರುವ ದುಲೀಪ್ ಟ್ರೋಫಿಯ 3ನೇ ಪಂದ್ಯದಲ್ಲಿ ಭಾರತ ಎ ತಂಡವನ್ನು ಮಯಾಂಕ್ ಅಗರ್ವಾಲ್ ಮುನ್ನಡೆಸಲಿದ್ದಾರೆ. ತಂಡದ ನಾಯಕರಾಗಿದ್ದ ಶುಭ್‌ಮನ್ ಗಿಲ್ ಬಾಂಗ್ಲಾದೇಶ್ ವಿರುದ್ಧದ ಟೆಸ್ಟ್ ಸರಣಿಗೆ ಆಯ್ಕೆಯಾಗಿರುವ ಹಿನ್ನಲೆ ದುಲೀಪ್ ಟ್ರೋಫಿಯ ಉಳಿದ ಪಂದ್ಯಗಳಿಗೆ ಅಲಭ್ಯರಾಗಿದ್ದಾರೆ. ಹೀಗಾಗಿ ತಂಡದ ಸಾರಥ್ಯವನ್ನು ಮಯಾಂಕ್ ಅಗರ್ವಾಲ್‌ಗೆ ವಹಿಸಲಾಗಿದೆ.

ಮೊದಲ ಪಂದ್ಯದಲ್ಲಿ ಭಾರತ ಎ ತಂಡದ ವಿರುದ್ಧ ಭಾರತ ಬಿ ತಂಡವು ಭರ್ಜರಿ ಜಯ ಸಾಧಿಸಿತ್ತು. ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಭಾರತ ಬಿ ತಂಡವು ಯುವ ದಾಂಡಿಗ ಮುಶೀರ್ ಖಾನ್ (181) ಅವರ ಭರ್ಜರಿ ಶತಕದ ನೆರವಿನಿಂದ 321 ರನ್ ಕಲೆಹಾಕಿತ್ತು. ಇದಕ್ಕುತ್ತರವಾಗಿ ಮೊದಲ ಇನಿಂಗ್ಸ್ ಆಡಿದ ಭಾರತ ಎ ತಂಡವು 231 ರನ್ ಗಳಿಸಲಷ್ಟೇ ಶಕ್ತರಾದರು. ಇನ್ನು ದ್ವಿತೀಯ ಇನಿಂಗ್ಸ್‌ನಲ್ಲಿ ಭಾರತ ಬಿ ತಂಡವು 184 ರನ್‌ಗಳಿಗೆ ಆಲೌಟ್ ಆಯಿತು. ಮೊದಲ ಇನಿಂಗ್ಸ್ ಹಿನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್‌ನಲ್ಲಿ 288 ರನ್‌ಗಳ ಗುರಿ ಪಡೆದ ಭಾರತ ತಂಡವು 198 ರನ್‌ಗಳಿಗೆ ಮುಗ್ಗರಿಸಿತು. ಈ ಮೂಲಕ ಅಭಿಮನ್ಯು ಈಶ್ವರನ್ ಮುಂದಾಳತ್ವದ ಭಾರತ ಬಿ ತಂಡವು 76 ರನ್‌ಗಳಿಂದ ಭರ್ಜರಿ ಜಯ ಸಾಧಿಸಿತು. ಇನ್ನು ಸೆಪ್ಟೆಂಬರ್ 12 ರಿಂದ ಆಂಧ್ರ ಪ್ರದೇಶದ ಅನಂತಪುರದಲ್ಲಿರುವ ರೂರಲ್ ಡೆವಲಪ್‌ಮೆಂಟ್ ಟ್ರಸ್ಟ್ ಸ್ಟೇಡಿಯಂನಲ್ಲಿ ನಡೆಯಲಿರುವ 3ನೇ ಪಂದ್ಯದಲ್ಲಿ ಭಾರತ ಎ ತಂಡವು ಭಾರತ ಡಿ ತಂಡವನ್ನು ಎದುರಿಸಲಿದೆ.

## ಶುಭ್‌ಮನ್ ಗಿಲ್ ಅಲಭ್ಯ

ಈ ಪಂದ್ಯದಲ್ಲಿ ಮಯಾಂಕ್ ಅಗರ್ವಾಲ್ ಇಂಡಿಯಾ ಎ ತಂಡವನ್ನು ಮುನ್ನಡೆಸಲಿದ್ದಾರೆ.

**ಮೂವರು ಆಟಗಾರರು ಅಲಭ್ಯ**

ದುಲೀಪ್ ಟ್ರೋಫಿಯಲ್ಲಿ ಭಾರತ ಎ ತಂಡದ ಪರ ಕಣಕ್ಕಿಳಿದಿದ್ದ ಮೂವರು ಆಟಗಾರರು ಬಾಂಗ್ಲಾದೇಶ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯಕ್ಕೆ ಆಯ್ಕೆಯಾಗಿದ್ದಾರೆ.ಹೀಗಾಗಿ ಇಂಡಿಯಾ ಡಿ ವಿರುದ್ಧದ ಪಂದ್ಯಕ್ಕೆ ಕೆಎಲ್ ರಾಹುಲ್, ಶುಭ್‌ಮನ್ ಗಿಲ್, ಧ್ರುವ್ ಜುರೆಲ್ ಅಲಭ್ಯರಾಗಿದ್ದಾರೆ.

**ಭಾರತ ಎ ತಂಡ:** ಮಯಾಂಕ್ ಅಗರ್ವಾಲ್ (ನಾಯಕ), ರಿಯಾನ್ ಪರಾಗ್, ತಿಲಕ್ ವರ್ಮಾ, ಶಿವಂ ದುಬೆ, ತನುಷ್ ಕೋಟ್ಯಾನ್, ಕುಲ್ದೀಪ್ ಯಾದವ್, ಆಕಾಶ್ ದೀಪ್, ಪ್ರಸಿದ್ಧ್ ಕೃಷ್ಣ, ಖಲೀಲ್ ಅಹ್ಮದ್, ಅವೇಶ್ ಖಾನ್, ವಿದ್ವತ್ ಕಾವೇರಪ್ಪ, ಕುಮಾರ್ ಕುಶಾಗ್ರ, ಶಾಶ್ವತ್ ರಾವತ್.

**ಯಾವ ಚಾನೆಲ್‌ನಲ್ಲಿ ನೇರ ಪ್ರಸಾರ**

ಈ ಬಾರಿಯ ದುಲೀಪ್ ಟ್ರೋಫಿಯು ಸ್ಪೋರ್ಟ್ಸ್ 18 ಚಾನೆಲ್‌ನಲ್ಲಿ ನೇರ ಪ್ರಸಾರವಾಗಲಿದೆ. ಹಾಗೆಯೇ ಈ ಪಂದ್ಯವನ್ನು ಜಿಯೋ ಸಿನಿಮಾ ಆಪ್‌ನಲ್ಲಿ ಉಚಿತವಾಗಿ ವೀಕ್ಷಿಸಬಹುದು.

# 42ನೇ ವಯಸ್ಸಿನಲ್ಲಿ ಐಪಿಎಲ್‌ನತ್ತ ಅಂಡರ್ಸನ್

ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಕಾಣಿಸಿಕೊಳ್ಳದ ಕೆಲವೇ ಕೆಲವು ಶ್ರೇಷ್ಠ ಆಟಗಾರರಲ್ಲಿ ಇಂಗ್ಲೆಂಡ್ ವೇಗಿ ಜೇಮ್ಸ್ ಅಂಡರ್ಸನ್ ಕೂಡ ಒಬ್ಬರು. ಇಂಗ್ಲೆಂಡ್ ಪರ ಮೂರು ಸ್ವರೂಪಗಳಲ್ಲಿ ಕಣಕ್ಕಿಳಿದರೂ ಅಂಡರ್ಸನ್ ಐಪಿಎಲ್‌ನತ್ತ ಮಾತ್ರ ಮುಖ ಮಾಡಿರಲಿಲ್ಲ. ಅದರಲ್ಲೂ ಐಪಿಎಲ್ ಹರಾಜಿಗಾಗಿ ಒಮ್ಮೆಯೂ ಹೆಸರು ನೋಂದಾಯಿಸಿಕೊಂಡಿರಲಿಲ್ಲ ಎಂಬುದು ವಿಶೇಷ.

ಆದರೆ ಇದೀಗ 17 ವರ್ಷಗಳ ಬಳಿಕ ಐಪಿಎಲ್ ಹರಾಜಿಗಾಗಿ ಜೇಮ್ಸ್ ಅಂಡರ್ಸನ್ ಹೆಸರು ನೋಂದಾಯಿಸಿಕೊಳ್ಳುವ ಸಾಧ್ಯತೆಯಿದೆ. ಅದು ಸಹ ತಮ್ಮ 42ನೇ ವಯಸ್ಸಿನಲ್ಲಿ ಎಂಬುದು ವಿಶೇಷ. ಅಂದರೆ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತರಾಗಿರುವ ಅಂಡರ್ಸನ್ ಫ್ರಾಂಚೈಸಿ ಲೀಗ್‌ನತ್ತ ಮುಖ ಮಾಡಲು ಇಚ್ಚಿಸಿದ್ದಾರೆ.

ಇಂಗ್ಲೆಂಡ್‌ನಲ್ಲಿ ನಡೆದ ದಿ ಹಂಡ್ರೆಡ್ ಲೀಗ್ ವೇಳೆ ಮಾತನಾಡಿದ್ದ ಜೇಮ್ಸ್ ಅಂಡರ್ಸನ್, ಈ ಲೀಗ್‌ನಲ್ಲಿ ಒಬ್ಬ ಬೌಲರ್‌ಗೆ ಕೇವಲ 20 ಎಸೆತಗಳು ಮಾತ್ರ ಇದೆ. ವಿಶೇಷ ಎಂದರೆ ಮೊದಲ 20 ಎಸೆತಗಳಲ್ಲಿ ಚೆಂಡು ಸ್ವಿಂಗ್ ಪಡೆಯುತ್ತಿರುವುದನ್ನು ನಾನು ಗಮನಿಸಿದ್ದೇನೆ. ನಾನು ಸಹ ಅದನ್ನು ಮಾಡಬಲ್ಲೆ ಎಂದು ತಿಳಿಸಿದ್ದರು. ಈ ಮೂಲಕ ಫ್ರಾಂಚೈಸಿ ಲೀಗ್ ಆಡುವ ಇಂಗಿತವನ್ನು ವ್ಯಕ್ತಪಡಿಸಿದ್ದರು.

ಇತ್ತ ಜೇಮ್ಸ್ ಅಂಡರ್ಸನ್ ಅವರ ಈ ಹೇಳಿಕೆಯು ಐಪಿಎಲ್ ಫ್ರಾಂಚೈಸಿಗಳ ಗಮನ ಸೆಳೆದಿದೆ. ಇದಕ್ಕೆ ಮುಖ್ಯ ಕಾರಣ ಅಂಡರ್ಸನ್ ಅವರಿಗಿರುವ ಅನುಭವ. ಏಕೆಂದರೆ ಇಂಗ್ಲೆಂಡ್ ಮಾಜಿ ವೇಗಿಯನ್ನು ತಂಡಕ್ಕೆ ಸೇರಿಸಿಕೊಂಡರೆ, ಯುವ ಆಟಗಾರರಿಗೆ ಉತ್ತಮ ಮಾರ್ಗದರ್ಶನ ಸಿಗಲಿದೆ. ಒಂದು ವೇಳೆ ಅವರು ಹರಾಜಿನಲ್ಲಿ ಕಾಣಿಸಿಕೊಳ್ಳದಿದ್ದರೂ ಅವರನ್ನು ಬೌಲಿಂಗ್ ಕೋಚ್ ಆಗಿ ಆಯ್ಕೆ ಮಾಡಲು ಕೆಲ ಫ್ರಾಂಚೈಸಿಗಳು ಆಸಕ್ತಿ ಹೊಂದಿದೆ ಎಂದು ವರದಿಯಾಗಿದೆ.

ಸದ್ಯ ಜೇಮ್ಸ್ ಅಂಡರ್ಸನ್ ಇಂಗ್ಲೆಂಡ್ ತಂಡದ ಬೌಲಿಂಗ್ ಕೋಚ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಆದರೆ ಇನ್ನುಳಿದ ಸಮಯದಲ್ಲಿ ಲೀಗ್ ಕ್ರಿಕೆಟ್ ಆಡುವ ಇರಾದೆಯಲ್ಲಿದ್ದಾರೆ. ಅಂದರೆ ಇಂಗ್ಲೆಂಡ್ ಆಟಗಾರರು ಐಪಿಎಲ್ ಸೇರಿದಂತೆ ಇತರೆ ಲೀಗ್ ಆಡುವ ವೇಳೆ ಜೇಮ್ಸ್ ಅಂಡರ್ಸನ್ ಸಂಪೂರ್ಣ ಫ್ರೀಯಾಗಿರಲಿದ್ದಾರೆ. ಹೀಗಾಗಿ 42ನೇ ವಯಸ್ಸಿನಲ್ಲಿ ಜೇಮ್ಸ್ ಅಂಡರ್ಸನ್ ಐಪಿಎಲ್‌ನತ್ತ ಮುಖ ಮಾಡಿದರೂ ಅಚ್ಚರಿಪಡಬೇಕಿಲ್ಲ.




# ಸಿಎಸ್‌ಕೆ ಪರ ಆಡಬೇಕು ಆರ್‌ಸಿಬಿ ಆಟಗಾರನ ಹೇಳಿಕೆ

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್ 18ರ ಸಿದ್ಧತೆಗಳು ಶುರುವಾಗಿದೆ. ಇದರ ಮೊದಲ ಹೆಜ್ಜೆಯಾಗಿ ಇದೀಗ ಮೆಗಾ ಹರಾಜಿಗಾಗಿ ರೂಪುರೇಷೆಗಳನ್ನು ರೂಪಿಸಲಾಗಿದೆ. ಅದರಂತೆ ಮುಂದಿನ ಸೀಸನ್‌ಗೂ ಮುನ್ನ ಪ್ರತಿ ತಂಡಗಳಿಂದ ಬಹುತೇಕ ಆಟಗಾರರು ಹೊರಬೀಳಲಿದ್ದಾರೆ. ಅಂದರೆ ಹರಾಜಿಗೂ ಮುನ್ನ ಪ್ರತಿ ಫ್ರಾಂಚೈಸಿಗಳಿಗೆ 4 ರಿಂದ 6 ಆಟ ಗಾರರನ್ನು ರಿಟೈನ್ ಮಾಡಿಕೊಳ್ಳಲು ಅವಕಾಶ ನೀಡಲಾಗುತ್ತದೆ ಎಂದು ತಿಳಿದು ಬಂದಿದೆ. ಹೀಗಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದಲ್ಲಿರುವ ಬಹುತೇಕ ಆಟಗಾರರು ರಿಲೀಸ್ ಆಗುವುದು ಖಚಿತ. ಅದರಲ್ಲೂ 2022 ರಿಂದ ಆರ್‌ಸಿಬಿ ತಂಡದಲ್ಲಿರುವ ವಿಕೆಟ್ ಕೀಪರ್ ಬ್ಯಾಟರ್ ಅನೂಜ್ ರಾವತ್ ಅವರನ್ನು ಉಳಿಸಿಕೊಳ್ಳುವ ಸಾಧ್ಯತೆಯಿಲ್ಲ. ಏಕೆಂದರೆ ಕಳೆದ ಮೂರು ಸೀಸನ್‌ಗಳಲ್ಲಿ ಆರ್‌ಸಿಬಿ ಪರ ಕಣಕ್ಕಿಳಿದಿರುವ ರಾವತ್ ನಿರೀಕ್ಷಿತ ಪ್ರದರ್ಶನ ನೀಡಿಲ್ಲ. ಹೀಗಾಗಿ ಈ ಬಾರಿ ಅನೂಜ್ ರಾವತ್ ರಾಯಲ್ ಬಳಗದಿಂದ ಹೊರಬೀಳುವುದು ಬಹುತೇಕ ಖಚಿತ.

ಅತ್ತ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ರಿಟೈನ್ ಮಾಡಿಕೊಳ್ಳದಿದ್ದರೆ ಮುಂದೇನು ಎಂಬ ಪ್ರಶ್ನೆಯೊಂದನ್ನು ಸ್ಪೋರ್ಟ್ಸ್ ಯಾರಿ ಚಾನೆಲ್ ಅನೂಜ್ ರಾವತ್ ಅವರ ಮುಂದಿಟ್ಟಿದ್ದಾರೆ. ಈ ಪ್ರಶ್ನೆಗೆ ಉತ್ತರಿಸಿದ ಆರ್‌ಸಿಬಿ ಬ್ಯಾಟರ್, ನನಗೆ ಚೆನ್ನೈ ಸೂಪರ್ ಕಿಂಗ್ಸ್ ಪರ ಆಡಬೇಕೆಂಬ ಆಸೆಯಿದೆ ಎಂದು ತಿಳಿಸಿದ್ದಾರೆ. ಆರ್‌ಸಿಬಿ ಇಲ್ಲದಿದ್ದರೆ, ನಾನು ಚೆನ್ನೈ ಸೂಪರ್ ಕಿಂಗ್ಸ್ ಪರ ಆಡಲು ಬಯಸುತ್ತೇನೆ. ಏಕೆಂದರೆ ಸಿಎಸ್‌ಕೆ ತಂಡದಲ್ಲಿ ಮಹೇಂದ್ರ ಸಿಂಗ್ ಧೋನಿ ಇದ್ದಾರೆ. ಅವರು ವಿಭಿನ್ನ ವ್ಯಕ್ತಿತ್ವವನ್ನು ಹೊಂದಿದ್ದಾರೆ. ಅಲ್ಲದೆ ಎಲ್ಲಾ ಆಟಗಾರರು ಅವರ ಬಗ್ಗೆ ಮಾತನಾಡುತ್ತಿರುತ್ತಾರೆ. ಹೀಗಾಗಿ ನನಗೂ ಚೆನ್ನೈ ಸೂಪರ್ ಕಿಂಗ್ಸ್ ಪರ ಆಡಬೇಕೆಂಬ ಆಸೆಯಿದೆ ಎಂದು ಅನೂಜ್ ರಾವತ್ ಹೇಳಿದ್ದಾರೆ. ಈ ಮೂಲಕ ಸಿಎಸ್‌ಕೆ ಪರ ಕಣಕ್ಕಿಳಿಯಬೇಕೆಂಬ ಮನದಿಂಗಿತವನ್ನು ವ್ಯಕ್ತಪಡಿಸಿದ್ದಾರೆ.

ಅಂದಹಾಗೆ, 2022 ರಲ್ಲಿ ಆರ್‌ಸಿಬಿ ತಂಡಕ್ಕೆ ಎಂಟ್ರಿ ಕೊಟ್ಟಿದ್ದ ಅನೂಜ್ ರಾವತ್ ಒಟ್ಟು 22 ಪಂದ್ಯಗಳಲ್ಲಿ ಕಣಕ್ಕಿಳಿದಿದ್ದಾರೆ. ಈ ವೇಳೆ 1 ಅರ್ಧಶತಕದೊಂದಿಗೆ ಒಟ್ಟು 318 ರನ್ ಕಲೆಹಾಕಿದ್ದಾರೆ.



# ಸ್ಮಿತ್ ಬ್ಯಾಟಿಂಗ್ ಕ್ರಮಾಂಕ ಬದಲಾವಣೆ



ಭಾರತದ ವಿರುದ್ಧದ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯಲ್ಲಿ ಸ್ಟೀವ್ ಸ್ಮಿತ್ ಮತ್ತೆ 4ನೇ ಕ್ರಮಾಂಕದಲ್ಲಿ ಕಣಕ್ಕಿಳಿಯಲಿದ್ದಾರೆ. ಡೇವಿಡ್ ವಾರ್ನರ್ ನಿವೃತ್ತಿ ಬಳಿಕ ಟೆಸ್ಟ್‌ನಲ್ಲಿ ಆರಂಭಿಕನಾಗಿ ಬಡ್ತಿ ಪಡೆದಿದ್ದ ಸ್ಮಿತ್ ಇದೀಗ ಮತ್ತೆ ತಮ್ಮ ಹಳೆಯ ಕ್ರಮಾಂಕದಲ್ಲಿ ಬ್ಯಾಟ್ ಬೀಸಲು ನಿರ್ಧರಿಸಿದ್ದಾರೆ. ಅದರಂತೆ ಟೀಮ್ ಇಂಡಿಯಾ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಸ್ಮಿತ್ 4ನೇ ಕ್ರಮಾಂಕದಲ್ಲೇ ಮತ್ತೆ ಬ್ಯಾಟಿಂಗ್ ಮಾಡಲಿದ್ದಾರೆ ಎಂದು ವರದಿಯಾಗಿದೆ.

ಇದಕ್ಕೂ ಮುನ್ನ ನ್ಯೂಝಿಲೆಂಡ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಸ್ಟೀವ್ ಸ್ಮಿತ್ ಆರಂಭಿಕನಾಗಿ ಕಣಕ್ಕಿಳಿದಿದ್ದರು. ಉಸ್ಮಾನ್ ಖ್ವಾಜಾ ಜೊತೆ 6 ಬಾರಿ ಇನಿಂಗ್ಸ್ ಆರಂಭಿಸಿದ್ದ ಸ್ಮಿತ್ ನಿರೀಕ್ಷಿತ ಪ್ರದರ್ಶನ ನೀಡಲು ಸಾಧ್ಯವಾಗಿರಲಿಲ್ಲ. ಆರು ಇನಿಂಗ್ಸ್‌ಗಳಲ್ಲಿ ಸ್ಮಿತ್ ಕಲೆಹಾಕಿದ್ದು 12, 11★, 6, 91★, 31, 0 ರನ್‌ಗಳು ಮಾತ್ರ. ಹೀಗಾಗಿಯೇ ಪ್ರತಿಷ್ಠಿತ ಸರಣಿಯಲ್ಲಿ ಬ್ಯಾಟಿಂಗ್ ಕ್ರಮಾಂಕ ಬದಲಿಸಲು ಸ್ಮಿತ್ ನಿರ್ಧರಿಸಿದ್ದಾರೆ.

**ಆಸ್ಟ್ರೇಲಿಯಾ ಆರಂಭಿಕ ಯಾರು:** ಡೇವಿಡ್ ವಾರ್ನರ್ ನಿವೃತ್ತಿ ಬಳಿಕ ಆಸ್ಟ್ರೇಲಿಯಾ ತಂಡವು ಟೆಸ್ಟ್‌ನಲ್ಲಿ ಹೊಸ ಆರಂಭಿಕನ ಹುಡುಕಾಟದಲ್ಲಿದೆ. ಈ ಹಿಂದೆ ಸ್ಮಿತ್ ಅವರನ್ನು ಓಪನರ್ ಆಗಿ ಕಣಕ್ಕಿಳಿಸಿ ಪ್ರಯೋಗ ನಡೆಸಲಾಗಿತ್ತು.

# ಸಚಿನ್ ತೆಂಡೂಲ್ಕರ್ ದಾಖಲೆ ಮುರಿದ ಜೋ ರೂಟ್

ಶ್ರೀಲಂಕಾ ವಿರುದ್ಧದ ಮೂರು ಪಂದ್ಯಗಳ ಟೆಸ್ಟ್ ಸರಣಿಯನ್ನು ಇಂಗ್ಲೆಂಡ್ 2-1 ಅಂತರದಿಂದ ಗೆದ್ದುಕೊಂಡಿದೆ. ಈ ಸರಣಿಯಲ್ಲಿ ಅತ್ಯದ್ಭುತ ಪ್ರದರ್ಶನ ನೀಡಿದ ಜೋ ರೂಟ್ ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ. ಈ ಪ್ರಶಸ್ತಿಯೊಂದಿಗೆ ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಹೆಸರಿನಲ್ಲಿದ್ದ ದಾಖಲೆಯೊಂದನ್ನು ಮುರಿದು ರೂಟ್ ಮುನ್ನುಗ್ಗಿದ್ದಾರೆ. ಶ್ರೀಲಂಕಾ ವಿರುದ್ಧದ ಸರಣಿಯಲ್ಲಿ ಒಟ್ಟು 6 ಇನಿಂಗ್ಸ್ ಆಡಿರುವ ಜೋ ರೂಟ್ 2 ಭರ್ಜರಿ ಶತಕ ಹಾಗೂ 1 ಅರ್ಧಶತಕದೊಂದಿಗೆ ಒಟ್ಟು 375 ರನ್ ಕಲೆಹಾಕಿದ್ದಾರೆ. ಈ ಶ್ರೇಷ್ಠ ಪ್ರದರ್ಶನದಿಂದಾಗಿ ಸರಣಿ ಶ್ರೇಷ್ಠ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಈ ಮೂಲಕ ಟೆಸ್ಟ್‌ನಲ್ಲಿ ಇಂಗ್ಲೆಂಡ್ ಪರ ಅತ್ಯಧಿಕ ಬಾರಿ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದ ಆಟಗಾರ ಎನಿಸಿಕೊಂಡಿದ್ದಾರೆ.

ಇದಕ್ಕೂ ಮುನ್ನ ಈ ದಾಖಲೆ ಇಂಗ್ಲೆಂಡ್‌ನ ಆಯಂಡ್ರ್ಯೂ ಸ್ಟ್ರಾಸ್, ಅಲೆಸ್ಟರ್ ಕುಕ್ ಹಾಗೂ ಗ್ರಹಾಂ ಗೂಚ್ ಹೆಸರಿನಲ್ಲಿತ್ತು. ಈ ಮೂವರು ಆಟಗಾರರು 5 ಬಾರಿ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದುಕೊಂಡಿದ್ದರು. ಇದೀಗ 6ನೇ ಬಾರಿ ಪ್ಲೇಯರ್ ಆಫ್ ಸಿರೀಸ್ ಪ್ರಶಸ್ತಿ ಪಡೆಯುವ ಮೂಲಕ ಜೋ ರೂಟ್ ಇಂಗ್ಲೆಂಡ್‌ನ ಮಾಜಿ ಆಟಗಾರರ ಸಾಧನೆಯನ್ನು ಹಿಂದಿಕ್ಕಿದ್ದಾರೆ. ಹಾಗೆಯೇ ಸರಣಿ ಶ್ರೇಷ್ಠ ಪ್ರಶಸ್ತಿಯಲ್ಲಿ ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಅವರ ದಾಖಲೆಯನ್ನು ಕೂಡ ಮುರಿದಿದ್ದಾರೆ. ಟೀಮ್ ಇಂಡಿಯಾ ಪರ 74 ಟೆಸ್ಟ್ ಸರಣಿಗಳನ್ನು ಆಡಿರುವ ಸಚಿನ್ ತೆಂಡೂಲ್ಕರ್ ಒಟ್ಟು 5 ಬಾರಿ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದಿದ್ದರು.

48 ಟೆಸ್ಟ್ ಸರಣಿಗಳ ಮೂಲಕ ರೂಟ್ 6ನೇ ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ. ಈ ಮೂಲಕ ಟೆಸ್ಟ್ ಕ್ರಿಕೆಟ್‌ನಲ್ಲಿ ಐದಕ್ಕಿಂತ ಹೆಚ್ಚು ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದ ಆಟಗಾರರ ಪಟ್ಟಿಗೆ ಎಂಟ್ರಿ ಕೊಟ್ಟಿದ್ದಾರೆ. ಅಗ್ರಸ್ಥಾನದಲ್ಲಿರುವುದು ಶ್ರೀಲಂಕಾದ ಮಾಜಿ ಸ್ಪಿನ್ನರ್ ಮುತ್ತಯ್ಯ ಮುರಳೀಧರನ್ ಲಂಕಾ ಪರ 61 ಟೆಸ್ಟ್ ಸರಣಿಗಳನ್ನಾಡಿರುವ ಮುರಳೀಧರನ್ ಒಟ್ಟು 11 ಬಾರಿ ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ.





Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966